ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಜೂನ್ 11 ಮಂಗಳವಾರ 2024

ಸಂಪುಟ: 45 | ಸಂಚಿಕೆ: 56 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮೈಸೂರು ಪಾಲಿಕೆ ವ್ಯಾಪ್ತಿ ಆಸ್ತಿ ತೆರಿಗೆ ಶೇ.5 ರಿಯಾಯಿತಿ ಜು.31ರವರೆಗೆ ವಿಸ್ತರಣೆ



ಮೈಸೂರು, ಜೂ.10(ಎಸ್‌ಬಿಡಿ)– ಮೈಸೂರು ನಗರಪಾಲಿಕೆ ಸ್ಥಿರಾಸ್ತಿ ತೆರಿಗೆ ಮೇಲಿನ ಶೇ.5ರಷ್ಟು ರಿಯಾಯಿತಿಯನ್ನು ಜುಲೈ 31ರವರೆಗೆ ವಿಸ್ತರಿಸಲಾಗಿದೆ.

ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರದ ಸುತ್ತೋಲೆ ಅನ್ವಯ ಶೇ.5ರಷ್ಟು ತೆರಿಗೆ ರಿಯಾಯಿತಿಯನ್ನು ಜುಲೈ ಅಂತ್ಯದವರೆಗೆ ವಿಸ್ತರಿಸಲಾಗಿದ್ದು, ಆಸ್ತಿ ಮಾಲೀಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮೈಸೂರು ನಗರಪಾಲಿಕೆ ಆಯುಕ್ತ ಅಶಾದ್ ಉರ್–ರೆಹಮಾನ್ ಷರೀಫ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ● 9ನೇ ಪುಟಕ್ಕೆ

ರಾಜನಾಥ್‌ಸಿಂಗ್– ರಕ್ಷಣೆ; ಅಮಿತ್ ಶಾ– ಗೃಹ; ಗಡ್ಕರಿ– ಹೆದ್ದಾರಿ; ನಡ್ಡಾ– ಆರೋಗ್ಯ; ನಿರ್ಮಲಾ– ಹಣಕಾಸು; ಜೈಶಂಕರ್– ವಿದೇಶಾಂಗ, ಶಿವರಾಜ್ ಸಿಂಗ್ ಚವ್ಹಾಣ್– ಕೃಷಿ; ಪಿಯೂಷ್– ವಾಣಿಜ್ಯ, ಕೈಗಾರಿಕೆ; ಧರ್ಮೇಂದ್ರ ಪ್ರಧಾನ್– ಶಿಕ್ಷಣ; ಅಶ್ವಿನಿ ವೈಷ್ಣವ್– ರೈಲ್ವೆ



ರಾಜನಾಥ್‌ಸಿಂಗ್ | ಅಮಿತ್ ಶಾ | ನಿತಿನ್ ಗಡ್ಕರಿ | ಜೆ.ಪಿ.ನಡ್ಡಾ | ನಿರ್ಮಲಾ | ಜೈಶಂಕರ್ | ಚವ್ಹಾಣ್ | ಪಿಯೂಷ್ | ಪ್ರಧಾನ್ | ಅಶ್ವಿನಿ ವೈಷ್ಣವ್

ಕುಮಾರಸ್ವಾಮಿ–ಉಕ್ಕು, ಬೃಹತ್ ಕೈಗಾರಿಕೆ ಪ್ರಹ್ಲಾದ್ ಜೋಶಿ–ಆಹಾರ, ನಾಗರಿಕ ಪೂರೈಕೆ ಸೋಮಣ್ಣ–ಜಲಶಕ್ತಿ, ರೈಲ್ವೆ; ಶೋಭಾ–ಸಣ್ಣ ಕೈಗಾರಿಕೆ






ನವದೆಹಲಿ, ಜೂ. 10– ಮೂರನೇ ಬಾರಿಗೆ ಪ್ರಧಾನಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ 24 ಗಂಟೆ ಒಳಗಾಗಿಯೇ ನರೇಂದ್ರ ಮೋದಿಯವರು ತಮ್ಮ ಸಂಪುಟ ಸದಸ್ಯರಿಗೆ ಖಾತೆಗಳನ್ನು ಹಂಚಿಕೆ ಮಾಡಿದ್ದಾರೆ. ರಕ್ಷಣೆ, ಗೃಹ, ರಸ್ತೆ ಸಾರಿಗೆ ಮತ್ತು ಹೆದ್ದಾರಿ, ಹಣಕಾಸು ಇಲಾಖೆಗಳನ್ನು ಈ ಹಿಂದೆ ನಿರ್ವಹಿಸಿದ್ದ ಸಚಿವರಿಗೇ ಮತ್ತೆ ನೀಡಲಾಗಿದೆ.

ಮಂಡ್ಯ ಲೋಕಸಭಾ ಕ್ಷೇತ್ರದಿಂದ ಗೆಲುವು ಸಾಧಿಸಿದ್ದ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಕೃಷಿ ಖಾತೆ ಬಗ್ಗೆ ಉತ್ಸಾಹ ತೋರಿದ್ದರಾದರೂ, ಅವರಿಗೆ ಬೃಹತ್ ಕೈಗಾರಿಕಾ ಮತ್ತು ಉಕ್ಕು ಖಾತೆಯನ್ನು ನೀಡಲಾಗಿದೆ. ಕಳೆದ ಬಾರಿ ಕಲ್ಲಿದ್ದಲು ಗಣಿಗಾರಿಕೆ ಮತ್ತು ಸಂಸದೀಯ ವ್ಯವಹಾರಗಳ ಹೊಣೆ ಹೊತ್ತಿದ್ದ ಪ್ರಹ್ಲಾದ್ ಜೋಶಿಯವರಿಗೆ ಈ ಬಾರಿ ಆಹಾರ ಮತ್ತು ನಾಗರಿಕ ಸರಬರಾಜು ಜೊತೆಗೆ ಹೊಸ ನವೀಕರಿಸಬಹುದಾದ ಇಂಧನ ಖಾತೆ ಯನ್ನು ನೀಡಲಾಗಿದೆ. ● 9ನೇ ಪುಟಕ್ಕೆ

ಲೋಕಸಭಾ ಚುನಾವಣೆ ಸೋಲಿನ ಬಗ್ಗೆ ಮರ್ಯಾದೆಯಿಂದ ಬಾಯ್ಮುಚ್ಚಿಕೊಂಡಿರಿ

● ಶಾಸಕರಿಗೆ ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ.ಶಿವಕುಮಾರ್ ಎಚ್ಚರಿಕೆ ● ಫಲಿತಾಂಶದ ಬಗ್ಗೆ ಅನಗತ್ಯ ಹೇಳಿಕೆ ನೀಡಿ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸಬೇಡಿ... ● ವರಿಷ್ಠರು ವರದಿ ಕೇಳಿದ್ದಾರೆ, ಅದನ್ನು ನಾವು ನೀಡ್ತೇವೆ...



ಬೆಂಗಳೂರು, ಜೂ. 10(ಕೆಎಂಶಿ)– ಲೋಕಸಭಾ ಚುನಾವಣೆ ಸೋಲಿನ ಬಗ್ಗೆ ಶಾಸಕರು ಮಾತನಾಡದೆ ಮರ್ಯಾದೆಯಿಂದ ಬಾಯಿ ಮುಚ್ಚಿಕೊಂಡು ಇರುವಂತೆ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ಎಚ್ಚರಿಕೆ ನೀಡಿದ್ದಾರೆ.

ಜನರು ತೀರ್ಪು ಕೊಟ್ಟಿದ್ದಾರೆ, ಅದನ್ನು ಸ್ವೀಕರಿಸಲೇಬೇಕು. ತೀರ್ಪಿನ ಮೇಲೆ ಸಾರ್ವಜನಿಕವಾಗಿ ಪರಾಮರ್ಶೆ ಮಾಡುವುದರಿಂದ ಯಾವುದೇ ಲಾಭವಿಲ್ಲ ಎಂದಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವು ಶಾಸಕರು ಮತ್ತು ಮುಖಂಡರು ಚುನಾವಣಾ ಫಲಿತಾಂಶದ ಬಗ್ಗೆ ಅನಗತ್ಯ ಹೇಳಿಕೆ ನೀಡಿ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸುತ್ತಿರುವುದು ನನ್ನ ಗಮನಕ್ಕೆ ಬಂದಿದೆ. ಇನ್ನು ಮುಂದೆ ಈ ವಿಷಯವಾಗಿ ಯಾರೂ ಸಾರ್ವಜನಿಕವಾಗಿ ಮಾತನಾಡಬಾರದೆಂದು ಮನವಿ ಮಾಡಿಕೊಳ್ಳುತ್ತೇನೆ. ನಾವು ಲೋಕಸಭಾ ಚುನಾವಣೆಯಲ್ಲಿ 28 ಸ್ಥಾನಗಳ ಪೈಕಿ 14 ರಿಂದ 15 ಸ್ಥಾನ ಗೆಲ್ಲುವ ನಿರೀಕ್ಷೆ ಇತ್ತು. ಆದರೆ ಕಾರಣಾಂತರಗಳಿಂದ ಇದು ಸಾಧ್ಯವಾಗಲಿಲ್ಲ, ಜನ ತೀರ್ಪು ನೀಡಿದ್ದಾರೆ. ಸೋಲಿನ ಬಗ್ಗೆ ವಿಮರ್ಶೆ ಮಾಡಿ ವರದಿ ನೀಡುವಂತೆ ಪಕ್ಷದ ಅಧಿನಾಯಕ ರಾಹುಲ್ ಗಾಂಧಿ ಹಾಗೂ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಆದೇಶ ಮಾಡಿದ್ದಾರೆ.

ಚುನಾವಣೆ ಹೊಣೆ ಹೊತ್ತವರಿಂದ ವರದಿ ಕೇಳುತ್ತೇವೆ. ಅದಕ್ಕಾಗಿ ಒಂದೆರಡು ದಿನದಲ್ಲೇ ಹಿರಿಯ ನಾಯಕರ ಸಭೆ ಕರೆಯಲಾಗುವುದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ಕಳೆದ ವಿಧಾನಸಭಾ ಚುನಾವಣೆಯಲ್ಲಿ ನಾವು ಎಲ್ಲಿ ಪ್ರಚಂಡ ಜಯ ಗಳಿಸಿದ್ದೆವೋ, ಈ ಚುನಾವಣೆಯಲ್ಲಿ ಆ ಸ್ಥಳಗಳಲ್ಲೇ ಭಾರಿ ಸೋಲು ಕಂಡಿದ್ದೇವೆ. ಕ್ಷೇತ್ರದ ಚುನಾವಣಾ ಹೊಣೆಗಾರಿಕೆ ವಹಿಸಿಕೊಂಡವರು ಸೋಲಿನ ಕಾರಣಗಳನ್ನು ಕೊಡಬೇಕಿರುವುದು ಅವರ ಜವಾಬ್ದಾರಿ, ಕೊಡುತ್ತಾರೆ. ನಮಗೆ ವರದಿ ನೀಡುವ ಮೊದಲು ಕಾರ್ಯಕರ್ತರು, ಮುಖಂಡರು ಮತ್ತು ಸಾರ್ವಜನಿಕರ ಅಭಿಪ್ರಾಯ ಪಡೆದು ಎಲ್ಲಿ ಎಡವಿದ್ದೇವೆ ಎಂಬುದನ್ನು ತಿಳಿಸಬೇಕು ಎಂದರು.


ನನ್ನ ಕ್ಷೇತ್ರದ ಕೆಲವು ಮುಖಂಡರ ವ್ಯಾಪ್ತಿಯಲ್ಲೇ ಹಿನ್ನಡೆಯಾಗಿದೆ. ಈಗ ಅದರ ಬಗ್ಗೆ ದೂಷಿಸುತ್ತಾ ಕುಳಿತರೆ ಆಗದು. ಆಗಿರುವ ತಪ್ಪನ್ನು ● 6ನೇ ಪುಟಕ್ಕೆ

ವಿಡಿಯೋ ಬ್ಲಾಕ್ ಮೇಲ್: ನಾಲ್ವರ ಆತ್ಮಹತ್ಯೆ ಪ್ರಕರಣದಲ್ಲಿ
ಮೃತರ ಸಂಖ್ಯೆ ಎರಡಕ್ಕೆ
ವಿಷ ಸೇವಿಸಿದ್ದ ಮಹದೇವನಾಯಕರ ಮಗಳು ಲೀಲಾವತಿ ಸಾವು



ಲೀಲಾವತಿ

ಚಾಮರಾಜನಗರ, ಜೂ.10–ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದ ತಾಳಬೆಟ್ಟದಲ್ಲಿ ಅಪ್ರಾಪ್ತ ಬಾಲಕಿಗೆ ವಿಡಿಯೋ ಬ್ಲಾಕ್‌ಮೇಲ್‌ನಿಂದ ಹತಾಶಗೊಂಡ ಒಂದೇ ಕುಟುಂಬದ ನಾಲ್ವರು ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಪ್ರಕರಣದಲ್ಲಿ ಮತ್ತೊಬ್ಬರು ಸೋಮವಾರ ಮೃತಪಟ್ಟಿದ್ದು, ಸಾವಿನ ಸಂಖ್ಯೆ ಎರಡಕ್ಕೆ ಏರಿದೆ. ಮೈಸೂರು ಜಿಲ್ಲೆಯ ಕೆ.ಆರ್.ನಗರ ತಾಲೂಕಿನ ಚಂದಗಾಲು ಗ್ರಾಮದ ಮಹದೇವನಾಯಕರ ಮಗಳು ಲೀಲಾವತಿ (41) ಸೋಮವಾರ ಮೃತಪಟ್ಟಿದ್ದಾರೆ. ● 6ನೇ ಪುಟಕ್ಕೆ



ಚಾಮರಾಜನಗರದ ಸಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದ ಸಚಿವರಾದ ಕೆ.ವೆಂಕಟೇಶ್, ಡಾ.ಹೆಚ್.ಸಿ.ಮಹದೇವಪ್ಪ ಅವರು ಮಹದೇವನಾಯಕರ ಪತ್ನಿ ಗೌರಮ್ಮ ಹಾಗೂ ಮೊಮ್ಮಗಳು ರಿಷಿಕಾ ಆರೋಗ್ಯದ ಬಗ್ಗೆ ವೈದ್ಯರಿಂದ ಮಾಹಿತಿ ಪಡೆದರು.

ಮೈಸೂರಲ್ಲಿ ಕತ್ತಿಯಿಂದ ಕತ್ತರಿಸಿ ಸ್ವಾಮೀಜಿ ಹತ್ಯೆ

ಮಠದಲ್ಲಿ ಸೆಕ್ಯೂರಿಟಿ ಜೊತೆಗೆ ಸಹಾಯಕನಾಗಿದ್ದ ವ್ಯಕ್ತಿಯಿಂದಲೇ ಭೀಕರ ಕೃತ್ಯ; ಸ್ವಾಮೀಜಿ ಸಂಬಂಧಿಕರಿಂದ ಪೊಲೀಸರಿಗೆ ದೂರು



ಶ್ರೀ ಶಿವಾನಂದ ಸ್ವಾಮೀಜಿ



ಆರೋಪಿ ರವಿ

ಮೈಸೂರು, ಜೂ.10(ಆರ್‌ಕೆ)– ಮೈಸೂರಿನ ಸಿದ್ದಾರ್ಥನಗರದ ಟೆರೆಷಿಯನ್ ಕಾಲೇಜಿಗೆ ಹೊಂದಿಕೊಂಡಂತಿರುವ ಶ್ರೀ ಅನ್ನದಾನೇಶ್ವರ ಮಠದ ಶ್ರೀಗಳಾದ ಶ್ರೀ ಶಿವಾನಂದ ಸ್ವಾಮೀಜಿ ಅವರನ್ನು ಮಠದಲ್ಲೇ ಕತ್ತಿಯಿಂದ ಕತ್ತರಿಸಿ ಬರ್ಬರವಾಗಿ ಹತ್ಯೆ ಮಾಡಲಾಗಿದೆ.

ಸುಮಾರು 90ವರ್ಷ ವಯಸ್ಸಿನ ಸ್ವಾಮೀಜಿಯವರು ಮಲಗಿದ್ದ ಹಾಸಿಗೆಯಲ್ಲೇ ಹತ್ಯೆಗೀಡಾಗಿದ್ದು, ಈ ಭಯಾನಕ ಘಟನೆ ಇಂದು(ಸೋಮವಾರ) ಬೆಳಗ್ಗೆ ಬೆಳಕಿಗೆ ಬಂದಿದೆ. ಮಠದ ಕಾವಲುಗಾರ ಹಾಗೂ ಸ್ವಾಮೀಜಿಯ ಸಹಾಯಕನಾಗಿದ್ದ ರವಿ ಎಂಬಾತನೇ ಅವರನ್ನು ಕತ್ತರಿಸಿ ಕೊಲೆ ಮಾಡಿದ್ದಾನೆ ಎಂದು ಸ್ವಾಮೀಜಿಯವರ ಸಂಬಂಧಿಕರು ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಿದ್ದಾರೆ.

ಮಠದ ಕಾವಲುಗಾರ ಹಾಗೂ ಸಹಾಯಕನಾಗಿ ತಿ.ನರಸೀಪುರ ತಾಲೂಕು ಒಕ್ಕಲಗೆರೆ ಗ್ರಾಮದ ರವಿ (60), ಕಳೆದ ಎರಡೂವರೆ ವರ್ಷದಿಂದ ಕೆಲಸ ಮಾಡುತ್ತಿದ್ದ. ಸ್ವಾಮೀಜಿಯವರ ಸಂಬಂಧಿಕರ ಮನೆಯಿಂದ ಈತನೇ ಅವರಿಗೆ ಊಟ ಹಾಗೂ ಉಪಾಹಾರ ತಂದು ಕೊಡುತ್ತಿದ್ದ. ಸೋಮವಾರ ಬೆಳಗ್ಗೆ 9.30 ಆದರೂ ಸ್ವಾಮೀಜಿಯವರಿಗೆ ಉಪಹಾರ ಕೊಂಡೊಯ್ಯಲು ರವಿ ಬಾರದೇ ಇದ್ದಾಗ ಅವರ ಸಂಬಂಧಿಕರೇ ಉಪಾಹಾರದೊಂದಿಗೆ ಮಠಕ್ಕೆ ತೆರಳಿದ್ದು, ಅಲ್ಲಿ ಸ್ವಾಮೀಜಿಯವರು ಬರ್ಬರವಾಗಿ ಹತ್ಯೆಯಾಗಿರುವುದು ಕಂಡುಬಂದಿದೆ. ಅದೇ ವೇಳೆ ಪಾನಮತ್ತನಾಗಿದ್ದ ರವಿ ಮಠದಲ್ಲೇ ಕುಳಿತಿದ್ದ. ಆತ ಮದ್ಯಪಾನದ ಜೊತೆ ವಿಷವನ್ನೂ ಸೇವಿಸಿದ್ದ ಎಂದು ಸ್ವಾಮೀಜಿ ಸಂಬಂಧಿಕರು ತಿಳಿಸಿದ್ದಾರೆ. ● 9ನೇ ಪುಟಕ್ಕೆ

ಜೈಲು ಪಾಲಾದ ಪ್ರಜ್ವಲ್ ರೇವಣ್ಣ



ಬೆಂಗಳೂರು, ಜೂ. 10(ಕೆಎಂಶಿ)– ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಜೈಲೇ ಗತಿಯಾಗಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ 10 ದಿನಗಳ ಎಸ್‌ಐಟಿ ಕಸ್ಟಡಿ ಅವಧಿ ಮುಗಿದ ಹಿನ್ನೆಲೆಯಲ್ಲಿ ಜನಪ್ರತಿನಿಧಿಗಳ ನ್ಯಾಯಾಲಯ ಜೂನ್ 24ರ ವರೆಗೆ ಅಂದರೆ ಎರಡು ವಾರಗಳ ನ್ಯಾಯಾಂಗ ಬಂಧನಕ್ಕೆ ನೀಡಿದೆ. ಆದೇಶದ ನಂತರ ಪ್ರಜ್ವಲ್‌ನನ್ನು ಪರಪ್ಪನ ಅಗ್ರಹಾರ ಜೈಲಿಗೆ ಸ್ಥಳಾಂತರಿಸಲಾಗಿದೆ. ಇಂದು ಬಸವನಗುಡಿಯ ಅವರ ನಿವಾಸದಲ್ಲಿ ಸ್ಥಳ ಮಹಜರು ನಡೆಸಿದ ಬಳಿಕ ಪ್ರಜ್ವಲ್ ಅವರನ್ನು 42ನೇ ಎಸಿಎಂಎಂ ಕೋರ್ಟ್‌ಗೆ ಕರೆತರಲಾಯಿತು. ಪ್ರಕರಣದ ವಿಚಾರಣೆ ಸಂದರ್ಭದಲ್ಲಿ ನ್ಯಾಯಾಧೀಶರು. ಪ್ರಜ್ವಲ್ ಅವರನ್ನು ಉದ್ದೇಶಿಸಿ, ಕಸ್ಟಡಿ ಅವಧಿಯಲ್ಲಿ ಏನಾದರೂ ತೊಂದರೆ ಆಯಿತೇ ಎಂದು ಪ್ರಶ್ನಿಸಿದಾಗ, ಅದಕ್ಕೆ ಅವರು ಇಲ್ಲ ಎಂದು ಉತ್ತರಿಸಿದರು.

ಮೈಸೂರು ಮೃಗಾಲಯದ ಬೃಹತ್ ಅಕ್ವೇರಿಯಂ ಯೋಜನೆ ಮತ್ತೆ ಮುನ್ನೆಲೆಗೆ

● ಪಿಪಿಪಿ ಮಾದರಿಯಡಿ ಕಾಮಗಾರಿ ಕೈಗೆತ್ತಿಕೊಳ್ಳಲು ಸರ್ಕಾರ ನಿರ್ಧಾರ ● 14 ವರ್ಷದ ಹಿಂದೆ ಯೋಜನೆಗೆ ಚಾಲನೆ ನೀಡಲಾಯಿತು; ನಿರೀಕ್ಷೆಯಂತೆ ನೆನೆಗುದಿಗೆ ಬಿತ್ತು! ● ಈಗ ಮತ್ತೆ ಯೋಜನೆಯ ಪೂರ್ಣಗೊಳಿಸುವ ಮಾತನಾಡಿದ್ದಾರೆ ಅರಣ್ಯ ಸಚಿವ ಈಶ್ವರ ಖಂಡ್ರೆ



ಬೆಂಗಳೂರು ವಿಕಾಸಸೌಧದಲ್ಲಿ ನಡೆದ ಮೃಗಾಲಯ ಪ್ರಾಧಿಕಾರದ 156ನೇ ಆಡಳಿತ ಮಂಡಳಿ ಸಭೆಯಲ್ಲಿ ಪ್ರಾಧಿಕಾರದ ವಾರ್ಷಿಕ ವರದಿಯನ್ನು ಸಚಿವ ಈಶ್ವರ ಖಂಡ್ರೆ ಬಿಡುಗಡೆ ಮಾಡಿದರು




ಬೆಂಗಳೂರು, ಜೂ. 10(ಕೆಎಂಶಿ)– ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯ ಆವರಣದಲ್ಲಿ ದಶಕದಿಂದ ನೆನೆಗುದಿಗೆ ಬಿದ್ದಿರುವ ಮತ್ಸ್ಯಾಗಾರ(ಅಕ್ವೇರಿಯಂ) ಕಾಮಗಾರಿಯನ್ನು ಸಾರ್ವಜನಿಕ–ಖಾಸಗಿ ಪಾಲುದಾರಿಕೆ (ಪಿಪಿಪಿ)ಯಲ್ಲಿ ಪೂರ್ಣಗೊಳಿಸಲು ಸರ್ಕಾರ ಮುಂದಾಗಿದೆ.

ವಿಕಾಸಸೌಧದಲ್ಲಿ ಸೋಮವಾರ ಮೃಗಾಲಯ ಪ್ರಾಧಿಕಾರದ 156ನೇ ಆಡಳಿತ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ, ಮೈಸೂರು ಮೃಗಾಲಯ ಹಾಗೂ ಕಾರಂಜಿ ಕೆರೆ ನಡುವೆ ನೆನಗುದಿಗೆ ಬಿದ್ದಿರುವ ಮತ್ಸ್ಯಾಗಾರದ ವಿಸ್ತೃತ ಯೋಜನಾ ವರದಿ(ಡಿಪಿಆರ್)ಸಿದ್ಧಪಡಿಸಿ, ಸಮಾಲೋಚನಾ ಸಂಸ್ಥೆ ಆಯ್ಕೆ ಮಾಡಿ, 15 ದಿನದೊಳಗೆ ಪ್ರಸ್ತಾವನೆ ಮಂಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇದೇ ಸಂದರ್ಭದಲ್ಲಿ ಮೈಸೂರು ಮೃಗಾಲಯ ಮತ್ತು ಕಾರಂಜಿ ಕೆರೆ ಪ್ರಕೃತಿ ಉದ್ಯಾನದಲ್ಲಿ ಕ್ಯಾಮರಾ ಕಾಂಬೋ ಟಿಕೆಟ್ ಪರಿಚಯಿಸಿ, ಸ್ಥಿರ ಕ್ಯಾಮರಾಗೆ 150 ರೂ. ಮತ್ತು ವಿಡಿಯೋ ಕ್ಯಾಮರಾಗೆ 300 ರೂ. ದರ ವಿಧಿಸಲು ಅನುಮತಿ ನೀಡಲಾಯಿತು. ● 6ನೇ ಪುಟಕ್ಕೆ

ಈಗಾಗಲೇ ಪಾಳುಬಿದ್ದಿರುವ ನಿರ್ಮಾಣದ ಸುಭದ್ರತೆ ಪರೀಕ್ಷೆಯಾಗಬೇಕಿದೆ!




ಮೈಸೂರು, ಜೂ.10– ಪ್ರವಾಸೋದ್ಯಮ ಅಭಿವೃದ್ಧಿ ದೃಷ್ಟಿಯಿಂದ ಮೈಸೂರು ಮಹಾನಗರ ಪಾಲಿಕೆ ವತಿಯಿಂದ 2010–11ನೇ ಸಾಲಿನಲ್ಲಿ ಮೃಗಾಲಯ ಹಾಗೂ ಕಾರಂಜಿಕೆರೆ ನಡುವೆ ಬೃಹತ್ ಅಕ್ವೇರಿಯಂ ನಿರ್ಮಾಣಕ್ಕೆ ಯೋಜನೆ ರೂಪಿಸಲಾಯಿತು.

ಸೂಕ್ತ ಸ್ಥಳ ಆಯ್ಕೆ ಮಾಡಿ 4.26 ಕೋಟಿ ರೂ. ವೆಚ್ಚದಲ್ಲಿ 6 ಸಾವಿರ ಚದರ ಅಡಿ ವಿಸ್ತೀರ್ಣದ ಅಕ್ವೇರಿಯಂ ಕಟ್ಟಡವನ್ನೂ ನಿರ್ಮಿಸಲಾಯಿತು. ಆದರೆ ಅಕ್ವೇರಿಯಂ ಯೋಜನೆ ಪೂರ್ಣಗೊಳಿಸಲು 30–40 ಕೋಟಿ ರೂ. ಅಗತ್ಯವಿದ್ದ ಕಾರಣ ಪಾಲಿಕೆ ಯೋಜನೆಯಿಂದ ಹಿಂದೆ ಸರಿಯಿತು. ಪರಿಣಾಮ ಅಕ್ವೇರಿಯಂಗಾಗಿ ನಿರ್ಮಿಸಿದ ಕಾಂಕ್ರೀಟ್ ಕಟ್ಟಡ ಪಾಳು ಬಿದ್ದಿತು. ಸಾರ್ವಜನಿಕರ ತೆರಿಗೆ ಹಣವನ್ನು ವ್ಯರ್ಥ ಮಾಡಲಾಗಿದೆ ಎಂದು ಸಾರ್ವಜನಿಕ ವಲಯದಲ್ಲಿ ಅಸಮಾಧಾನ ವ್ಯಕ್ತವಾದ ಹಿನ್ನೆಲೆಯಲ್ಲಿ 2018ರ ಜು.14ರಂದು ಅಕ್ವೇರಿಯಂ ಕಟ್ಟಡವನ್ನು ಮೃಗಾಲಯದ ಸುಪರ್ದಿಗೆ ವಹಿಸಲಾಯಿತು. ● 6ನೇ ಪುಟಕ್ಕೆ

ಕುಮಾರಸ್ವಾಮಿಗೆ ಮತ್ತೊಮ್ಮೆ ಖುಲಾಯಿಸಿದ ಅದೃಷ್ಟ!

ಮೈಸೂರು, ಜೂ.10–ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಮತ್ತೊಮ್ಮೆ ಅದೃಷ್ಟ ಖುಲಾಯಿಸಿದೆ.



ಬಿಜೆಪಿ–ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಮುಖ್ಯಮಂತ್ರಿಯಾಗಿ ಉತ್ತಮ ಆಡಳಿತ ನೀಡಿದ್ದ ಹೆಚ್.ಡಿ.ಕುಮಾರಸ್ವಾಮಿ ಅವರು ನಂತರದಲ್ಲಿ ಸಾಕಷ್ಟು ಏಳು–ಬೀಳುಗಳನ್ನು ಕಾಣಬೇಕಾಯ್ತು. ಆದರೂ ಹೆಚ್‌ಡಿಕೆಗೆ ಒಂದಿಲ್ಲೊಂದು ರೀತಿಯಲ್ಲಿ ಅದೃಷ್ಟ ಮನೆ ಬಾಗಿಲಿಗೆ ಒಲಿದು ಬರುತ್ತಿರುವುದಕ್ಕೆ ಇಂದು ಅವರು ಕೇಂದ್ರದ ಸಂಪುಟದಲ್ಲಿ ಸ್ಥಾನ ಪಡೆದಿರುವುದೇ ತಾಜಾ ಉದಾಹರಣೆ.

ರಾಜ್ಯದಲ್ಲಿ 2013ರಲ್ಲಿ ಕಾಂಗ್ರೆಸ್ ಬಹುಮತ ಗಳಿಸಿ, ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿ ಐದು ವರ್ಷ ಪೂರ್ಣ ಆಡಳಿತ ನಡೆಸಿದರು. ನಂತರ 2018ರ ವಿಧಾನಸಭೆ ಚುನಾವಣೆ ವೇಳೆ ಕುಮಾರಸ್ವಾಮಿ ಅವರಪ್ಪನಾಣೆ ಮತ್ತೆ ಮುಖ್ಯಮಂತ್ರಿಯಾಗುವುದಿಲ್ಲ ಎಂದು ಸಿದ್ದರಾಮಯ್ಯ ಅಬ್ಬರಿಸಿದ್ದರು. ಆದರೆ ಅತಂತ್ರ ಫಲಿತಾಂಶ ಬಂದಿದ್ದರಿಂದ ಕಾಂಗ್ರೆಸ್ ನಾಯಕರು ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡರ ಮನೆಯ ಕದ ಬಡಿದರು. ಬಿಜೆಪಿಯನ್ನು ಅಧಿಕಾರದಿಂದ ದೂರವಿಡಬೇಕೆಂದು ಕುಮಾರಸ್ವಾಮಿ ಅವರನ್ನೇ ಮುಖ್ಯಮಂತ್ರಿಯಾಗುವಂತೆ ದುಂಬಾಲು ಬಿದ್ದರು. ಹಾಗೆಂಯೇ ಕಾಂಗ್ರೆಸ್–ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಅವರು 2ನೇ ಬಾರಿ ಸಿಎಂ ಆದರು.


ಕಳೆದ 2023ರ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ತೀವ್ರ ಹಿನ್ನಡೆ ಅನುಭವಿಸಿದ್ದರಿಂದ, ಜೆಡಿಎಸ್ ಕಥೆ ಮುಗಿದೇ ಹೋಯಿತು. ಜೆಡಿಎಸ್ ಶಾಸಕರು, ನಾಯಕರು ಕಾಂಗ್ರೆಸ್ ಕದ ತಟ್ಟುತ್ತಿದ್ದಾರೆ. ಕುಮಾರಸ್ವಾಮಿ ರಾಜಕೀಯ ಭವಿಷ್ಯವೂ ಮಂಕಾಯಿತು ಎಂದೆಲ್ಲಾ ಟೀಕೆಗಳು ವ್ಯಕ್ತವಾದವು. ಆದರೆ ವರ್ಷ ಕಳೆಯುವಷ್ಟರಲ್ಲೇ ಕುಮಾರಸ್ವಾಮಿಗೆ ಅದೃಷ್ಟ ಮತ್ತೆ ಕೈಹಿಡಿಯಿತು. ಕೇಂದ್ರ ಸಚಿವ ರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಅದರಲ್ಲೂ ದೇಶದ ಘಟಾನುಘಟಿ ನಾಯಕರ ಸಾಲಿನಲ್ಲಿ ಸ್ಥಾನ ಪಡೆದರು. ಅದೃಷ್ಟದ ಅಲೆಯಲ್ಲಿ ಊಹೆಗೆ ನಿಲುಕದ ಲೀಲೆ ಅಡಗಿದೆ ಎಂಬುದಕ್ಕೆ ಇದೊಂದು ಜ್ವಲಂತ ನಿದರ್ಶನ. ಮತ್ತೊಂದೆಡೆ ತಮಗೆ ನೀಡಿದ್ದ ಟಾರ್ಗೆಟ್‌ನಲ್ಲಿ ವಿಫಲವಾದರೂ ವರಿಷ್ಠರ ಆಜ್ಞೆಯನ್ನು ಶಿರಸಾವಹಿಸಿ ನಿರ್ವಹಿಸಿದ ವಿ.ಸೋಮಣ್ಣನವರಿಗೆ ಬಿಜೆಪಿ ವರಿಷ್ಠರು ದೊಡ್ಡ ಉಡುಗೊರೆ ನೀಡಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸೋಮಣ್ಣನವರಿಗೆ, ಸಿದ್ದರಾಮಯ್ಯ (ವರುಣ) ಹಾಗೂ ಹಿಂದುಳಿದ ನಾಯಕ ಪುಟ್ಟರಂಗಶೆಟ್ಟಿ (ಚಾಮರಾಜನಗರ) ವಿರುದ್ಧ ಸ್ಪರ್ಧಿಸುವ ಟಾರ್ಗೆಟ್ ನೀಡಿದ್ದರು. ಎರಡೂ ಕಡೆ ಸೋಮಣ್ಣ ವಿಫಲರಾದರು. ಆದರೆ ವಿಫಲತೆಗೆ ಕಾರಣಗಳೇನು ಎಂಬುದನ್ನು ಮನವರಿಕೆ ಮಾಡಿಕೊಂಡ ವರಿಷ್ಠರು ಸೋಮಣ್ಣ ಬಲಿಪಶುವಾಗಿಲ್ಲ ಎಂಬುದನ್ನು ಅವರನ್ನು ಕೇಂದ್ರ ಸಂಪುಟಕ್ಕೆ ಸೇರಿಸಿಕೊಳ್ಳುವ ಮೂಲಕ ಸಂದೇಶ ನೀಡಿದ್ದಾರೆ. ಇದರೊಂದಿಗೆ ಪಕ್ಷದ ವಿರುದ್ಧ ಚಟುವಟಿಕೆ ನಡೆಸುವವರಿಗೂ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ.

ನೂತನ ಎಂಎಲ್‌ಸಿ ಡಾ.ಯತೀಂದ್ರಗೆ ಅಭಿನಂದನೆ



ವಿಧಾನಪರಿಷತ್ ಸದಸ್ಯರಾಗಿ ಆಯ್ಕೆಯಾದ ಡಾ.ಯತೀಂದ್ರ ಅವರನ್ನು ಮಾಜಿ ಶಾಸಕ ಎಂ.ಕೆ.ಸೋಮಶೇಖರ ಅಭಿನಂದಿಸಿದರು. ಈ ವೇಳೆ ಶಾಸಕ ಅನಿಲ್‌ಕುಮಾರ್, ಗಣೇಶ್ ಕುಕ್ಕೇರಿ, ಕಾಂಗ್ರೆಸ್ ಯುವ ಮುಖಂಡ ರಾಕೇಶ್ ಪಾಪಣ್ಣ ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...




ಇಂದಿನ ಪಂಚಾಂಗ

11.06.2024 ಮಂಗಳವಾರ, ಮಳೆ ನಕ್ಷತ್ರ: ಮೃಗಶಿರ, 08.05.2024 ರಿಂದ 21.06.2024 ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ, ತಿಥಿ: ತದಿಗೆ, ನಕ್ಷತ್ರ: ಪುನರ್ವಸು, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ತೀವ್ರ ತಲೆನೋವು, ಮೈಗ್ರೇನ್ ತಲೆನೋವು, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಯಿಂದ.
- **ರೋಟರಿ ಕ್ಲಬ್ಸ್ ಆಫ್ ಜೋನ್–8 :** ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಉಪ ಅರಣ್ಯಾಧಿಕಾರಿ, ಮೈಸೂರು ವಿಭಾಗ ಡಾ. ಕೆ.ಎನ್. ಬಸವರಾಜ, ಗೌರವ ಅತಿಥಿಗಳು : ಸಿಲಿಕಾನ್ ಸಿಟಿ ಇಂಟರ್‌ನ್ಯಾಷನಲ್ ಸ್ಕೂಲ್ ಕಾರ್ಯದರ್ಶಿ ಎಲ್. ರವಿ, ವನ್ಯಜೀವಿ ಛಾಯಾಗ್ರಾಹಕ ದಿನೇಶ್ ಬಸವಾಪಟ್ನ, ಸ್ಥಳ : ಸಿಲಿಕಾನ್ ಸಿಟಿ ಇಂಟರ್‌ನ್ಯಾಷನಲ್ ಸ್ಕೂಲ್, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9ಕ್ಕೆ.
- **ಎನ್‌ಜೆಎಸ್ ಚಾರಿಟಬಲ್ ಟ್ರಸ್ಟ್, ಮೈಸೂರು ವೀರಶೈವ ಸಜ್ಜನ ಸಂಘ :** ಉಚಿತ ಆರೋಗ್ಯ ತಪಾಸಣಾ ಶಿಬಿರ, ಸ್ಥಳ: ಕಂಠಿ ಮಲ್ಲಣ್ಣನವರ ಕಲ್ಯಾಣ ಮಂದಿರ, ಮಂಡಿ ಮೊಹಲ್ಲಾ, ಬೆಳಗ್ಗೆ 9.30 ರಿಂದ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಪಾರ್ಕಿನ್‌ಸನ್ಸ್ ಕಾಯಿಲೆಯ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 10 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ಶ್ರದ್ಧೆಯ ಶಿಲ್ಪ' ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್.ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು. 6.40 ಪದ ಸಂಸ್ಕೃತಿ, ಪ್ರಸ್ತುತಿ–ಕೆ.ಎಲ್.ಪದ್ಮಿನಿ ಹೆಗಡೆ, 6.50 ರೈತರಿಗೆ ಸಲಹೆ, 7.15 ಯೋಗೋತ್ಸವ: ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 8.30 ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ದಿಂಡಿಗಲ್ ಎಸ್.ಪಿ.ನಟರಾಜನ್–ಕೊಳಲು ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.05 ವನಿತಾ ವಿಹಾರ, 12.30 ದೇವರನಾಮ, 12.45 ಕನ್ನಡದಲ್ಲಿ ಭಾಷಣ, 1.20 ಭಾವಗೀತೆಗಳು–ಶ್ರುತಿ. ಜಿ.ರಾವ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಹೆಚ್.ಎಲ್.ಶಿವಶಂಕರ ಸ್ವಾಮಿ–ವಾದ್ಯವೃಂದ, 4.00 ಕಥಾ ಕಾಲಕ್ಷೇಪ–ಭಕ್ತ ಮಾರ್ಕಂಡೇಯ, ಪ್ರಸ್ತುತಿ: ವಿದ್ವಾನ್ ಭದ್ರಗಿರಿ ಅಚ್ಯುತದಾಸರು, 6.50 ಕೃಷಿರಂಗ: ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ರೇಷ್ಮೆ ಐಸಿರಿ–ರೇಷ್ಮೆ ಕೃಷಿ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಹಿಪ್ಪುನೇರಳೆಯಲ್ಲಿ ಮರಗಡ್ಡಿ ತಾಂತ್ರಿಕತೆ. ಈ ಕುರಿತು ಚಾಮರಾಜನಗರ ಜಿಲ್ಲಾ ಪ್ರಾದೇಶಿಕ ರೇಷ್ಮೆ ಸಂಶೋಧನಾ ಸಂಸ್ಥೆಯ ನಿವೃತ್ತ ಜಂಟಿ ನಿರ್ದೇಶಕರಾದ ಡಾ. ಕೆ. ಶ್ರೀಕಂಠಸ್ವಾಮಿ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್.ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ. ಪ್ರಸ್ತುತಿ: ಜಂಪಣ್ಣ ಆಶೀಹಾಳ್, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ: ಆರ್.ಎನ್.ತ್ಯಾಗರಾಜನ್ ಮತ್ತು ಡಾ.ಆರ್.ಎನ್.ತಾರಾನಾಥನ್–ಯುಗಳ ಗಾಯನ, 10.00 ಚೈತ್ರವನ ಲಕ್ಷ್ಮೀಶನ ಜೈಮಿನಿ ಭಾರತ ಕಾವ್ಯದ ಸಮಗ್ರ ವಾಚನ ವ್ಯಾಖ್ಯಾನ, ವಾಚನ: ಹೆಚ್.ಆರ್.ಕೇಶವಮೂರ್ತಿ, ವ್ಯಾಖ್ಯಾನ: ಮಾರ್ಕಂಡೇಯ ಅವಧಾನಿ, ಪ್ರಸ್ತುತಿ: ಡಾ.ಎ.ಎಸ್.ಶಂಕರನಾರಾಯಣ, 10.30 ಸವಿನೆನಪು

ಆನ್‌ಲೈನ್ ಮೂಲಕ ಮೈಸೂರಿನ ಮೂವರಿಗೆ 40 ಲಕ್ಷ ವಂಚನೆ

● ಅತಿಯಾಸೆಯಿಂದ ಮೋಸ ಹೋದ ಜನರು ● ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು

ಮೈಸೂರು, ಜೂ.10(ಬಿಎಲ್‌ಯು)– ಸೈಬರ್ ವಂಚನೆಯಿಂದ ಈಗಾಗಲೇ ಬಹಳಷ್ಟು ಜನರು ಭಾರಿ ವಂಚನೆಗೊಳಗಾಗಿದ್ದರೂ ಇನ್ನು ಬುದ್ಧಿ ಕಲಿತಿಲ್ಲ. ಆನ್‌ಲೈನ್ ವಂಚಕರ ದಾಳಕ್ಕೆ ಹಣ ಕಳೆದುಕೊಳ್ಳುತ್ತಲೇ ಇದ್ದಾರೆ. ಮೈಸೂರಿನಲ್ಲಿ ನಡೆದಿರುವ ಮೂರು ಪ್ರತ್ಯೇಕ ಪ್ರಕರಣಗಳಲ್ಲಿ ಲಾಭದ ಆಸೆಗೆ ಜೋತು ಬಿದ್ದ ಮೂವರು 40 ಲಕ್ಷ ರೂಪಾಯಿ ಕಳೆದುಕೊಂಡಿದ್ದಾರೆ.

ಈ ಸಂಬಂಧ ಮೈಸೂರಿನ ಸೆನ್ (ಸೈಬರ್ ಎಕನಾಮಿಕ್ ಅಂಡ್ ನಾರ್ಕೋಟಿಕ್ಸ್) ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೈಸೂರಿನ ಸಿದ್ಧಾರ್ಥ ನಗರದ ಎಲ್.ಜಿ.ಸೌಮ್ಯರಿಗೆ ಇನ್ಸ್ಟಾಗ್ರಾಂನಲ್ಲಿ ಸ್ಟಾಕ್ ಮಾರ್ಕೆಟ್ ಕುರಿತ ಜಾಹೀರಾತು ಕಣ್ಣಿಗೆ ಬಿದ್ದಿದೆ. ಅದರ ಲಿಂಕ್ ಮೇಲೆ ಕ್ಲಿಕ್ ಮಾಡಿದರೆ, ಹೆಚ್‌ಡಿಎಫ್‌ಸಿ ಸೆಕ್ಯೂರಿಟೀಸ್ 23 ಎಂಬ ವಾಟ್ಸ್ಯಾಪ್ ಗ್ರೂಪ್‌ಗೆ ಜಾಯಿನ್ ಆಗಿದೆ. ಆ ಗ್ರೂಪ್‌ನಲ್ಲಿ ಸ್ಟಾಕ್ ಖರೀದಿ ಹಾಗೂ ಮಾರಾಟದ ಬಗ್ಗೆ ಬಹಳಷ್ಟು ಮಾಹಿತಿ ನೀಡಲಾಗಿತ್ತು.

ಆ ವೇಳೆ ಗ್ರೂಪ್ ಸದಸ್ಯರು ಸ್ಟಾಕ್ ಖರೀದಿ ಮಾಡಿ ಅದರ ಸ್ಕ್ರೀನ್ ಶಾಟ್‌ಗಳನ್ನು ಗ್ರೂಪ್‌ನಲ್ಲಿ ಹಾಕುತ್ತಿರುವುದು ಸೌಮ್ಯ ಅವರಿಗೆ ಕಂಡು ಬಂದಿದೆ. ಅದನ್ನು ಗ್ರೊ ಆ್ಯಪ್‌ನಲ್ಲಿ ಪರಿಶೀಲನೆ ಮಾಡಿದ್ದಾರೆ. ಕೊನೆಗೆ ಸೌಮ್ಯ ಅವರಿಗೆ ಹೂಡಿಕೆ ಮೇಲೆ ನಂಬಿಕೆ ಬಂದಿದೆ.

ಆ ವೇಳೆ ಒಂದು ಗ್ರೂಪ್ ಅಡ್ಮಿನ್ ಸಂಪರ್ಕಿಸಿ ಇನ್ಸ್‌ಟಿಟ್ಯೂಷನಲ್ ಅಕೌಂಟ್ ಓಪನ್ ಮಾಡಿದ್ದಾರೆ. ಮೇ 15ರಂದು 20 ಸಾವಿರ ಹೂಡಿಕೆ ಮಾಡಿದ್ದಾರೆ. ಇದರಿಂದ 1,490 ರೂಪಾಯಿ ಲಾಭ ಬಂದಿದೆ. ಸಂತಸಗೊಂಡ ಸೌಮ್ಯ, ಮತ್ತೆ 80 ಸಾವಿರ ಹೂಡಿಕೆ ಮಾಡಿದ್ದಾರೆ. ಇದರಿಂದ 20,288 ರೂಪಾಯಿ ಲಾಭ ಬಂದಿದೆ.



ನಂತರವೂ ಎರಡು ಸಾವಿರ ಪಡೆದಿದ್ದಾರೆ. ಈ ವ್ಯವಹಾರದಿಂದ ಒಳ್ಳೆಯ ಲಾಭವಿದೆ ಎಂದು ಆಸೆಗೆ ಬಿದ್ದು ಮತ್ತಷ್ಟು ಹೂಡಿಕೆಗೆ ನಿರ್ಧರಿಸಿದ್ದಾರೆ. ಹೀಗೆ ವಿವಿಧ ಹಂತಗಳಲ್ಲಿ 19,50,000 ರೂ. ಹೂಡಿಕೆ ಮಾಡಿದ್ದಾರೆ. ಕೊನೆಗೆ ಲಾಭಾಂಶ ಪಡೆಯಲು ಹೋದಾಗ ಸಾಧ್ಯವಾಗಿಲ್ಲ.

ನಂತರ ಗ್ರಾಹಕರ ಸಹಾಯವಾಣಿ ಸಂಪರ್ಕಿಸಿದಾಗ ಶೇ.25ರಷ್ಟು ಕಮಿಷನ್ ಎಂದು ವಂಚಕರು 2,04,802 ರೂ. ಪಡೆದಿದ್ದಾರೆ. ಲಾಭದ ಹಣದಲ್ಲಿ ಶೇಕಡ 10ರಷ್ಟು ಆದಾಯ ತೆರಿಗೆ ಪಾವತಿಸ ಬೇಕೆಂದು ಮತ್ತೆ 88,222 ರೂಪಾಯಿ ಪಡೆದಿದ್ದಾರೆ. ಈ ಮೂಲಕ ಸೌಮ್ಯ ತಮ್ಮ ಹಾಗೂ ಸಹೋದರನ ಖಾತೆಯಿಂದಲೂ ಒಟ್ಟು 22,58,778 ರೂ. ಪಾವತಿ ಮಾಡಿದ್ದಾರೆ.

ಈ ಎಲ್ಲಾ ಹಣ ಪಡೆಯಲು ವಿಐಪಿ ಎಕ್ಸ್ ಚಾನಲ್ ಪಡೆಯಲು 5 ಲಕ್ಷ ಪಾವತಿ ಮಾಡಬೇಕೆಂದು ಮತ್ತೆ ಸಲಹೆ ನೀಡಿದ್ದಾರೆ. ಈ ವೇಳೆ ಅವರಿಗೆ ತಾವು ಮೋಸ ಹೋಗಿರುವುದು ತಿಳಿದಿದೆ. ಸೌಮ್ಯ ಮೈಸೂರಿನ ಸೆನ್ ಪೊಲೀಸ್ ಸ್ಟೇಷನ್‌ನಲ್ಲಿ ವಂಚಕರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ಮತ್ತೊಂದು ಪ್ರಕರಣ: ಇದೇ ರೀತಿ ಮೈಸೂರಿನ ರಾಮಕೃಷ್ಣನಗರದ ಮೊಹಮ್ಮದ್ ಶಿಬ್ಲಿ ರೋಷನ್‌ಗೆ ಟ್ರೇಡಿಂಗ್‌ನಲ್ಲಿ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭ ಬರುತ್ತದೆ ಎಂದು ಆಸೆ ಹುಟ್ಟಿಸಲಾಗಿದೆ.

ವೆಂಚ್ಯುರ ಸೆಕ್ಯೂರಿಟೀಸ್ ವೆಬ್‌ಸೈಟ್‌ನಲ್ಲಿ ಹೂಡಿಕೆ ಮಾಡುವಂತೆಯೂ ಸಲಹೆ ನೀಡಿದ್ದಾರೆ. ಹೆಚ್ಚಿನ ಲಾಭ ಬರುತ್ತದೆ ಎಂಬ ಆಸೆಯಿಂದ ಮೊಹಮ್ಮದ್ ಶಿಬ್ಲಿ ರೋಷನ್, ತಮ್ಮ ಎರಡು ಬ್ಯಾಂಕ್ ಖಾತೆಯಿಂದ 10,84,460 ರೂ. ಹೂಡಿಕೆ ಮಾಡಿದ್ದಾರೆ. ತರುವಾಯ ಹಣ ಪಡೆಯಲು ಹೋದಾಗ ತಾವು ಮೋಸ ಹೋಗಿರುವುದು ದೃಢಪಟ್ಟಿದೆ. ಈ ಸಂಬಂಧ ಮೊಹಮ್ಮದ್ ಶಿಬ್ಲಿ ರೋಷನ್ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

> ಪ್ರತಿದಿನ ಹೀಗೆ ಒಂದೊಂದು ಸೈಬರ್ ವಂಚನೆ ನಡೆಯುತ್ತಲೇ ಇದೆ. ಲಾಭದ ಆಸೆಗೆ ಬಿದ್ದು ವಂಚಕರು ಬೀಸುವ ಬಲೆಗೆ ಬೀಳುತ್ತಿದ್ದಾರೆ. ಈಗಾಗಲೇ ಇಂತಹ ಬಹಳಷ್ಟು ಪ್ರಕರಣಗಳು ವರದಿಯಾಗಿದ್ದರೂ ಜನರು ಎಚ್ಚೆತ್ತುಕೊಳ್ಳದಿರುವುದು ದುರ್ದೈವದ ಸಂಗತಿ. ಮೈಸೂರು ಸೇರಿದಂತೆ ಇಡೀ ದೇಶದಲ್ಲೇ ಇಂತಹ ಸೈಬರ್ ವಂಚನೆ ಪ್ರಕರಣಗಳು ದಾಖಲಾಗುತ್ತಿವೆ. ವಂಚಕರು ಸ್ವಲ್ಪವೂ ಕಷ್ಟ ಪಡದೆ ಕೋಟ್ಯಾಂತರ ರೂಪಾಯಿ ದೋಚುತ್ತಲೇ ಇದ್ದಾರೆ. ಆದರೆ ರಾಜ್ಯ ಅಥವಾ ಕೇಂದ್ರ ಸರ್ಕಾರಗಳು ಇದಕ್ಕೆ ಕಡಿವಾಣ ಹಾಕುವಲ್ಲಿ ವಿಫಲವಾಗಿವೆ.

ಆನ್‌ಲೈನ್ ವಂಚಕರ ಮೋಸದಾಟ ಇಷ್ಟಕ್ಕೆ ನಿಂತಿಲ್ಲ. ಮೈಸೂರಿನ ವಿಶ್ವೇಶ್ವರ ನಗರದ ಸ್ಯಾಮ್ಸನ್ ರಾಕೇಶ್ ಜೋಸೆಫ್ ಎಂಬುವವರಿಗೂ ಪಂಗನಾಮ ಹಾಕಿದ್ದಾರೆ. ತಾವು ಫೆಡ್‌ಎಕ್ಸ್ ಟ್ರಾನ್ಸ್‌ಪೋರ್ಟ್‌ನವರು ಎಂದು ಹೇಳಿಕೊಂಡು ಸ್ಯಾಮ್ಸನ್ ರಾಕೇಶ್ ಜೋಸೆಫ್ ಅವರಿಗೆ ಕರೆ ಮಾಡಿದ್ದಾರೆ. ನಿಮ್ಮ ಹೆಸರಿನಲ್ಲಿ ಮುಂಬೈನಿಂದ ಇರಾನ್‌ಗೆ 650 ಗ್ರಾಂ ಎಂಡಿಎಂಎ ಸಾಗಾಣೆಯಾಗಿದೆ. ಈ ಸಂಬಂಧ ಮುಂಬೈ ಕ್ರೈಂ ಬ್ರ್ಯಾಂಚ್ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ ಎಂದು ಬೆದರಿಸಿದ್ದಾರೆ.

ಸ್ಕೈಪ್ ಮೂಲಕ ಸಂಪರ್ಕ ಪಡೆದ ನಕಲಿ ಅಧಿಕಾರಿಗಳು ನಿಮ್ಮ ಬ್ಯಾಂಕ್ ಖಾತೆ ಮತ್ತು ನಿಮ್ಮ ಹೆಸರು ಮನಿ ಲಾಂಡರಿಂಗ್‌ಗೆ ಬಳಕೆಯಾಗಿದೆ. ಈ ಹಿನ್ನೆಲೆಯಲ್ಲಿ ನಿಮ್ಮ ಖಾತೆ ಪರಿಶೀಲನೆ ಮಾಡಬೇಕೆಂದು ಬೆದರಿಸಿದ್ದಾರೆ.

ವಂಚಕರ ಮಾತು ನಂಬಿದ ಜೋಸೆಫ್ ತಮ್ಮ ಬ್ಯಾಂಕ್ ಖಾತೆ ಮಾಹಿತಿ ನೀಡಿದ್ದಾರೆ. ಈ ವೇಳೆ ಅವರ ಖಾತೆಯಿಂದ ಐಸಿಐಸಿಐ ಆ್ಯಪ್ ತೆರೆದು ಲೋನ್ ಕ್ಲೈಮಿಂಗ್ ಪೇಜ್ ಓಪನ್ ಮಾಡಿ 7,00,561 ರೂ. ವರ್ಗಾವಣೆ ಮಾಡಿಕೊಂಡಿದ್ದಾರೆ.

ಈ ಸಂಬಂಧ ಸ್ಯಾಮ್ಸನ್ ರಾಕೇಶ್ ಜೋಸೆಫ್ ಮೈಸೂರಿನ ಸೆನ್ ಪೊಲೀಸ್ ಸ್ಟೇಷನ್‌ನಲ್ಲಿ ದೂರು ದಾಖಲಿಸಿದ್ದಾರೆ.

ಹೀಗೆ ಮೈಸೂರಲ್ಲಿ ನಡೆದಿರುವ ಮೂರು ಪ್ರತ್ಯೇಕ ಪ್ರಕರಣಗಳಲ್ಲಿ ಮೂವರು ಒಟ್ಟು 40,42,779 ರೂ. ಕಳೆದುಕೊಂಡಿದ್ದಾರೆ.

ಶ್ರೀ ಗೋಚಂದ್ರ ಮಾರಮ್ಮದೇವಿ ದೇವಾಲಯದ ಪ್ರತಿಷ್ಠಾಪನೆ, ಮಹಾ ಕುಂಭಾಭಿಷೇಕ

ಮೈಸೂರು, ಜೂ.10(ಬಿಎಲ್‌ಯು) ಮೈಸೂರಿನ ಹೈವೇ ವೃತ್ತದ ಬಳಿಯ ಶ್ರೀ ಗೋಚಂದ್ರ ಮಾರಮ್ಮದೇವಿ ದೇವಾಲಯದ ಪ್ರತಿಷ್ಠಾಪನೆ ಮತ್ತು ಮಹಾ ಕುಂಭಾಭಿಷೇಕವು ಇಂದು ವಿವಿಧ ಧಾರ್ಮಿಕ ವಿಧಿ ವಿಧಾನಗಳಂತೆ ನೆರವೇರಿತು.

ಜೋಡಿ ತೆಂಗಿನಮರ ರಸ್ತೆಯ ಎಂಸಿಸಿ ಕಾಲೋನಿಯಲ್ಲಿರುವ ದೇವಾಲಯದಲ್ಲಿ ನಡೆದ ಧಾರ್ಮಿಕ ಸಮಾರಂಭದ ಸಾನ್ನಿಧ್ಯವನ್ನು ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ವಹಿಸಿದ್ದರು.

ಶ್ರೀ ಗೋಚಂದ್ರ ಮಾರಮ್ಮ ದೇವಿ ದೇವಾಲಯದಲ್ಲಿ ಸ್ಥಾಪಿಸಿರುವ ಕಳಸಕ್ಕೆ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಪೂಜೆ ಸಲ್ಲಿಸಿದರು. ತರುವಾಯ ದೇವಿಗೆ ವಿಶೇಷ ಪೂಜಾ ಕೈಂಕರ್ಯ ನೆರವೇರಿಸಿದರು. ನಂತರ ಶ್ರೀಗಳು ದೇವಾಲಯದ ಉದ್ಘಾಟನೆ ಕೂಡ ಮಾಡಿದರು.



ಮೈಸೂರಿನ ಹೈವೆ ವೃತ್ತದ ಬಳಿಯ ಶ್ರೀ ಗೋಚಂದ್ರ ಮಾರಮ್ಮದೇವಿ ದೇವಾಲಯದ ಪ್ರತಿಷ್ಠಾಪನೆ ಮತ್ತು ಮಹಾ ಕುಂಭಾಭಿಷೇಕದ ವೇಳೆ ಗಣಪತಿ ಸಚ್ಚಿದಾನಂದ ಆಶ್ರಮದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಕಳಸ ಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಶ್ರೀಗಳು, ಆಧ್ಯಾತ್ಮ ಇಲ್ಲದಿದ್ದರೆ ಜೀವನವಿಲ್ಲ. ಭಗವಂತನ ಮೇಲೆ ಭಕ್ತಿ ಭಾವ ಹೊಂದುವುದು ಬಹಳ ಮುಖ್ಯ. ಭಗವಂತನ ಭಕ್ತಿ ಇಲ್ಲದಿದ್ದರೆ ಜೀವನ ಶೂನ್ಯ ಎಂದರು.

ಇಂದು ದೇವಾಲಯವನ್ನು ಪ್ರತಿಷ್ಠಾಪನೆ ಮಾಡಲಾಗಿದೆ. ಇಲ್ಲಿ ನಿತ್ಯ ಪೂಜೆ ಪುನಸ್ಕಾರಗಳನ್ನು ನೆರವೇರಿಸುತ್ತಾ ಭಗವಂತನ ಭಕ್ತಿಯಲ್ಲಿ ಮಿಂದೇಳಬೇಕು. ಈ ಮೂಲಕ ದೇವರ ಕೃಪೆಗೆ ಪಾತ್ರರಾಗಬೇಕು ಎಂದು ಸಲಹೆ ನೀಡಿದರು. ಹುಟ್ಟು–ಸಾವಿನ ವ್ಯತ್ಯಾಸ ತಿಳಿದಿರಬೇಕು. ಭೂಮಿಗೆ ಬಂದು, ಹೋಗುವುದರ ಮಧ್ಯೆ ಇರುವ ಬದುಕನ್ನು ಅರ್ಥೈಸಿಕೊಳ್ಳಬೇಕು. ಈ ಮೂಲಕ ನೆಮ್ಮದಿ ಜೀವನ ಮಾಡಬೇಕು ಎಂದು ಶ್ರೀಗಳು ಹೇಳಿದರು. ದಲಿತ ಅಭಿವೃದ್ಧಿ ಸಂಘ ಆಯೋಜಿಸಿದ್ದ ಸಮಾರಂಭದಲ್ಲಿ ಮಾಜಿ ಮೇಯರ್ ನಾರಾಯಣ, ಮಾಜಿ ಕಾರ್ಪೊರೇಟರ್ ಟಿ.ರಾಮು, ದಲಿತ ಅಭಿವೃದ್ಧಿ ಸಂಘದ ಗೌರವಾಧ್ಯಕ್ಷ ಯತಿರಾಜ್, ಅಧ್ಯಕ್ಷ ಹನುಮಂತು, ಮುನಿಸ್ವಾಮಿ, ಮಹಿಳಾ ಸಂಘದ ಸದಸ್ಯ ಲಕ್ಷ್ಮಮ್ಮ ಹಾಜರಿದ್ದರು.

ಯುವ ರಾಜ್‌ಕುಮಾರ್–ಶ್ರೀದೇವಿ ಡಿವೋರ್ಸ್?

ಬೆಂಗಳೂರು, ಜೂ.10– ಕನ್ನಡ ಚಿತ್ರರಂಗದ ದೊಡ್ಮನೆಯಿಂದ ವಿಚ್ಛೇದನದ ಸದ್ದು ಕೇಳಿಬಂದಿದೆ. 'ಯುವ' ಸಿನಿಮಾದ ಮೂಲಕ ಕನ್ನಡ ಚಿತ್ರರಂಗಕ್ಕೆ ಕಾಲಿಟ್ಟ ಯುವ ರಾಜ್‌ಕುಮಾರ್ ಅವರ ದಾಂಪತ್ಯದಲ್ಲಿ ಬಿರುಕು ಮೂಡಿದ್ದು, ಪತ್ನಿ ಶ್ರೀದೇವಿ ಹಾಗೂ ಯುವ ರಾಜ್‌ಕುಮಾರ್ ಬೇರೆ ಬೇರೆಯಾಗಿದ್ದಾರೆ. ವಿಚ್ಛೇದನಕ್ಕಾಗಿ ಯುವ ರಾಜ್‌ಕುಮಾರ್ ಅರ್ಜಿ ಸಲ್ಲಿಸಿದ್ದಾರೆ.



ರಾಘವೇಂದ್ರ ರಾಜ್‌ಕುಮಾರ್ ಅವರ ಕಿರಿಯ ಪುತ್ರ ಯುವ ರಾಜ್‌ಕುಮಾರ್ ಮತ್ತು ಅವರ ಪತ್ನಿ ಶ್ರೀದೇವಿ ಮಧ್ಯೆ ಮನಸ್ತಾಪ ಉಂಟಾಗಿದ್ದು, ಭಿನ್ನಾಭಿಪ್ರಾಯ ಭುಗಿಲೆದ್ದಿದೆ. ವಿಚ್ಛೇದನಕ್ಕಾಗಿ ಜೂನ್ 6ರಂದು ಯುವ ರಾಜ್‌ಕುಮಾರ್ ಬೆಂಗಳೂರಿನ ಫ್ಯಾಮಿಲಿ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಈ ಹಿನ್ನಲೆಯಲ್ಲಿ ಶ್ರೀದೇವಿ ಭೈರಪ್ಪ ಅವರಿಗೆ ಕೋರ್ಟ್‌ನಿಂದ ನೋಟೀಸ್ ಜಾರಿ ಮಾಡಲಾಗಿದೆ.

ಶ್ರೀದೇವಿ ಭೈರಪ್ಪ ಹಾಗೂ ಯುವ ರಾಜ್‌ಕುಮಾರ್ ಮಧ್ಯೆ ಕೆಲವು ವಿಚಾರಗಳಲ್ಲಿ ಭಿನ್ನಾಭಿಪ್ರಾಯ, ಮನಸ್ತಾಪ ಉಂಟಾಗಿದೆಯಂತೆ. ವಿಚ್ಛೇದನಕ್ಕೆ ಇದೇ ಕಾರಣ ಎನ್ನಲಾಗುತ್ತಿದೆ. ಸದ್ಯ ಶ್ರೀದೇವಿ ಭೈರಪ್ಪ ಅಮೇರಿಕಾದಲ್ಲಿದ್ದಾರೆ. ಇವರು ಮೂಲತಃ ಮೈಸೂರಿನವರು. ಇವರು ಅಣ್ಣಾವ್ರ ಕುಟುಂಬ ಒಡೆತನದ 'ಡಾ ರಾಜ್‌ಕುಮಾರ್ ಸಿವಿಲ್ ಸರ್ವೀಸ್ ಅಕಾಡೆಮಿ' ಉಸ್ತುವಾರಿ ವಹಿಸಿಕೊಂಡಿದ್ದರು

ಶ್ರೀದೇವಿ ಭೈರಪ್ಪ ಹಾಗೂ ಯುವ ರಾಜ್‌ಕುಮಾರ್ 7 ವರ್ಷಗಳ ಕಾಲ ಸ್ನೇಹಿತರಾಗಿದ್ದರು. ಇವರಿಬ್ಬರ ಮಧ್ಯೆ ಪ್ರೀತಿ ಚಿಗುರಿತು. ಇಬ್ಬರ ಪ್ರೀತಿಗೆ ಕುಟುಂಬಸ್ಥರು ಸಮ್ಮತಿ ನೀಡಿದರು. 2019ರಲ್ಲಿ ಯುವ ರಾಜ್‌ಕುಮಾರ್ ಶ್ರೀದೇವಿ ಅವರ ವಿವಾಹ ವಿಜೃಂಭಣೆಯಿಂದ ನಡೆಯಿತು. ಇಡೀ ದೊಡ್ಮನೆ ಫ್ಯಾಮಿಲಿ ಹಾಗೂ ತಾರೆಯರು ಮದುವೆಗೆ ಸಾಕ್ಷಿಯಾಗಿದ್ದರು. ಇದೀಗ ತಮ್ಮ 5 ವರ್ಷಗಳ ದಾಂಪತ್ಯ ಜೀವನಕ್ಕೆ ಯುವ ರಾಜ್‌ಕುಮಾರ್–ಶ್ರೀದೇವಿ ಅಂತ್ಯ ಹಾಡುತ್ತಿದ್ದಾರೆ.

ಅಕ್ರಮ ಹಣ ವರ್ಗಾವಣೆ ಆರೋಪ: ಡಿಕೆಶಿ ವಿರುದ್ಧದ ಪ್ರಕರಣ ರದ್ದು

ನವದೆಹಲಿ, ಜೂ.10– ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಅಕ್ರಮ ಹಣ ವರ್ಗಾವಣೆ ಆರೋಪದ ಅಡಿಯಲ್ಲಿ 2018ರಲ್ಲಿ ದಾಖಲಾಗಿದ್ದ ಪ್ರಕರಣವನ್ನು ಸುಪ್ರೀಂಕೋರ್ಟ್ ಸೋಮವಾರ ರದ್ದುಪಡಿಸಿದೆ. ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯವು (ಇ.ಡಿ) ತಮಗೆ ನೀಡಿದ್ದ ಸಮನ್ಸ್ ಪ್ರಶ್ನಿಸಿ ಶಿವಕುಮಾರ್ ಅವರು ಕರ್ನಾಟಕ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಆದರೆ ಸಮನ್ಸ್ ರದ್ದುಪಡಿಸಲು ಹೈಕೋರ್ಟ್ ನಿರಾಕರಿಸಿತ್ತು ಇದನ್ನು ಪ್ರಶ್ನಿಸಿ ಶಿವಕುಮಾರ್ ಅವರು ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಮೇಲ್ಮನವಿಯನ್ನು ಮಾನ್ಯ ಮಾಡಿರುವ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಕೆ.ವಿ. ವಿಶ್ವನಾಥನ್ ಅವರನ್ನೊಳಗೊಂಡ ವಿಭಾಗೀಯ ಪೀಠವು, ಹೈಕೋರ್ಟ್ ಆದೇಶವನ್ನು ರದ್ದುಪಡಿಸಿತು. ಮೇಲ್ಮನವಿ ಸಲ್ಲಿಸಿರುವವರ ವಿರುದ್ಧ ಪಿಎಂಎಲ್‌ಎ ಅಡಿಯಲ್ಲಿ ಕ್ರಮ ಜರುಗಿಸಿದ್ದನ್ನು ರದ್ದುಪಡಿಸಲಾಗಿದೆ ಎಂದು ಪೀಠವು ಹೇಳಿದೆ. ಶಿವಕುಮಾರ್ ಹಾಗೂ ಕರ್ನಾಟಕ ಭವನದ (ದೆಹಲಿ) ನೌಕರ ಎ. ಹನುಮಂತಯ್ಯ ಮೇಲ್ಮನವಿ ಸಲ್ಲಿಸಿದ್ದರು.



ರಾಹುಲ್ ಗಾಂಧಿ ಲೋಕಸಭೆ ವಿರೋಧ ಪಕ್ಷದ ನಾಯಕರಾಗಲಿ

ಮೈಸೂರು,ಜೂ.10–ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ವಿರೋಧ ಪಕ್ಷದ ನಾಯಕನ ಸ್ಥಾನ ವಹಿಸಿಕೊಳ್ಳಬೇಕು. ಆಗ ದೇಶಾದ್ಯಂತ ಕಾಂಗ್ರೆಸ್ ಇನ್ನೂ ಬಲಶಾಲಿಯಾಗಿ ಬೆಳೆಯೋದರಲ್ಲಿ ಸಂಶಯವೇ ಇಲ್ಲವೆಂದು ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್ ಅಭಿಪ್ರಾಯಪಟ್ಟಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕ ಸಂಖ್ಯೆ ಗಳಿಸಲು ರಾಹುಲ್ ಗಾಂಧಿಯವರು ದೇಶಾದ್ಯಂತ ನಡೆಸಿದ ಭಾರತ ಜೋಡೋ ಪಾದಯಾತ್ರೆ ಫಲಶ್ರುತಿ. 2 ವರ್ಷದ ಹಿಂದೆ ಕನ್ಯಾಕುಮಾರಿಯಿಂದ ಕಾಶ್ಮೀರ್‌ವರೆಗೂ ನಡೆದ 4 ಸಾವಿರ ಕಿಮೀ ಭಾರತ ಜೋಡೋ, 6,600 ಕಿ.ಮೀ. ಭಾರತ ಜೋಡೋ ನ್ಯಾಯಯಾತ್ರೆಯಲ್ಲಿ ರಾಹುಲ್ ಗಾಂಧಿ ದೇಶದುದ್ದಗಲಕ್ಕೂ ಸಂಚರಿಸಿ, ಜನರ ನಾಡಿಮಿಡಿತ ಅರಿತಿದ್ದಾರೆ. ಜನರ ಸಮಸ್ಯೆ ಹತ್ತಿರದಿಂದ ಕಂಡಿದ್ದು ಅವುಗಳ ಪರಿಹಾರದ ಬಗ್ಗೆ ಸ್ಪಷ್ಟ ಚಿಂತನೆ ಹೊಂದಿದ್ದಾರೆ. ರಾಹುಲ್ ಗಾಂಧಿಯವರು ವಿರೋಧ ಪಕ್ಷದ ನಾಯಕರಾಗಿ ಕಾರ್ಯಭಾರ ವಹಿಸಿಕೊಂಡಲ್ಲಿ ದೇಶಾದ್ಯಂತ ಕಾಂಗ್ರೆಸ್‌ನ ಎಲ್ಲಾ ವರ್ಗದ, ಎಲ್ಲಾ ವಯೋಮಾನದ ಕಾರ್ಯಕರ್ತರಲ್ಲಿ ಉತ್ಸಾಹ ಇನ್ನಷ್ಟು ಹೆಚ್ಚುತ್ತದೆ ಎಂದಿದ್ದಾರೆ.



ಮೈಸೂರು ತ್ಯಾಜ್ಯ ವಿಲೇವಾರಿ ಬಗ್ಗೆ ಗಮನಹರಿಸದ ಸ್ಥಳೀಯ ಆಡಳಿತ

● ಮೈಗ್ರಾಪ ಸಭೆಯಲ್ಲಿ ಆಕ್ರೋಶ ● 6 ಲಕ್ಷ ಮೆಟ್ರಿಕ್ ಟನ್ ವಿಲೇವಾರಿಗೆ ಕೇಂದ್ರದಿಂದ 62 ಕೋಟಿ ಅನುದಾನ ಬಿಡುಗಡೆ ● ಈ ಸಂಬಂಧ ಜನಪ್ರತಿನಿಧಿಗಳು, ಸಿಎಂಗೆ ಪತ್ರ ಮುಖೇನ ಮನವಿಗೆ ನಿರ್ಧಾರ


ಮೈಸೂರು, ಜೂ.10(ಎಸ್‌ಪಿಎನ್)– ಮೈಸೂರು ನಗರದಲ್ಲಿ ಹಲವಾರು ವರ್ಷಗಳಿಂದ ಸಂಗ್ರಹವಾಗಿರುವ 6 ಲಕ್ಷ ಮೆಟ್ರಿಕ್ ಟನ್ ತ್ಯಾಜ್ಯ ವಿಲೇವಾರಿಗೆ ಸ್ಥಳೀಯ ಸಂಸ್ಥೆ ನಿರಾಸಕ್ತಿ ವಹಿಸಿದ್ದು, ಸಿಎಂ ಮತ್ತು ಜನಪ್ರತಿನಿಧಿಗಳಿಗೆ ಈ ಸಂಬಂಧ ಪತ್ರ ಮುಖೇನ ಮನವಿ ಸಲ್ಲಿಸಲು ಮೈಗ್ರಾಪ ಸಭೆಯಲ್ಲಿ ನಿರ್ಧರಿಸಲಾಯಿತು.

ಮೈಸೂರಿನ ಯಾದವಗಿರಿ ವಿವೇಕಾನಂದ ರಸ್ತೆಯ ಮೈಗ್ರಾಪ ಕಚೇರಿಯಲ್ಲಿ ಭಾನುವಾರ ನಡೆದ ಸಭೆಯಲ್ಲಿ ಮೈಸೂರಿನ ತ್ಯಾಜ್ಯ ನಿರ್ವಹಣೆ ಹಾಗೂ ಕುಕ್ಕರಹಳ್ಳಿ ಕೆರೆ ಅಭಿವೃದ್ಧಿಗೆ ಬಿಡುಗಡೆಗೊಂಡಿರುವ ಅನುದಾನ ಕುರಿತು ಸದಸ್ಯರು ಚರ್ಚಿಸಿದರು.

ಮೈಸೂರು ಗ್ರಾಹಕ ಪರಿಷತ್‌ನ ಬಾಮಿ ವಿ.ಶೆಣೈ ವಿಷಯ ಪ್ರಸ್ತಾಪಿಸುತ್ತ, ಮೈಸೂರು ನಗರಪಾಲಿಕೆ ವ್ಯಾಪ್ತಿಯಲ್ಲಿ ಹಲವು ವರ್ಷಗಳಿಂದ ಸಂಗ್ರಹವಾಗಿರುವ ಅಂದಾಜು 6 ಲಕ್ಷ ಮೆಟ್ರಿಕ್ ಟನ್ ತ್ಯಾಜ್ಯವನ್ನು ಕರಗಿಸಲು ಕೇಂದ್ರ ಸರ್ಕಾರದಿಂದ 62 ಕೋಟಿ ಅನುದಾನ ಬಿಡುಗಡೆಗೊಂಡಿದೆ. ಆದರೆ, ತ್ಯಾಜ್ಯ ನಿರ್ವಹಣೆಗೆ ಅರ್ಹ ಕಂಪನಿಗೆ ಟೆಂಡರ್ ನೀಡಿದಿರುವ ಕುರಿತು ಸಭೆಗೆ ತಿಳಿಸಿದರು.

ಈ ತ್ಯಾಜ್ಯ ವಿಲೇವಾರಿಗೆ ನೀಡಿರುವ ಗುತ್ತಿಗೆದಾರರು ಗುಜರಾತ್ ಮೂಲದವರು ಎಂದು ತಿಳಿದುಬಂದಿದ್ದು, ಈ ಗುತ್ತಿಗೆದಾರರು, ದೇಶದ ಯಾವ ನಗರದಲ್ಲಿ ತ್ಯಾಜ್ಯ ವಿಲೇವಾರಿ ಮಾಡಿದ್ದಾರೆ. ಅಲ್ಲಿ ಸಕ್ಸಸ್ ಆಗಿರುವ ಬಗ್ಗೆ ಮೈಸೂರಿನ ನಾಗರಿಕರಿಗೆ ಸರಿಯಾದ ಮಾಹಿತಿ ಇಲ್ಲ. ಇದರ ಕುರಿತು ಪಾಲಿಕೆ ಆಯುಕ್ತರನ್ನು ಆದಷ್ಟು ಬೇಗ ತೆರಳಿ ಚರ್ಚಿಸಲು ಅಗತ್ಯತೆ ಇದೆ ಎಂದರು.

ಬೇಸರ: ಮೈಸೂರು ತ್ಯಾಜ್ಯ ವಿಲೇವಾರಿ, ಕುಕ್ಕರಹಳ್ಳಿ ಕೆರೆ ಅಭಿವೃದ್ಧಿ ಕುರಿತು ಚರ್ಚಿಸಲು ಜನಪ್ರತಿನಿಧಿಗಳಾದ ಶಾಸಕ ತನ್ವೀರ್ ಸೇಠ್, ಹರೀಶ್‌ಗೌಡ, ಟಿ.ಎಸ್.ಶ್ರೀವತ್ಸ ಅವರು ಒಂದೊಂದು ಕಾರಣ ನೀಡಿ, ಈ ದಿನದ ಚರ್ಚೆಯಲ್ಲಿ ಪಾಲ್ಗೊಂಡಿಲ್ಲ ಎಂದು ಕೆಲ ಸದಸ್ಯರು ಬೇಸರ ಹೊರಹಾಕಿದರು.



ಮೈಸೂರಿನ ತ್ಯಾಜ್ಯ ನಿರ್ವಹಣೆ, ಕುಕ್ಕರಹಳ್ಳಿ ಕೆರೆ ಅಭಿವೃದ್ಧಿಗೆ ಮೈಗ್ರಾಪ ಸದಸ್ಯರು ಚರ್ಚಿಸಿದರು.

ಸುತ್ತಮುತ್ತ ದುರ್ವಾಸನೆ: ಸೀವೇಜ್ ಫಾರಂನಲ್ಲಿ ಸಂಗ್ರಹವಾಗಿರುವ 6 ಲಕ್ಷ ಮೆಟ್ರಿಕ್ ಟನ್ ತ್ಯಾಜ್ಯದಿಂದ ಈ ಜಾಗದ ಸುತ್ತಮುತ್ತಲು ವಾಸಿಸುತ್ತಿರುವ ನಿವಾಸಿಗಳು ದಿನನಿತ್ಯ ನರಕ ಜೀವನ ಸಾಗಿಸುತ್ತಿದ್ದಾರೆ. ಇಲ್ಲಿಯವರೆಗೆ ದುರ್ವಾಸನೆಯನ್ನು ಸೇವಿಸಿ ಬದುಕುವುದು ಅನಿವಾರ್ಯವಾಗಿದೆ. ಇದರಿಂದ ಇಲ್ಲಿನ ನಿವಾಸಿಗಳಲ್ಲಿ ರೋಗ–ರುಜಿನಗಳು ಕಾಣಿಸಿಕೊಳ್ಳುತ್ತಿವೆ. ಆದರೂ ನಮ್ಮ ಜನಪ್ರತಿನಿಧಿಗಳು ಇದರ ಬಗ್ಗೆ ತಲೆಕೆಡಿಸಿಕೊಂಡಿಲ್ಲ. ಹಲವರ ಹೋರಾಟದ ಫಲವಾಗಿ ಈ ಸಮಸ್ಯೆ ಬಗೆಹರಿಸಲು ಕೇಂದ್ರ ಸರ್ಕಾರ 62 ಕೋಟಿ ಅನುದಾನ ಬಿಡುಗಡೆ ಮಾಡಿದೆ. ಆದರೂ ಈ ತ್ಯಾಜ್ಯ ವಿಲೇವಾರಿ ಬಗ್ಗೆ ಸ್ಥಳೀಯ ಆಡಳಿತ ಗಮನಹರಿಸುತ್ತಿಲ್ಲ ಎಂದು ಸದಸ್ಯರೊಬ್ಬರು ಆಕ್ರೋಶ ವ್ಯಕ್ತಪಡಿಸಿದರು.

ರಾಜಕೀಯ ದಾಳ: ಈ ತ್ಯಾಜ್ಯ ವಿಲೇವಾರಿ ವಿಷಯವಾಗಿ ಮೈಸೂರಿನ ಜನಪ್ರತಿನಿಧಿಗಳು ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುತ್ತಿದ್ದಾರೆ. ಈ ವಿಷಯ ಕುರಿತು ಈಗ–ಆಗ ಎನ್ನುವಷ್ಟರಲ್ಲಿ ಜನಪ್ರತಿನಿಧಿಗಳ ಅಧಿಕಾರಾವಧಿ ಕೊನೆಗೊಂಡಿರುತ್ತದೆ. ಹೀಗಾದರೆ, ಈ ಸಮಸ್ಯೆ ಕೊನೆಗೊಳ್ಳುವುದು ಯಾವಾಗ ಎಂದು ಸದಸ್ಯರೊಬ್ಬರು ಪ್ರಶ್ನಿಸಿದರು.

ಕುಕ್ಕರಹಳ್ಳಿ ಕೆರೆ ಅಭಿವೃದ್ಧಿ ಯಾವ ರೀತಿ: ಮೈಗ್ರಾಪ ಸದಸ್ಯ ನಟರಾಜ್ ಎಂಬುವರು ಕುಕ್ಕರಹಳ್ಳಿ ಕೆರೆ ಅಭಿವೃದ್ಧಿಗೆ ಜಿಲ್ಲಾಡಳಿತ ತಜ್ಞರ ಕಾರ್ಯಪಡೆ ರಚಿಸಿದೆ. ಈ ತಂಡದಲ್ಲಿ ಯಾರ್‍ಯಾರು ಸದಸ್ಯರಿದ್ದಾರೆ ಎಂಬುದು ತಿಳಿಯುತ್ತಿಲ್ಲ. ಅಲ್ಲದೆ, ಈ ಕೆರೆ ಅಭಿವೃದ್ಧಿಗೆ ಡಿಪಿಆರ್ ತಯಾರಿಸಲು ಸರ್ಕಾರದಿಂದ 65 ಲಕ್ಷ ಅನುದಾನ ಬಿಡುಗಡೆ ಮಾಡಿದೆ. ಇದರಲ್ಲಿ ಕೆರೆ ಅಭಿವೃದ್ಧಿ ಯಾವ ರೀತಿ ಎಂಬುದು ಗೊತ್ತಾಗುತ್ತಿಲ್ಲ. ಇದರ ಬಗ್ಗೆ ಮೈಗ್ರಾಪ ಗಮನಹರಿಸಬೇಕು ಎಂದು ಸಭೆಗೆ ಸದಸ್ಯರೊಬ್ಬರು ಮನವಿ ಮಾಡಿದರು.

ಕುಕ್ಕರಹಳ್ಳಿ ಕೆರೆ ಅಭಿವೃದ್ಧಿಗೆ 65 ಲಕ್ಷ ವೆಚ್ಚದಲ್ಲಿ ಡಿಪಿಆರ್ ತಯಾರಿಸಲು ಇನ್‌ಟ್ಯಾಕ್ ಎಂಬ ಎನ್‌ಜಿಓಗೆ ಜಿಲ್ಲಾಡಳಿತ ವಹಿಸಿದೆ. ಈ ಸಂಸ್ಥೆ ಕೆರೆಯನ್ನು ಯಾವ ರೀತಿ ಅಭಿವೃದ್ಧಿಪಡಿಸಲು ಆಲೋಚಿಸುತ್ತಿದೆ ಎಂಬುದು ತಿಳಿಯುತ್ತಿಲ್ಲ ಎಂದರು. ಈ ವೇಳೆ ಎಸ್.ವಿ.ಶಂಕರ್, ಡಿ.ವಿ.ದಯಾನಂದ ಸಾಗರ್, ಕೆ.ವಿ.ಭಾನು ದಶರತ್, ವಿಶ್ವನಾಥ್, ಎಸ್.ಶೈಲೇಸ್, ಎಂ.ಎಸ್.ಶಿವಕುಮಾರ ಸ್ವಾಮಿ, ಕೆ.ವಿ.ರಾಮನಾಥ್, ಸೋಮಶೇಖರ್, ಸೇತುರಾಮ್, ಪಿ.ರಾಕೇಶ್, ಕೆ.ವಿ.ಕೆ.ನಾಯ್ಡು, ಜಿ.ಶ್ರೀಧರ್, ನಟರಾಜ್, ರೇಣು ಅಗ್ರವಾಲ್, ಅರುಣ್‌ಕುಮಾರ್ ಇತರರಿದ್ದರು.

> "ಮೈಸೂರು ಸ್ವಚ್ಛತಾ ನಗರಿ, ಸಾಂಸ್ಕೃತಿಕ ನಗರಿ, ಅರಮನೆಗಳ ನಗರಿ, ಪ್ರವಾಸೋದ್ಯಮ ನಗರಿ ಎಂಬ ವಿಶೇಷಣ ಪದಗಳಿಂದ ಕರೆಸಿಕೊಂಡು ವಿಶ್ವದ ಗಮನ ಸೆಳೆದಿದೆ. ಆದರೆ, ಇಲ್ಲಿ ಸಂಗ್ರಹವಾಗಿರುವ ತ್ಯಾಜ್ಯ ವಿಲೇವಾರಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಜನಪ್ರತಿನಿಧಿಗಳು ಹೆಚ್ಚಿನ ಗಮನಹರಿಸುತ್ತಿಲ್ಲ. ಹಾಗಾಗಿ ಈ ಸಮಸ್ಯೆ ಕುರಿತು ಮೈಸೂರಿನ ಎಲ್ಲಾ ಜನಪ್ರತಿನಿಧಿಗಳಿಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವರಿಗೆ ಪತ್ರ ಮುಖೇನ ಮನವಿ ಮಾಡಬೇಕು.
>
> **–ಮೈಗ್ರಾಪ ಸದಸ್ಯರ ಒಕ್ಕೊರಲ ಅಭಿಪ್ರಾಯ.**

ಕೇಂದ್ರದ ನೂತನ ಸಚಿವರಿಗೆ ಖಾತೆ ಹಂಚಿಕೆ

ಕ್ಯಾಬಿನೆಟ್ ಸಚಿವರು

ರಾಜನಾಥ್	ರಕ್ಷಣೆ
ಅಮಿತ್ ಶಾ	ಗೃಹ
ನಿತಿನ್ ಗಡ್ಕರಿ	ರಸ್ತೆ ಸಾರಿಗೆ ಮತ್ತು ಹೆದ್ದಾರಿ
ಜೆ.ಪಿ. ನಡ್ಡಾ	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ರಸಾಯನಿಕ ಮತ್ತು ರಸಗೊಬ್ಬರ
ಶಿವರಾಜ್ ಸಿಂಗ್ ಚವ್ಹಾಣ್	ಕೃಷಿ ಮತ್ತು ರೈತ ಕಲ್ಯಾಣ ಹಾಗೂ ಗ್ರಾಮೀಣಾಭಿವೃದ್ಧಿ
ನಿರ್ಮಲಾ ಸೀತಾರಾಮನ್	ಹಣಕಾಸು ಮತ್ತು ಕಾರ್ಪೋರೇಟ್ ವ್ಯವಹಾರಗಳು
ಜೈಶಂಕರ್	ವಿದೇಶಾಂಗ
ಮನೋಹರ್ ಲಾಲ್	ವಸತಿ ಮತ್ತು ಗ್ರಾಮೀಣ ವ್ಯವಹಾರ ಹಾಗೂ ಇಂಧನ
ಹೆಚ್.ಡಿ.ಕುಮಾರಸ್ವಾಮಿ	ಬೃಹತ್ ಕೈಗಾರಿಕೆ ಮತ್ತು ಉಕ್ಕು
ಪಿಯೂಷ್ ಗೋಯೆಲ್	ವಾಣಿಜ್ಯ ಮತ್ತು ಕೈಗಾರಿಕೆ
ಧರ್ಮೇಂದ್ರ ಪ್ರಧಾನ್	ಶಿಕ್ಷಣ
ಜಿತನ್ ರಾಮ್ ಮಾಂಝಿ	ಸಣ್ಣ ಮತ್ತು ಮಧ್ಯಮ ಕೈಗಾರಿಕೆ
ರಾಜೀವ್ ರಂಜನ್ ಸಿಂಗ್	ಪಂಚಾಯತ್ ರಾಜ್ ಮತ್ತು ಮೀನುಗಾರಿಕೆ, ಪಶು ಸಂಗೋಪನಾ
ಸರ್ಬಾನಂದ ಸೋನಾವಾಲ್	ಬಂದರು
ಡಾ. ವೀರೇಂದ್ರಕುಮಾರ್	ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ
ರಾಮ್‌ಮೋಹನ್ ನಾಯ್ಡು	ನಾಗರಿಕ ವಿಮಾನಯಾನ
ಪ್ರಹ್ಲಾದ್ ಜೋಶಿ	ಆಹಾರ ಮತ್ತು ನಾಗರಿಕ ಪೂರೈಕೆ ಹಾಗೂ ಹೊಸ ನವೀಕರಿಸಬಹುದಾದ ಇಂಧನ
ಜುವೆಲ್ ಓರಮ್	ಆದಿವಾಸಿ ಇಲಾಖೆ
ಗಿರಿರಾಜ್ ಸಿಂಗ್	ಜವಳಿ
ಅಶ್ವಿನಿ ವೈಷ್ಣವ್	ರೈಲ್ವೆ, ಮಾಹಿತಿ ಪ್ರಸಾರ, ಮಾಹಿತಿ ತಂತ್ರಜ್ಞಾನ
ಜ್ಯೋತಿರಾಧಿತ್ಯ ಸಿಂಧಿಯಾ	ಸಂಪರ್ಕ ಮತ್ತು ಈಶಾನ್ಯ ರಾಜ್ಯಗಳ ಅಭಿವೃದ್ಧಿ
ಭೂಪೇಂದ್ರ ಸಿಂಗ್	ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ
ಗಜೇಂದ್ರ ಸಿಂಗ್ ಶೇಖಾವತ್	ಸಂಸ್ಕೃತಿ ಮತ್ತು ಪ್ರವಾಸೋದ್ಯಮ
ಅನ್ನಪೂರ್ಣಾದೇವಿ	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ಕಿರಣ್ ರಿಜಿಜು	ಸಂಸದೀಯ ವ್ಯವಹಾರ ಮತ್ತು ಅಲ್ಪಸಂಖ್ಯಾತರ ಕಲ್ಯಾಣ
ಹರ್ದೀಪ್ ಸಿಂಗ್ ಪುರಿ	ಪೆಟ್ರೋಲಿಯಂ ಮತ್ತು ನೈಸರ್ಗಿಕ ಗ್ಯಾಸ್
ಮನ್ಸುಖ್ ಮಾಂಡೋವಿಯಾ	ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡೆ
ಕೃಷ್ಣಾ ರೆಡ್ಡಿ	ಕಲ್ಲಿದ್ದಲು ಗಣಿಗಾರಿಕೆ
ಚಿರಾಗ್ ಪಾಸ್ವಾನ್	ಆಹಾರ ಸಂಸ್ಕರಣೆ
ಸಿ.ಆರ್.ಪಾಟೀಲ್	ಜಲಶಕ್ತಿ

ಸ್ವತಂತ್ರ ನಿರ್ವಹಣೆ ಸಚಿವರು

ರಾವ್ ಇಂದ್ರಜಿತ್ ಸಿಂಗ್	ಸಾಂಖ್ಯಿಕ ಮತ್ತು ಯೋಜನೆ ಹಾಗೂ ಸಂಸ್ಕೃತಿ
ಡಾ. ಜಿತೇಂದ್ರ ಸಿಂಗ್	ವಿಜ್ಞಾನ ಮತ್ತು ತಂತ್ರಜ್ಞಾನ, ಭೂ ವಿಜ್ಞಾನ, ಪ್ರಧಾನಿ ಕಚೇರಿ
ಅರ್ಜುನ್ ರಾಂ ಮೇಘಲಾಲ್	ಕಾನೂನು, ಸಂಸದೀಯ ವ್ಯವಹಾರ
ಜಾಧವ್ ಪ್ರತಾಪ್ ರಾವ್	ಆಯುಷ್ ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಗಣಪತ್ ರಾವ್ ಜಯಂತ್ ಚೌಧರಿ	ಕೌಶಲಾಭಿವೃದ್ಧಿ ಮತ್ತು ಉದ್ಯಮಶೀಲತೆ, ಶಿಕ್ಷಣ

ರಾಜ್ಯ ಖಾತೆ ಸಚಿವರು

ಹೆಸರು	ಖಾತೆ
ಜಿತಿನ್ ಪ್ರಸಾದ	ವಾಣಿಜ್ಯ ಮತ್ತು ಕೈಗಾರಿಕೆ, ಮಾಹಿತಿ ತಂತ್ರಜ್ಞಾನ
ಶ್ರೀಪಾದ್ ಯೆಸ್ಸೋ ನಾಯಕ್	ಇಂಧನ ಮತ್ತು ಹೊಸ ನವೀಕರಿಸಬಹುದಾದಇಂಧನ
ಪಂಕಜ್ ಚೌಧರಿ	ಹಣಕಾಸು
ಕಿಶನ್ ಪಾಲ್	ಸಹಕಾರ
ರಾಮ್‌ದಾಸ್ ಅಠಾವಳೆ	ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ
ರಾಮ್‌ನಾಥ್ ಠಾಕೂರ್	ಕೃಷಿ ಮತ್ತು ರೈತ ಕಲ್ಯಾಣ
ನಿತ್ಯಾನಂದ ರೈ	ಗೃಹ
ಅನುಪ್ರಿಯಾ ಪಟೇಲ್	ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ರಾಸಾಯನಿಕ ಮತ್ತು ಗೊಬ್ಬರ
ವಿ. ಸೋಮಣ್ಣ	ಜಲಶಕ್ತಿ ಮತ್ತು ರೈಲ್ವೇ
ಚಂದ್ರಶೇಖರ ಪೆಮ್ಮಸಾನಿ	ಗ್ರಾಮೀಣಾಭಿವೃದ್ಧಿ ಮತ್ತು ಸಂವಹನ
ಪ್ರೊ. ಎಸ್.ಪಿ. ಸಿಂಗ್ ಬಘೇಲ್	ಮೀನುಗಾರಿಕೆ, ಪಶುಸಂಗೋಪನೆ, ಹೈನುಗಾರಿಕೆ ಮತ್ತು ಪಂಚಾಯತ್ ರಾಜ್
ಶೋಭಾ ಕರಂದ್ಲಾಜೆ	ಅತೀ ಸಣ್ಣ, ಸಣ್ಣ ಕೈಗಾರಿಕೆ, ಕಾರ್ಮಿಕ ಮತ್ತು ಉದ್ಯೋಗ
ಕೀರ್ತಿವರ್ಧನ್ ಸಿಂಗ್	ಪರಿಸರ, ಅರಣ್ಯ, ಹವಾಮಾನ ಮತ್ತು ವಿದೇಶಾಂಗ ಇಲಾಖೆ
ಬಿ.ಎಲ್. ವರ್ಮಾ	ಆಹಾರ ಮತ್ತು ನಾಗರಿಕ ಪೂರೈಕೆ, ಸಾಮಾಜಿಕ ನ್ಯಾಯ
ಸಂತಾನು ಠಾಕೂರ್	ಬಂಧರು, ಹಡಗು ಮತ್ತು ಜಲಮಾರ್ಗ
ಸುರೇಶ್ ಗೋಪಿ	ಪೆಟ್ರೋಲಿಯಂ. ನೈಸರ್ಗಿಕ ಅನಿಲ ಮತ್ತು ಪ್ರವಾಸೋದ್ಯಮ
ಎಲ್. ಮುರುಗನ್	ಮಾಹಿತಿ ಮತ್ತು ಪ್ರಸಾರ, ಸಂಸದೀಯ ವ್ಯವಹಾರ
ಅಜಯ್ ತಮ್ಟಾ	ರಸ್ತೆ ಸಾರಿಗೆ ಮತ್ತು ಹೆದ್ದಾರಿ
ಬಂಡೀ ಸಂಜಯ್‌ಕುಮಾರ್	ಗೃಹ
ಕಮಲೇಶ್ ಪಾಸ್ವಾನ್	ಗ್ರಾಮೀಣಾಭಿವೃದ್ಧಿ
ಭಗೀರಥ್ ಚೌಧರಿ	ಕೃಷಿ ಮತ್ತು ರೈತ ಕಲ್ಯಾಣ
ಸತೀಶ್‌ಚಂದ್ರ ದುಬೆ	ಕಲ್ಲಿದ್ದಲು ಮತ್ತು ಗಣಿಗಾರಿಕೆ
ಸಂಜಯ್ ಶೇಟ್	ರಕ್ಷಣೆ
ನವನೀತ್ ಸಿಂಗ್	ಆಹಾರ ಮತ್ತು ಸಂಸ್ಕರಣೆ, ರೈಲ್ವೆ
ದುರ್ಗಾದಾಸ್ ಯುಕಿ	ಆದಿವಾಸಿ ಕಲ್ಯಾಣ
ರಕ್ಷಾ ನಿಖಿಲ್ ಖಡ್ಸೆ	ಯುವಜನ ಮತ್ತು ಕ್ರೀಡಾ
ಸುಕಾಂತ್ ಮುಜುಂದಾರ್	ಶಿಕ್ಷಣ ಮತ್ತು ಈಶಾನ್ಯ ವಲಯ ಅಭಿವೃದ್ಧಿ
ಸಾವಿತ್ರಿ ಠಾಕೂರ್	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ರಾಜ್‌ಭೂಷನ್ ಚೌಧರಿ	ಜಲಶಕ್ತಿ
ಭೂಪತಿರಾಜು ಶ್ರೀನಿವಾಸ ವರ್ಮಾ	ಬೃಹತ್ ಕೈಗಾರಿಕೆ ಮತ್ತು ಉಕ್ಕು
ಹರ್ಷ್ ಮಲ್ಹೋತ್ರಾ	ಕಾರ್ಪೋರೇಟ್, ರಸ್ತೆ ಮತ್ತು ಹೆದ್ದಾರಿ
ನಿಮುಬೆನ್ ಜಯಂತಿಬಾಯಿ	ಗ್ರಾಹಕ ವ್ಯವಹಾರ, ಆಹಾರ ಮತ್ತು ನಾಗರಿಕ ಸರಬರಾಜು
ಮುರಲೀಧರ್ ಮೊಹೋಲ್	ಸಹಕಾರ, ವಿಮಾನಯಾನ
ಜಾರ್ಜ್ ಕುರಿಯನ್	ಅಲ್ಪಸಂಖ್ಯಾತ, ಮೀನುಗಾರಿಕೆ, ಪಶು ಸಂಗೋಪನೆ, ಹೈನುಗಾರಿಕೆ
ಪಬಿತ್ರ ಮಾರ್ಗರಿಟಾ	ವಿದೇಶಾಂಗ, ಜವಳಿ

ಮಳೆಯಿಂದಾಗಿ ಘನ ತ್ಯಾಜ್ಯ ವಿಲೇವಾರಿ ಪ್ರಕ್ರಿಯೆ ವಿಳಂಬ

ಪೊಲೀಸ್ ನೆರವಿಂದ ಕೆಸರೆ ಘನ ತ್ಯಾಜ್ಯ ಸಂಸ್ಕರಣಾ ಘಟಕಕ್ಕೆ ಕಸ ಸಾಗಿಸಲು ಮುಂದಾದ ಪಾಲಿಕೆ

ಮೈಸೂರು, ಜೂ. 10(ಆರ್‌ಕೆ)– ಮೈಸೂರಿನ ವಿದ್ಯಾರಣ್ಯಪುರಂನ ಸಿವೇಜ್ ಪ್ಲಾಂಟ್‌ನಲ್ಲಿ ಸಂಗ್ರಹವಾಗಿರುವ ರಾಶಿ ರಾಶಿ ಘನ ತ್ಯಾಜ್ಯ ವಿಲೇವಾರಿ ಕಾರ್ಯ ಮಳೆಯಿಂದಾಗಿ ವಿಳಂಬ ವಾಗುತ್ತಿದೆ. ಕಳೆದ 20 ವರ್ಷಗಳಿಂದ ಸಂಗ್ರಹವಾಗಿರುವ ಸುಮಾರು 7 ಲಕ್ಷ ಟನ್ ತ್ಯಾಜ್ಯವನ್ನು ವಿಂಗಡಿಸಿ ಹಸಿ ಕಸವನ್ನು ಕಾಂಪೋಸ್ಟ್ ಗೊಬ್ಬರವಾಗಿ ಪರಿವರ್ತನೆ. ಒಣಕಸ ಸಂಸ್ಕರಿಸಿ ಪುನರ್ ಬಳಕೆ ಮಾಡುವುದು, ಉಳಿದ ತ್ಯಾಜ್ಯವನ್ನು ಪುಡಿ ಮಾಡಿ ಸಿಮೆಂಟ್ ಕಾರ್ಖಾನೆಗಳಿಗೆ ಕಳುಹಿಸುವ ಮೂಲಕ ಸಿವೇಜ್ ಫಾರಂನಲ್ಲಿ ಶೇಖರಣೆಗೊಂಡಿರುವ ಭಾರಿ ಕಸವನ್ನು ತೆರವುಗೊಳಿಸಲು ಮೈಸೂರು ಮಹಾನಗರ ಪಾಲಿಕೆಯು ಟೆಂಡರ್ ಮೂಲಕ ಖಾಸಗಿ ಕಂಪನಿಗೆ ಒಪ್ಪಿಸಿದೆ.



ಟೆಂಡರ್ ಪಡೆದಿರುವ ಸೂರತ್ ಮೂಲದ ಮೆ|| ಡಿಹೆಚ್ ಪಟೇಲ್ ಹಾರ್ದಿಕ್ ಬಿಖಬೈ ಖುಂತಾ ಕಂಪನಿಯು ವಿದ್ಯಾರಣ್ಯಪುರಂನ ಸಿವೇಜ್ ಫಾರಂನಲ್ಲಿ ಪ್ಲಾಂಟ್ ನಿರ್ಮಿಸಲು ಸಿವಿಲ್ ಕಾಮಗಾರಿ ಪೂರ್ಣಗೊಳಿಸಿದೆಯಾದರೂ, ಯಂತ್ರಗಳನ್ನು ಅಳವಡಿಸಲು ಮಳೆ ಅಡ್ಡಿಯಾಗಿದೆ. ಅಲ್ಲದೆ, ಪ್ರಸ್ತುತ ಶೇಖರಣೆಯಾಗಿರುವ 7 ಲಕ್ಷ ಟನ್ ಘನತ್ಯಾಜ್ಯವನ್ನು ವಿಲೇವಾರಿ ಜವಾಬ್ದಾರಿ ಹೊತ್ತಿರುವ ಕಂಪನಿಯು ಸಿದ್ಧತೆ ಮಾಡಿಕೊಂಡಿದ್ದರೆ, ಪಾಲಿಕೆ ಸ್ವಚ್ಛತಾ ಸಿಬ್ಬಂದಿಯು ಮನೆ–ಮನೆಯಿಂದ ಸಂಗ್ರಹವಾಗುತ್ತಿರುವ ಕಸವನ್ನು ಮತ್ತೆ ಸಿವೇಜ್ ಫಾರಂಗೇ ತಂದು ಸುರಿಯುತ್ತಿರುವುದರಿಂದ ಹೆಚ್ಚುವರಿ ತ್ಯಾಜ್ಯವನ್ನು ತೆರವುಗೊಳಿಸುವುದಿಲ್ಲ ಎಂದು ಇತ್ತೀಚೆಗೆ ಗೇಟ್ ಬಂದ್ ಮಾಡಿ ಕಸ ತುಂಬಿದ ಲಾರಿಗಳನ್ನು ಹೊರಗೆ ನಿಲ್ಲಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

ಈ ಸಂಬಂಧ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದ ಮೈಸೂರು ಮಹಾನಗರ ಪಾಲಿಕೆ ಸೂಪರಿಂಟೆಂಡಿಂಗ್ ಇಂಜಿನಿಯರ್ ಕೆ.ಜೆ. ಸಿಂಧೂ, ಕೆಸರೆ ಘಟಕದಲ್ಲಿ ಕಸ ಸುರಿಯಲು ಸಾರ್ವಜನಿಕರು ಅಡ್ಡಿಪಡಿಸುತ್ತಿರುವುದರಿಂದ ಸ್ವಚ್ಛತಾ ಸಿಬ್ಬಂದಿ ವಿದ್ಯಾರಣ್ಯಪುರಂ ಘಟಕಕ್ಕೆ ಕಸ ಡಂಪ್ ಮಾಡುತ್ತಿದ್ದಾರೆ. ನಾವು ಪೊಲೀಸ್ ನೆರವು ಪಡೆದು ಮನೆ ಮನೆಯಿಂದ ಸಂಗ್ರಹವಾಗುವ ಕಸದ ವಿಲೇವಾರಿಗೆ ವ್ಯವಸ್ಥೆ ಮಾಡುತ್ತೇವೆ ಎಂದರು. ರಾಯನಕೆರೆಯಲ್ಲೂ ಕಸ ಸುರಿಯಲು ಅವಕಾಶವಿದ್ದರೂ, ನಮ್ಮ ಸಿಬ್ಬಂದಿ ವಿದ್ಯಾರಣ್ಯಪುರಂ ಸಿವೇಜ್ ಫಾರಂಗೇ ಕೊಂಡೊಯ್ಯುತ್ತಿರುವುದರಿಂದ ಮುಂದೆ ಕಟ್ಟುನಿಟ್ಟಿನ ಕ್ರಮ ವಹಿಸುತ್ತೇವೆ. ಮೈಸೂರು ನಗರದಲ್ಲಿ ಪ್ರತಿನಿತ್ಯ ಉತ್ಪತ್ತಿಯಾಗುವ ಸುಮಾರು 550 ಟನ್ ತ್ಯಾಜ್ಯವನ್ನು ಕೆಸರೆ, ರಾಯನಕೆರೆ ಘಟಕಗಳಿಗೆ ಸಾಗಿಸಬೇಕೆಂದು ಸೂಚಿಸಲಾಗಿದೆ ಎಂದು ಅವರು ತಿಳಿಸಿದರು.

14 ಲಕ್ಷ ಜನಸಂಖ್ಯೆ ಹೊಂದಿರುವ ಮೈಸೂರು ನಗರದಲ್ಲಿ ನಿತ್ಯ 550 ಟನ್ ಕಸ ಉತ್ಪತ್ತಿಯಾಗುತ್ತಿದ್ದು, ಕೆಸರೆಯಲ್ಲಿ 200 ಟನ್, ರಾಯನಕೆರೆಯಲ್ಲಿ 150 ಟನ್ ಹಾಗೂ ವಿದ್ಯಾರಣ್ಯಪುರಂನಲ್ಲಿ ಟ್ರೀಟ್‌ಮೆಂಟ್ ಸಾಮರ್ಥ್ಯದ ಘಟಕಗಳನ್ನು ಸ್ಥಾಪಿಸಿರುವುದರಿಂದ ವಿಲೇವಾರಿಗೆ ಸಮಸ್ಯೆಯಾಗುವುದಿಲ್ಲ ಎಂದು ಸಿಂಧೂ ತಿಳಿಸಿದರು.

ಈ ಸಂಬಂಧ ಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಷರೀಫ್ ಇಂದು ಅಧಿಕಾರಿಗಳ ಸಭೆ ನಡೆಸಿದ್ದು, ಪರಿಣಾಮಕಾರಿಯಾಗಿ ಮೈಸೂರಲ್ಲಿ ಕಸ ವಿಂಗಡಣೆ, ಸಾಗಣೆ, ಸಂಸ್ಕರಣೆ ಮತ್ತು ವಿಲೇವಾರಿ ಕಾರ್ಯ ಮಾಡುವಂತೆ ಸೂಚನೆ ನೀಡಿದ್ದಾರೆ.

ಜೂನ್ 25 ರಿಂದ ಯುಪಿಐ ಮೂಲಕ ಕೆಎಸ್‌ಆರ್‌ಟಿಸಿ ಟಿಕೆಟ್ ಖರೀದಿಗೆ ಅವಕಾಶ!

ಬೆಂಗಳೂರು: ಪ್ರಯಾಣಿಕರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (ಕೆಎಸ್‌ಆರ್‌ಟಿಸಿ)ಯು ತನ್ನ ನಿಯಮಗಳಲ್ಲಿ ಕೆಲ ಬದಲಾವಣೆಗಳನ್ನು ಮಾಡುತ್ತಿದ್ದು, ಯುಪಿಐ ಮೂಲಕ ಪಾವತಿ ಮಾಡಿ ಟಿಕೆಟ್ ಖರೀದಿ ಮಾಡುವ ಅವಕಾಶ ಒದಗಿಸಲು ಮುಂದಾಗಿದೆ.

ಈ ನಿಟ್ಟಿನಲ್ಲಿ ಕೆಎಸ್‌ಆರ್‌ಟಿಸಿ ಜೂನ್ 25 ರಿಂದ ನಾಲ್ಕು ಡಿಪೋಗಳಲ್ಲಿ ಎಲೆಕ್ಟ್ರಾನಿಕ್ ಟಿಕೆಟಿಂಗ್ ಯಂತ್ರಗಳ (ಇಟಿಎಂ) ಪ್ರಾಯೋಗಿಕ ಯೋಜನೆಯನ್ನು ಪ್ರಾರಂಭಿಸಲಿದೆ,

ಎಲ್ಲಾ ಕಂಡಕ್ಟರ್‌ಗಳಿಗೆ ತರಬೇತಿ ನೀಡಿದ ನಂತರ ಕೆಲವೇ ವಾರಗಳಲ್ಲಿ ಎಲ್ಲಾ ಬಸ್‌ಗಳಲ್ಲಿ ವ್ಯವಸ್ಥೆ ಜಾರಿಗೆ ಬರಲಿದೆ. ಸಾರಿಗೆ ನಿಗಮವು ಪ್ರತಿ ಸಾಧನಕ್ಕೆ ತಿಂಗಳಿಗೆ 645 ರೂಪಾಯಿ ಬಾಡಿಗೆಯಂತೆ 10,245 ಇಟಿಎಂಗಳನ್ನು ತೆಗೆದುಕೊಂಡಿದೆ ಎಂದು ತಿಳಿದುಬಂದಿದೆ.

ಕೆಎಸ್‌ಆರ್‌ಟಿಸಿ ಎಂಡಿ ಅನ್ಬುಕುಮಾರ್ ಮಾತನಾಡಿ, ಪ್ರಾಯೋಗಿಕ ಯೋಜನೆ ಯಶಸ್ವಿಯಾದ ಬಳಿಕ ಈ ತಿಂಗಳ ಅಂತ್ಯದಲ್ಲಿ ಎಲ್ಲಾ ಬಸ್‌ಗಳಲ್ಲಿ ವ್ಯವಸ್ಥೆ ಜಾರಿಯಾಗಲಿದೆ. ಇದರಿಂದ ಚಿಲ್ಲರೆ ಸಮಸ್ಯೆ ಎದುರಾಗುವುದಿಲ್ಲ. ನಿರ್ವಾಹಕರು ಚಿಲ್ಲರೆ ನೀಡಲಿಲ್ಲ ಎಂಬ ದೂರುಗಳು ಕೂಡ ಕಡಿಮೆಯಾಗಲಿದೆ. ETMಗಳ ಮೂಲಕ, ಪ್ರಯಾಣಿಕರು GPay, PhonePe, Paytm ಮತ್ತು ಅವರ ಕ್ರೆಡಿಟ್ ಮತ್ತು ಡೆಬಿಟ್ ಕಾರ್ಡ್‌ಗಳ ಮೂಲಕ ಟಿಕೆಟ್ ಖರೀದಿ ಮಾಡಬಹುದು ಎಂದು ಹೇಳಿದ್ದಾರೆ.



EbixCash Ltd ಐದು ವರ್ಷಗಳ ಕಾಲ ETM ಗಳನ್ನು ಪೂರೈಸಲು ಒಪ್ಪಿಗೆ ನೀಡಿದ್ದು, ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಕಂಪನಿಯು ಇಟಿಎಂಗಳಿಗೆ ಬ್ಯಾಕೆಂಡ್ ಮತ್ತು ಇಂಟರ್ಫೇಸ್ ಸಾಫ್ಟ್‌ವೇರ್ ಅನ್ನು ಒದಗಿಸುತ್ತದೆ. ಮಹಾರಾಷ್ಟ್ರದಂತಹ ರಾಜ್ಯಗಳಲ್ಲಿ ಯಂತ್ರಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಕೆಎಸ್‌ಆರ್‌ಟಿಸಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ

ಕಂಡಕ್ಟರ್‌ಗಳು ಆಗಮನ ಮತ್ತು ನಿರ್ಗಮನ ನಿಲ್ದಾಣಗಳನ್ನು ಆಯ್ಕೆ ಮಾಡಬೇಕು, ನಂತರ ಪ್ರಯಾಣಿಕರ ಸಂಖ್ಯೆ, ಪಾವತಿ ವಿಧಾನವನ್ನು ಆರಿಸಬೇಕು. ಬಳಿಕ ದರ ಸ್ವಯಂಚಾಲಿತವಾಗಿ ಲೆಕ್ಕಹಾಕಲಾಗುತ್ತದೆ. ಪ್ರಯಾಣಿಕರು ಹಣ ಪಾವತಿಸಿದ ನಂತರ ಟಿಕೆಟ್ ಪಡೆಯಬಹುದು. ಯಂತ್ರಗಳನ್ನು ಲಾಕ್ ಮಾಡಬಹುದು ಮತ್ತು ಅವುಗಳನ್ನು ಕದ್ದರೆ, ಅವುಗಳನ್ನು ಸ್ಮಾರ್ಟ್‌ಫೋನ್‌ನಂತೆ ಟ್ರ್ಯಾಕ್ ಮಾಡಬಹುದು ಎಂದು ಮಾಹಿತಿ ನೀಡಿದ್ದಾರೆ.

ಹ್ಯಾಂಡ್‌ಹೆಲ್ಡ್ ಇಟಿಎಂಯಲ್ಲಿ RFID ಸಾಧನವಿರಲಿದ್ದು, ಇ–ಪಾಸ್‌ಗಳಂತಹ ಸ್ಮಾರ್ಟ್ ಕಾರ್ಡ್‌ಗಳನ್ನು ಸ್ಕ್ಯಾನ್ ಮಾಡಲು ಮತ್ತು ಮೌಲ್ಯೀಕರಿಸಲು ಕ್ಯಾಮರಾ ಕೂಡ ಇದರಲ್ಲಿ ಇರುತ್ತದೆ. ಒಂದು ವೇಳೆ ಸರ್ಕಾರವು ಶಕ್ತಿ ಯೋಜನೆಯ ಫಲಾನುಭವಿಗಳಿಗೆ ಸ್ಮಾರ್ಟ್ ಕಾರ್ಡ್‌ಗಳನ್ನು ನೀಡಿದರೆ, ಅದನ್ನೂ ಅಳವಡಿಸಿಕೊಳ್ಳಲು ಈ ಯಂತ್ರಗಳಲ್ಲಿ ಅವಕಾಶ ಇರುತ್ತದೆ.

ಆನ್‌ಲೈನ್ ಟಿಕೆಟ್ ಕಾಯ್ದಿರಿಸುವಿಕೆ ವ್ಯವಸ್ಥೆಗಳನ್ನು ಟ್ರ್ಯಾಕಿಂಗ್ ಮಾಡುವುದು ಮತ್ತು ಖಾಲಿ ಇರುವ ಆಸನಗಳ ಆಧಾರದ ಮೇಲೆ ಟಿಕೆಟ್‌ಗಳನ್ನು ನೀಡುವುದು, ಸ್ಥಳ ಟ್ರ್ಯಾಕಿಂಗ್ ಮತ್ತು ಇತರ ಸುಧಾರಿತ ವೈಶಿಷ್ಟ್ಯಗಳಂತಹ ಹಲವು ವೈಶಿಷ್ಟ್ಯಗಳಿವೆ. ಆದರೆ, ಅವುಗಳನ್ನು ತಕ್ಷಣವೇ ಸೇರಿಸಲು ಸಾಧ್ಯವಾಗುವುದಿಲ್ಲ. ಹಂತ ಹಂತದಲ್ಲಿ ಎಲ್ಲವನ್ನೂ ಅಳವಡಿಸಿಕೊಳ್ಳಲಾಗುವುದು ಎಂದು ಕೆಎಸ್‌ಆರ್‌ಟಿಸಿ ಅಧಿಕಾರಿಗಳು ತಿಳಿಸಿದ್ದಾರೆ.

ಪ್ರೇಮ್‌ಸಿಂಗ್ ತಮಾಂಗ್ ಸಿಕ್ಕಿಂ ಮುಖ್ಯಮಂತ್ರಿ



ಗ್ಯಾಂಗ್ಟಕ್: ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ ಮುಖ್ಯಸ್ಥ ಪ್ರೇಮ್‌ಸಿಂಗ್ ತಮಾಂಗ್ ಅವರು ಸತತ 2ನೇ ಬಾರಿಗೆ ಈಶಾನ್ಯ ಭಾರತದ ರಾಜ್ಯ ಸಿಕ್ಕಿಂನ ಮುಖ್ಯಮಂತ್ರಿಯಾಗಿ ಸೋಮವಾರ ಪ್ರಮಾಣ ವಚನ ಸ್ವೀಕರಿಸಿದರು. ರಾಜಧಾನಿ ಗ್ಯಾಂಗ್ಟಕ್‌ನ ಪಾಲ್ಜೋರ್ ಸ್ಟೇಡಿಯಂನಲ್ಲಿ ನಡೆದ ಪ್ರಮಾಣ ವಚನ ಸಮಾರಂಭದಲ್ಲಿ ರಾಜ್ಯಪಾಲ ಲಕ್ಷ್ಮಣ್ ಪ್ರಸಾದ್ ಆಚಾರ್ಯ ಅವರು ಪ್ರೇಮ್‌ಸಿಂಗ್ ತಮಾಂಗ್ ಮತ್ತು ಅವರ ಮಂತ್ರಿ ಮಂಡಲಕ್ಕೆ ಗೌಪ್ಯತಾ ಪ್ರಮಾಣ ವಚನ ಬೋಧಿಸಿದರು. ಇತ್ತೀಚೆಗೆ ಮುಕ್ತಾಯವಾದ ಸಿಕ್ಕಿಂ ವಿಧಾನಸಭೆ ಚುನಾವಣೆಯಲ್ಲಿ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ (SKM) 32 ಸ್ಥಾನಗಳ ಪೈಕಿ 31 ಸ್ಥಾನಗಳನ್ನು ಗೆದ್ದುಕೊಂಡಿತ್ತು. ಹೀಗಾಗಿ ಹಿಮಾಲಯ ರಾಜ್ಯ ಸಿಕ್ಕಿಂನಲ್ಲಿನ ಅಸೆಂಬ್ಲಿ ಚುನಾವಣೆಯಲ್ಲಿ ಪ್ರತಿಪಕ್ಷ ಸಿಕ್ಕಿಂ ಡೆಮಾಕ್ರಟಿಕ್ ಫ್ರಂಟ್ (SDF) ಏಕೈಕ ಸ್ಥಾನಕ್ಕೆ ಸೀಮಿತವಾಗಿದೆ

ಶ್ರೀ ಅನ್ನದಾನೇಶ್ವರ ಮಠದ ಶ್ರೀಗಳ ಹತ್ಯೆಗೆ ಖಂಡನೆ

ಮೈಸೂರು, ಜೂ 10(ಎಸ್‌ಪಿಎನ್)– ಮೈಸೂರಿನ ಸಿದ್ಧಾರ್ಥನಗರದ ಶ್ರೀ ಅನ್ನದಾನೇಶ್ವರ ಮಠದ ಶ್ರೀ ಶಿವಾನಂದ ಸ್ವಾಮಿಗಳನ್ನು ಸೋಮವಾರ ಅಮಾನುಷವಾಗಿ ಕೊಲೆಗೈದಿರುವ ಹೃದಯ ವಿದ್ರಾವಕ ಘಟನೆ ಖಂಡನೀಯ ಎಂದು ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ವೀರಶೈವ–ಲಿಂಗಾಯತ ಮಠಾಧಿಪತಿಗಳ ಗೋಷ್ಠಿ ಪ್ರಕಟಣೆ ತಿಳಿಸಿದೆ.

ಶ್ರೀಗಳಿಗೆ 90 ವರ್ಷ ವಯಸ್ಸಾಗಿದ್ದು, ಇವರು ಮೂಲತಃ ಮಂಡ್ಯ ಜಿಲ್ಲೆ ಅವ್ವೇರಹಳ್ಳಿ ಗ್ರಾಮದವರು. ಆ ಗ್ರಾಮದ ಮಠಕ್ಕೂ ಪೀಠಾಧಿಪತಿಗಳಾಗಿದ್ದರು. ನಂತರದಲ್ಲಿ ಮೈಸೂರಿನಲ್ಲಿ ಶ್ರೀ ಅನ್ನದಾನೇಶ್ವರ ಮಠವನ್ನು ಸ್ಥಾಪಿಸಿದ್ದರು. ಇದಕ್ಕೂ ಮೊದಲು ಜೆಎಸ್‌ಎಸ್ ಗುರುಕುಲದಲ್ಲಿ ವಿದ್ಯಾಭ್ಯಾಸ ಮಾಡಿದ್ದಾರೆ. ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸಂಸ್ಕೃತ ಅಧ್ಯಾಪಕರಾಗಿ, ಪ್ರಾಚಾರ್ಯರಾಗಿ ಹಾಗೂ ಕೆಲವು ವರ್ಷ ಮೈಸೂರು ಮಹಾರಾಜ ಸಂಸ್ಕೃತ ಕಾಲೇಜಿನ ಪ್ರಾಚಾರ್ಯರಾಗಿಯೂ ಸೇವೆ ಸಲ್ಲಿಸಿದ್ದರು.

ಶ್ರೀಗಳು, ಈ ಹಿಂದೆ ಮೈಸೂರು ರಾಜಮನೆತನದೊಂದಿಗೆ ನಿಕಟ ಬಾಂಧವ್ಯ ಹೊಂದಿದ್ದರು. ಅಂತೆಯೇ ಗೋಷ್ಠಿಯ ಸದಸ್ಯರಾಗಿ ಮಾರ್ಗದರ್ಶನ ಮಾಡುತ್ತಿದ್ದರು. ಧಾರ್ಮಿಕ, ಸಾಮಾಜಿಕ, ಹಾಗು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಕ್ರಿಯಾಶೀಲರಾಗಿದ್ದರು. ರಾಜ್ಯ ಸರ್ಕಾರ ಶ್ರೀಗಳ ಹತ್ಯೆ ಸಂಬಂಧ ಸೂಕ್ತ ತನಿಖೆ ನಡೆಸಬೇಕೆಂದು ಒತ್ತಾಯಿಸಲಾಗಿದೆ.

ತುಳಸಿಕೆರೆ ಸೌರ ವಿದ್ಯುತ್ ಸಂಪರ್ಕದ ಹಾನಿ ಸರಿಪಡಿಸಲು ಗುತ್ತಿಗೆದಾರರಿಗೆ ಸೂಚನೆ

ಮೈಸೂರು,ಜೂ.10(ಪಿಎಂ)– ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ತುಳಸಿಕೆರೆ ಗ್ರಾಮದಲ್ಲಿ ಜಲ್ ಜೀವನ್ ಮಿಷನ್ ಅಡಿಯಲ್ಲಿ ಕೈಗೊಂಡಿದ್ದ ಕಾಮಗಾರಿ ವೇಳೆ ಸೌರ ವಿದ್ಯುತ್ ವ್ಯವಸ್ಥೆಗೆ ಅಳವಡಿಸಲಾಗಿದ್ದ ಎಲ್‌ಟಿ ಭೂಗತ ಕೇಬಲ್‌ಗೆ ಉಂಟು ಮಾಡಿರುವ ಹಾನಿ ಸರಿಪಡಿಸುವಂತೆ ಸಂಬಂಧಿಸಿದ ಗುತ್ತಿಗೆದಾರರಿಗೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಚೆಸ್ಕಾಂ) ನಿರ್ದೇಶನ ನೀಡಿದೆ.

ಚೆಸ್ಕಾಂನ ಕೊಳ್ಳೇಗಾಲದ ಕಾರ್ಯನಿರ್ವಾಹಕ ಇಂಜಿಯರ್ ಪತ್ರಿಕಾ ಪ್ರಕಟಣೆಯಲ್ಲಿ ಈ ವಿಷಯ ತಿಳಿಸಿದ್ದು, ಹಾನಿಯನ್ನು 15 ದಿನಗಳ ಒಳಗೆ ಸರಿಪಡಿಸುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಿರುವುದಾಗಿ ಅವರು ತಿಳಿಸಿದ್ದಾರೆ. ಕೇಬಲ್‌ಗೆ ಹಾನಿ ಉಂಟಾದ ಪರಿಣಾಮ ಗ್ರಾಮದ 30 ಮನೆಗಳಿಗೆ ವಿದ್ಯುತ್ ವ್ಯತ್ಯಯವಾಗಿದೆ. ಉಳಿದ ಮನೆಗಳ ಸೌರ ವಿದ್ಯುತ್ ಸಂಪರ್ಕ ಸುಸ್ಥಿತಿಯಲ್ಲಿದೆ. ಹಾನಿ ಸರಿಪಡಿಸುವಂತೆ ಜಲ್ ಜೀವನ್ ಮಿಷನ್‌ನಡಿ ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ.

ಕಾಡಿನಂಚಿನಲ್ಲಿರುವ ಗ್ರಾಮಗಳಿಗೆ ಬೆಳಕು ನೀಡುವ ಸದುದ್ದೇಶದಿಂದ 'ದೀನ್ ದಯಾಳ್ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆಯ ಡಿಸೆಂಟ್ರಲೈಜ್ಡ್ ಡಿಸ್ಟ್ರಿಬ್ಯೂಟೆಡ್ ಜನರೇಷನ್ ಕಾರ್ಯಕ್ರಮದಡಿ ತುಳಸಿಕರೆ ಗ್ರಾಮದ 360 ಮನೆಗಳಿಗೆ 2018ರ ಅಕ್ಟೋಬರ್‌ನಲ್ಲಿ ಸೌರ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ ಮುಂಬಯಿ ಮೂಲದ ನವ್ಯ ಟೆಕ್ನಾಲಜೀಸ್ ಸಂಸ್ಥೆಗೆ ಈ ಗ್ರಾಮದ ಸೌರ ವಿದ್ಯುತ್ ವ್ಯವಸ್ಥೆಯ ನಿರ್ವಹಣೆ ಜವಾಬ್ದಾರಿಯನ್ನು 2024ರ ಮಾರ್ಚ್‌ನಲ್ಲಿ ನೀಡಲಾಗಿದೆ. ಸದರಿ ಸಂಸ್ಥೆ ಈಗಾಗಲೇ ಸ್ಥಳ ಪರಿಶೀಲನೆ ನಡೆಸಿದೆ ಎಂದು ಅವರು ತಿಳಿಸಿದ್ದಾರೆ.

ಗಾಬರಿಯಾಗಬೇಡಿ

ಇದು ಮೈಸೂರು ನಗರ ಬಸ್ ನಿಲ್ದಾಣ..!



● ಮೈಸೂರು ನಗರ ಬಸ್ ನಿಲ್ದಾಣದ ಗ್ರಾಮೀಣ ಮಾರ್ಗದ ಪ್ಲಾಟ್‌ಫಾರ್ಮ್‌ನ ದುಸ್ಥಿತಿ ● ಮೂಲಸೌಲಭ್ಯಗಳಿಲ್ಲದೆ ಪ್ರಯಾಣಿಕರ ಪರದಾಟ





ಬಿದ್ದು ಗಾಯಗೊಂಡ ಹಲವರು

ಪ್ಲಾಟ್‌ಫಾರ್ಮ್ 24ರಲ್ಲಿ ಸಿಮೆಂಟ್ ಇಟ್ಟಿಗೆಗಳು ಹಾಗೂ ಟೈಲ್ಸ್‌ಗಳನ್ನು ಕಿತ್ತಿಟ್ಟಿರುವ ಕಾರಣ ಎಡವಿ ಬಿದ್ದು ಹಲವರು ಗಾಯಗೊಂಡಿದ್ದಾರೆ ಎಂದು 'ಮೈಸೂರು ಮಿತ್ರ'ನಿಗೆ ಹಲವು ಪ್ರಯಾಣಿಕರು ತಿಳಿಸಿದರು. ವೃದ್ಧರು, ಮಕ್ಕಳು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳು ಇಲ್ಲಿನ ಈ ರೀತಿಯ ಅವ್ಯವಸ್ಥೆಯ ಕಾರಣ ಬಿದ್ದು ಗಾಯಗೊಂಡಿದ್ದಾರೆ. ಇಷ್ಟೆಲ್ಲಾ ಅನಾಹುತವಾದರೂ ಸಂಬಂಧಿಸಿದವರು ಗಮನಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮೈಸೂರು,ಜೂ.10(ಪಿಎಂ)– ಮಳೆ ಬಂದರೆ ಆ ಇಡೀ ಆವರಣವೆಲ್ಲಾ ಕೆಸರು. ಇನ್ನು ಬಿಸಿಲಿದ್ದರೆ ಧೂಳು ಧೂಳು. ಮೈಸೂರು ನಗರ ಬಸ್ ನಿಲ್ದಾಣದಲ್ಲಿ ಗ್ರಾಮಾಂತರ ಹಾಗೂ ಜಿಲ್ಲೆಯ ವಿವಿಧ ಭಾಗಗಳಿಗೆ ತೆರಳುವ ಬಸ್‌ಗಳ ಪ್ಲಾಟ್‌ಫಾರ್ಮ್‌ಗಳ ಇಡೀ ಭಾಗ ಈ ರೀತಿಯ ಅಧ್ವಾನದಿಂದ ಕೂಡಿದೆ.

ಮೈಸೂರಿನ ಹೃದಯಭಾಗದಲ್ಲಿರುವ ಸದರಿ ಬಸ್ ನಿಲ್ದಾಣದ ಈ ಆವರಣ ನೋಡಿದರೆ ಇದ್ಯಾವ ಹಾಳು ಕೊಂಪೆಯಲ್ಲಿದ್ದೇವೆ ಎಂಬ ಭಾವನೆ ಬಾರದಿರದು. ಡಾಂಬರು ಕಿತ್ತು ಹಳ್ಳ ಕೊಳ್ಳ ಬಿದ್ದಿರುವುದು, ಮಳೆ–ಗಾಳಿಗೆ ಬಿದ್ದ ಮರದ ಕೊಂಬೆಗಳನ್ನು ತೆರವುಗೊಳಿಸದೇ ಅಲ್ಲಿಯೇ ಗುಡಿ ಹಾಕಿರುವುದು, ಅವುಗಳ ನಡುವೆ ಪ್ಲಾಸ್ಟಿಕ್ ಕವರ್, ಬಾಟಲಿ ಸೇರಿದಂತೆ ನಾನಾ ತ್ಯಾಜ್ಯ ಸಿಲುಕಿರುವುದು, ಪ್ಲಾಟ್‌ಫಾರ್ಮ್‌ನಲ್ಲಿ ಟೈಲ್ಸ್‌ಗಳು ಕಿತ್ತು ಬಂದಿರುವುದು ಸೇರಿದಂತೆ ನಾನಾ ಸಮಸ್ಯೆಗಳು ಇಲ್ಲಿ ಕಾಣಸಿಗುತ್ತವೆ.

ಮೂಲಸೌಲಭ್ಯ ಇಲ್ಲದೆ ಪ್ರಯಾಣಿಕರು ಪರದಾಡಬೇಕಾಗಿದೆ. ಇಂತಹ ದುಸ್ಥಿತಿ ಇದ್ದರೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಮೈಸೂರು ನಗರ ಸಾರಿಗೆ ವಿಭಾಗ ಮಾತ್ರ ಸರಿಪಡಿಸುವ ಗೋಜಿಗೆ ಹೋದಂತಿಲ್ಲ. ಎಷ್ಟೋ ದಿನಗಳಿಂದ ಇದೇ ಪರಿಸ್ಥಿತಿ ಇರುವುದನ್ನು ಗಮನಿಸಿದರೆ ಹೀಗೆ ಹೇಳದೇ ವಿಧಿಯಿಲ್ಲ.

ಮಳೆ ಬಂದಾಗ ಇಲ್ಲಿನ ಹಳ್ಳ ಕೊಳ್ಳಗಳಲ್ಲಿ ನೀರು ನಿಲ್ಲುತ್ತಿದ್ದು, ಬಸ್‌ಗಳು ಸಂಚರಿಸುವಾಗ ಕೆಸರಿನ ನೀರು ಪ್ರಯಾಣಿಕರ ಮೈ ಮೇಲೆ ರಾಚುವಂತಹ ಸನ್ನಿವೇಶ ನಿರ್ಮಾಣವಾಗಿದೆ. ಕೆಸರಿನಲ್ಲಿ ಹಾದು ಹೋಗಿ ಬಸ್ ಹತ್ತುವಷ್ಟರಲ್ಲಿ ಪ್ರಯಾಣಿಕರು ಹೈರಾಣಾಗುತ್ತಿದ್ದಾರೆ. ಇನ್ನು ಬಿಸಿಲಿದ್ದಾಗ ಬಸ್‌ಗಳು ಸಂಚರಿಸುವಾಗ ಇಡೀ ಆವರಣ ಧೂಳುಮಯವಾಗುತ್ತಿದ್ದು, ಇಂತಹ ದುಸ್ಥಿತಿಯಲ್ಲಿ ಪ್ರಯಾಣಿಕರು ಬಸ್‌ಗಳಿಗಾಗಿ ಕಾದು ನಿಲ್ಲಬೇಕಿದೆ. ಪ್ಲಾಟ್‌ಫಾರ್ಮ್‌ಗಳಲ್ಲಿನ ಆಸನಗಳು ಅಲ್ಲಲ್ಲಿ ಮುರಿದಿವೆ

ಮೈಸೂರು ಜಿಲ್ಲೆಯ ವಿವಿಧ ಭಾಗಗಳು ಮಾತ್ರವಲ್ಲದೆ, ನೆರೆಯ ಮಂಡ್ಯದ ವಿವಿಧ ಸ್ಥಳಗಳಿಗೂ ಇಲ್ಲಿಂದ ಬಸ್‌ಗಳು ಸಂಚರಿಸುತ್ತವೆ. ಹಾಗಾಗಿ ಸಾವಿರಾರು ಪ್ರಯಾಣಿಕರು ಇಲ್ಲಿನ ಬಸ್‌ಗಳನ್ನೇ ಹೆಚ್ಚಾಗಿ ಆಶ್ರಯಿಸಿದ್ದಾರೆ. ಈ ಪೈಕಿ ಶಾಲಾ–ಕಾಲೇಜು ವಿದ್ಯಾರ್ಥಿಗಳ ಸಂಖ್ಯೆಯಂತೂ ಭಾರಿ ಪ್ರಮಾಣದಲ್ಲೇ ಇದೆ. ಆದಾಗ್ಯೂ ಇಲ್ಲಿ ಕನಿಷ್ಠ ಮೂಲಸೌಲಭ್ಯ ಕಲ್ಪಿಸಲು ಕ್ರಮ ವಹಿಸದೇ ಇರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಅಂಕಣ 24ರ ಸ್ಥಿತಿ ಅಯೋಮಯ: ಇಲ್ಲಿನ ಅಂಕಣ 24 (ಪ್ಲಾಟ್‌ಫಾರ್ಮ್ 24) ಸ್ಥಿತಿ ಮಾತ್ರ ಅಯೋಮಯ. ಅಷ್ಟರ ಮಟ್ಟಿಗೆ ಈ ಅಂಕಣದಲ್ಲಿ ದುಸ್ಥಿತಿ ತಲೆದೋರಿದೆ. ಚಂದಗಾಲು, ಶ್ರೀರಂಗಪಟ್ಟಣ, ಗುಂಬಜ್, ನಾಗನಹಳ್ಳಿ, ಲಕ್ಷ್ಮೀಪುರ, ಮೇಳಾಪುರ ಸೇರಿದಂತೆ ಮೊದಲಾದ ಕಡೆಗಳಿಗೆ ತೆರಳಲು ಇಲ್ಲಿ ನಿತ್ಯ ಪ್ರಯಾಣಿಕರು ನೂರಾರು ಸಂಖ್ಯೆಯಲ್ಲಿ ಕಾಯುತ್ತಿರುತ್ತಾರೆ. ಇಲ್ಲಿಂದ ಹೊರಡುವ ಬಸ್‌ಗಳು ಸದರಿ ಊರುಗಳಿಗೆ ತಲುಪುವ ಮುನ್ನ ಮೈಸೂರು ನಗರದ ವಿವಿಧ ಸ್ಥಳಗಳ ಮೂಲಕ ಹೋಗುತ್ತವೆ. ಹಾಗಾಗಿ ವಿವಿಧ ಊರುಗಳಿಗೆ ಮಾತ್ರವಲ್ಲದೆ, ನಗರದ ವಿವಿಧ ಭಾಗಗಳಿಗೂ ಇಲ್ಲಿಂದ ಪ್ರಯಾಣಿಕರು ಪ್ರಯಾಣಿಸುತ್ತಾರೆ.

ದುರಂತವೆಂದರೆ ಇಲ್ಲಿನ ಆಸನಗಳು ಬಹುತೇಕ ಇಲ್ಲವಾಗಿವೆ. ಇನ್ನು ಟೈಲ್ಸ್‌ಗಳು ಹಾಗೂ ಸಿಮೆಂಟ್ ಇಟ್ಟಿಗೆಗಳನ್ನು ಕಿತ್ತು ಒಂದೆಡೆ ಗುಡ್ಡೆ ಹಾಕಲಾಗಿದೆ. ಅದ್ಯಾವ ಕಾಮಗಾರಿಗಾಗಿ ಈ ರೀತಿ ಮಾಡಿದ್ದರೋ ಗೊತ್ತಿಲ್ಲ. ಒಟ್ಟಾರೆ ಆಸನಗಳಿಲ್ಲದೆ, ನಿಂತು ಸಾಕಾದ ಪ್ರಯಾಣಿಕರು ನೆಲದ ಮೇಲೆ ಇಲ್ಲವೇ ಕಿತ್ತು ಇಟ್ಟಿರುವ ಸಿಮೆಂಟ್ ಇಟ್ಟಿಗೆಗಳ ಮೇಲೆ ಕುಳಿತುಕೊಳ್ಳುವ ದುಸ್ಥಿತಿ ನಿರ್ಮಾಣವಾಗಿದೆ.

ವಿಶ್ವವಿಖ್ಯಾತ ಮೈಸೂರು ಅರಮನೆ ಮಗ್ಗುಲಲ್ಲೇ ಇರುವ ಈ ಸ್ಥಳವು ಅಶುಚಿತ್ವ ಸೇರಿದಂತೆ ಅವ್ಯವಸ್ಥೆಯ ಆಗರವಾಗಿದೆ. ಅರಮನೆ ಪಕ್ಕದಲ್ಲೇ ಇಷ್ಟು ಕೆಟ್ಟ ವಾತಾವರಣ ಇದ್ದರೂ ಸರಿಪಡಿಸಬೇಕೆಂಬ ಚಿಂತನೆ ಯಾರಿಗೂ ಇಲ್ಲದೇ ಇರುವುದು ದುರಂತ. ಇದು ನಿಜಕ್ಕೂ ಬೇಜವಾಬ್ದಾರಿತನ. ಮಳೆ ಬಂದರೆ ಇಲ್ಲಿನ ಅನೇಕ ಶೆಲ್ಟರ್‌ಗಳು ಕೆಳಗೆ ಇದ್ದರೂ ಪ್ರಯೋಜನವಿಲ್ಲ ಎಂದು ಇಲ್ಲಿನ ಗ್ರಾಮೀಣ ಬಸ್‌ಗಳ ಪ್ಲಾಟ್‌ಫಾರ್ಮ್ ಭಾಗದ ಅವ್ಯವಸ್ಥೆ ಬಗ್ಗೆ ಬೇಸರ ವ್ಯಕ್ತಪಡಿಸಿದರು.

ನಕ್ಕರೆ ಅದೇ ಸ್ವರ್ಗ

ಹೆಂಡ್ತಿ : ರೀ ನಾನ್ಯಾವಾಗ್ಲೂ ನಿಮ್ಮ ಹೃದಯದಲ್ಲೇ ಇರಬೇಕು.
ಗಂಡ : ಆಯ್ತು ಕಣೆ. ಆದ್ರೆ ಅಲ್ಲಿರುವ ಬೇರೆ ಹೆಂಗಸರೊಂದಿಗೆ ಜಗಳ ಆಡಬೇಡ

ಮೈಸೂರು ಮಿತ್ರ
ಮಂಗಳವಾರ, 11 ಜೂನ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಅರ್ಥ ಮಾಡಿಕೊಳ್ಳುವ ಮನಸ್ಸು, ಕ್ಷಮಿಸುವ ಗುಣ, ಕೈ ಜೋಡಿಸುವ ಸ್ನೇಹ, ಸಮಾಧಾನ ಮಾಡುವ ಒಂದು ಹೃದಯ ಅಗತ್ಯ –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಿನ್ನದಲ್ಲ ಸರ್ವ ಆಸ್ತಿ, ಒಳ್ಳೆಯದಲ್ಲ ಗರ್ವ ಜಾಸ್ತಿ.

ನಿಮ್ಮ ಪತ್ರಗಳು

ನೀಟ್ ಫಲಿತಾಂಶದಲ್ಲಿ ಗೊಂದಲ ಏಕೆ?

ಮಾನ್ಯರೆ,

ವೈದ್ಯಕೀಯ ವಿಜ್ಞಾನಗಳ ವಿಷಯದಲ್ಲಿ ಉನ್ನತ ವ್ಯಾಸಂಗಕ್ಕೆ ಪ್ರವೇಶ ಪಡೆಯಲು ಇರುವ ಅಖಿಲ ಭಾರತ ಮಟ್ಟದ ನೀಟ್ ಪ್ರವೇಶ ಪರೀಕ್ಷೆಯಲ್ಲಿ ಈ ವರ್ಷದ ಫಲಿತಾಂಶವು ಸ್ವಲ್ಪ ಮಟ್ಟಿಗೆ ಗೊಂದಲ ಮತ್ತು ಅಕ್ರಮ ನಡೆದಿದೆ ಎನ್ನುವ ಆರೋಪ ಸಾರ್ವಜನಿಕ ಮತ್ತು ವಿದ್ಯಾರ್ಥಿಗಳ ವಲಯದಲ್ಲಿ ಗಂಭೀರವಾಗಿ ಎದ್ದಿರುವ ಪ್ರಶ್ನೆಯಾಗಿದೆ. ಕಾರಣ 2024ರ ನೀಟ್ ಪರೀಕ್ಷೆಯ ಫಲಿತಾಂಶವು ಇದೇ ತಿಂಗಳ 14ಕ್ಕೆ ಪ್ರಕಟವಾಗಲು ನಿಗದಿಯಾಗಿತ್ತು. ಆದರೆ ಏಕಾಏಕಿ ಜೂನ್ ಅಂದರೆ ಇದೇ ತಿಂಗಳು, ಜೂನ್ 4 ರಂದು ಪ್ರಕಟವಾಯಿತು. ದುರಂತವೆಂದರೆ ಲೋಕಸಭೆ ಚುನಾವಣೆಯ ಫಲಿತಾಂಶ ದಿನವಾದ ಈ ದಿನವು ನೀಟ್ ಪರೀಕ್ಷೆಯ ಫಲಿತಾಂಶವನ್ನು ನಿಗದಿತ ದಿನಕ್ಕಿಂತ ಮುಂಚಿತವಾಗಿ ತರಾತುರಿಯಲ್ಲಿ ಪ್ರಕಟಿಸುವ ಉದ್ದೇಶ ಏನಿತ್ತು? ಎಂಬುದು ಪರೀಕ್ಷೆ ಬರೆದಿರುವ ಲಕ್ಷಾಂತರ ವಿದ್ಯಾರ್ಥಿಗಳ ಅಚ್ಚರಿಯ ಪ್ರಶ್ನೆಯಾಗಿದೆ. ಜೊತೆಗೆ ಕೆಲವು ರಾಜ್ಯಗಳಲ್ಲಿ ಪ್ರಶ್ನೆ ಪತ್ರಿಕೆಯು ಸೋರಿಕೆಯಾಗಿದೆ. ದೊಡ್ಡ ಮಟ್ಟದಲ್ಲಿ ಈ ವರ್ಷದ ನೀಟ್ ಪರೀಕ್ಷೆಯ ಫಲಿತಾಂಶದಲ್ಲಿ ಹಗರಣವಾಗಿದ್ದು, ಸಾಕಷ್ಟು ವಿದ್ಯಾರ್ಥಿಗಳಿಗೆ ಅನ್ಯಾಯವಾಗಿರುವುದು ಈ ಗೊಂದಲದಿಂದ ಎದ್ದು ಕಾಣುತ್ತಿದೆ. ವಿದ್ಯಾರ್ಥಿಗಳ ಭವಿಷ್ಯದಲ್ಲಿ ಹುಡುಗಾಟವಾಡದೇ ಕೇಂದ್ರ ಸರ್ಕಾರ ಮಧ್ಯೆ ಪ್ರವೇಶಿಸುವ ಮೂಲಕ ಈ ವರ್ಷದ ನೀಟ್ ಫಲಿತಾಂಶದ ಬಗ್ಗೆ ಉಂಟಾಗಿರುವ ಗೊಂದಲ ನಿವಾರಿಸಿ ನ್ಯಾಯ ಒದಗಿಸುವಂತಹ ಕಾರ್ಯ ಮಾಡಲಿ.

–ಪವನ್ ಜಯರಾಂ, ಸಿದ್ದಯ್ಯನಪುರ. ಚಾಮರಾಜನಗರ

ಕಲುಷಿತಗೊಳ್ಳುತ್ತಿರುವ ಲಕ್ಷ್ಮಣ ತೀರ್ಥ ನದಿ



ಮಾನ್ಯರೆ,

ಕೊಡಗು ಜಿಲ್ಲೆಯಲ್ಲಿ ಉಗಮಿಸುವ ಲಕ್ಷ್ಮಣ ತೀರ್ಥ ನದಿಯು ರಾಜ್ಯದ ಪ್ರಮುಖ ನದಿಗಳಲ್ಲೊಂದು. ಈ ನದಿಯು ಪೂರ್ವಾಭಿಮುಖವಾಗಿ ಹರಿದು ವಿರಾಜಪೇಟೆ, ಹುಣಸೂರು ಮತ್ತು ಕೆ.ಆರ್.ನಗರದ ಮೂಲಕ ಕೃಷ್ಣರಾಜ ಸಾಗರದ ಸಮೀಪ ಕಾವೇರಿ ನದಿಯನ್ನು ಸೇರುತ್ತದೆ. ಹುಣಸೂರು ಬಳಿ ಈ ನದಿಯು ಮಳೆಗಾಲದಲ್ಲಿ ಮಾತ್ರ ನದಿಯಂತೆ ಕಾಣುತ್ತದೆ ಅಷ್ಟೇ. ಇನ್ನುಳಿದ ಸಮಯದಲ್ಲಿ ಕೊಳಚೆ ನೀರಿನಂತೆ ಕಾಣುತ್ತದೆ. ಕಾರಣ ಈ ನದಿಗೆ ಚರಂಡಿಯ ನೀರು ಸೇರಿಕೊಂಡು ಕಲುಷಿತಗೊಳ್ಳುತ್ತಿದೆ. ಅಲ್ಲದೆ ಪ್ಲಾಸ್ಟಿಕ್ ಮತ್ತು ತ್ಯಾಜ್ಯ ವಸ್ತುಗಳನ್ನು ಈ ನದಿಗೆ ಬಿಸಾಡುತ್ತಿರುವುದು ನೀರು ಹೆಚ್ಚು ಮಲಿನಗೊಳ್ಳಲು ಕಾರಣವಾಗುತ್ತಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ನದಿಗೆ ಚರಂಡಿ ನೀರು ಹರಿಯುವುದನ್ನು ಮತ್ತು ನದಿಗೆ ತ್ಯಾಜ್ಯ ವಸ್ತುಗಳನ್ನು ಬಿಸಾಡುವುದನ್ನು ತಡೆಯಲು ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳುವುದರ ಜೊತೆಗೆ, ನದಿಯಲ್ಲಿ ಬಿಸಾಡಿರುವ ಪ್ಲಾಸ್ಟಿಕ್ ಅನ್ನು ತೆಗೆಸಿ ಅದನ್ನು ಸ್ವಚ್ಛಗೊಳಿಸಬೇಕೆಂದು ಸ್ಥಳೀಯರ ಮನವಿ.

–ಚಂದನ್. ಎಸ್, ಹುಣಸೂರು, ಮೈಸೂರು.

ಕುಡಿಯುವ ನೀರಿಗೆ ಪರ್ಯಾಯ ವ್ಯವಸ್ಥೆ ಮಾಡಿ

ಮಾನ್ಯರೆ,

ಮೈಸೂರು ನಗರದ, ಕೆಲವು ಮುಖ್ಯ ಬಡಾವಣೆಗಳು ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೆ ಕಬಿನಿ ಜಲಾಶಯದಿಂದ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತದೆ. ಕಳೆದ ಹದಿನೈದು ದಿನಗಳಿಂದ ಪೂರ್ವ ಮುಂಗಾರು ಮಳೆಯಿಂದ ಕಬಿನಿ ಜಲಾಶಯಕ್ಕೆ ಹರಿದು ಬಂದ ನೀರು ಬಗ್ಗಡವಾಗಿ, ಕುಲಷಿತಗೊಂಡಿದ್ದು, ಅದನ್ನೇ ಸರಬರಾಜು ಮಾಡಲಾಗಿದೆ. ಈ ಕಲುಷಿತ ನೀರನ್ನು ಕುಡಿದು, ಸಾಲುಂಡಿ ಗ್ರಾಮದ ನಿವಾಸಿ ಒಬ್ಬರು ಅಸುನೀಗಿದರು. ಮತ್ತೆ ಕೆಲವರು ವಾಂತಿ – ಭೇದಿಯಿಂದ ಆಸ್ಪತ್ರೆಗೆ ಸೇರುವಂತಾಗಿತ್ತು.

ಈ ಬಗ್ಗೆ ಸರ್ಕಾರ ತುರ್ತು ಗಮನಹರಿಸಿ, ಕಲುಷಿತಗೊಂಡ ನೀರು ಸರಬರಾಜು ಮಾಡದಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಆದೇಶ ಮಾಡಿದೆ. ಆದರೆ, ಅಧಿಕಾರಿಗಳು ಕುಡಿಯುವ ನೀರಿಗಾಗಿ ಯಾವುದೇ ಪರ್ಯಾಯ ವ್ಯವಸ್ಥೆ ಮಾಡದೇ, ಮೈಸೂರಿನ ರಾಮಕೃಷ್ಣನಗರ, ಕುವೆಂಪುನಗರ, ವಿವೇಕಾನಂದ ನಗರ ಮತ್ತು ಸುತ್ತಮುತ್ತಲಿನ ಬಡಾವಣೆಗಳಿಗೆ ಕಳೆದ ವಾರ 5 ದಿನಗಳ ಕಾಲ ನೀರು ಸರಬರಾಜು ಮಾಡದೇ ಈ ಭಾಗದ ಜನರು ನೀರಿಗಾಗಿ ಹಾಹಾಕಾರ ಪಡುವಂತಾಗಿತ್ತು. ಇನ್ನು ಮುಂದಾದರೂ ಇಂತಹ ಕ್ರಮಗಳನ್ನು ಕೈಗೊಳ್ಳುವಾಗ ಕುಡಿಯುವ ನೀರಿಗಾಗಿ ಪರ್ಯಾಯ ವ್ಯವಸ್ಥೆ ಮಾಡಿ.

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಸಾಧನೆ

ಮಾನ್ಯರೆ,

ರಾಜ್ಯದ ಪ್ರತಿಷ್ಠಿತ ತಾಂತ್ರಿಕ ವಿಶ್ವವಿದ್ಯಾನಿಲಯಗಳಲ್ಲಿ ಒಂದಾಗಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ (ವಿಟಿಯು) ಬಿ.ಇ/ಬಿಟೆಕ್/ಬಿ.ಆರ್ಕ್ ಮುಂತಾದ ಪದವಿಗಳ ಅಂತಿಮ ಸೆಮಿಸ್ಟರ್ ಫಲಿತಾಂಶವನ್ನು, ಪರೀಕ್ಷೆ ನಡೆದ 3 ಗಂಟೆಗಳ ಅವಧಿಯಲ್ಲೇ ಪ್ರಕಟಿಸುವ ಮೂಲಕ ದಾಖಲೆ ಸ್ಥಾಪಿಸಿದೆ.

ಅಂತಿಮ ಸೆಮಿಸ್ಟರ್ ಪರೀಕ್ಷೆ ಕಳೆದ ಗುರುವಾರ 5 ಗಂಟೆಗೆ ಕೊನೆಗೊಂಡಿತು. ಅದೇ ದಿನ ರಾತ್ರಿ 8 ಗಂಟೆಯ ವೇಳೆಗೆ ಪರೀಕ್ಷೆ ಬರೆದಿದ್ದ 42,323 ವಿದ್ಯಾರ್ಥಿಗಳ ಫಲಿತಾಂಶ ಪ್ರಕಟವಾಯಿತು. ಫಲಿತಾಂಶವನ್ನು ವಾಟ್ಸ್‌ಆಪ್‌ನಲ್ಲಿ ಕೂಡ ಹಂಚಿಕೊಳ್ಳಲಾಯಿತು. ಈ ಕುರಿತು ಮಾತನಾಡಿರುವ ವಿಟಿಯು ಕುಲಪತಿ ಡಾ.ಎಸ್.ವಿದ್ಯಾಶಂಕರ್, ಈ ರೀತಿಯಲ್ಲಿ ಫಲಿತಾಂಶ ಬೇಗ ಪ್ರಕಟವಾದರೆ, ಇಂಜಿನಿಯರಿಂಗ್ ವಿದ್ಯಾರ್ಥಿಗಳು ಮುಂದಿನ ವಿದ್ಯಾಭ್ಯಾಸದತ್ತ ತಕ್ಷಣ ನಿರ್ಧಾರ ತೆಗೆದುಕೊಳ್ಳಲು ಅನುಕೂಲವಾಗುತ್ತದೆ ಎಂದು ಹೇಳಿದ್ದಾರೆ.

ಹಿಂದೆಲ್ಲಾ ಪರೀಕ್ಷೆ ನಡೆದ ಅನೇಕ ದಿನಗಳ ನಂತರ ಫಲಿತಾಂಶ ಪ್ರಕಟವಾಗುತ್ತಿತ್ತು. ಅದಕ್ಕೆಲ್ಲಾ ಬೇರೆ ಬೇರೆ ಕಾರಣಗಳಿರಬಹುದು. ಇತ್ತೀಚಿನ ವರ್ಷಗಳಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಫಲಿತಾಂಶಗಳು ಸಹ ಬೇಗ ಪ್ರಕಟವಾಗುತ್ತಿವೆ. ಫಲಿತಾಂಶಗಳು ಬೇಗ ಪ್ರಕಟವಾದರೆ, ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ಚಟುವಟಿಕೆಗಳಿಗೆ ಅಥವಾ ಉದ್ಯೋಗಕ್ಕೆ ನೆರವಾಗುತ್ತವೆ. ಈ ನಿಟ್ಟಿನಲ್ಲಿ ವಿಟಿಯು ಉಳಿದ ವಿಶ್ವವಿದ್ಯಾನಿಲಯಗಳಿಗೆ ಮಾದರಿಯಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಈ ಜೀವನ




ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

‘ನೀ ಕುಡಿಯುವ ನೀರ್ ಕಾವೇರಿ ಎಂದು ಹೇಳಿ ಕನ್ನಡವೇ ಸತ್ಯ, ಕನ್ನಡವೇ ನಿತ್ಯ ಎಂದು ಸಾರಿದವರು. ಪ್ರತಿಯೊಬ್ಬ ಕನ್ನಡಿಗರ ಮೈಮನಗಳಲ್ಲಿ ಕನ್ನಡದ ಪ್ರೇಮವನ್ನು ಬಿತ್ತಿ–ಬೆಳೆಸಿದವರು. ಕನ್ನಡದ ಮೇಲೆ ಅನ್ಯಭಾಷೆಯ ಪ್ರಭಾವ ಹೆಚ್ಚಾಗಿ ಕನ್ನಡಿಗರು ಕನ್ನಡವನ್ನು ಮರೆತಂತೆ ಇರುವಾಗ ಈ ಎಚ್ಚರಿಕೆಯನ್ನು ಕೊಟ್ಟವರು ಕುವೆಂಪು. ಸಾಯುತಿದೆ ನಿಮ್ಮ ನುಡಿ ಓ ಕನ್ನಡದ ಕಂದರಿರ ಎನ್ನುವ ಮೂಲಕ ಕನ್ನಡಮ್ಮನ ಉಳಿವಿಗೆ ಕಂಕಣಬದ್ಧರಾಗಿ ನಿಲ್ಲಿ ಎಂಬ ಉದ್ಘೋಷವನ್ನು ಸಾರಿದ ಮಹಾನ್ ಕವಿ ಕುವೆಂಪು. ಕನ್ನಡದ ಬಗ್ಗೆ ಚಕಾರ ಎತ್ತಿದವರಿಗೆ ಮೈಮುಟ್ಟಿ ನೋಡಿಕೊಳ್ಳುವಂತೆ ಕವನದ ಮೂಲಕ ಉತ್ತರ ಕೊಟ್ಟವರು ಕುವೆಂಪು

ಕನ್ನಡದ ಕಂಪು ನಮ್ಮ ಕುವೆಂಪು

ಹಲವು ವಿಶೇಷ



ಸಾಹಿತ್ಯದ ಬನದಲ್ಲಿ ಅನುಗಾಲ ಅಮರತ್ವದ ಸಾಹಿತ್ಯವನ್ನು ಸೃಜಿಸಿ ಮೇರುಕವಿ, ಅನನ್ಯ ಸಾಹಿತಿ, ಕನ್ನಡಕ್ಕೆ ಮೊದಲ ಜ್ಞಾನಪೀಠ, ಪಂಪ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿಗಳನ್ನು ತಂದುಕೊಟ್ಟಂತಹ ಕುವೆಂಪು ತಮ್ಮ ಕೃತಿಗಳ ಮೂಲಕ ಇಂದಿಗೂ ಜೀವಂತವಾಗಿ ಉಳಿದಿದ್ದಾರೆ.

‘ಕುವೆಂಪು’ ಎಂಬುದು ಹೆಸರಲ್ಲ ಅದೊಂದು ಶಕ್ತಿ, ಉದಯೋನ್ಮುಖ ಬರಹಗಾರರಿಗೆ ಸ್ಫೂರ್ತಿಯ ಸೆಲೆ. ಅವರ ಬದುಕು ಸಾಮಾನ್ಯ ವ್ಯಕ್ತಿಗೂ ಆದರ್ಶವನ್ನು ನೀಡುವ, ಅನುಕರಣೀಯವಾಗಬಲ್ಲದು. ವಿಶ್ವಮಾನವ ಸಂದೇಶದ ಮೂಲಕ ಸಂಕುಚಿತ ಭಾವನೆಯನ್ನು ತೊಲಗಿಸಿ ವಿಶಾಲ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕೆಂಬ ಕರೆಯನ್ನು ಕೊಟ್ಟವರು. ಅವರ ಸಾಹಿತ್ಯ ಪ್ರಕಾರ ವಿಶೇಷದಲ್ಲಿ ವಿಶೇಷವಾದುದು;

* * *

i) ಕುವೆಂಪು ಮೊದಲು ಬರೆದದ್ದು ಇಂಗ್ಲಿಷಿನಲ್ಲಿ; ನಿಜ ಕನ್ನಡದ ಮೇರು ಕವಿ ಕುವೆಂಪು. ಅವರು ಮೊದಲಿಗೆ ಬರೆಯಲು ಪ್ರಾರಂಭಿಸಿದ್ದು ಇಂಗ್ಲಿಷ್ ಭಾಷೆಯಲ್ಲಿ. ‘ಬಿಗಿನರ್ಸ್ ಮ್ಯೂಸ್’ (Beginner's Muse) ಆರು ಕವನಗಳ ಕವನ ಸಂಕಲನವನ್ನು 1922ರಲ್ಲಿ ರಚಿಸಿದರು. ಈ ಕವನಸಂಕಲನವನ್ನು ನೋಡಿದ ಅವರ ಗುರುಗಳೊಬ್ಬರು ಆ ಸಮಯದಲ್ಲಿ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಉಪನ್ಯಾಸ ನೀಡಲು ಬಂದಿದ್ದ ಐರಿಸ್ ಕವಿ ಜೇಮ್ಸ್ ಕಸಿನ್ ಅವರಿಗೆ ತೋರಿಸುವಂತೆ ಸಲಹೆ ನೀಡಿದರು. ಗುರುಗಳ ಸಲಹೆಯಂತೆ ಜೇಮ್ಸ್ ಕಸಿನ್ ಅವರನ್ನು ಭೇಟಿ ಮಾಡಿ ತಮ್ಮ ಕವನ ಸಂಕಲನವನ್ನು ತೋರಿಸಿದಾಗ ಅವರು, ‘ಪುಟ್ಟಪ್ಪ ನೀವು ನಿಮ್ಮ ಮಾತೃಭಾಷೆಯಲ್ಲಿಯೇ ಬರೆಯಿರಿ’ ಎಂದು ಉಪದೇಶ ನೀಡಿದರು. ಅಪಾರ ನಿರೀಕ್ಷೆಗಳನ್ನು ಇಟ್ಟುಕೊಂಡು ಹೋಗಿದ್ದ ಕುವೆಂಪು ಅವರಿಗೆ ಸಹಜವಾಗಿ ಆ ಕ್ಷಣಕ್ಕೆ ಬೇಸರವಾಯಿತು. ಮುಂದೆ ಕನ್ನಡದಲ್ಲಿ ಮೊದಲ ಬಾರಿಗೆ ‘ಅಮಲನ ಕಥೆ’ ಎಂಬ ಕವನಸಂಕಲನವನ್ನು ಪ್ರಕಟಿಸಿದರು. ಇಲ್ಲಿಂದ ಮುಂದೆ ಕನ್ನಡದಲ್ಲೇ ಹೆಚ್ಚು ಕೃತಿಗಳನ್ನು ರಚಿಸಿ ಖ್ಯಾತ ಸಾಹಿತಿಯಾದರು. ಈಗ ಇದು ಮರೆಯಲಾಗದ ಇತಿಹಾಸ.

* * *

ii) ವಿಭಿನ್ನ, ವಿಶಿಷ್ಟ ಮಹಾಕಾವ್ಯ ಶ್ರೀರಾಮಾಯಣ ದರ್ಶನಂ; ವಾಲ್ಮೀಕಿ ವಿರಚಿತ ರಾಮಾಯಣವನ್ನು ಮೂಲವಾಗಿಟ್ಟುಕೊಂಡು ತಮ್ಮದೇ ಆದ ರೀತಿಯಲ್ಲಿ ಬದಲಾವಣೆಗಳನ್ನು ಮಾಡುವ ಮೂಲಕ ವಿಭಿನ್ನ, ವಿಶಿಷ್ಟ ಮಹಾಕಾವ್ಯ ರಚನೆ ಮಾಡಿದರು.

ಶ್ರೀ ರಾಮಾಯಣ ದರ್ಶನಂ ಮಹಾಕಾವ್ಯ ಕುವೆಂಪು ಅವರ ಹಲವು ವರ್ಷಗಳ ಶ್ರಮದ ಫಲ. ಇದರಲ್ಲಿ ಒಟ್ಟು 4 ಸಂಪುಟಗಳು, 50 ಸಂಚಿಕೆಗಳು , 22284 ಸಾಲುಗಳ ಒಳಗೊಂಡಿದೆ.

(ಅಯೋಧ್ಯಾ ಸಂಪುಟ – 11 ಸಂಚಿಕೆಗಳು
ಕಿಷ್ಕಿಂಧಾ ಸಂಪುಟ – 12 ಸಂಚಿಕೆಗಳು
ಲಂಕಾಸಂಪುಟಂ – 14 ಸಂಚಿಕೆಗಳು
ಶ್ರೀಸಂಪುಟಂ – 13 ಸಂಚಿಕೆಗಳು)

ಮಹಾಕಾವ್ಯವನ್ನು ರಚಿಸುವ ಸಂದರ್ಭದಲ್ಲಿ ನಡೆದಂತಹ ಒಂದು ಸ್ವಾರಸ್ಯಕರ ಘಟನೆ; ಒಮ್ಮೆ ಇದ್ದಕ್ಕಿದ್ದಂತೆ ಬರವಣಿಗೆ ನಿಂತುಬಿಡುತ್ತದೆ. ಮುಂದೆ ಏನು ಬರೆಯಬೇಕೆಂಬುದೇ ತೋಚದಂತಾಗಿ ಬಿಡುತ್ತದೆ. ಕುವೆಂಪು ಹಲವು ದಿನಗಳ ಕಾಲ ಏನನ್ನು ಬರೆಯದೆ ಸುಮ್ಮನಿದ್ದು ಬಿಡುತ್ತಾರೆ. ಹೀಗಿರುವಾಗ ಒಮ್ಮೆ ಮನೆಯಲ್ಲಿ ತಮ್ಮ ಮಗು ತೇಜಸ್ವಿ ಯಾವುದೋ ಕಾರಣಕ್ಕೆ ಅಳುತ್ತಿರುವುದನ್ನು ಕೇಳಿ ಕುವೆಂಪು ಅಲ್ಲಿಗೆ ಬರುತ್ತಾರೆ. ಯಾಕೆ ಅಳುವೆ ತೇಜಸ್ವಿ ಎಂದು ಮಗುವನ್ನು ಪ್ರಶ್ನಿಸುತ್ತಿರುವಂತೆಯೇ ಅವರಿಗೆ ಬರೆಯುವ ಸ್ಫೂರ್ತಿ ಬರುತ್ತದೆ. ಅಲ್ಲಿಂದ ತಕ್ಷಣವೇ ಹೋಗಿ ಮಹಾಕಾವ್ಯ ರಚನೆ ಮುಂದುವರೆಸುತ್ತಾರೆ. ಈ ಪ್ರಸಂಗ ಕವಿಯ ಮನಸ್ಸು ಯಾವಾಗಲೂ ಬರವಣಿಗೆಯ ಸ್ಫೂರ್ತಿಯನ್ನು ಹುಡುಕುತ್ತಿರುತ್ತದೆ ಎಂಬುದನ್ನು ತಿಳಿಸುವಂತಿದೆ.

ಇನ್ನು, ಮೂಲ ರಾಮಾಯಣದಲ್ಲಿ ಹೆಚ್ಚು ಮಹತ್ವ ಪಡೆಯದ ಪಾತ್ರಗಳಿಗೆ ಕುವೆಂಪು ತಮ್ಮ ರಾಮಾಯಣ ದರ್ಶನಂನಲ್ಲಿ ವಿಶೇಷ ಪ್ರಾಧಾನ್ಯತೆ ನೀಡಿರುವುದನ್ನು ಗಮನಿಸಬಹುದು. ಉದಾಹರಣೆಗೆ: ಮಂಥರೆ ಮತ್ತು ಊರ್ಮಿಳೆಯ ಪಾತ್ರಕ್ಕಿರುವ ಮಹತ್ವವನ್ನು, ಗಮನಿಸಬಹುದು.

ಇನ್ನು ಮೂಲ ರಾಮಾಯಣದಲ್ಲಿ ಮಂಥರೆಯ ಮತ್ಸರಕ್ಕೆ ಯಾವುದೇ ಕಾರಣ ಇರುವುದಿಲ್ಲ. ಆದರೆ ಕುವೆಂಪು ತಮ್ಮ ಮಹಾಕಾವ್ಯದಲ್ಲಿ ಒಂದು ಸಣ್ಣ ಘಟನೆಯನ್ನು ನೀಡಿ ಅವಳ ಮತ್ಸರಕ್ಕೆ ಮನೋವೈಜ್ಞಾನಿಕ ಕಾರಣವನ್ನು ನೀಡಿದ್ದು ಈ ಮಹಾಕಾವ್ಯದ ವಿಶೇಷವಾಗಿದೆ.

ಈ ಮಹಾಕಾವ್ಯದ ಮತ್ತೊಂದು ಹೆಗ್ಗಳಿಕೆ ಎಂದರೆ ಸೀತೆಯ ಅಗ್ನಿ ಪ್ರವೇಶ ಸನ್ನಿವೇಶ. ರಾವಣನಿಂದ ಸೀತೆಯನ್ನು ಬಿಡಿಸಿಕೊಂಡು ಕರೆತಂದ ರಾಮನು ಸೀತೆಗೆ ಅಗ್ನಿ ಪ್ರವೇಶದ ಪರೀಕ್ಷೆಯನ್ನು ನೀಡುತ್ತಾನೆ. ಇಲ್ಲಿ ಕುವೆಂಪು ಸೀತೆಯೊಂದಿಗೆ ಶ್ರೀ ರಾಮನನ್ನು ಕೂಡ ಅಗ್ನಿ ಪ್ರವೇಶ ಮಾಡಿಸಿದ್ದು ವಿಶೇಷವಾಗಿದೆ. ಶೀಲದ ವಿಷಯ ಬರೀ ಹೆಣ್ಣಿಗಷ್ಟೇ ಅಲ್ಲ, ಗಂಡಿಗೂ ಅನ್ವಯಿಸಿದ್ದು ಎಂಬ ಅಂಶದ ಜೊತೆಗೆ ಗಂಡು – ಹೆಣ್ಣು ಎಂಬ ಭೇದಭಾವ ಬೇಡ ಇಬ್ಬರೂ ಪರಸ್ಪರ ಸಮಾನರೆಂಬ ಸಂದೇಶವನ್ನು ಈ ಸನ್ನಿವೇಶ ಸಾರಿದಂತಿದೆ. ಒಟ್ಟಾರೆ ಹೇಳುವುದಾದರೆ ಶ್ರೀ ರಾಮಾಯಣ ದರ್ಶನಂ ಮಹಾಕಾವ್ಯವನ್ನು ಕುವೆಂಪು ಅವರು ಮಾನವೀಯ ನೆಲೆಯಲ್ಲಿ ರಚನೆ ಮಾಡಿರುವುದು ವಿಶೇಷ.

* * *

iii) ಕುವೆಂಪು ಮೇರು ಸಾಹಿತಿ ಹೇಗೋ ಹಾಗೆಯೇ ಒಬ್ಬ ಪ್ರೇಮಕವಿಯೂ ಹೌದು. ಅವರು ಬರೆದಿರುವ ‘ಪ್ರೇಮ ಕಾಶ್ಮೀರ’, ‘ಚಂದ್ರಮಂಚಕ್ಕೆ ಬಾ ಚಕೋರಿ’, ‘ಜೇನಾಗುವ’ ಕವನ ಸಂಕಲನಗಳನ್ನು ಗಮನಿಸಿದರೆ ಅವರೊಳಗೆ ಅಡಗಿರುವ ಪ್ರೇಮಕವಿಯೊಬ್ಬ ಗೋಚರಿಸುತ್ತಾನೆ. ಪ್ರೇಮಿಯಾಗಿ, ಗಂಡಹಾಗಿ ತನ್ನ ಮನದೊಳಗೆ ಅಡಗಿರುವ ಭಾವನೆಗಳಿಗೆ ಅಕ್ಷರ ರೂಪ ನೀಡಿ ಅಮೋಘವಾದ ಕವನಗಳನ್ನು ಕೊಟ್ಟ ಹೆಗ್ಗಳಿಕೆ ಕುವೆಂಪು ಅವರಿಗೆ ಸಲ್ಲುತ್ತದೆ.

ಬಾ ಚಕೋರಿ ಬಾ ಚಕೋರಿ ಚಂದ್ರ ಮಂಚಕೆ
ಜೊನ್ನ ಜೇನಿಗೆ ಬಾಯಾರಿದೆ ಚಕೋರ ಚುಂಬನ
ಚಂದ್ರಿಕಾ ಮಧುಪಾನಮತ್ತ
ಪೀನಕುಂಭಪಯೋಧವಿತ್ತ
ವಕ್ಷಪರಿಲಂಭನ ನಿಮಿತ್ತ ನಿರಾವಲಂಬನ...

ಜೇನಾಗುವಾ
ನಾ ನಿನಗೆ, ನೀನೆನಗೆ ಜೇನಾಗುವಾ।
ನಾ ನಿನಗೆ, ನೀನೆನಗೆ ಜೇನಾಗುವಾ।
ರಸದೇವ ಗಂಗೆಯಲಿ ಮೀನಾಗುವ,
ಹೂವಾಗುವ, ಹಣ್ಣಾಗುವ,
ಪ್ರತಿರೂಪಿ ಭಗವತಿಗೆ ಮುಡಿಪಾಗುವ
ಶಿವನೆನ್ನ ಸುಖಕೆ ಸುಖಿ ಶಿವನಿನ್ನ ಸುಖಕೆ ಸುಖಿ
ಶಿವ ಶಿವೆಯರ ಸುಖವ ಸವಿವಖಿಲ ಲೋಕ ಸುಖಿ
ಬಾ ಬಾರ ಬಾರಾ ಸಖಿ...

ಈ ಕವನಗಳ ಒಳಹೊಕ್ಕು ನೋಡಿ ಭಾವವನ್ನು ಅರ್ಥವಾಡಿಕೊಂಡಿದ್ದಲ್ಲಿ ಅವರೊಳಗಿರುವ ಅಪ್ರತಿಮ ಪ್ರೇಮಿಯ ದರ್ಶನವಾಗುತ್ತದೆ.

* * *

iv) ಜಲಗಾರ ನಾಟಕ ಚಿಕ್ಕದಾದರೂ ಅದು ನೀಡುವ ಸಂದೇಶ ಅಪರೂಪವಾದದ್ದು. ಇಡೀ ಊರನ್ನು ಸ್ವಚ್ಛಗೊಳಿಸುವ ಜಲಗಾರನೊಬ್ಬ ತನ್ನ ಕಾಯಕ ಮಾಡುತ್ತಿರುತ್ತಾನೆ. ಇಡೀ ಊರಿನ ಜನರೇ ಶಿವರಾತ್ರಿ ಹಬ್ಬದ ಅಂಗವಾಗಿ ಶಿವನ ದೇವಾಲಯಕ್ಕೆ ಹೋಗುತ್ತಿರುತ್ತಾರೆ. ಹೀಗೆ ಹೋಗುತ್ತಿದ್ದವರನ್ನು ನೋಡಿ ಜಲಗಾರ ಎಲ್ಲಿಗೆ ಹೋಗುತ್ತಿರುವುದೆಂದು ಪ್ರಶ್ನಿಸುತ್ತಾನೆ. ಆಗ ಅವರು ಇಂದು ಶಿವರಾತ್ರಿ ಹಬ್ಬ, ಇಡೀ ಊರೇ ಶಿವನ ದರ್ಶನ ಪಡೆಯಲು ಶಿವಾಲಯಕ್ಕೆ ಹೊರಟಿರುವುದಾಗಿ ತಿಳಿಸುತ್ತಾರೆ .ನೀನು ಬರುವುದಿಲ್ಲವೇ ಎಂದು ಪ್ರಶ್ನಿಸಿದಾಗ ಆ ಜಲಗಾರ ಇಲ್ಲ ಬುದ್ಧಿ ನಾನು ಕಾಯಕದಲ್ಲಿ ಶಿವನನ್ನು ಕಾಣುವೆ ಎಂದು ಉತ್ತರ ನೀಡುತ್ತಾನೆ. ಮುಂದೆ ನಾಟಕದಲ್ಲಿ ಶಿವ ಪ್ರತ್ಯಕ್ಷನಾಗಿ ದರ್ಶನ ನೀಡುವುದು ಜಲಗಾರನಿಗೆ ಮಾತ್ರ. ಮುಂದೆ ಶಿವನಿಂದ ನೀನು ಈ ಊರನ್ನು ಸ್ವಚ್ಛ ಗೊಳಿಸುವ ಜಲಗಾರನಾದರೆ ನಾನು ಈ ಜಗದ ಕೊಳೆಯನ್ನು ತೆಗೆಯುವ ಜಗದ ಜಲಗಾರನೆಂದು ಹೇಳಿಸುವ ಕುವೆಂಪು ಯಾರನ್ನು ಕೂಡ ನಿಕೃಷ್ಟ ವಾಗಿ ಕಾಣಬಾರದೆಂಬ ಉದಾತ್ತ ಭಾವವನ್ನು ಸಾರುವ ಮೂಲಕ ನಾವು ಮೊದಲು ಮನುಜರು ಎಂಬ ತತ್ವವನ್ನು ಸಾರಿದ್ದಾರೆ.

* * *

v) ಬೆರಳ್‌ಗೆ ಕೊರಳ್‌ನಲ್ಲಿ ತನ್ನ ಮಾತಿಗೆ ತಪ್ಪದಂತೆ ನಡೆಯಲು ಏಕಲವ್ಯನ ಹೆಬ್ಬೆರಳನ್ನು ಗುರುಕಾಣಿಕೆಯಾಗಿ ಪಡೆದ ದ್ರೋಣಾಚಾರ್ಯರು ಮುಂದೆ ಇದೇ ಕಾರಣದಿಂದ ತಮ್ಮ ತಲೆಯನ್ನು ಕಳೆದುಕೊಳ್ಳುವ ಪೂರ್ವ ಸೂಚನೆಯನ್ನು ತಿಳಿಸುವಂತಹ ಸನ್ನಿವೇಶ. ಏಕಲವ್ಯನ ತಾಯಿಯ ಪಾತ್ರದ ಮೂಲಕ ನನ್ನ ಈ ಮಗನ ಬೆರಳು ಕತ್ತರಿಸುವಂತೆ ಮಾಡಿದವರ ಕೊರಳು ಹೋಗುವಂತಾಗಲಿ ಎಂಬ ಶಾಪದ ಮೂಲಕ ತಾಯಿಗೆ ಮಗನ ಮೇಲಿರುವ ಪ್ರೀತಿಯನ್ನು ತಿಳಿಸಿದ್ದಾರೆ.ಹಾಗೆಯೇ ಒಂದು ಚಿಕ್ಕ ಪಾತ್ರವಾಗಿ ಕಳೆದು ಹೋಗುವಂತಿದ್ದ ಏಕಲವ್ಯನ ಪಾತ್ರಕ್ಕೆ ಜೀವ ತುಂಬುವ ಕೆಲಸವನ್ನು ಈ ನಾಟಕದ ಮೂಲಕ ಕುವೆಂಪು ಅವರು ಮಾಡಿದ್ದಾರೆ.

* * *

vi) ಕನ್ನಡತನವ ಸಾರಿದ ಕುವೆಂಪು ಮೊದಲಿಗೆ ಬರೆದದ್ದು ಇಂಗ್ಲಿಷ್ ಆದರೂ ಮುಂದೆ ಕನ್ನಡ ಸಾಹಿತ್ಯದಲ್ಲಿ ಅಪಾರವಾದಂತಹ ಮನ್ನಣೆಯನ್ನು ಪಡೆದವರು. ಅದರಲ್ಲೂ ಮುಖ್ಯವಾಗಿ ಕವನಗಳ ಮೂಲಕ ಕನ್ನಡತನವನ್ನು ಪ್ರತಿಯೊಬ್ಬರಲ್ಲೂ ಮೂಡಿಸಿದವರು. ಬಾರಿಸು ಕನ್ನಡ ಡಿಂಡಿಮವ ಓ ಕರ್ನಾಟಕ ಹೃದಯ ಶಿವ ಎನ್ನುವುದರ ಮೂಲಕ ಕನ್ನಡದ ಉಳಿವಿಗಾಗಿ ಟೊಂಕಕಟ್ಟಿ ನಿಂತವರು.

ಎಲ್ಲಾದರು ಇರು; ಎಂತಾದರು ಇರು;
ಎಂದೆಂದಿಗು ನೀ ಕನ್ನಡವಾಗಿರು.
ನೀ ಮೆಟ್ಟುವ ನೆಲ । ಅದೆ ಕರ್ನಾಟಕ;
ನೀನೇರುವ ಮಲೆ । ಸಹ್ಯಾದ್ರಿ,
ನೀ ಮುಟ್ಟುವ ಮರ । ಶ್ರೀಗಂಧದ ಮರ;

ನೀ ಕುಡಿಯುವ ನೀರ್ । ಕಾವೇರಿ ಎಂದು ಹೇಳಿ ಕನ್ನಡವೇ ಸತ್ಯ, ಕನ್ನಡವೇ ನಿತ್ಯ ಎಂದು ಸಾರಿದವರು. ಪ್ರತಿಯೊಬ್ಬ ಕನ್ನಡಿಗರ ಮೈಮನಗಳಲ್ಲಿ ಕನ್ನಡದ ಪ್ರೇಮವನ್ನು ಬಿತ್ತಿ–ಬೆಳೆಸಿದವರು.

ಕನ್ನಡದ ಮೇಲೆ ಅನ್ಯಭಾಷೆಯ ಪ್ರಭಾವ ಹೆಚ್ಚಾಗಿ ಕನ್ನಡಿಗರು ಕನ್ನಡವನ್ನು ಮರೆತಂತೆ ಇರುವಾಗ ಈ ಎಚ್ಚರಿಕೆಯನ್ನು ಕೊಟ್ಟವರು ಕುವೆಂಪು.

ಸಾಯುತಿದೆ ನಿಮ್ಮ ನುಡಿ ಓ ಕನ್ನಡದ ಕಂದರಿರ ಎನ್ನುವ ಮೂಲಕ ಕನ್ನಡಮ್ಮನ ಉಳಿವಿಗೆ ಕಂಕಣ ಬದ್ಧರಾಗಿ ನಿಲ್ಲಿ ಎಂಬ ಉದ್ಘೋಷವನ್ನು ಸಾರಿದ ಮಹಾನ್ ಕವಿ ಕುವೆಂಪು.

ಕನ್ನಡದ ಬಗ್ಗೆ ಚಕಾರ ಎತ್ತಿದವರಿಗೆ ಮೈಮುಟ್ಟಿ ನೋಡಿಕೊಳ್ಳುವಂತೆ ಕವನದ ಮೂಲಕ ಉತ್ತರ ಕೊಟ್ಟವರು ಕುವೆಂಪು – ಕರ್ನಾಟಕ ಎಂಬುದೇನು

ಹೆಸರೆ ಬರಿಯ ಮಣ್ಣಿಗೆ!
ಮಂತ್ರ ಕಣಾ! ಶಕ್ತಿ ಕಣಾ!
ತಾಯಿ ಕಣಾ! ದೇವಿ ಕಣಾ!
ಬೆಂಕಿ ಕಣಾ! ಸಿಡಿಲು ಕಣಾ!
ಕಾವ ಕೊಲುವ ಒಲವ ಬಲವ
ಪಡೆದ ಚಲವ ಚಂಡಿ ಕಣಾ

ಋಷಿಯ ಕಾಣ್ಬ ಕಣ್ಣಿಗೆ ! ಕನ್ನಡ ನುಡಿಗಿರುವ ಶಕ್ತಿಯನ್ನು, ಪ್ರಾಧಾನ್ಯತೆಯನ್ನು ಸಾರಿ ಮೈ ರೋಮಾಂಚನಗೊಳ್ಳುವಂತೆ ನವಚೇತನ ಮೊಳಗಿಸಿದ ಕೀರ್ತಿ ಕುವೆಂಪು ಅವರಿಗೆ ಸಲ್ಲುತ್ತದೆ.

* * *

vii) ಪರಿಸರದ ಪ್ರೇಮಿಯಾಗಿ ‘ಕಾನೂರು ಹೆಗ್ಗಡತಿ’, ‘ಮಲೆಗಳಲ್ಲಿ ಮದುಮಗಳು’ – ಎರಡು ಮಹಾನ್ ಕಾದಂಬರಿಗಳನ್ನು ಕನ್ನಡ ಸಾಹಿತ್ಯಕ್ಕೆ ನೀಡಿ ಪರಿಸರವನ್ನು, ನಮ್ಮ ಪ್ರಾದೇ ಶಿಕತೆಯನ್ನು ಪ್ರಚುರಪಡಿಸಿದವರು ಕುವೆಂಪು.

ಇಲ್ಲಿ ಯಾರು ಮುಖ್ಯರಲ್ಲ, ಯಾರು ಅಮುಖ್ಯರಲ್ಲ ಎಂದು ಹೇಳಿ ಎಲ್ಲರಲ್ಲೂ ಸಮಾನ ಗೌರವವನ್ನು ಕಾಣುವ ಸದುದ್ದೇಶವನ್ನು ಹೊಂದಿದ್ದವರಾಗಿದ್ದರು. ನಮ್ಮ ಸುತ್ತಮುತ್ತಲಿನ ಪರಿಸರದೊಳಗಿ ರುವ ಸೌಂದರ್ಯವನ್ನು ಕಾಣುವ ಅವಶ್ಯಕತೆಯನ್ನು, ಪ್ರಕೃತಿಯೊಂದಿಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳುವ ಬಗೆಯನ್ನು ತಿಳಿಸಿದರು.

ಗೊಬ್ಬರ ಎಂಬ ಹೆಸರಿನಲ್ಲಿ ಕವನ ಬರೆದು ಯಾರನ್ನೂ, ಯಾವುದನ್ನೂ ನಿರ್ಲಕ್ಷ್ಯದಿಂದ ನೋಡಬಾರದೆಂಬ ಹಿತವಚನವನ್ನು ನೀಡಿದರು. ಪಕ್ಷಿಗಳ ಹಾರುವಿಕೆಯನ್ನು ನೋಡಿ ದೇವರು ರುಜು ಮಾಡಿದುದು ಎಂಬ ಕವನದ ಮೂಲಕ ಹೇಳಿ ಪರಿಸರವನ್ನು ಗಮನಿಸಲು ವಿಶೇಷವಾದ ಶಕ್ತಿ ಇರಬೇಕೆಂಬ ತತ್ವವನ್ನು ಸಾರಿದರು.

ಜಗತ್ತಿಗೆ ಅನ್ನವನ್ನು ನೀಡುವ ಮಣ್ಣಿನ ಮಗನಾದ ರೈತನ ಬಗ್ಗೆ ‘ನೇಗಿಲಯೋಗಿ’ ಕವನದ ಮೂಲಕ ಉನ್ನತವಾದ ಸ್ಥಾನವನ್ನು ಕೊಟ್ಟವರು ಕುವೆಂಪು. ಹೀಗೆ ತಮ್ಮ ಬರವಣಿಗೆಯಲ್ಲಿ ಪರಿಸರ, ಪ್ರಾದೇಶಿಕತೆಯ ಬಗ್ಗೆ ಕಾಳಜಿಯನ್ನು, ಪ್ರೇಮವನ್ನು ಪ್ರಕಟಿಸುವ ಮೂಲಕ ‘ಕನ್ನಡದ ವರ್ಡ್ಸ್‌ವರ್ತ್’ ಎಂದೇ ಪ್ರಸಿದ್ಧರಾದರು.

ವಿಶೇಷ ಸನ್ನಿವೇಶ: ಪ್ರಭುಶಂಕರರರೊಂದಿಗೆ ನಡೆದ ಹಾಸ್ಯ ಪ್ರಸಂಗವಿದು. ಕುವೆಂಪುರವರ ಆತ್ಮೀಯ ಶಿಷ್ಯರಲ್ಲಿ ಮೊದಲ ಸ್ಥಾನದಲ್ಲಿದ್ದವರು ಪ್ರಭುಶಂಕರ. ಬಹುಶಃ ಕುವೆಂಪುರವರು ಪ್ರಭುಶಂಕರ ಅವರಿಗೆ ಕೊಟ್ಟಂತಹ ಸಲಿಗೆಯನ್ನು ಮತ್ಯಾರಿಗೂ ನೀಡಿಲ್ಲವೆಂದೇ ಹೇಳಬಹುದು.


ಪ್ರೊ. ಕೃಷ್ಣೇಗೌಡರು ಹೇಳಿದ ಈ ಪ್ರಸಂಗ ನನ್ನ ಈ ಮಾತಿಗೆ ಸಾಕ್ಷಿಯಾಗುತ್ತದೆ. ಕುವೆಂಪು ಅವರಿಗೆ ಜ್ಞಾನಪೀಠ ಪ್ರಶಸ್ತಿ ಪಡೆದ ಸಂದರ್ಭವದು. ಪ್ರಭುಶಂಕರ ಅವರು ಕುವೆಂಪು ಅವರ ಮನೆಗೆ ಹೋಗುತ್ತಾರೆ. ಆಗ ಜ್ಞಾನ ಪೀಠ ಪ್ರಶಸ್ತಿ, ಪ್ರಮಾಣಪತ್ರ ಮತ್ತು ಸ್ಮರಣಿಕೆಯನ್ನು ದೇವರ ಮನೆಯಲ್ಲಿ ಇಟ್ಟಿರು ವುದನ್ನು ಕವಿಗಳು ತಮ್ಮ ಶಿಷ್ಯನಿಗೆ ತೋರಿ ಸುತ್ತಾರೆ. ಆಗ ಪ್ರಭು ಶಂಕರ ಅವರು ದೇವರ ಮನೆಯಲ್ಲಿ ಸ್ಮರಣಿಕೆ, ಪ್ರಮಾಣ ಪತ್ರ ಇರುವುದೇನೋ ಸರಿ; ಆದರೆ ಪ್ರಶಸ್ತಿಯ ಜೊತೆಗೆ ಕೊಟ್ಟ ಚೆಕ್ ಮಾತ್ರ ಬ್ಯಾಂಕಿನಲ್ಲಿದೆ ಎಂದು ನಗೆ ಚಟಾಕಿ ಹಾರಿಸಿದರಂತೆ. ಕುವೆಂಪು ಅವರು ಪ್ರಭುಶಂಕರರ ಈ ಮಾತನ್ನು ಕೇಳಿ ಮನಸಾರೆ ನಕ್ಕರಂತೆ, ಅಷ್ಟೇ ಅಲ್ಲ ಮುಂದೆ ಅನೇಕ ಬಾರಿ ಈ ಮಾತನ್ನು ತಮ್ಮ ಆತ್ಮೀಯರ ಮುಂದೆ ಹೇಳುವಂತೆ ಪ್ರಭುಶಂಕರ ಅವರಿಗೆ ಹೇಳಿದ್ದರಂತೆ.

ಕಥೆ, ನಾಟಕ, ವಿಮರ್ಶೆ, ಕಾವ್ಯ, ಕಾದಂಬರಿ, ಮಹಾಕಾವ್ಯ, ವ್ಯಕ್ತಿ ಚಿತ್ರ, ಜೀವನ ಚರಿತ್ರೆ, ಅನುವಾದ ....ಹೀಗೆ ಸಾಹಿತ್ಯದ ಎಲ್ಲ ಪ್ರಕಾರಗಳಲ್ಲೂ ತಮ್ಮ ವಿಶಿಷ್ಟವಾದ ಭಾಷಾ ಶೈಲಿಯಿಂದ ಪ್ರಸಿದ್ಧಿಯನ್ನು ಪಡೆದು ಎರಡನೇ ರಾಷ್ಟ್ರಕವಿಯಾಗಿ ಖ್ಯಾತಿ ಪಡೆದು ಪ್ರಭುಶಂಕರ, ಜಿ.ಎಸ್.ಶಿವರುದ್ರಪ್ಪ, ಎಚ್. ತಿಪ್ಪೇರುದ್ರಸ್ವಾಮಿ, ಸಿಪಿಕೆ, ದೇಜಗೌ ಅವ ರಂತಹ ಅನೇಕ ಶಿಷ್ಯರ ಮೂಲಕ ಸಾಹಿತ್ಯಕ್ಕೆ ನವ ಚೈತನ್ಯ ನೀಡಿದ ಕುವೆಂಪು ನಿಜಕ್ಕೂ ಕನ್ನಡಕ್ಕೆ ಇಂಪನ್ನು, ಕಂಪನ್ನು ತಂದುಕೊಟ್ಟರು.

ಕನ್ನಡದ ಕಂಪು ನಮ್ಮ ಕುವೆಂಪು.

‘ಶಕ್ತಿ’ಗೆ ವರ್ಷ: ಕೆಎಸ್‌ಆರ್‌ಟಿಸಿಗೆ 3,349 ಕೋಟಿ ರೂ. ದಾಖಲೆಯ ಆದಾಯ

ಬೆಂಗಳೂರು: ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಮತ್ತು ಸರ್ಕಾರಿ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣವನ್ನು ಒದಗಿಸುವ ಶಕ್ತಿ ಯೋಜನೆಗೆ ಸೋಮವಾರ (ಜೂ.10)ಕ್ಕೆ ಒಂದು ವರ್ಷ ತುಂಬಿದ್ದು, ಯೋಜನೆಯು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (ಕೆಎಸ್‌ಆರ್‌ಟಿಸಿ)ಯ ಬಲವನ್ನು ಹೆಚ್ಚಿಸಿದೆ. ಯೋಜನೆಯ ಅಡಿಯಲ್ಲಿ ಸಾರಿಗೆ ಸಂಸ್ಥೆಯು ಪ್ರಸಕ್ತ 2023–24 ಆರ್ಥಿಕ ವರ್ಷದಲ್ಲಿ 3,349 ಕೋಟಿ ರೂಪಾಯಿ ದಾಖಲೆಯ ಆದಾಯವನ್ನು ಗಳಿಸಿದೆ.



ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಅನ್ಬು ಕುಮಾರ್ ಮಾತನಾಡಿ, ಕೆಎಸ್‌ಆರ್‌ಟಿಸಿಯ ಒಟ್ಟು ಸಂಚಾರ ಆದಾಯ 2016 ರಲ್ಲಿ 2,738 ಕೋಟಿ ರೂ ಆಗಿತ್ತು. 2017 ರಲ್ಲಿ 2,975 ಕೋಟಿ ರೂ., 2018 ರಲ್ಲಿ 3,131 ಕೋಟಿ ರೂ., 2019 ರಲ್ಲಿ 3,182 ಕೋಟಿ ರೂ, 2021 ರಲ್ಲಿ ರೂ 2,037 ಕೋಟಿ ಮತ್ತು 2022 ರಲ್ಲಿ ರೂ 3,349 ಕೋಟಿಗಳು ಬಂದಿತ್ತು. ಶಕ್ತಿ ಯೋಜನೆ ಜಾರಿಯಾದ ಬಳಿಕ ಅಂದರೆ 2023 ರ ಆದಾಯವು ರೂ 3,930 ಕೋಟಿಗೆ ಹೆಚ್ಚಳವಾಗಿದೆ ಎಂದು ಹೇಳಿದ್ದಾರೆ.

2023ರ ಜೂನ್‌ನಿಂದ 2024ರ ಮೇ ವರೆಗೆ ಒಟ್ಟು 4,809 ಕೋಟಿ ರೂ.ಗಳ ಆದಾಯ ಬಂದಿದ್ದು, ಶಕ್ತಿಯೇತರ ಪ್ರಯಾಣಿಕರಿಂದಲೂ ಆದಾಯ ಹೆಚ್ಚಳವಾಗಿದೆ ಎಂದು ತಿಳಿಸಿದ್ದಾರೆ.

ಶಕ್ತಿ ಯೋಜನೆಯಿಂದ ಆದಾಯ ಶೇ.42.5 (ರೂ. 2,044 ಕೋಟಿ) ಇದ್ದರೆ, ಶಕ್ತಿಯೇತರ ಆದಾಯ ಶೇ.57.5 (ರೂ. 2,764 ಕೋಟಿ)ರಷ್ಟಿದೆ. ಓರ್ವ ಮಹಿಳೆ ಬಸ್‌ನಲ್ಲಿ ಉಚಿತ ಪ್ರಯಾಣ ಮಾಡಲು ಮುಂದಾದಾದರೆ, ಮಕ್ಕಳು ಹಾಗೂ ಪತಿ ಕೂಡ ಬಸ್ ಹತ್ತುತ್ತಿದ್ದಾರೆ. ಇದರಿಂದ ಆದಾಯ ಹೆಚ್ಚಳವಾಗುತ್ತಿದೆ ಎಂದು ವಿವರಿಸಿದ್ದಾರೆ.

ಈ ಹಿಂದೆ, ನಮ್ಮ ದೈನಂದಿನ ಆದಾಯವು ಸುಮಾರು 9.7 ಕೋಟಿ ರೂಪಾಯಿಗಳಷ್ಟಿತ್ತು, ಈಗ 13.9 ಕೋಟಿ ರೂಪಾಯಿಗಳಿಗೆ ಹೆಚ್ಚಾಗಿದೆ. ಇದಲ್ಲದೆ, ಮಂಗಳವಾರ, ಬುಧವಾರ, ಗುರುವಾರ ಮತ್ತು ಶನಿವಾರದಂತಹ ದಿನಗಳಲ್ಲಿ ಸಾಮಾನ್ಯವಾಗಿ ಬಸ್‌ಗಳಲ್ಲಿ ಜನಸಂಖ್ಯೆ ಶೇಕಡಾ 50–60 ರಷ್ಟಿರುತ್ತಿತ್ತು. ಆದರೆ ಶಕ್ತಿ ಯೋಜನೆ ಬಳಿಕ ಶೇಕಡಾ 85ಕ್ಕಿಂತ ಹೆಚ್ಚಾಗಿರುತ್ತದೆ. ಈಗ ಬಸ್ ಗಳಲ್ಲಿ ಜನರಿಲ್ಲದ ದಿನಗಳಿಲ್ಲದಂತಾಗಿದೆ. ಅಲ್ಲದೆ, ಪೀಕ್ ಹವರ್ ಅಲ್ಲದ ಸಮಯದಲ್ಲೂ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿರುತ್ತದೆ. ಇವೆಲ್ಲವೂ ಆದಾಯವನ್ನು ಹೆಚ್ಚಳಕ್ಕೆ ಸಹಾಯ ಮಾಡಿದೆ. ಡೀಸೆಲ್ ಬೆಲೆ ಲೀಟರ್‌ಗೆ 90 ರೂ.ಗೆ ಏರುತ್ತಿದ್ದರೂ ಯಾವುದೇ ದರ ಏರಿಕೆ ಇಲ್ಲದೆ ಕೆಎಸ್‌ಆರ್‌ಟಿಸಿ ಈ ದಾಖಲೆ ಮಾಡಿದೆ ಎಂದು ಹೇಳಿದರು. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (KSRTC), ಕಲ್ಯಾಣ–ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (KKRTC), ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (NWKRTC) ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (BMTC), ಬಸ್ ಚಾಲಕರು ಮತ್ತು ಕಂಡಕ್ಟರ್‌ಗಳು, ಮೆಕ್ಯಾನಿಕ್‌ಗಳು ಮತ್ತು ನಾಲ್ಕು ಬಸ್ ನಿಗಮಗಳ ಎಲ್ಲಾ ಸಿಬ್ಬಂದಿ ಶಕ್ತಿ ಯೋಜನೆಯನ್ನು ಯಶಸ್ವಿ ಗೊಳಿಸಲು ಹಗಲು ರಾತ್ರಿ ಶ್ರಮಿಸಿದ್ದಾರೆ.

ಕೆಎಸ್‌ಆರ್‌ಟಿಸಿ ಸ್ಟಾಫ್ ಆ್ಯಂಡ್ ವರ್ಕರ್ಸ್ ಫೆಡರೇಷನ್‌ನ ಪ್ರತಿನಿಧಿಗಳು ಮಾತನಾಡಿ, ಸಾರಿಗೆ ನಿಗಮದಲ್ಲಿ 14 ಸಾವಿರ ನೌಕರರ ಕೊರತೆ, ಈ ಕೊರತೆಯ ನಡುವೆಯೂ ಯಾವುದೇ ಸಿದ್ಧತೆ ಇಲ್ಲದೆ ಶಕ್ತಿ ಯೋಜನೆ ಆರಂಭಿಸಲಾಯಿತು. ನೌಕರರು ಕೂಡ ಇಷ್ಟು ದೊಡ್ಡ ಸಂಖ್ಯೆಯ ಪ್ರಯಾಣಿಕರನ್ನು ನಿಭಾಯಿಸಬೇಕು ಎಂಬುದನ್ನು ಊಹಿಸಿರಲಿಲ್ಲ. ಯೋಜನೆ ಯಶಸ್ವಿಯಾಗಲು ಅನೇಕ ತೊಂದರೆಗಳನ್ನು ಎದುರಿಸಿದರು ಎಂದು ಹೇಳಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರಿಗೆ ಅಭಿನಂದನೆ



ಕೇಂದ್ರ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಸಂಸದೆ ಶೋಭಾ ಕರಂದ್ಲಾಜೆ ಅವರನ್ನು ದೆಹಲಿಯ ಅವರ ನಿವಾಸದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಸಂಸದ ಪ್ರತಾಪ್ ಸಿಂಹ, ರಾಜ್ಯ ಕಾರ್ಯದರ್ಶಿ ರವಿಕುಮಾರ್, ಮಾಜಿ ಎಂಎಲ್‌ಸಿ ಸಿದ್ದರಾಜು, ನಗರ ವಕ್ತಾರ ಮೋಹನ್ ಅಭಿನಂದಿಸಿದರು.

ಸಂಸದೆ ಪ್ರಿಯಾಂಕಾ ಅವರಿಗೆ ಸ್ವಾಗತ



ಮೈಸೂರಿಗೆ ಆಗಮಿಸಿದ ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಜಿಪಂ ಮಾಜಿ ಅಧ್ಯಕ್ಷ ಬಸವರಾಜು ಎಸ್.ಆರ್.ರವಿಕುಮಾರ್, ದೇವರಾಜು, ಮಂಜುನಾಥ್ ಹೂಗುಚ್ಛ ನೀಡಿ, ಸ್ವಾಗತಿಸಿದರು.

ವೃತ್ತಿಪರ ಕೋರ್ಸ್‌ಗಳಿಗೆ ವಿಕಲಚೇತನರ ಕೋಟಾದಡಿ ಮೀಸಲಾತಿ

ವೈದ್ಯಕೀಯ ತಪಾಸಣೆ ಆರಂಭ

ಬೆಂಗಳೂರು, ಜೂ. 10(ಕೆಎಂಶಿ)– ವೈದ್ಯಕೀಯ, ಎಂಜಿನಿಯರಿಂಗ್ ಸೇರಿದಂತೆ ವೃತ್ತಿಪರ ಕೋರ್ಸ್‌ಗಳಿಗೆ ವಿಕಲಚೇತನರ ಕೋಟಾದಲ್ಲಿ ಮೀಸಲಾತಿ ಬಯಸಿರುವ ಅಭ್ಯರ್ಥಿಗಳ ವೈದ್ಯಕೀಯ ತಪಾಸಣೆ ಇಂದಿನಿಂದ ಆರಂಭವಾಗಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಕಚೇರಿಯಲ್ಲಿ ನಡೆಯುತ್ತಿರುವ ವೈದ್ಯಕೀಯ ತಪಾಸಣೆಗೆ ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಚಾಲನೆ ನೀಡಿದರು.

ಬೌರಿಂಗ್ ಮತ್ತು ವಿಕ್ಟೋರಿಯಾ ಆಸ್ಪತ್ರೆಯ ಆರು ಮಂದಿ ಮೂಳೆ ರೋಗ ಮತ್ತು ಕಣ್ಣು–ಮೂಗು–ಕಿವಿ (ಇಎನ್‌ಟಿ) ತಜ್ಞ ವೈದ್ಯರು ಅಭ್ಯರ್ಥಿಗಳ ವೈದ್ಯಕೀಯ ತಪಾಸಣೆ ನಡೆಸಿ, ದಾಖಲೆಗಳನ್ನು ಪರಿಶೀಲಿಸಿದರು. ಸಿಇಟಿಗೆ ಅರ್ಜಿ ಸಲ್ಲಿಕೆ ಸಂದರ್ಭದಲ್ಲಿ 783 ಮಂದಿ ವಿಕಲಚೇತನರ ಕೋಟಾದಡಿ ಮೀಸಲಾತಿ ಬಯಸಿದ್ದು, ಎಲ್ಲರನ್ನು ಜೂನ್ 12ರವರೆಗೆ ತಪಾಸಣೆಗೆ ಒಳಪಡಿಸಲಾಗುವುದು. ಮೊದಲ ದಿನ 250 ಮಂದಿಗೆ ವೈದ್ಯಕೀಯ ಪರೀಕ್ಷೆಗೆ ಕರೆಯಲಾಗಿದೆ.

ಕಣ್ಣಿನ ಸಮಸ್ಯೆ ಇರುವವರ ತಪಾಸಣೆ ಮಿಂಟೋ ಕಣ್ಣಿನ ಆಸ್ಪತ್ರೆಯಲ್ಲಿ ನಡೆಯುತ್ತಿದ್ದು, ಕೆಇಎ ಸಿಬ್ಬಂದಿಯೇ ಕಣ್ಣಿನ ಸಮಸ್ಯೆ ಇರುವ ಅಭ್ಯರ್ಥಿಗಳನ್ನು ವಾಹನದಲ್ಲಿ ಕರೆದೊಯ್ಯಲಿದ್ದಾರೆ. ವಿಕಲಚೇತನರ ಅರ್ಹತೆ ವಿಷಯದಲ್ಲಿ ವೈದ್ಯಕೀಯ ಸಮಿತಿ ನಿರ್ಧಾರವೇ ಅಂತಿಮ ಎಂದು ಪ್ರಸನ್ನ ಸ್ಪಷ್ಟಪಡಿಸಿದ್ದಾರೆ.

ವಿಕಲಚೇತನ ಕೋಟಾದಡಿ ಅರ್ಹತೆ ಪಡೆಯಲು ಅಭ್ಯರ್ಥಿಗಳು ಯುಜಿಸಿಇಟಿ ಅರ್ಜಿ ಪ್ರತಿ, ಪ್ರವೇಶ ಪತ್ರ, ಅಭ್ಯರ್ಥಿ ಭಾವಚಿತ್ರ ಇರುವ ಗುರುತಿನ ಚೀಟಿ, ವೈದ್ಯಕೀಯ ಪ್ರಮಾಣಪತ್ರ, ಕಿವುಡುತನದ ಸಮಸ್ಯೆ ಇರುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯಿಂದ ಪಡೆದ ಪ್ರಮಾಣಪತ್ರಗಳನ್ನು ತಪಾಸಣೆ ವೇಳೆ ತರುವುದು ಕಡ್ಡಾಯ ಎಂದರು.

ಯುಜಿಸಿ ಅಧೀನ ಸಂಸ್ಥೆಯಿಂದ ಎಂಐಟಿ ಪ್ರಾಧ್ಯಾಪಕಿ ಡಾ.ವಿಜಯಲಕ್ಷ್ಮಿ ದಯಾಳ್‌ಗೆ ವೈಜ್ಞಾನಿಕ ಸಂಶೋಧನೆಗೆ ಅನುದಾನ

ಮೈಸೂರು,ಜೂ.10(ಪಿಎಂ)– ಮೈಸೂರಿನ ಮಹಾರಾಜ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಭೌತಶಾಸ್ತ್ರ ವಿಭಾಗದ ಪ್ರಾಧ್ಯಾಪಕರೂ ಆದ ವಿಭಾಗದ ಮುಖ್ಯಸ್ಥೆ ಡಾ.ವಿಜಯಲಕ್ಷ್ಮಿ ದಯಾಳ್ ಅವರು 'ಯುಜಿಸಿ–ಡೇ ಕನ್ಸೋರ್ಟಿಯಮ್ ಫಾರ್ ಸೈಂಟಿಫಿಕ್ ರಿಸರ್ಚ್ (ಯುಜಿಸಿ ಅಧೀನದ ಸ್ವಾಯತ್ತ ಸಂಸ್ಥೆ)' ವತಿಯಿಂದ ಸಂಶೋಧನಾ ಅನುದಾನಕ್ಕೆ ಪಾತ್ರರಾಗಿದ್ದಾರೆ.




'ಲೋಕಲ್ ಸ್ಟ್ರಕ್ಚರ್ ಸ್ಟಡೀಸ್ ಫ್ರಮ್ ಹೈ ಎನರ್ಜಿ ಕ್ಷ–ರೇ ಡಿಫ್ರಾಕ್ಷನ್ ಅಂಡ್ ಇಟ್ಸ್ ಕೊರಿಲೇಷನ್ ಟು ಅಂಡರ್ ಸ್ಟ್ಯಾಂಡ್ ದಿ ಮಲ್ಟಿಫೆರ್ರೋಯಿಕ್ ಬಿಹೇವಿಯರ್ ಇನ್ ಬಿಫೆ03 ಅಂಡ್ ಝಿಡ್ ಆರ್–ಸಿಎ ಮಾಡಿಫೈಡ್ ಬಾಟಿ03 ಕಂಪೋಸಿಟ್ಸ್' ವಿಷಯ ಕುರಿತಂತೆ ಸಂಶೋಧನೆಗಾಗಿ ಅನುದಾನ ಲಭ್ಯವಾಗಿದೆ. ಇಂಡೋರ್ ಸೆಂಟರ್ ಮತ್ತು ರಾಜಾ ರಾಮಣ್ಣ ಸೆಂಟರ್ ಫಾರ್ ಅಡ್ವಾನ್ಸ್ಡ್ ಟೆಕ್ನಾಲಜಿ ಜಂಟಿ ಆಶ್ರಯದ ಸಂಶೋಧನೆಯ ಯೋಜನೆಯಾಗಿದೆ. ಇದು ಇವರ 4ನೇ ಪ್ರಮುಖ ಸಂಶೋಧನಾ ಅನುದಾನವಾಗಿದೆ. ಇವರು ರಾಷ್ಟ್ರೀಯ ಮತ್ತು ಅಂತರ ರಾಷ್ಟ್ರೀಯ ಮಟ್ಟದ ಜನರಲ್‌ಗಳು ಹಾಗೂ ಸಮ್ಮೇಳನಗಳಲ್ಲಿ ತಮ್ಮ ಪ್ರತಿಭೆ ಅನಾವರಣಗೊಳಿಸಿದ್ದಾರೆ. ಹಲವು ಪಿಹೆಚ್‌ಡಿ ಪದವೀಧರರಿಗೆ ಮಾರ್ಗದರ್ಶನ ಸಹ ಮಾಡಿದ್ದಾರೆ. ಒಂದು ಸಂಶೋಧನಾ ಹುದ್ದೆಗೆ (ಭೌತಶಾಸ್ತ್ರ, ಎಲೆಕ್ಟ್ರಾನಿಕ್ಸ್) ಅರ್ಜಿಯನ್ನು ಸದರಿ ಅನುದಾನದ ಅಡಿಯಲ್ಲಿ ಆಹ್ವಾನಿಸಲಾಗಿದೆ. ಎನ್‌ಇಟಿ, ಜಿಎಟಿಇ, ಎಸ್‌ಎಲ್‌ಇಟಿ ಹೊಂದಿರುವ ಅಭ್ಯರ್ಥಿಗಳು ಅರ್ಹರು (ಸಂಪರ್ಕ ; hodphysics@mitmysore.in).

ಇಂದು ಜನಸಂಪರ್ಕ ಸಭೆ

ಮೈಸೂರು, ಜೂ.10–ವಿ.ವಿ ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಅಧ್ಯಕ್ಷತೆಯಲ್ಲಿ ಜೂ.11 ರಂದು ಬೆಳಗ್ಗೆ 11 ಗಂಟೆಗೆ ಕುವೆಂಪುನಗರ ಉಪ ವಿಭಾಗ ಕಚೇರಿಯಲ್ಲಿ ಹಾಗೂ ಮಧ್ಯಾಹ್ನ 3.30 ಗಂಟೆಗೆ ಆರ್.ಕೆ.ನಗರದ ಉಪ ವಿಭಾಗ ಕಚೇರಿಯಲ್ಲಿ ಗ್ರಾಹಕರ ಕುಂದು ಕೊರತೆಗಳ ಬಗ್ಗೆ ಒಂದನೇ ತ್ರೈಮಾಸಿಕ ಜನ ಸಂಪರ್ಕ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಈ ವ್ಯಾಪ್ತಿಯ ವಿದ್ಯುತ್ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ವಿದ್ಯುತ್ ಸಮಸ್ಯೆ ಬಗ್ಗೆ ಏನಾದರೂ ದೂರುಗಳಿದ್ದಲ್ಲಿ ಅರ್ಜಿ ನೀಡುವುದರ ಮುಖಾಂತರ ಬಗೆಹರಿಸಿಕೊಳ್ಳಬಹುದಾಗಿದೆ ಎಂದು ಸೆಸ್ಕ್ ವಿ.ವಿ. ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೂತನ ಎಂಎಲ್‌ಸಿ ಡಾ.ಯತೀಂದ್ರ ಅವರಿಗೆ ಅಭಿನಂದನೆ



ವಿಧಾನಪರಿಷತ್ ನೂತನ ಸದಸ್ಯರಾಗಿ ಆಯ್ಕೆಯಾದ ಡಾ.ಯತೀಂದ್ರ ಅವರನ್ನು ಇಲವಾಲ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಗುರುಸ್ವಾಮಿ ನೇತೃತ್ವದಲ್ಲಿ ಸನ್ಮಾನಿಸಲಾಯಿತು. ಈ ವೇಳೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಮರಿಗೌಡ, ಬಸವಣ್ಣ, 58ನೇ ವಾರ್ಡಿನ ರವಿ, ಬಿ.ಮಹೇಶ್ ಕೆರೆಹುಂಡಿ, ಕೆ. ಸಾಲುಂಡಿ ಮಹಾದೇವ, ರಾಜೇಗೌಡ, ಮಹೇಶ್, ಕೃಷ್ಣಮೂರ್ತಿ, ಅರಸನಕೆರೆ ಸ್ವಾಮಿಗೌಡ, ರಾಜೇಶ್, ಮನೋಜ್, ಮಹಾದೇವ (45ನೇ ವಾರ್ಡ್), ದಡದಹಳ್ಳಿ ಮಹದೇವ್ ಇನ್ನು ಹಲವಾರು ಮುಖಂಡರು ಉಪಸ್ಥಿತರಿದ್ದರು.

ಮೈಸೂರಿನ ಕಾಂಗ್ರೆಸ್ ಕಚೇರಿಗೆ ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಭೇಟಿ

ಅಭಿವೃದ್ಧಿ ಕಾರ್ಯ ಜೊತೆಗೆ ಪಕ್ಷ ಸಂಘಟನೆಗೂ ಶ್ರಮಿಸುತ್ತೇನೆ

ಮೈಸೂರು,ಜೂ.10(ಎಂಟಿವೈ)– ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ಆಯ್ಕೆಯಾಗಿರುವ ನೂತನ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಮೈಸೂರಿನ ಕಾಂಗ್ರೆಸ್ ಭವನಕ್ಕೆ ಭೇಟಿ ನೀಡಿದ್ದರು. ಈ ವೇಳೆ ನೂತನ ನಗರ ಮತ್ತು ಗ್ರಾಮಾಂತರ ಕಾಂಗ್ರೆಸ್ ಸಮಿತಿ ವತಿಯಿಂದ ನೂತನ ಸಂಸದೆ ಪ್ರಿಯಾಂಕ ಜಾರಕಿಹೊಳಿ ಅವರನ್ನು ಸನ್ಮಾನಿಸಲಾಯಿತು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ ಆಯ್ಕೆಯಾದ ಬಳಿಕ ಇದೇ ಮೊದಲ ಬಾರಿಗೆ ಸಹೋದರ ರಾಹುಲ್ ಜಾರಕಿಹೊಳಿ ಅವರೊಂದಿಗೆ ಮೈಸೂರಿಗೆ ಆಗಮಿಸಿದ್ದ ಅವರು ಸಂಪ್ರದಾಯದಂತೆ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿದರು. ಈ ವೇಳೆ ನಗರ ಹಾಗೂ ಗ್ರಾಮಾಂತರ ಕಾಂಗ್ರೆಸ್ ಸಮಿತಿ ಮುಖಂಡರು ಬರಮಾಡಿಕೊಂಡರು. ಬಳಿಕ ನಡೆದ ಕಾರ್ಯಕ್ರಮದಲ್ಲಿ ಎರಡೂ ಸಮಿತಿ ವತಿಯಿಂದ ಪ್ರಿಯಾಂಕಾ ಅವರನ್ನು ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಪ್ರಿಯಾಂಕಾ ಜಾರಕಿಹೊಳಿ ಮಾತನಾಡಿ, ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಿದ್ದ ನನ್ನನ್ನು ಕ್ಷೇತ್ರದ ಜನತೆ ಆಶೀರ್ವದಿಸಿದ್ದಾರೆ. ಇನ್ನು ಮುಂದೆ ನಾನು ತಂದೆ ಸತೀಶ್ ಜಾರಕಿಹೊಳಿ ಸೇರಿದಂತೆ ಪಕ್ಷದ ಎಲ್ಲ ನಾಯಕರ ಮಾರ್ಗದರ್ಶನದಲ್ಲಿ ಕೆಲಸ ಮಾಡುತ್ತೇನೆ. ಅಭಿವೃದ್ಧಿ ಕೆಲಸಗಳೊಂದಿಗೆ ಪಕ್ಷ ಸಂಘಟನೆಗೂ ಶ್ರಮಿಸುತ್ತೇನೆ. ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಜನತೆ 90 ಸಾವಿರ ಮತಗಳ ಅಂತರದಿಂದ ನನ್ನನ್ನು ಗೆಲ್ಲಿಸಿದ್ದಾರೆ. ಕ್ಷೇತ್ರದ ಜನತೆ ಮನೆ ಮಗಳಂತೆ ಪ್ರೀತಿ ತೋರಿಸಿದ್ದಾರೆ. ನಾನು ರಾಜಕೀಯ ಪ್ರವೇಶಿಸಿದ್ದು ಮಹಿಳೆಯರಿಗೆ ಸಂತೋಷ ತಂದಿದೆ. ಅವರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಮಾಜಿ ಶಾಸಕ ಎಚ್.ಪಿ. ಮಂಜುನಾಥ್ ಮಾತನಾಡಿ, ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಾ.ಎಚ್.ಸಿ.ಮಹದೇವಪ್ಪ, ಸತೀಶ್ ಜಾರಕಿಹೊಳಿ ಅವರ ಮಕ್ಕಳು ಚುನಾವಣೆಯಲ್ಲಿ ಗೆಲ್ಲುವುದು ಕಷ್ಟವಲ್ಲ. ಅವರಂತೆ ಜನ ಸಾಮಾನ್ಯರ ಪರವಾಗಿ ಕೆಲಸ ಮಾಡುವುದನ್ನು ಮುಂದುವರಿಸಬೇಕು. ನೂತನವಾಗಿ ಆಯ್ಕೆಯಾಗಿರುವ ಪ್ರಿಯಾಂಕಾ ಅವರು ಸಂಸತ್ತಿನಲ್ಲಿ ಮಹಿಳೆಯರ ದನಿಯಾಗಲಿ. ಪಕ್ಷ ಸಂಘಟನೆಗೂ ಶ್ರಮಿಸಲಿ ಎಂದು ಸಲಹೆ ನೀಡಿದರು.

ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿ, 2023ರ ವಿಧಾನಸಭಾ ಚುನಾವಣೆಯಲ್ಲಿ ನಾನು ಅತ್ಯಂತ ಕಿರಿಯ ಶಾಸಕನಾಗಿ ಆಯ್ಕೆಯಾಗಿದ್ದೆ. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಪ್ರಿಯಾಂಕಾ ಅತ್ಯಂತ ಕಿರಿಯ ಸಂಸದೆಯಾಗಿ ಆಯ್ಕೆಯಾಗಿದ್ದಾರೆ. ಅವರು ಉತ್ತಮ ಜನಪ್ರತಿನಿಧಿಯಾಗಿ ರೂಪುಗೊಂಡು ಉತ್ತಮ ಕೆಲಸ ಮಾಡುವ ಶಕ್ತಿ ದೊರೆಯಲೆಂದು ಆಶಿಸುತ್ತೇನೆ. ನನ್ನ ತಂದೆ ಮಾಜಿ ಸಂಸದ ಆರ್.ಧ್ರುವನಾರಾಯಣ ಅವರು ಕಾಲವಾಗಿ ಒಂದು ವರ್ಷವಾಗಿದೆ. ಅಲ್ಲಿಂದಲೂ ಹಿರಿಯ ಸಚಿವರಾದ ಸತೀಶ್ ಜಾರಕಿಹೊಳಿ ಅವರು ನಿರಂತರವಾಗಿ ಮಾರ್ಗದರ್ಶನ ಮಾಡುತ್ತಿದ್ದಾರೆ ಎಂದು ಸ್ಮರಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ. ವಿಜಯ್‌ಕುಮಾರ್ ಮಾತನಾಡಿ, ಚಿಕ್ಕೋಡಿ ಕ್ಷೇತ್ರದಲ್ಲಿ ಪ್ರಿಯಾಂಕಾ ಅವರ ಗೆಲುವು ಸಚಿವರಾದ ಸತೀಶ್ ಜಾರಕಿಹೊಳಿ ಅವರ ನೈತಿಕ ಗಟ್ಟಿತನಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್. ಮೂರ್ತಿ, ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ನಗರ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಲತಾ ಚಿಕ್ಕಣ್ಣ, ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷೆ ಲತಾ ಸಿದ್ದಶೆಟ್ಟಿ, ಮಾಜಿ ಮೇಯರ್‌ಗಳಾದ ಟಿ.ಬಿ.ಚಿಕ್ಕಣ್ಣ, ಮೋದಾಮಣಿ, ಮಾಜಿ ಉಪಮೇಯರ್ ಪುಷ್ಪವಲ್ಲಿ, ತಾ.ಪಂ. ಮಾಜಿ ಅಧ್ಯಕ್ಷೆ ಮಂಜುಳಾ ಮಂಜುನಾಥ್, ಮುಖಂಡರಾದ ನಜರ್‌ಬಾದ್ ನಟರಾಜ್, ರವಿ, ಈಶ್ವರ್ ಚಕ್ಕಡಿ, ಸೇವಾದಳದ ಗಿರೀಶ್ ಮುಂತಾದವರು ಉಪಸ್ಥಿತರಿದ್ದರು.





ಮೈಸೂರಿನ ಕಾಂಗ್ರೆಸ್ ಭವನದಲ್ಲಿ ನೂತನ ಸಂಸದೆ ಪ್ರಿಯಾಂಕ ಜಾರಕಿಹೊಳಿ ಅವರನ್ನು ನಗರ ಹಾಗೂ ಗ್ರಾಮಾಂತರ ಕಾಂಗ್ರೆಸ್ ಸಮಿತಿ ವತಿಯಿಂದ ಸನ್ಮಾನಿಸಲಾಯಿತು. ಬಲಚಿತ್ರದಲ್ಲಿ ಮೈಸೂರಿಗೆ ಆಗಮಿಸಿದ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಇಂದಿರಾಗಾಂಧಿ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಸ್ವಾಗತಿಸಲಾಯಿತು. ಈ ವೇಳೆ ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು, ವಾರ್ಡ್ ಅಧ್ಯಕ್ಷ ಕೇಬಲ್ ನಾಗರಾಜು, ಎಸ್.ಆರ್.ರವಿಕುಮಾರ್, ಜಯರಾಮಚಾರ್ ಇದ್ದರು.

ಉರಿಲಿಂಗಿಪೆದ್ದಿ ಮಠಕ್ಕೆ ಸಂಸದೆ ಪ್ರಿಯಾಂಕಾ ಭೇಟಿ: ಸುಣ್ಣದಕೇರಿಯಲ್ಲಿ ಸನ್ಮಾನ



ಮೈಸೂರಿನ ಗಾಂಧಿನಗರದಲ್ಲಿರುವ ಉರಿಲಿಂಗಿಪೆದ್ದಿ ಮಠಕ್ಕೆ ಸೋಮವಾರ ಭೇಟಿ ನೀಡಿದ್ದ ಚಿಕ್ಕೋಡಿ ಕ್ಷೇತ್ರದ ನೂತನ ಸಂಸದೆ ಪ್ರಿಯಾಂಕಾ ಜಾರಕಿಹೊಳಿ, ಲೇಖಕ ಕೆ.ಶ್ರೀಧರ್ ಅವರ ವಿವಿಧ ಪುಸ್ತಕಗಳ ಮುಖಪುಟ ಬಿಡುಗಡೆ ಮಾಡಿದರು.



ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ, ಸುಣ್ಣದಕೇರಿಯ ಮಲೆ ಮಹದೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ನಡೆದ ಸಮಾರಂಭದಲ್ಲಿ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಅಭಿನಂದಿಸಿದರು.

ಮೈಸೂರು,ಜೂ.10(ಎಂಟಿವೈ)– ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ನೂತನ ಸಂಸದೆಯಾಗಿ ಆಯ್ಕೆಯಾಗಿರುವ ಪ್ರಿಯಾಂಕಾ ಜಾರಕಿಹೊಳಿ ಮೈಸೂರಿನ ಗಾಂಧಿನಗರದಲ್ಲಿರುವ ಉರಿಲಿಂಗಿಪೆದ್ದಿ ಮಠಕ್ಕೆ ಭೇಟಿ ನೀಡಿ ಜ್ಞಾನಪ್ರಕಾಶ ಸ್ವಾಮೀಜಿ ಅವರ ಆಶೀರ್ವಾದ ಪಡೆದರು. ಈ ವೇಳೆ ಚಾಮರಾಜ ನಗರದ ಲೇಖಕ ಕೆ.ಶ್ರೀಧರ್ (ಕೆ.ಸಿರಿ) ಅವರ ಕೃತಿಗಳಾದ ಒಡಪಾಡು, ದೊಡ್ಡಸಂಪಿಗೆ, ಗೌರಿ ಮಕ್ಕಳು ಮತ್ತು ಪಂಚಮುಖಿ ಪುಸ್ತಕಗಳ ಮುಖಪುಟ ಬಿಡುಗಡೆ ಮಾಡಿದರು. ಈ ವೇಳೆ ಕಲಾವಿದರಾದ ಜಿ.ಮೂರ್ತಿ ಮುಡಿಗುಂಡ, ಗಾಯಕ ರವಿಕುಮಾರ್ ಇದ್ದರು.

ಸುಣ್ಣದಕೇರಿಯಲ್ಲಿ ಸನ್ಮಾನ: ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ ಸುಣ್ಣದಕೇರಿಯ ಮಲೆ ಮಹದೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಪಾಲ್ಗೊಂಡ ಪ್ರಿಯಾಂಕಾ ಅವರು ಅಭಿನಂದನೆ ಸ್ವೀಕರಿಸಿದರು. ನೆರೆದಿದ್ದ ಕಾಂಗ್ರೆಸ್ ಕಾರ್ಯಕರ್ತರು ಸತೀಶ್ ಜಾರಕಿಹೊಳಿ, ಪ್ರಿಯಾಂಕಾ, ರಾಹುಲ್ ಜಾರಕಿಹೊಳಿ ಪರ ಘೋಷಣೆ ಕೂಗಿದರು.

ಕೇಂದ್ರದ ನೂತನ ಸಚಿವರಾದ ಸಚಿವ ಪ್ರಹ್ಲಾದ್ ಜೋಶಿ, ವಿ.ಸೋಮಣ್ಣ ಅವರಿಗೆ ಅಭಿನಂದನೆ





ಕೇಂದ್ರ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಧಾರವಾಡ ಲೋಕಸಭಾ ಕ್ಷೇತ್ರದ ಸಂಸದ ಪ್ರಹ್ಲಾದ್ ಜೋಶಿ ಹಾಗೂ ತುಮಕೂರು ಕ್ಷೇತ್ರದ ಸಂಸದ ವಿ.ಸೋಮಣ್ಣ ಅವರನ್ನು ರಾಜ್ಯ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡ ಅವರು ನವದೆಹಲಿಯಲ್ಲಿ ಅವರವರ ನಿವಾಸದಲ್ಲಿ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್, ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಕೋಲಾರ ಸಂಸದ ಮಲ್ಲೇಶ್‌ಬಾಬು, ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ, ಬಿಜೆಪಿ ಮುಖಂಡ ಸೀಕಲ್ ರಾಮಚಂದ್ರಗೌಡ ಇನ್ನಿತರರು ಉಪಸ್ಥಿತರಿದ್ದರು.

ತುಮಕೂರು ಗ್ರೇನ್ ಮರ್ಚೆಂಟ್ ಕೋ–ಆಪರೇಟಿವ್ ಬ್ಯಾಂಕ್‌ನ ಗ್ರಾಹಕ ಸಂಪರ್ಕ ಸಭೆ



ತುಮಕೂರು ಗ್ರೇನ್ ಮರ್ಚೆಂಟ್ ಕೋ–ಆಪರೇಟಿವ್ ಬ್ಯಾಂಕ್‌ನ ಗ್ರಾಹಕ ಸಂಪರ್ಕ ಸಭೆಯನ್ನು ಇತ್ತೀಚೆಗೆ ಮೈಸೂರಿನಲ್ಲಿ ಆಯೋಜಿಸಲಾಗಿತ್ತು. ಸಭೆಯಲ್ಲಿ ಪಾಲ್ಗೊಂಡಿದ್ದ ಗ್ರಾಹಕರು ತಮ್ಮ ಅಭಿಪ್ರಾಯ, ಸಲಹೆ–ಸೂಚನೆಗಳನ್ನು ನೀಡಿದರು. ಈ ವೇಳೆ ಬ್ಯಾಂಕಿನ ಅಧ್ಯಕ್ಷರು, ನಿರ್ದೇಶಕರು, ಮುಖ್ಯ ಕಾರ್ಯನಿರ್ವಾಹಕರು ಗ್ರಾಹಕರಿಗೆ ಸೂಕ್ತವಾದ ವಿವರಗಳನ್ನು ನೀಡಿದರು. ನಂತರ ಬ್ಯಾಂಕಿನ ಅಧ್ಯಕ್ಷರು ಕಳೆದ ಸಾಲಿನ ಆರ್ಥಿಕ ಪ್ರಗತಿಯ ವಿವರಗಳನ್ನು ಸಭೆಗೆ ಸವಿವರವಾಗಿ ನೀಡಿದರು.

ರಂಗಭೂಮಿ ಕುರಿತು ಅಭಿನಯ ತರಬೇತಿಗೆ ಆಹ್ವಾನ

ಮೈಸೂರು,ಜೂ.10– ರಂಗಾಯಣದ ಕಲಾವಿದರಾಗಿದ್ದ, ರಂಗಕರ್ಮಿ ಮೈಮ್ ರಮೇಶ್ ಅವರು ತಮ್ಮ ಟಚ್ ಅಂಡ್ ಪ್ಲೈ ಸಂಸ್ಥೆಯ ಮೂಲಕ ಚಲನಚಿತ್ರ, ಧಾರಾವಾಹಿ ಮತ್ತು ರಂಗಭೂಮಿ ಕುರಿತು ಅಭಿನಯ ತರಬೇತಿ ಕೋರ್ಸ್ ಆರಂಭಿಸಲಿದ್ದಾರೆ. ತರಗತಿಗಳು ಜು.1ರಿಂದ ಆರಂಭವಾಗುತ್ತವೆ. ಪ್ರತಿ ಸೋಮವಾರದಿಂದ ಶುಕ್ರವಾರದವರೆಗೆ ಬೆಳಗ್ಗೆ 7ರಿಂದ 9ರವರೆಗೆ ತರಬೇತಿ ನಡೆಯಲಿದೆ. ವಯೋಮಿತಿ 18 ವರ್ಷದಿಂದ 30ರ ಒಳಗಿನವರಿಗೆ ಮಾತ್ರ. ಇದು 3 ತಿಂಗಳ ಡಿಪ್ಲೊಮಾ ಸರ್ಟಿಫಿಕೇಟ್ ಕೋರ್ಸ್. ತರಬೇತಿಯಲ್ಲಿ ನಟರಿಗೆ ಬೇಕಾದ ವಿವಿಧ ಬಗೆಯ ವಿಶೇಷ ರೀತಿಯ, ವೈಶಿಷ್ಟ್ಯಪೂರ್ಣ ಅಭಿನಯದ ತಂತ್ರಗಳನ್ನು ಹೇಳಿಕೊಡಲಾಗುವುದು. ಆಂಗಿಕ ಅಭಿನಯ, ಧ್ವನಿಯ ಏರಿಳಿತ, ಭಾಷೆಯ ವೈವಿಧ್ಯ, ತಾಳದ ಜ್ಞಾನ, ಯೋಗ, ಧ್ಯಾನ, ಮೂಕಾಭಿನಯ ಹಾಗೂ ನೃತ್ಯ ಸಂಯೋಜನೆಯನ್ನೂ ಹೇಳಿಕೊಡಲಾಗುವುದು. ಸಂಪನ್ಮೂಲ ವ್ಯಕ್ತಿಗಳಿಂದ ತಾಂತ್ರಿಕ ವಿಷಯದ ಬಗ್ಗೆ ತರಗತಿಗಳನ್ನು ಏರ್ಪಡಿಸಲಾಗುವುದು. ಆಸಕ್ತರು ಮೊ: 94482 71066, 8073878432 ಅನ್ನು ಸಂಪರ್ಕಿಸಿ.

ಕಾಂಗ್ರೆಸ್‌ಗೆ ಸೋಲು: ಸಿಎಂಗೆ ಮುಖ ತೋರಿಸಲಾಗದ ಪರಿಸ್ಥಿತಿ

ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಅಳಲು

ಮೈಸೂರು, ಜೂ.10(ಎಂಟಿವೈ)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿಗೆ ಸಾಕಷ್ಟು ಕೊಡುಗೆ ನೀಡಿದ್ದರೂ ಹಾಗೂ ಜನಪ್ರಿಯ ಯೋಜನೆಗಳನ್ನು ಜಾರಿಗೊಳಿಸಿದ್ದರೂ ಮೈಸೂರು–ಕೊಡಗು ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗೆ ಸೋಲುಂಟಾಗಿರುವುದರಿಂದ ಮೈಸೂರಿನ ಕಾಂಗ್ರೆಸ್ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಎದುರು ನಿಲ್ಲಲಾಗದ ಪರಿಸ್ಥಿತಿ ಉಂಟಾಗಿದೆ ಎಂದು ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್ ಅಳಲು ತೋಡಿಕೊಂಡರು.



ಹೆಚ್.ಪಿ.ಮಂಜುನಾಥ್

ಮೈಸೂರಿನ ಕಾಂಗ್ರೆಸ್ ಕಚೇರಿ ಬಳಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಎಲ್ಲಾ ವರ್ಗದ ಫಲಾನುಭವಿಗಳು ಗ್ಯಾರಂಟಿ ಯೋಜನೆಗಳ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ. ಈ ಯೋಜನೆಗಳಿಂದ ಬಡ ಹಾಗೂ ಮಧ್ಯಮ ವರ್ಗದ ಜನರು ಗೌರವಯುತವಾಗಿ ಬದುಕಲು ವಿವಿಧ ಸೌಲಭ್ಯ ದೊರಕುತ್ತಿದೆ. ಇದರೊಂದಿಗೆ ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಸಮಾಜದಲ್ಲಿ ಶಾಂತಿ ನೆಲೆಸಲು ಹೆಚ್ಚಿನ ಆದ್ಯತೆ ನೀಡಿದ್ದಾರೆ. ಆದರೂ, ಲೋಕಸಭೆ ಮತ್ತು ವಿಧಾನಪರಿಷತ್ತಿನ ಚುನಾವಣೆ ಸೋಲು ಕಷ್ಟಕರವಾಗಿದೆ. ಮುಖ್ಯಮಂತ್ರಿಗಳಿಗೆ ಮುಖ ತೋರಿಸುವುದೇ ಕಷ್ಟವಾಗಿದೆ. ನೂತನವಾಗಿ ಆಯ್ಕೆಯಾದ 9 ಸಂಸದರು ಮೈಸೂರಿಗೆ ಬಂದು ಪಕ್ಷಕ್ಕೆ ಬಲ ತುಂಬಬೇಕು. ಕಾರ್ಯಕರ್ತರನ್ನು ಹುರಿದುಂಬಿಸಬೇಕು ಎಂದರು.

ಆದಿಚುಂಚನಗಿರಿ ಮಹಿಳಾ ಒಕ್ಕಲಿಗ ಸಮಾಜದ ವತಿಯಿಂದ ವಿಶ್ವ ಪರಿಸರ ದಿನಾಚರಣೆ

ಆರೋಗ್ಯಕರ ಜೀವನಕ್ಕಾಗಿ ಮರ ಬೆಳೆಸಿ; ಪ್ರಕೃತಿ ಉಳಿಸಿ

ಮೈಸೂರು, ಜೂ. 10– ಆರೋಗ್ಯಕರ ಜೀವನಕ್ಕಾಗಿ ಮರ ಬೆಳೆಸಿ, ಪ್ರಕೃತಿಯನ್ನು ಉಳಿಸಿ ಎಂದು ಆದಿಚುಂಚನಗಿರಿ ಮಹಿಳಾ ಒಕ್ಕಲಿಗ ಸಮಾಜದ ಉಪಾಧ್ಯಕ್ಷೆ ರಾಜೇಶ್ವರಿ ನಾಗರಾಜ್ ತಿಳಿಸಿದರು.

ಮೈಸೂರಿನ ಕುವೆಂಪುನಗರದ ಆದಿಚುಂಚನಗಿರಿ ಮಹಿಳಾ ಒಕ್ಕಲಿಗ ಸಮಾಜದ ವತಿಯಿಂದ ಕಚೇರಿ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಸಿರೇ ಉಸಿರು ಶೀರ್ಷಿಕೆಯಡಿ 'ಮನೆಗೊಂದು ಗಿಡ ಊರಿಗೊಂದು ವನ' ಧ್ಯೇಯ ವಾಕ್ಯದಡಿಯಲ್ಲಿ ಸಂಘದ ಎಲ್ಲಾ ಸದಸ್ಯರಿಗೂ ವಿವಿಧ ಜಾತಿಯ ಗಿಡ ವಿತರಿಸಿ ಮಾತನಾಡಿದ ಅವರು, ಮನುಷ್ಯ ಉತ್ತಮ ಪರಿಸರ ಇಲ್ಲದೇ ಬದುಕಲು ಸಾಧ್ಯವಿಲ್ಲ. ಅರಣ್ಯ ನಾಶದ ಪರಿಣಾಮವಾಗಿ ಪ್ರಸ್ತುತ ವರ್ಷ ಉಷ್ಣಾಂಶ ಹೆಚ್ಚಿತ್ತು. ಮಳೆ ಪ್ರಮಾಣ ಹೆಚ್ಚಿ, ಆ ಮೂಲಕ ಅಂತರ್ಜಲ ಮಟ್ಟ ಹೆಚ್ಚಲು ಅರಣ್ಯವನ್ನು ಉಳಿಸಬೇಕು ಎಂದು ಸಲಹೆ ನೀಡಿದರು.



ಇದೇ ಸಂದರ್ಭದಲ್ಲಿ ಟ್ರೈಬಲ್ ಕಲಾವಿದೆ ಸುಮಾ ಪ್ರಶಾಂತ್ ಅವರು ಪರಿಸರ ಸಂಬಂಧಪಟ್ಟ ಜಾನಪದ ಹಾಡು ಹಾಡುವ ಮೂಲಕ ವಿಶೇಷ ಗಮನ ಸೆಳೆದರು.

ಮುಖ್ಯ ಅತಿಥಿಗಳಾಗಿ ರಂಗಭೂಮಿ ಕಲಾವಿದೆ ಸುಮಾ ಪ್ರಶಾಂತ್, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷೆ ಸವಿತಾ ಗೌಡ ವಹಿಸಿದ್ದರು. ಸಂಘದ ಪದಾಧಿಕಾರಿಗಳಾದ ಸವಿತಾ ಜಗದೀಶ್, ತ್ರಿವೇಣಿ ವಿಶ್ವನಾಥ್, ಜ್ಯೋತಿ ರವಿ, ಲಕ್ಷ್ಮೀ ಜಯರಾಮ್, ಉಮಾ, ಮಮತಾ ಪುರುಷೋತ್ತಮ್, ಅನ್ವಿತಾ, ಬಳಗದ ಸದಸ್ಯರು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಮಂಗಳವಾರ 11 ಜೂನ್ 2024

ಐದನೇ ಬಾರಿಗೆ ಮಂಡ್ಯಕ್ಕೆ ಒಲಿದ ಕೇಂದ್ರ ಸಚಿವ ಸ್ಥಾನ

ಎಸ್.ಎಂ.ಕೃಷ್ಣ, ಅಂಬರೀಷ್, ರೆಹಮಾನ್‌ಖಾನ್ ಬಳಿಕ ಹೆಚ್‌ಡಿಕೆಗೆ ಒಲಿದ ಮಂತ್ರಿಗಿರಿ


ಎಸ್.ಎಂ.ಕೃಷ್ಣ


ಅಂಬರೀಶ್


ರೆಹಮಾನ್ ಖಾನ್


ಹೆಚ್.ಡಿ.ಕುಮಾರಸ್ವಾಮಿ

ಎಂ.ಕೆ.ಮೋಹನ್‌ರಾಜ್

ಮಂಡ್ಯ,ಜೂ.10– ಪ್ರಧಾನಿ ನರೇಂದ್ರ ಮೋದಿ ಅವರ 3.0 ಸರ್ಕಾರದಲ್ಲಿ ಮಾಜಿ ಮುಖ್ಯಮಂತ್ರಿಯೂ ಆದ ಮಂಡ್ಯ ಲೋಕಸಭಾ ಕ್ಷೇತ್ರದ ಜೆಡಿಎಸ್ ಸಂಸದ ಹೆಚ್.ಡಿ.ಕುಮಾರಸ್ವಾಮಿ ಕ್ಯಾಬಿನೆಟ್ ದರ್ಜೆಯ ಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ್ದು, ಈ ಮೂಲಕ ಮಂಡ್ಯ ಜಿಲ್ಲೆಯಿಂದ ಕೇಂದ್ರ ಮಂತ್ರಿಯಾದ ಐದನೇ ವ್ಯಕ್ತಿ ಎಂಬ ಕೀರ್ತಿಗೆ ಅವರು ಭಾಜನರಾಗಿದ್ದಾರೆ.

ಬರೋಬ್ಬರಿ 2,84,620 ಮತಗಳ ಅಂತರದಿಂದ ಜಯಭೇರಿ ಭಾರಿಸಿದ ಕುಮಾರಸ್ವಾಮಿ ನಿರೀಕ್ಷೆಯಂತೆ ಪ್ರಧಾನಿ ಮೋದಿ ಕ್ಯಾಬಿನೆಟ್ ಸೇರಿದ್ದಾರೆ. ಪ್ರಮಾಣ ವಚನ ಸ್ವೀಕರಿಸಿದವರ ಪೈಕಿ 9ನೇ ಮಂತ್ರಿಯಾಗಿ ಹಾಗೂ ಬಿಜೆಪಿ ಬೆಂಬಲಿತ ಪಕ್ಷಗಳ ಮೊದಲನೇ ವ್ಯಕ್ತಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಕುಮಾರಸ್ವಾಮಿ ಅವರಿಗೆ ಕೇಂದ್ರದಲ್ಲಿ ಕೃಷಿ ಅಥವಾ ಜಲಶಕ್ತಿ ಖಾತೆಯನ್ನೇ ನೀಡಬೇಕೆಂದು ಬೆಂಬಲಿಗರು ಒತ್ತಾಯ ಮಾಡಿದ್ದಾರೆ.

ಮಂಡ್ಯ ಸಂಸದರೊಬ್ಬರಿಗೆ ಮೊದಲ ಬಾರಿಗೆ ಕ್ಯಾಬಿನೆಟ್ ಸಚಿವ ಸ್ಥಾನ: ಈ ಹಿಂದೆ ಮಂಡ್ಯ ಜಿಲ್ಲೆಯಿಂದ ಮೂರು ಮಂದಿ ಕೇಂದ್ರ ಸಚಿವರಾಗಿದ್ದರೂ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ ಆಯ್ಕೆಯಾಗಿ ಕ್ಯಾಬಿನೆಟ್ ಸಚಿವ ಸ್ಥಾನ ಪಡೆದ ಮೊದಲ ವ್ಯಕ್ತಿ ಎಂಬ ಹೆಗ್ಗಳಿಕೆಗೆ ಕುಮಾರಸ್ವಾಮಿ ಪಾತ್ರರಾಗಿದ್ದಾರೆ. ಮಂಡ್ಯ ಸಂಸದರಾಗಿ ಈ ಹಿಂದೆ ಸಚಿವರಾಗಿದ್ದವರಿಗೆ ರಾಜ್ಯಖಾತೆ ಹಾಗೂ ಸ್ವತಂತ್ರ ಖಾತೆಯ ಹೊಣೆ ನೀಡಲಾಗಿತ್ತು.

ಮೂರನೇ ಬಾರಿಗೆ ಸಂಸದರಾಗಿರುವ ಹೆಚ್‌ಡಿಕೆ: ಹೆಚ್.ಡಿ.ಕುಮಾರಸ್ವಾಮಿ ಮೊದಲ ಬಾರಿಗೆ 1996ರಲ್ಲಿ ಕನಕಪುರ ಲೋಕಸಭಾ ಕ್ಷೇತ್ರದಿಂದ ಸಂಸದರಾದರೆ 1998ರಲ್ಲಿ ಅದೇ ಕನಕಪುರ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಪರಾಭವಗೊಂಡಿರುತ್ತಾರೆ. ಬಳಿಕ 2008ರಲ್ಲಿ ಬೆಂಗಳೂರು ಗ್ರಾಮಾಂತರದಿಂದ ಸಂಸದರಾದ ಅವರು, ನಂತರ 2013ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದಿಂದ ಸ್ಪರ್ಧಿಸಿ ಸೋಲನ್ನಪ್ಪುತ್ತಾರೆ. ಇದೀಗ ಮೂರನೇ ಬಾರಿಗೆ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ ಆಯ್ಕೆಯಾಗಿದ್ದಾರೆ.

ಮಂಡ್ಯದಿಂದ ಮೊದಲ ಬಾರಿಗೆ ಕೇಂದ್ರ ಸಚಿವರಾಗಿದ್ದು ಎಸ್.ಎಂ.ಕೃಷ್ಣ: ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ಈವರೆಗೆ ನಾಲ್ಕು ಉಪಚುನಾವಣೆಗಳು ಸೇರಿದಂತೆ 22 ಚುನಾವಣೆಗಳು ನಡೆದಿದ್ದು, ಈ ಪೈಕಿ ಹೆಚ್ಡಿಕೆ ಸೇರಿ ಮೂರು ಮಂದಿ ಲೋಕಸಭಾ ಸದಸ್ಯರಿಗೆ ಕೇಂದ್ರದಲ್ಲಿ ಸಚಿವ ಸ್ಥಾನ ಸಿಕ್ಕಿದ್ದು, ಈ ಪೈಕಿ ಮೊದಲ ಬಾರಿಗೆ ಮಂಡ್ಯ ಪ್ರತಿನಿಧಿಸಿ ಸಚಿವರಾಗಿದ್ದು ಎಸ್.ಎಂ. ಕೃಷ್ಣ. 1980ರಲ್ಲಿ ಮೂರನೇ ಬಾರಿಗೆ ಮಂಡ್ಯದಿಂದ ಸಂಸದರಾಗಿ ಆಯ್ಕೆಯಾಗಿದ್ದ ಕೃಷ್ಣ, ಅಂದಿನ ಪ್ರಧಾನಿ ಇಂದಿರಾ ಗಾಂಧಿ ಸಂಪುಟದಲ್ಲಿ ಹಣಕಾಸು ಇಲಾಖೆಯ ರಾಜ್ಯ ಮಂತ್ರಿಯಾಗಿ ಐದು ವರ್ಷ ಕಾರ್ಯನಿರ್ವಹಿಸಿದ್ದಾರೆ.

ಅದಾದ ಬಳಿಕ 2009ರಲ್ಲಿ ಮನಮೋಹನ್‌ಸಿಂಗ್ ನೇತೃತ್ವದ ಯುಪಿಎ 2 ಸರ್ಕಾರದಲ್ಲಿ ರಾಜ್ಯಸಭೆಗೆ ಆಯ್ಕೆಯಾಗಿದ್ದ ಎಸ್.ಎಂ.ಕೃಷ್ಣ, ಮಹತ್ವದ ಕ್ಯಾಬಿನೆಟ್ ದರ್ಜೆಯ ವಿದೇಶಾಂಗ ಸಚಿವರಾಗುವ ಮೂಲಕ ಮಂಡ್ಯ ಜಿಲ್ಲೆಗೆ ಕೀರ್ತಿ ತರುತ್ತಾರೆ. ಕೇಂದ್ರ ಸರ್ಕಾರದ ಟಾಪ್5 ಖಾತೆಗಳಲ್ಲಿ ಒಂದಾದ ವಿದೇಶಾಂಗ ಸಚಿವ ಸ್ಥಾನವನ್ನು ಸಮರ್ಥವಾಗಿ ಎರಡೂವರೆ ವರ್ಷಗಳ ಕಾಲ ನಿಭಾಯಿಸುತ್ತಾರೆ.

ವಾರ್ತಾ ಸಚಿವರಾಗಿದ್ದ ಅಂಬರೀಷ್: 2004ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಹ್ಯಾಟ್ರಿಕ್ ಗೆಲುವು ಸಾಧಿಸುವ ಅಂಬರೀಷ್, ಪ್ರಧಾನಿ ಮನಮೋಹನ್ ಸಿಂಗ್ ಸಂಪುಟ 2005ರಲ್ಲಿ ವಿಸ್ತರಣೆಯಾದಾಗ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವರಾಗಿ ಕಾರ್ಯನಿರ್ವಹಿಸುತ್ತಾರೆ. ಒಂದೂವರೆ ವರ್ಷಗಳ ಕಾಲ ಕೇಂದ್ರ ಸಚಿವರಾಗುವ ಅಂಬಿ, ಕಾವೇರಿ ವಿಚಾರದಲ್ಲಿ ಮಂಡ್ಯ ಜಿಲ್ಲೆಗೆ ಅನ್ಯಾಯವಾಗಿದೆ ಎಂದು ಬೇಸರ ವ್ಯಕ್ತಪಡಿಸಿ, ಕೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದರೂ ಪುರಸ್ಕಾರವಾಗದ ಪರಿಣಾಮ ಸರ್ಕಾರ ಮುಗಿಯುವವರೆಗೂ ಅಂಬಿ ಸಚಿವರಾಗಿಯೇ ಇರುತ್ತಾರೆ.

ರೆಹಮಾನ್‌ಖಾನ್‌ಗೂ ಸಚಿವ ಸ್ಥಾನ: 1994ರಿಂದ 2018ರವರೆಗೂ ರಾಜ್ಯಸಭಾ ಸದಸ್ಯರಾಗಿದ್ದ ರೆಹಮಾನ್‌ಖಾನ್, ಜುಲೈ 2004ರಿಂದ ಏಪ್ರಿಲ್ 2012ರವರೆಗೆ ರಾಜ್ಯಸಭಾ ಉಪಸಭಾಪತಿಯಾಗಿ ಕಾರ್ಯ ನಿರ್ವಹಿಸಿ, 2012ರಿಂದ 2014ರವರೆಗೆ ಕೇಂದ್ರ ಅಲ್ಪಸಂಖ್ಯಾತ ಕಲ್ಯಾಣ ಖಾತೆಯ ಕ್ಯಾಬಿನೆಟ್ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ.

ಮದ್ದೂರು ತಾಲೂಕಿನ ಸೋಮನಹಳ್ಳಿ ಗ್ರಾಮದ ಎಸ್.ಎಂ.ಕೃಷ್ಣ, ಲೋಕಸಭಾ ಸದಸ್ಯರಾಗಿ ಒಮ್ಮೆ ರಾಜ್ಯಮಂತ್ರಿ, ರಾಜ್ಯಸಭಾ ಸದಸ್ಯರಾಗಿ ಒಮ್ಮೆ ಕ್ಯಾಬಿನೆಟ್ ಮಂತ್ರಿಯಾದರೆ, ಮಂಡ್ಯದಿಂದ ಸಂಸದರಾಗಿದ್ದ ಮದ್ದೂರು ತಾಲೂಕಿನ ದೊಡ್ಡರಸಿನಕೆರೆ ಗ್ರಾಮದ ಅಂಬರೀಷ್ ಒಮ್ಮೆ ಕೇಂದ್ರ ಸಚಿವರಾಗಿ ಹಾಗೂ ರಾಜ್ಯಸಭಾ ಸದಸ್ಯರಾಗಿದ್ದ ಕೆ.ಆರ್.ಪೇಟೆ ತಾಲೂಕಿನ ಕೆ.ರೆಹಮಾನ್‌ಖಾನ್ ಒಮ್ಮೆ ಕೇಂದ್ರ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ.

ಹೆಣ್ಣು ಭ್ರೂಣ ಹತ್ಯೆ ಪ್ರಕರಣ: ಮತ್ತೋರ್ವ ಮಹಿಳೆ ಬಂಧನ


ಆಶಾ ಶಿವರಾಜ್

ಪಾಂಡವಪುರ, ಜೂ.10– ತಾಲೂಕಿನಲ್ಲಿ ಇತ್ತೀಚೆಗೆ ಕಂಡು ಬಂದ ಭ್ರೂಣ ಪತ್ತೆ ಮತ್ತು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೇಲುಕೋಟೆ ಪೊಲೀಸರು ಮತ್ತೋರ್ವ ಆರೋಪಿಯನ್ನು ಶನಿವಾರ ಬಂಧಿಸಿದ್ದಾರೆ.

ನಾಗಮಂಗಲ ತಾಲೂಕಿನ ಬೇಮಂಗಲ ಗ್ರಾಮದ ಆಶಾ ಶಿವರಾಜ್ (50) ಬಂಧಿತ ಆರೋಪಿ. ಕಳೆದ ಮೇ 30 ರಂದು ಶ್ರೀರಂಗಪಟ್ಟಣ ತಾಲೂಕಿನ ಕೆ.ಶೆಟ್ಟಹಳ್ಳಿ ಗ್ರಾಮದ ರವಿಕುಮಾರ್ ಅವರ ಪತ್ನಿ ಮಾಲಾಶ್ರೀ ತೀವ್ರ ರಕ್ತಸ್ರಾವದಿಂದ ಪಟ್ಟಣದ ಉಪ ವಿಭಾಗೀಯ ಆಸ್ಪತ್ರೆಗೆ ಒಳರೋಗಿಯಾಗಿ ಚಿಕಿತ್ಸೆಗೆ ದಾಖಲಾಗಿದ್ದರು. ಪರೀಕ್ಷೆ ನಡೆಸಿದ ಪ್ರಸೂತಿ ತಜ್ಞೆ ಅನುಮಾನಗೊಂಡು ವಿಚಾರಿಸಿದ ಬಳಿಕ ಗರ್ಭಪಾತಕ್ಕೆ ಒಳಗಾಗಿರುವುದನ್ನು ಆಕೆ ಬಾಯ್ಬಿಟ್ಟು, ಪಾಂಡವಪುರ ತಾಲೂಕಿನ ಹೊಸಕೋಟೆಯ ಹೆಂಚಿನ ಮನೆಯಲ್ಲಿ ಕೆ.ಆರ್.ಪೇಟೆ ಪಟ್ಟಣದ ನಿವಾಸಿ ಶೃತಿ, ಗೀತಾ ಮತ್ತು ಚೇತನ್ ಕುಮಾರ್ ಅವರ ಸಹಕಾರದೊಂದಿಗೆ ಗರ್ಭಪಾತಕ್ಕೆ ಒಳಗಾಗಿರುವುದನ್ನು ತಿಳಿಸಿದ್ದಳು.

ಜಿಲ್ಲಾ ಕುಟುಂಬ ಮತ್ತು ಕಲ್ಯಾಣಾಧಿಕಾರಿ ಬೆಟ್ಟಸ್ವಾಮಿ ಅವರು ನೀಡಿದ ದೂರಿನ ಮೇರೆಗೆ ಪಾಂಡವಪುರ ತಾಲೂಕಿನ ಮೇಲುಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣದಲ್ಲಿ ಭಾಗಿಯಾಗಿದ್ದ ಆರೋಪಿಗಳ ಬೆನ್ನು ಹತ್ತಿದ್ದ ಪೊಲೀಸರು ಶನಿವಾರ ಬಾಳೆಹೊನ್ನೂರು ಪಟ್ಟಣದಲ್ಲಿ ತಲೆಮರೆಸಿಕೊಂಡಿದ್ದ ಆಶಾ ಶಿವಾರಾಜ್ ಅವರನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಕೇಂದ್ರ ಸಚಿವರಾಗಿ ಎಚ್‌ಡಿಕೆ ಪ್ರಮಾಣ: ಅಭಿಮಾನಿಗಳಿಂದ ಸಂಭ್ರಮಾಚರಣೆ

ಮಂಡ್ಯ, ಜೂ.10– ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಹೆಚ್.ಡಿ.ಕುಮಾರಸ್ವಾಮಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆ ಕಲ್ಲಹಳ್ಳಿಯ ಮಾರಮ್ಮ ದೇವಾಲಯದ ಆವರಣದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಸಿಹಿ ಹಂಚಿ ಅನ್ನಸಂತರ್ಪಣೆ ನಡೆಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡ ಬಿ.ಆರ್.ರಾಮಚಂದ್ರು ಮಾತನಾಡಿ, ನಮ್ಮೆಲ್ಲರ ನೆಚ್ಚಿನ ನಾಯಕರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಅಭೂತಪೂರ್ವ ಗೆಲುವಿಗಾಗಿ ಕೇಂದ್ರ ಸರ್ಕಾರದಲ್ಲಿ ಸಚಿವ ಸ್ಥಾನ ಗಿಟ್ಟಿಸಿಕೊಂಡಿರುವುದು ಜನರ ಆಶೀರ್ವಾದಿಂದ ಎಂಬುದನ್ನು ಸ್ವತಃ ಕುಮಾರಸ್ವಾಮಿ ಅವರೇ ಹೇಳಿದ್ದಾರೆ. ಜಿಲ್ಲೆಯಷ್ಟೇ ಅಲ್ಲದೇ ರಾಜ್ಯದಲ್ಲಿಯೂ ಅವರು ಉತ್ತಮ ಕೆಲಸವನ್ನು ಮಾಡಿ ತೋರಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮದ ಆದಿಶಕ್ತಿ ಮಾರಮ್ಮ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಸಿಹಿ ವಿತರಣೆ ಹಾಗೂ ಅನ್ನಸಂತರ್ಪಣೆ ಮಾಡಲಾಯಿತು.

ಮುಖಂಡರಾದ ಹೇಮಂತ್‌ಗೌಡ, ಅವಿನಾಶ್, ಹರ್ಷ ಅಂಚೆದೊಡ್ಡಿ, ರಮೇಶ್, ಮಂಜುನಾಥ್, ರಾಜು, ವೆಂಕಟೇಶ್, ಚಂದ್ರಶೇಖರ್, ಇತರರು ಭಾಗವಹಿಸಿದ್ದರು.

ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಅಭಿನಂದಿಸಿದ ಸುಮಲತಾ



ನೂತನ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಮಾಜಿ ಸಂಸದೆ ಸುಮಲತಾ ಅಂಬರೀಷ್ ನವದೆಹಲಿಯ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ನಿವಾಸದಲ್ಲಿ ಭೇಟಿಯಾಗಿ, ಅಭಿನಂದಿಸಿದರು. ಈ ಸಂದರ್ಭದಲ್ಲಿ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡ, ಸಂಸದ ಡಾ.ಸಿ.ಎನ್.ಮಂಜುನಾಥ್, ಶಾಸಕರಾದ ಜಿ.ಡಿ.ಹರೀಶ್‌ಗೌಡ, ಹೆಚ್.ಟಿ.ಮಂಜು, ಸ್ವರೂಪ್ ಪ್ರಕಾಶ್, ಕರೆಮ್ಮಾ ನಾಯಕ್, ಮಾಜಿ ಶಾಸಕರಾದ ಕೆ.ಸುರೇಶ್‌ಗೌಡ, ರವೀಂದ್ರ ಶ್ರೀಕಂಠಯ್ಯ, ಮಾಗಡಿ ಮಂಜು, ಅಶ್ವಿನ್‌ಕುಮಾರ್, ನಿರ್ಮಾಪಕ ರಾಕ್‌ಲೈನ್ ವೆಂಕಟೇಶ್ ಇತರರಿದ್ದರು.

ಮಲ್ಲಿಗೆರೆ ಡೇರಿ ಅಧ್ಯಕ್ಷರಾಗಿ ಎಸ್.ಎಂ.ಕುಮಾರ್ ಆಯ್ಕೆ

ಪಾಂಡವಪುರ, ಜೂ.10– ತಾಲೂಕಿನ ಮಲ್ಲಿಗೆರೆ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಎಸ್.ಎಂ.ಕುಮಾರ್ ಸೋಮವಾರ ಅವಿರೋಧವಾಗಿ ಆಯ್ಕೆಯಾದರು.

ಸಂಘದ ಹಿಂದಿನ ಅಧ್ಯಕ್ಷ ಎಂ.ಕೆ.ರಮೇಶ್ ಅವರ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ಚುನಾವಣೆ ನಿಗದಿಯಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಎಸ್.ಎಂ. ಕುಮಾರ್ ಅವರು ಮಾತ್ರ ನಾಮಪತ್ರ ಸಲ್ಲಿಸಿದರು. ಈ ಹಿನ್ನೆಲೆಯಲ್ಲಿ ಸಂಘದ ನೂತನ ಅಧ್ಯಕ್ಷರನ್ನಾಗಿ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಘೋಷಿಸಲಾಯಿತು.

ಡೇರಿಯ ನೂತನ ಅಧ್ಯಕ್ಷರಾಗಿ ಎಸ್.ಎಂ. ಕುಮಾರ್ ಅವಿರೋಧವಾಗಿ ಆಯ್ಕೆಯಾಗುತ್ತಿದ್ದಂತೆಯೇ ಅವರ ಅಭಿಮಾನಿಗಳು ಸಿಹಿಹಂಚಿ ಸಂಭ್ರಮಿಸಿದರು.

ಅಧ್ಯಕ್ಷ ಎಸ್.ಎಂ.ಕುಮಾರ್ ಮಾತನಾಡಿ, ಮುಂದಿನ ದಿನಗಳಲ್ಲಿ ಎಲ್ಲಾ ನಿರ್ದೇಶಕರ ಜತೆಗೂಡಿ ಸಂಘದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.

ಸಂಘದ ಉಪಾಧ್ಯಕ್ಷ ಮಹೇಂದ್ರಚಾರಿ, ನಿರ್ದೇಶಕರಾದ ಎಂ.ಕೆ.ರಮೇಶ್, ಎಂ.ಪಿ. ಪ್ರದೀಪ್, ಎಂ.ಪ್ರಸನ್ನ, ಉಮೇಶ್, ಎಂ.ಟಿ. ಅಶೋಕ್, ಎಸ್.ರವಿ, ಎಂ.ಟಿ.ಅಣ್ಣೇಗೌಡ, ಸುವರ್ಣ, ನಾಗಮ್ಮ, ಕಾರ್ಯದರ್ಶಿ ರಂಜಿತ್, ಎಂ.ನಾಗರಾಜು, ಚಂದ್ರೇಗೌಡ, ಮುಖಂಡರಾದ ರಘು, ನಿತ್ಯಾನಂದ, ಮಂಜುನಾಥ್, ವಸಂತಕುಮಾರ್, ರಾಮಕೃಷ್ಣೇಗೌಡ, ರಾಜೇಗೌಡ, ಎಂ.ಎಸ್. ಜಗದೀಶ್, ಕೃಷ್ಣೇಗೌಡ, ಚಂದ್ರು, ಎಂ.ಸಿ. ಕುಮಾರ್, ಪಟೇಲ್ ರವಿ, ಪ್ರಸನ್ನ, ಅವಿ, ಸುರೇಶ್, ಸೋಮಶೇಖರ್, ರಾಮು, ಹೇಮೇಗೌಡ, ಸಂಜಯ್, ಎಂ.ಕೆ.ರಾಜೇಶ್, ಎಂ.ಆರ್. ಕುಮಾರ್, ಎಂ.ಎಸ್.ನಾಗರಾಜು, ಎಂ.ಎಸ್.ದೇವರಾಜು ಸೇರಿದಂತೆ ಹಲವರು ಹಾಜರಿದ್ದರು.

ನಾಳೆ ಸಾರ್ವಜನಿಕರಿಂದ ದೂರು ಸ್ವೀಕಾರ

ಮಂಡ್ಯ, ಜೂ.10– ಮಂಡ್ಯ ಲೋಕಾಯುಕ್ತ ವಿಭಾಗದ ಅಧಿಕಾರಿಗಳು ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕು ಕಚೇರಿ ಆವರಣದಲ್ಲಿ ಜೂನ್ 12 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1:30 ಗಂಟೆಯವರೆಗೆ ಸಾರ್ವಜನಿಕರ ಕುಂದುಕೊರತೆ ಸಭೆ ನಡೆಸಿ ಸಾರ್ವಜನಿಕರಿಂದ ದೂರು/ಅಹವಾಲು ಸ್ವೀಕಾರ ಮತ್ತು ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ದೂರುಗಳನ್ನು ಸ್ವೀಕಾರ ಮಾಡಲಿದ್ದಾರೆ.

ಸರ್ಕಾರಿ ಮತ್ತು ಅರೆಸರ್ಕಾರಿ ಕಚೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳು ಸರ್ಕಾರಿ ಕೆಲಸ ಮಾಡಿಕೊಡಲು ಅನಗತ್ಯ ವಿಳಂಬ ಮಾಡಿದ ಬಗ್ಗೆ ಹಾಗೂ ಭ್ರಷ್ಟಾಚಾರದ ಬಗ್ಗೆ ದೂರು/ ಅಹವಾಲುಗಳೇನಾದರೂ ಇದ್ದಲ್ಲಿ ಸ್ವೀಕರಿಸಲಾಗುವುದು. ಲೋಕಾಯುಕ್ತ ಡಿವೈಎಸ್‌ಪಿ ಸುನಿಲ್‌ಕುಮಾರ್ ಹೆಚ್.ಟಿ, ಪೊಲೀಸ್ ಇನ್ಸ್‌ಪೆಕ್ಟರ್ ಮೋಹನ್‌ರೆಡ್ಡಿ ಆರ್.ಎಂ, ಹಾಗೂ ಬ್ಯಾಟರಾಯಗೌಡ. ಬಿ.ಪಿ ಅವರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸುರೇಶ್‌ಬಾಬು ಎಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಮೃತರ ಸಂಖ್ಯೆ ಎರಡಕ್ಕೆ

ಶನಿವಾರ ಲೀಲಾವತಿ ತಂದೆ ಮಹದೇವ ನಾಯಕ (65) ಮೃತಪಟ್ಟಿದ್ದರು. ಇನ್ನೂ ಅಸ್ವಸ್ಥರಾಗಿರುವ ಮಹದೇವನಾಯಕ ಪತ್ನಿ ಗೌರಮ್ಮ ಹಾಗೂ ಮೊಮ್ಮಗಳು ರಿಷಿಕಾ ಸ್ಥಿತಿ ಚಿಂತಾಜನಕವಾಗಿದ್ದು, ಚಾಮರಾಜನಗರ ಸಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರೆಸಲಾಗಿದೆ.

ಸಿಮ್ಸ್ ಆಸ್ಪತ್ರೆಗೆ ಸಚಿವದ್ವಯರ ಭೇಟಿ: ತಾಳಬೆಟ್ಟದಲ್ಲಿ ಆತ್ಮಹತ್ಯೆಗೆ ಯತ್ನಿಸಿ ಅಸ್ವಸ್ಥರಾಗಿ ನಗರದ ವೈದ್ಯಕೀಯ ಕಾಲೇಜು (ಸಿಮ್ಸ್) ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕೆ.ಆರ್.ನಗರ ತಾಲೂಕಿನ ಚಂದಗಾಲು ಗ್ರಾಮದ ಮಹದೇವ ನಾಯಕರ ಪತ್ನಿ ಗೌರಮ್ಮ ಹಾಗೂ ಮೊಮ್ಮಗಳನ್ನು ಭೇಟಿ ಮಾಡಿದ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ವೆಂಕಟೇಶ್ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಡಾ.ಹೆಚ್.ಸಿ. ಮಹದೇವಪ್ಪ ಆರೋಗ್ಯ ವಿಚಾರಿಸಿ, ವೈದ್ಯರಿಂದ ಮಾಹಿತಿ ಪಡೆದರು.

ಇದೇ ವೇಳೆ ಸ್ಥಳದಲ್ಲಿದ್ದ ವೈದ್ಯರಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ಸೂಚಿಸಿದ ಸಚಿವರು, ಇವರು ಆಸ್ಪತ್ರೆಗೆ ದಾಖಲಾದ ಸಂದರ್ಭದಲ್ಲಿ ಆರೋಗ್ಯ ಪರಿಸ್ಥಿತಿ ಹೇಗಿತ್ತು, ಈಗ ಹೇಗಿದೆ ಎಂಬುದರ ಮಾಹಿತಿ ಪಡೆದರು. ಬಳಿಕ ಸಚಿವರು ನಿಮಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲಾಗುವುದು, ನೀವು ಧೈರ್ಯವಾಗಿರಿ ಎಂದು ಮಹದೇವ ನಾಯಕರ ಪತ್ನಿ ಗೌರಮ್ಮ ಹಾಗೂ ಮೊಮ್ಮಗಳು ರಿಷಿಕಾಗೆ ಭರವಸೆ ನೀಡಿದರು.

ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್.ಕೃಷ್ಣಮೂರ್ತಿ, ಡಿ.ರವಿಶಂಕರ್, ಕಾಡಾ ಅಧ್ಯಕ್ಷರಾದ ಮರಿಸ್ವಾಮಿ, ಚಾ.ನಗರ ಜಿಲ್ಲಾಧಿಕಾರಿ ಶಿಲ್ಪನಾಗ್, ಮೈಸೂರು ಜಿಲ್ಲಾಧಿಕಾರಿ ಕೆ.ವಿ.ರಾಜೇಂದ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಉಪ ಅರಣ್ಯ ಸಂರಕ್ಷಣಾಧಿಕಾರಿ ದೀಪಾ ಜೆ.ಕಂಟ್ರಾಕ್ಟರ್ ಉಪಸ್ಥಿತದ್ದರು.

ಅಕ್ವೇರಿಯಂ ಯೋಜನೆ ಮತ್ತೆ ಮುನ್ನೆಲೆಗೆ

ರಾಜ್ಯದಲ್ಲಿರುವ ವಿವಿಧ ಮೃಗಾಲಯಗಳಿಗೆ ಹೆಚ್ಚು ಪ್ರವಾಸಿಗರನ್ನು ಸೆಳೆಯಲು ಮತ್ತು ಆದಾಯ ಹೆಚ್ಚಿಸಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಪರಾಮರ್ಶೆ ನಡೆಸಲಾಯಿತು. ಮೃಗಾಲಯಗಳಲ್ಲಿ ವನ್ಯಜೀವಿ ಪಶುವೈದ್ಯರ ಕೊರತೆ ನೀಗಿಸಲು ಮತ್ತು ಮೃಗಾಲಯದ ವನ್ಯಜೀವಿಗಳು ಸೋಂಕು ರೋಗಗಳಿಂದ ಸಾವಿಗೀಡಾಗದಂತೆ ಎಚ್ಚರ ವಹಿಸಲು ಪಶುವೈದ್ಯರ ನೇಮಕಾತಿ, ಚಿತ್ರದುರ್ಗದ ಆಡು ಮಲ್ಲೇಶ್ವರ ಕಿರು ಮೃಗಾಲಯಕ್ಕೆ ಸ್ಥಳೀಯ ಪಶುವೈದ್ಯಾಧಿಕಾರಿಗಳ ಸೇವೆ ಪಡೆಯಲು ಘಟನೋತ್ತರ ಅನುಮೋದನೆ ನೀಡಲಾಯಿತು.

ಗದಗ ಮೃಗಾಲಯದ ವಿಸ್ತರಣೆ ಮತ್ತು ಅಭಿವೃದ್ಧಿಗೆ 13.20 ಎಕರೆ ಭೂಸ್ವಾಧೀನ ಮತ್ತು ಮೃಗಾಲಯದ ಸಿಬ್ಬಂದಿಗೆ ರಿಯಾಯಿತಿ ದರದಲ್ಲಿ ಮಧ್ಯಾಹ್ನದ ಊಟ ಪೂರೈಕೆ ಪ್ರಸ್ತಾವನೆಗಳಿಗೆ ಸಮ್ಮತಿ ದೊರಕಿತು.

ಬನ್ನೇರುಘಟ್ಟ ಜೈವಿಕ ಉದ್ಯಾನದ ಪ್ರಾಣಿ–ಪಕ್ಷಿಗಳಿಗೆ ಮತ್ತು ಪ್ರವಾಸಿಗರಿಗೆ ಅನುಕೂಲವಾಗುವಂತೆ ಬೆಂಗಳೂರು ಜಲಮಂಡಳಿಯಿಂದ ಕಾವೇರಿ ನೀರು ಒದಗಿಸಲು ಈಗಾಗಲೇ ಸರ್ಕಾರ ಅನುಮತಿ ನೀಡಿದ್ದು, ಕೊಳವೆ ಮಾರ್ಗ ಅಳವಡಿಕೆ ಕಾಮಗಾರಿ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ನೀರು ಹರಿಸಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಯಿತು.

ಅಲ್ಲದೆ, ಬನ್ನೇರುಘಟ್ಟ ಉದ್ಯಾನದಲ್ಲಿ ನೇರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು 21 ಸಾವಿರ ಮಾಸಿಕ ವೇತನ ಮೀರಿದ 153 ಸಿಬ್ಬಂದಿಗೆ ಸಿಜಿಎಚ್‌ಎಸ್ ದರದಂತೆ ವೈದ್ಯಕೀಯ ವೆಚ್ಚ ಭರಿಸುವ ಪ್ರಸ್ತಾವನೆಗೆ ಅನುಮೋದನೆ ನೀಡಲಾಯಿತು. ಬನ್ನೇರುಘಟ್ಟ ಜೈವಿಕ ಉದ್ಯಾನದಲ್ಲಿ ಈಗಿರುವ ಸಿಂಹ, ಹುಲಿ ಸಫಾರಿ ಜೊತೆಗೆ ಈ ತಿಂಗಳಾಂತ್ಯದೊಳಗೆ ಚಿರತೆ ಸಫಾರಿ ಆರಂಭಿಸಲು ಇದೇ ವೇಳೆ ಸಚಿವರು ಸೂಚಿಸಿದರು.

ಬನ್ನೇರುಘಟ್ಟ ರಾಷ್ಟ್ರೀಯ ಜೈವಿಕ ಉದ್ಯಾನದಲ್ಲಿ ಪಿಪಿಪಿ ಮಾದರಿಯಲ್ಲಿ ಸಿಹಿ ನೀರು ಮತ್ತು ಉಪ್ಪುನೀರಿನ ಮತ್ಸ್ಯಾಗಾರಗಳ ಪರಿಕಲ್ಪನೆ ಅಧ್ಯಯನ ಮತ್ತು ಕಾರ್ಯಸಾಧ್ಯತೆ ವರದಿ ಪರಿಶೀಲಿಸಿ, ಜಾಗತಿಕ ಮಾನದಂಡಗಳ ರೀತ್ಯ ಮತ್ಸ್ಯಾಗಾರ ನಿರ್ಮಿಸಬೇಕು. ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನ ವ್ಯಾಪ್ತಿಯಲ್ಲಿನ ರಣಹದ್ದು ಸಂರಕ್ಷಣಾ ಸಂತಾನೋತ್ಪತ್ತಿ ಕೇಂದ್ರವನ್ನು ಬನ್ನೇರುಘಟ್ಟ ಜೈವಿಕ ಉದ್ಯಾನವನದ ಸ್ಯಾಟಲೈಟ್ ಕೇಂದ್ರವಾಗಿ ಕಾರ್ಯನಿರ್ವಹಣೆಗೆ ಕ್ರಮ ವಹಿಸಬೇಕು ಎಂದು ತಿಳಿಸಿದರು. ಸಭೆಯಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಸುಭಾಷ್ ಮಾಲ್ಕಡೆ ಮತ್ತಿತರ ಅಧಿಕಾರಿಗಳು ಪಾಲ್ಗೊಂಡಿದ್ದರು.

ಬಾಯ್ಮುಚ್ಚಿಕೊಂಡಿರಿ

ತಿದ್ದಿಕೊಳ್ಳಬೇಕು, ಅದಕ್ಕಾಗಿಯೇ ವರಿಷ್ಠರು ವರದಿ ಕೇಳಿದ್ದಾರೆ. ಮುಂದೆ ಜಿಲ್ಲಾ, ತಾಲೂಕು ಪಂಚಾಯತ್ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆ ಎದುರಾಗಲಿವೆ. ಈ ವೇಳೆಗೆ ನಮ್ಮ ತಪ್ಪನ್ನು ನಾವು ತಿದ್ದಿಕೊಳ್ಳಬೇಕು. ತಪ್ಪು ತಿದ್ದಿಕೊಳ್ಳುವ ಬದಲು ದೋಷಾರೋಪಣೆ ಮಾಡುವುದರಿಂದ ಏನೂ ಪ್ರಯೋಜನವಿಲ್ಲ, ನನ್ನ ಬಳಿ ಯಾವುದೇ ಮುಖಂಡರು ಚುನಾವಣೆಯಲ್ಲಿ ಹಿನ್ನಡೆ ಆಯಿತು ಎಂದು ಹೇಳಿಲ್ಲ, ದೂರು ನೀಡಿಲ್ಲ. ಆದರೂ ಜನರ ತಿರಸ್ಕಾರಕ್ಕೆ ಕಾರಣ ಏನಿರಬಹುದು ಎಂಬುದನ್ನು ತಿಳಿಯುವುದು ನಮಗೆ ಅಗತ್ಯವಿದೆ. ಅದಕ್ಕಾಗಿ ಉಸ್ತುವಾರಿಗಳು ಪೂರ್ಣ ವರದಿ ನೀಡಬೇಕು ಎಂದರು.

3 ಕೋಟಿ ಮನೆ ನಿರ್ಮಾಣಕ್ಕೆ ನೆರವು

ಮೋದಿ ಸಂಪುಟದ ಮೊದಲ ಸಭೆಯಲ್ಲಿ ತೀರ್ಮಾನ



ನವದೆಹಲಿ, ಜೂ.10– ಪ್ರಧಾನ ಮಂತ್ರಿ ಆವಾಸ್ ಯೋಜನೆ (ಪಿಎಂಎವೈ) ಅಡಿಯಲ್ಲಿ 3 ಕೋಟಿ ಮನೆಗಳ ನಿರ್ಮಾಣಕ್ಕೆ ಅಗತ್ಯ ನೆರವು ಒದಗಿಸಲು ಎನ್‌ಡಿಎ ಸರ್ಕಾರದ ಮೊದಲ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ದೆಹಲಿಯ ಲೋಕ ಕಲ್ಯಾಣ ಮಾರ್ಗದಲ್ಲಿರುವ ಪ್ರಧಾನಿಯವರ ಅಧಿಕೃತ ನಿವಾಸದಲ್ಲಿ ಕೇಂದ್ರ ಸಂಪುಟ ಸಭೆ ನಡೆದಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ಮೂರನೇ ಅವಧಿಗೆ ದೇಶದ ಪ್ರಧಾನಿಯಾದ ಬಳಿಕ ನಡೆದ ಮೊದಲ ಸಭೆ ಇದಾಗಿದೆ. ಪಿಎಂಎವೈ ಯೋಜನೆಗೆ ಅರ್ಹ ಕುಟುಂಬಗಳ ಸಂಖ್ಯೆ ಹೆಚ್ಚಾಗಿರುವುದನ್ನು ಪರಿಗಣಿಸಿ, ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ 3 ಕೋಟಿ ಮನೆಗಳ ನಿರ್ಮಾಣಕ್ಕೆ ಅಗತ್ಯ ನೆರವು ನೀಡಲು ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಮನೆಗಳ ನಿರ್ಮಾಣಕ್ಕೆ ನೆರವು ನೀಡುವ ಪಿಎಂಎವೈ ಯೋಜನೆಯನ್ನು ಕೇಂದ್ರ ಸರ್ಕಾರವು 2015–16ರಲ್ಲಿ ಜಾರಿಗೊಳಿಸಿದೆ. ಈ ಯೋಜನೆ ಅಡಿಯಲ್ಲಿ, ಇದುವರೆಗೆ 4.21 ಕೋಟಿ ಮನೆಗಳು ನಿರ್ಮಾಣವಾಗಿವೆ.

ಪರೀಕ್ಷೆಯಾಗಬೇಕಿದೆ!

ನಂತರ ಮೃಗಾಲಯ ಅಧಿಕಾರಿಗಳು ಹಲವು ಅಕ್ವೇರಿಯಂಗಳ ಬಗ್ಗೆ ಮಾಹಿತಿ ಕಲೆಹಾಕಿದರು. ಪಿಪಿಪಿ ಮಾದರಿಯಲ್ಲಿ ಅಕ್ವೇರಿಯಂ ಪೂರ್ಣ ಗೊಳಿಸಲು

ಮೃಗಾಲಯ ಪ್ರಾಧಿಕಾರ ಸಮ್ಮತಿ ನೀಡಿತ್ತಾದರೂ ಕಾರಣಾಂತರಗಳಿಂದ ಅಕ್ವೇರಿಯಂ ಕಾಮಗಾರಿ ವಿಳಂಬವಾಗಿತ್ತು. ಇದೀಗ ಕೋಟ್ಯಾಂತರ ರೂ. ವೆಚ್ಚದಲ್ಲಿ ನಿರ್ಮಿಸಿರುವ ಕಟ್ಟಡವನ್ನು ಸದ್ಬಳಕೆ ಮಾಡಿಕೊಳ್ಳುವ ಗಂಭೀರ ಪ್ರಯತ್ನ ನಡೆದಿದೆ.

ಕಟ್ಟಡ ನಿರ್ಮಿಸಿ 14 ವರ್ಷವಾಗಿದ್ದು, ಕಟ್ಟಡದ ಭದ್ರತೆಯನ್ನು ತಾಂತ್ರಿಕ ಪರಿಣಿತರ ಪರಿಶೀಲಿಸಿ, ದೃಢಪಡಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ತಾಂತ್ರಿಕ ಪರಿಶೀಲನೆಗಾಗಿ ಟ್ರಾನ್ಸಾಕ್ಷನ್ ಅಡ್ವೈಸರ್ ಕನ್ಸಲ್ಟೆನ್ಸಿ ಏಜೆನ್ಸಿಯ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ. ಏಜೆನ್ಸಿ ತಜ್ಞರು ಕಟ್ಟಡವನ್ನು ತಾಂತ್ರಿಕವಾಗಿ ಪರಿಶೀಲಿಸಿ, ಡಿಪಿಆರ್ ಸಿದ್ಧಪಡಿಸಿದ ನಂತರ ಪಿಪಿಪಿ ಮಾದರಿಯಲ್ಲಿ ಟೆಂಡರ್ ಕರೆದು ಅಕ್ವೇರಿಯಂ ಕಾಮಗಾರಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ಎಂದು ಮೃಗಾಲಯ ಕಾರ್ಯನಿರ್ವಾಹಕ ನಿರ್ದೇಶಕ ಡಿ.ಮಹೇಶ್ ಕುಮಾರ್ ಇತ್ತೀಚೆಗೆ ತಿಳಿಸಿದ್ದರು..

ಹೋಟೆಲ್‌ಗಳಲ್ಲಿ ಕೆಎಸ್‌ಆರ್‌ಟಿಸಿ ಬಸ್ ನಿಲುಗಡೆಗೆ ಮಾರ್ಗಸೂಚಿ

ಕಂಡ ಕಂಡ ಹೋಟೆಲ್, ಡಾಬಾ ಮುಂದೆ ಸಾರಿಗೆ ಬಸ್ ನಿಲ್ಲಿಸುವಂತಿಲ್ಲ...! ● ಕೆಎಸ್‌ಆರ್‌ಟಿಸಿ ಜೊತೆ ಹೋಟೆಲ್‌ಗಳ ಒಪ್ಪಂದ ● ನಿಗದಿತ ದರ, ಶುಚಿತ್ವಕ್ಕೆ ಒತ್ತು ● ಶೌಚಾಲಯಗಳಲ್ಲಿ ಹಣ ವಸೂಲಿಗೆ ಕಡಿವಾಣ ● ದಿಢೀರ್ ಭೇಟಿಗೆ ಅಧಿಕಾರಿಗಳ ಜಂಟಿ ತಂಡ ರಚನೆ ● ತಿಂಗಳಿಗೊಮ್ಮೆ ವರದಿ ಸಲ್ಲಿಕೆಗೆ ತಾಕೀತು

● ಬಾಪುಲಿಂಗರಾಜ್ ಅರಸ್

ಮೈಸೂರು, ಜೂ.10– ಪ್ರಯಾಣದ ವೇಳೆ ಪ್ರಯಾಣಿಕರ ಊಟೋಪಚಾರ, ಲಘು ವಿಶ್ರಾಂತಿ, ನೈಸರ್ಗಿಕ ಕರೆಗೆ ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ಅವುಗಳ ಚಾಲಕರು ಇನ್ನು ಮುಂದೆ ತಮಗಿಷ್ಟ ಬಂದ ಸ್ಥಳಗಳಲ್ಲಿ ನಿಲುಗಡೆ ಮಾಡುವಂತಿಲ್ಲ. ಮೈಸೂರು ಸೇರಿದಂತೆ ರಾಜ್ಯದ ವಿವಿಧ ಸ್ಥಳಗಳಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಒಪ್ಪಂದ ಮಾಡಿಕೊಳ್ಳುವ ಹೋಟೆಲ್‌ಗಳಲ್ಲಿ ಮಾತ್ರ ಬಸ್ ನಿಲುಗಡೆ ಮಾಡುವಂತೆ ಕಟ್ಟುನಿಟ್ಟಿನ ಆದೇಶ ಹೊರಡಿಸಲಾಗಿದೆ. ಇದನ್ನು ಉಲ್ಲಂಘನೆ ಮಾಡಿದರೆ ಕೆಎಸ್‌ಆರ್‌ಟಿಸಿ ಚಾಲನಾ ಸಿಬ್ಬಂದಿ ಮತ್ತು ಹೋಟೆಲ್‌ಗಳಿಗೆ ದಂಡ ವಿಧಿಸಲಾಗುವುದು ಎಂದು ಕಠಿಣ ಎಚ್ಚರಿಕೆ ನೀಡಲಾಗಿದೆ.

ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ರಯಾಣ ಮಾಡುವ ವೇಳೆ ಕೆಲವು ಚಾಲಕರು ತಮಗಿಷ್ಟ ಬಂದ ಹೋಟೆಲ್ ಹಾಗೂ ಡಾಬಾಗಳಲ್ಲಿ ಬಸ್ ನಿಲುಗಡೆ ಮಾಡುತ್ತಿದ್ದರು. ಹೋಟೆಲ್ ಹಾಗೂ ಚಾಲಕರ ವೈಯಕ್ತಿಕ ಹಿತಾಸಕ್ತಿಗೆ ಬ್ರೇಕ್ ಹಾಕಲಾಗಿದೆ. ಅನಧಿಕೃತ ಬಸ್ ನಿಲುಗಡೆಯ ಹೋಟೆಲ್ ಹಾಗೂ ಡಾಬಾಗಳಲ್ಲಿ ಆಹಾರ ಪದಾರ್ಥಗಳ ಬೆಲೆ ದುಬಾರಿಯಾಗಿರುತ್ತಿತ್ತು. ಜೊತೆಗೆ ಅಶುಚಿತ್ವ ಪ್ರಯಾಣಿಕರಿಗೆ ರಾಚುತ್ತಿತ್ತು. ಅಲ್ಲದೆ ಶೌಚಾಲಯಕ್ಕೂ ಹಣ ಪಾವತಿಸುವ ಅನಿವಾರ್ಯತೆ ಇತ್ತು.

ದಾರಿ ಮಧ್ಯೆ ಕಾಣಿಸುವ ಉತ್ತಮ ಹೋಟೆಲ್‌ನಲ್ಲಿ ಬಸ್ ನಿಲ್ಲಿಸುವಂತೆ ಪ್ರಯಾಣಿಕರು ಗೋಗರೆದರೂ ಕಿವಿಗೊಡದ ಚಾಲಕರು ತಮ್ಮ ಹಿತಾಸಕ್ತಿಗನುಗುಣವಾಗಿಯೇ ಬಸ್ ನಿಲುಗಡೆ ಮಾಡುತ್ತಿದ್ದರು. ಇದರಿಂದ ಪ್ರಯಾಣಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದರು.

ಚಾಲಕರು ತಮ್ಮಿಚ್ಛೆಯಂತೆ ಮನಬಂದಂತೆ ಬಸ್ ನಿಲ್ಲಿಸುತ್ತಿದ್ದರು. ಅಂತಹ ಹೋಟೆಲ್‌ಗಳಲ್ಲಿ ತಿಂಡಿ–ತಿನಿಸು ಬೆಲೆ ದುಬಾರಿಯಾಗಿರುತ್ತಿತ್ತು, ಅಶುಚಿತ್ವ ಇರುತ್ತಿತ್ತು ಜೊತೆಗೆ ಶೌಚಾಲಯಗಳಲ್ಲಿ ಹಣ ವಸೂಲಿ ಮಾಡುತ್ತಿದ್ದರು.

ಈ ಬಗ್ಗೆ ಬಹಳಷ್ಟು ಪ್ರಯಾಣಿಕರು ಸರ್ಕಾರ ಹಾಗೂ ಕರ್ನಾಟಕ ರಾಜ್ಯ ರಸ್ತೆ ನಿಗಮಕ್ಕೆ ದೂರು ನೀಡುತ್ತ ಬಂದಿದ್ದರು. ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿರುವ ಕೆಎಸ್‌ಆರ್‌ಟಿಸಿ ಈಗ ಲಘು ವಿಶ್ರಾಂತಿ, ನೈಸರ್ಗಿಕ ಕರೆ, ಊಟೋಪಚಾರಕ್ಕಾಗಿ ಬಸ್ ನಿಲುಗಡೆಗೆ ಮಾರ್ಗಸೂಚಿ ಹೊರಡಿಸಿದೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಈ ಸಂಬಂಧ ಆದೇಶ ಹೊರಡಿಸಿದ್ದಾರೆ. ಈ ನಿಯಮ ಪಾಲಿಸದಿದ್ದರೆ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು, ಹಾಸನ ಸೇರಿದಂತೆ ಕರ್ನಾಟಕದ ಪ್ರತಿಯೊಂದು ಜಿಲ್ಲೆಯಲ್ಲೂ ಕೆಎಸ್‌ಆರ್‌ಟಿಸಿಯ ವಿಭಾಗೀಯ ನಿಯಂತ್ರಣಾಧಿಕಾರಿ ಕಚೇರಿ ಬಸ್ ನಿಲುಗಡೆ ಮಾಡುವ ಹೋಟೆಲ್‌ಗಳ ಜೊತೆ ಒಪ್ಪಂದ ಮಾಡಿಕೊಂಡು ವರದಿಯನ್ನು ಕಡ್ಡಾಯವಾಗಿ ಕೇಂದ್ರ ಕಚೇರಿಗೆ ಸಲ್ಲಿಸಬೇಕಾಗಿದೆ.

ಈ ಒಪ್ಪಂದದಂತೆ ಆಹಾರ ಪದಾರ್ಥಗಳಿಗೆ ನಿಗದಿ ಮಾಡಿರುವಷ್ಟು ಹಣ ಮಾತ್ರ ಪಡೆಯಬೇಕು, ಶುಚಿತ್ವ ಕಾಪಾಡಬೇಕು, ಶೌಚಾಲಯಕ್ಕೆ ಹಣ ಪಡೆಯಬಾರದು ಎಂದು ತಾಕೀತು ಮಾಡಲಾಗಿದೆ.

ಒಂದು ವೇಳೆ ನಿಗದಿತ ಬೆಲೆಗಿಂತ ಹೆಚ್ಚು ಹಣ ಪಡೆಯುತ್ತಿದ್ದರೆ, ಶುಚಿತ್ವ ಕಾಪಾಡದಿದ್ದರೆ, ಶೌಚಾಲಯದಲ್ಲಿ ಹಣ ವಸೂಲಿ ಮಾಡುತ್ತಿದ್ದರೆ ಅಧಿಕಾರಿಗಳು ದಂಡ ವಿಧಿಸಬೇಕು ಎಂದು ಸೂಚಿಸಲಾಗಿದೆ.

ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳು ವಿಭಾಗೀಯ ಸಂಚಾರ ಅಧಿಕಾರಿ ಮತ್ತು ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರ ಜಂಟಿ ತಂಡ ರಚಿಸಬೇಕು.

ಆ ತಂಡ ಪ್ರತಿ ತಿಂಗಳು ಒಪ್ಪಂದ ಏರ್ಪಟ್ಟಿರುವ ಹೋಟೆಲ್‌ಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. 50 ಕ್ಕಿಂತ ಕಡಿಮೆ ಬಸ್‌ಗಳು ನಿಲುಗಡೆ ಹೊಂದುವ ಹೋಟೆಲ್‌ಗಳಿಗೆ ಪ್ರತಿ ತಿಂಗಳು ಹಾಗೂ 50 ಕ್ಕಿಂತ ಹೆಚ್ಚು ಬಸ್‌ಗಳು ನಿಲುಗಡೆ ಹೊಂದುವ ಹೋಟೆಲ್‌ಗಳ ಮೇಲೆ 15 ದಿನಕ್ಕೊಮ್ಮೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಬೇಕು. ಈ ಮೂಲಕ ಹೋಟೆಲ್ ಮಾಲೀಕರು ಒಪ್ಪಂದ ಪಾಲಿಸುತ್ತಿದ್ದಾರೆಯೇ ಎಂದು ಗಮನಿಸಬೇಕು.

ಅದಾಗಿಯೂ ಬಸ್ ನಿಲುಗಡೆ ಮಾಡಿರುವ ಹೋಟೆಲ್‌ಗಳಲ್ಲಿ ಹೆಚ್ಚಿನ ದರ ನಿಗದಿ, ಅಶುಚಿತ್ವ ಹಾಗೂ ಶೌಚಾಲಯಗಳಲ್ಲಿ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಪ್ರಯಾಣಿಕರು ದೂರು ನೀಡಿದರೆ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಆದೇಶ ನೀಡಲಾಗಿದೆ.

ಹೋಟೆಲ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡುವ ನಿರ್ಧಾರವನ್ನು ಅಧಿಕಾರಿಗಳಿಗೆ ನೀಡಲಾಗಿದೆ. ಹೀಗೆ ಪರಿಶೀಲನೆ ನಡೆಸಿದ ವರದಿಯನ್ನು ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರತಿ ತಿಂಗಳ 10 ನೇ ತಾರೀಖಿನೊಳಗೆ ಕೇಂದ್ರ ಕಚೇರಿಗೆ ಸಲ್ಲಿಸಬೇಕು. ಈ ಮೂಲಕ ಕೇಂದ್ರ ಕಚೇರಿ ಈ ಎಲ್ಲಾ ಪ್ರಕ್ರಿಯೆಗಳನ್ನು ನಿಯಂತ್ರಿಸುತ್ತಿರುತ್ತದೆ.

ಒಂದು ವೇಳೆ ಹೋಟೆಲ್‌ನವರು ತಿಂಡಿ–ತಿನಿಸುಗಳ ದರ ಪರಿಷ್ಕರಣೆ ಮಾಡಬೇಕಾದರೆ ವಿಭಾಗೀಯ ನಿಯಂತ್ರಣಾಧಿಕಾರಿಗಳ ಅನುಮತಿ ಕಡ್ಡಾಯವಾಗಿರುತ್ತದೆ. ಒಂದು ವೇಳೆ ಹೋಟೆಲ್ ನವರು ಒಪ್ಪಂದ ಉಲ್ಲಂಘನೆಮಾಡಿದರೆ ಕರಾರು ರದ್ದು ಮಾಡಲು ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಅಧಿಕಾರವಿರುತ್ತದೆ.



ನಿಯಮ ಉಲ್ಲಂಘಿಸಿದರೆ ಸಿಬ್ಬಂದಿಗೆ ದಂಡ

ನಮ್ಮ ವ್ಯಾಪ್ತಿಯಲ್ಲಿರುವ ಹಲವು ಉತ್ತಮ ಹೋಟೆಲ್‌ಗಳನ್ನು ಗುರುತಿಸಲಾಗಿದೆ. ಈಗಾಗಲೇ ಕೆಲವು ಹೋಟೆಲ್‌ಗಳ ಜೊತೆ ಒಪ್ಪಂದ ಕೂಡ ಮಾಡಿಕೊಳ್ಳಲಾಗಿದೆ. ಇನ್ನೂ ಕೆಲವು ಹೋಟೆಲ್‌ಗಳ ಜೊತೆ ಒಪ್ಪಂದ ಮಾಡಿಕೊಳ್ಳುವ ಪ್ರಕ್ರಿಯೆ ಮುಂದುವರೆಯುತ್ತಿದೆ.

ಕೆಎಸ್‌ಆರ್‌ಟಿಸಿ ಒಪ್ಪಂದ ಮಾಡಿಕೊಂಡಿರುವ ಹೋಟೆಲ್ ಬಿಟ್ಟು ಬೇರೆ ಕಡೆ ಬಸ್ ನಿಲುಗಡೆ ಮಾಡಿದರೆ ಚಾಲನಾ ಸಿಬ್ಬಂದಿ ಮತ್ತು ಹೋಟೆಲ್ ಮಾಲೀಕರಿಗೆ ದಂಡ ವಿಧಿಸಲಾಗುವುದು. ಪ್ರಯಾಣದ ವೇಳೆ ಹೋಟೆಲ್‌ಗಳಲ್ಲಿ ಬಸ್ ನಿಲುಗಡೆ ಮಾಡುವ ಸಂಬಂಧ ಹೋಟೆಲ್‌ಗಳ ಜೊತೆ ಒಪ್ಪಂದ ಮಾಡಿಕೊಳ್ಳುವ ಬಗ್ಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ಮಾರ್ಗಸೂಚಿ ಹೊರಡಿಸಲಾಗಿದೆ.

ಅದರಂತೆ ವಿಭಾಗೀಯ ನಿಯಂತ್ರಣಾಧಿಕಾರಿ ಕಚೇರಿ ಒಪ್ಪಂದ ಮಾಡಿಕೊಳ್ಳಲಿದೆ. ಇದನ್ನು ನಮ್ಮ ಚಾಲನಾ ಸಿಬ್ಬಂದಿ ಕಟ್ಟುನಿಟ್ಟಾಗಿ ಪಾಲಿಸಬೇಕು.

ಒಪ್ಪಂದ ಮಾಡಿಕೊಂಡ ಹೋಟೆಲ್ ನವರು ನಿಗದಿತ ದರದಲ್ಲೇ ತಿಂಡಿ ತಿನಿಸು ಮಾರಾಟ ಮಾಡಬೇಕು. ಶುಚಿತ್ವ ಕಾಪಾಡಬೇಕು, ಶೌಚಾಲಯಗಳಲ್ಲಿ ಹಣ ವಸೂಲಿ ಮಾಡಬಾರದು.

ಒಪ್ಪಂದ ಪಾಲನೆ ಮಾಡಲಾಗುತ್ತಿದೆಯೇ ಎಂದು ಖಚಿತಪಡಿಸಿಕೊಳ್ಳಲು ಅಧಿಕಾರಿಗಳಿಂದ ಜಂಟಿ ಪರಿಶೀಲನೆ ಮಾಡಲಾಗುವುದು. ಒಂದು ವೇಳೆ ಒಪ್ಪಂದ ಉಲ್ಲಂಘನೆ ಆಗಿದ್ದರೆ ಕರಾರು ರದ್ದು ಮಾಡಿಕೊಳ್ಳಲಾಗುವುದು.

-ಶ್ರೀನಿವಾಸ್, ವಿಭಾಗೀಯ ನಿಯಂತ್ರಣಾಧಿಕಾರಿ, ಕೆಎಸ್‌ಆರ್ ಟಿಸಿ, ಮೈಸೂರು.

ಹೋಟೆಲ್, ಡಾಬಾಗಳಿಗೂ ದಂಡ

ಕೆಎಸ್‌ಆರ್‌ಟಿಸಿ ಒಪ್ಪಂದ ಮಾಡಿಕೊಳ್ಳದ ಹೋಟೆಲ್, ಡಾಬಾಗಳಲ್ಲಿ ಬಸ್ ನಿಲುಗಡೆ ಮಾಡಿದರೆ ಚಾಲನಾ ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಆದೇಶದಲ್ಲಿ ಎಚ್ಚರಿಕೆ ನೀಡಲಾಗಿದೆ.

ಅಲ್ಲದೆ ಇಂತಹ ಹೋಟೆಲ್ ಹಾಗೂ ಡಾಬಾಗಳಿಗೂ ದಂಡ ವಿಧಿಸಲಾಗುವುದು ಎಂದು ಎಚ್ಚರಿಸಲಾಗಿದೆ.

ಆಸನ ಕಾಯ್ದಿರಿಸುವ ಬಸ್‌ಗಳಲ್ಲಿ ಪ್ರಯಾಣಿಕರಿಗೆ ವಿತರಣೆ ಮಾಡುವ ಮುಂಗಡ ಟಿಕೆಟ್‌ನಲ್ಲಿ ಊಟೋಪಚಾರಕ್ಕೆ ನಿಲುಗಡೆ ಮಾಡುವ ಹೋಟೆಲ್ ಹೆಸರು ನಮೂದಿಸಬೇಕಾಗಿದೆ.

ಇದರಿಂದ ಇಂತಹ ಊರಿನಲ್ಲಿ, ಇಂತಹ ಹೋಟೆಲ್ ಮುಂದೆ ಬಸ್ ನಿಲುಗಡೆ ಆಗಲಿದೆ ಎಂಬ ಖಚಿತ ಮಾಹಿತಿ ಪ್ರಯಾಣಿಕರಿಗೆ ಇರುತ್ತದೆ.

ಕೆಎಸ್‌ಆರ್‌ಟಿಸಿ ಕೈಗೊಂಡಿರುವ ಈ ಕ್ರಮದಿಂದ ಪ್ರಯಾಣಿಕರಿಗೆ ಇನ್ನು ಮುಂದೆ ಕಿರಿಕಿರಿ ತಪ್ಪುತ್ತದೆ. ನಿಗದಿತ ದರ ಕೊಟ್ಟು, ಶುಚಿತ್ವವಿರುವ ಹೋಟೆಲ್‌ನಲ್ಲಿ ಉಪಾಹಾರ ಹಾಗೂ ಊಟ ಸೇವಿಸಬಹುದು. ಜೊತೆಗೆ ಶೌಚಾಲಯಕ್ಕೆ ಹಣ ಕೊಡುವ ಪ್ರಮೇಯ ಕೂಡ ಇರುವುದಿಲ್ಲ.

ಮೈಸೂರು ಮಿತ್ರ ಮಂಗಳವಾರ 11 ಜೂನ್ 2024

ಅಶಾದ್ ಉರ್ ರೆಹಮಾನ್ ಷರೀಫ್ ಮತ್ತೆ ಮೈಸೂರು ಪಾಲಿಕೆ ಆಯುಕ್ತರು


ಅಶಾದ್ ಉರ್ ರೆಹಮಾನ್ ಷರೀಫ್

ಮೈಸೂರು,ಜೂ.10(ಆರ್‌ಕೆ)– 2024ರ ಲೋಕಸಭಾ ಸಾರ್ವತ್ರಿಕ ಚುನಾವಣಾ ನೀತಿಸಂಹಿತೆ ಹಿನ್ನೆಲೆಯಲ್ಲಿ ವರ್ಗಾವಣೆಗೊಂಡಿದ್ದ ಕರ್ನಾಟಕ ಮುನಿಸಿಪಲ್ ಅಡ್ಮಿನಿಸ್ಟ್ರೇಟಿವ್ ಸರ್ವೀಸ್ (ಕೆಎಂಎಎಸ್) ಹಿರಿಯ ಅಧಿಕಾರಿ ಅಶಾದ್ ಉರ್ ರೆಹಮಾನ್ ಷರೀಫ್ ಅವರು ಇಂದು ಮೈಸೂರು ಮಹಾನಗರ ಪಾಲಿಕೆ ಆಯುಕ್ತರಾಗಿ ಮತ್ತೆ ಅಧಿಕಾರ ವಹಿಸಿಕೊಂಡರು.

2023ರ ಆಗಸ್ಟ್ ತಿಂಗಳಲ್ಲಿ ಮೈಸೂರು ಮಹಾನಗರ ಪಾಲಿಕೆ ಆಯುಕ್ತರಾಗಿ ನಿಯೋಜನೆಗೊಂಡಿದ್ದ ಅವರನ್ನು ಲೋಕಸಭಾ ಚುನಾವಣೆಯಿಂದಾಗಿ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮಾರ್ಚ್ ತಿಂಗಳಲ್ಲಿ ವಿಜಯಪುರ ಮಹಾನಗರಪಾಲಿಕೆಗೆ ವರ್ಗಾವಣೆ ಮಾಡಿದ್ದ ರಾಜ್ಯ ಸರ್ಕಾರ, ಬೆಂಗಳೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಂಟಿ ನಿರ್ದೇಶಕಿ, ಹಿರಿಯ ಕೆಎಎಸ್ ಅಧಿಕಾರಿ ಡಾ.ಎನ್.ಎನ್.ಮಧು ಅವರನ್ನು ಮೈಸೂರು ಮಹಾನಗರ ಪಾಲಿಕೆ ಆಯುಕ್ತರನ್ನಾಗಿ ನಿಯೋಜಿಸಿತ್ತು.

ಚುನಾವಣಾ ನೀತಿ ಸಂಹಿತೆ ಅವಧಿ ಮುಗಿಯುತ್ತಿದ್ದಂತೆ ಮತ್ತೆ ಪಾಲಿಕೆ ಆಯುಕ್ತರಾಗಿ ಅಧಿಕಾರ ವಹಿಸಿಕೊಳ್ಳುವಂತೆ ಸರ್ಕಾರವು ಷರೀಫ್ ಅವರಿಗೆ ಆದೇಶದಲ್ಲಿ ಸೂಚಿಸಿದ್ದರಿಂದ ಅವರು ಇಂದು ಮೈಸೂರಿನ ಸಯ್ಯಾಜಿರಾವ್ ರಸ್ತೆಯ ಪಾಲಿಕೆ ಪ್ರಧಾನ ಕಚೇರಿಯಲ್ಲಿ ಅಧಿಕಾರ ವಹಿಸಿಕೊಂಡರು.

ಅಧಿಕಾರ ವಹಿಸಿಕೊಂಡ ನಂತರ ಷರೀಫ್, ಪಾಲಿಕೆ ಹಳೇ ಕೌನ್ಸಿಲ್ ಹಾಲ್‌ನಲ್ಲಿ ಮಳೆ ಅವಾಂತರ ನಿರ್ವಹಣೆ, ಚರಂಡಿ ಸ್ವಚ್ಛತೆ, ರಸ್ತೆಗಳ ಗುಂಡಿ ಮುಚ್ಚುವುದು, ಘನ ತ್ಯಾಜ್ಯ ನಿರ್ವಹಣೆ ಕುರಿತಂತೆ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಾಮಾನ್ಯ ವರ್ಗಾವಣೆ ಆದೇಶದ ಮೇಲೆ ಬಂದಿದ್ದ ಡಾ. ಎನ್.ಎನ್.ಮಧು, ನಗರಪಾಲಿಕೆ ಆಯುಕ್ತರಾಗಿ ಮುಂದುವರಿಯುವ ನಿರೀಕ್ಷೆ ಹೊಂದಿದ್ದರಾದರೂ, ಷರೀಫ್ ಅವರು ಇಂದು ದಿಢೀರ್ ಅಧಿಕಾರ ವಹಿಸಿಕೊಂಡಿರುವುದರಿಂದ ಅವರು ಇಲ್ಲಿಂದ ಮರಳುವ ಅನಿವಾರ್ಯತೆ ಉಂಟಾಗಿದೆ.

ದೇವರಾಜ ಅರಸರನ್ನು ಕನ್ನಡ ನಾಡು ಸದಾ ಸ್ಮರಿಸುತ್ತದೆ

ಡಿ.ದೇವರಾಜ ಅರಸು ಪುಣ್ಯಸ್ಮರಣೆಯ ಕಾರ್ಯಕ್ರಮದಲ್ಲಿ ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್ ಅಭಿಮತ

ಮೈಸೂರು,ಜೂ.10(ಎಂಟಿವೈ)– ಬಡತನ ಮತ್ತು ಶೋಷಣೆಯನ್ನು ಆಧಾರವಾಗಿಟ್ಟುಕೊಂಡು ರಾಜ್ಯಭಾರ ಮಾಡಿದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರನ್ನು ಕನ್ನಡ ನಾಡು ಸದಾ ಸ್ಮರಣೆ ಮಾಡುತ್ತದೆ ಎಂದು ಕೆಪಿಸಿಸಿ ವಕ್ತಾರ ಹೆಚ್.ಎ. ವೆಂಕಟೇಶ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆ ಆವರಣದಲ್ಲಿರುವ ರಾಜೇಂದ್ರ ಭವನದಲ್ಲಿ ಡಿ.ದೇವರಾಜ ಅರಸು ಪ್ರತಿಮೆ ಪ್ರತಿಷ್ಠಾಪನೆ ಸಮಿತಿ ಆಯೋಜಿಸಿದ್ದ ಡಿ.ದೇವರಾಜ ಅರಸು ಪುಣ್ಯಸ್ಮರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಡಿ.ದೇವರಾಜ ಅರಸು ಅವರು ತಮ್ಮ ಆಡಳಿತಾವಧಿಯಲ್ಲಿ ಅನೇಕ ಪ್ರಾತಃಸ್ಮರಣೀಯವಾದ ಕೊಡುಗೆ ನೀಡಿದ್ದಾರೆ. ಅವರು ಅನುಷ್ಠಾನಗೊಳಿಸಿದ ಒಂದೊಂದು ಯೋಜನೆಗಳು ಶೋಷಿತರಲ್ಲಿ ಸ್ವಾಭಿಮಾನದ ಕಿಚ್ಚನ್ನು ಹಚ್ಚಿವೆ. ದೇಶದಲ್ಲಿ ಮೊದಲು ಶಾಶ್ವತ ಹಿಂದುಳಿದ ವರ್ಗದ ಆಯೋಗ ರಚಿಸಿ ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲಾತಿ ಕೊಟ್ಟು, ಹಿಂದುಳಿದ ವರ್ಗಗಳ ಲಕ್ಷಾಂತರ ಜನರ ಬಾಳಿನಲ್ಲಿ ಬೆಳಕು ತಂದರು. ಹಾವನೂರು ವರದಿಯನ್ನು ಜಾರಿಗೆ ತಂದು ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿದರು. ಆ ಮೂಲಕ ಅವಕಾಶ ವಂಚಿತರಾಗಿದ್ದವರನ್ನೇ ಅಭ್ಯರ್ಥಿಯಾಗಿಸಿ ವಿಧಾನ ಸೌಧಕ್ಕೆ ಕರೆ ತಂದು ರಾಜ್ಯಭಾರ ಮಾಡಿಸಿದರು ಎಂದು ಹೇಳಿದರು.


ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆ ಆವರಣದಲ್ಲಿರುವ ರಾಜೇಂದ್ರ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸ್ ಜಯಂತಿ ಕಾರ್ಯಕ್ರಮದಲ್ಲಿ ದೇವರಾಜ ಅರಸು ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡಿದರು.

ಜನರು ಜೀವನದ ಸಂಧ್ಯಾಕಾಲದಲ್ಲಿ ನೋವಿನಿಂದ ಬಳಲಬಾರದು ಎಂದು ವೃದ್ಧಾಪ್ಯ ವೇತನ ವ್ಯವಸ್ಥೆ ಜಾರಿಗೊಳಿಸಿದರು. ಬೆಳಕಿಲ್ಲದ ಮನೆಗಳಿಗೆ ಭಾಗ್ಯ ಜ್ಯೋತಿ ನೀಡಿದರು. ಪತಿಯನ್ನು ಕಳೆದುಕೊಂಡವರಿಗೆ ವಿಧವಾ ವೇತನವನ್ನು ಜಾರಿ ಮಾಡಿದರು. ಉಳುವವನೇ ಭೂಮಿ ಒಡೆಯ ಯೋಜನೆಯ ಮೂಲಕ ಭೂಮಿ ಹಂಚಿದರು. ಭೂ ಸುಧಾರಣೆ ಕಾಯ್ದೆಗಳನ್ನು ಜಾರಿಗೆ ತಂದು ಸಮಾಜದಲ್ಲಿ ನೋವಿನಲ್ಲಿದ್ದವರಿಗೆ ಆಸರೆಯಾದರು. ಅವರು ಯಾವ ಜಾತಿ ವಿರೋಧಿಯಾಗಿರಲಿಲ್ಲ ಎಂದು ಹೇಳಿದರು.

ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ ಮಾತನಾಡಿ, ಈಗ ಆರ್ಥಿಕವಾಗಿ ಹಿಂದುಳಿದವರಿಗೆ ಶೇ.10 ರಷ್ಟು ಮೀಸಲಾತಿ ಬಗ್ಗೆ ಮಾತನಾಡುತ್ತಿದ್ದಾರೆ. ಆದರೆ ದೇವರಾಜ ಅರಸು ಅವರು ತಮ್ಮ ಅಧಿಕಾರವಧಿಯಲ್ಲಿಯೇ ಮೀಸಲಾತಿ ನೀಡಿದ್ದರು ಎಂದರು.

ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ಅರಸು ಅವರನ್ನು ಆದರ್ಶವಾಗಿಟ್ಟುಕೊಂಡು ವಿದ್ಯಾರ್ಥಿಗಳು ಅಧ್ಯಯನ ನಡೆಸಬೇಕು. ಪ್ರಪಂಚದ ಕೆಲವೆಡೆ ನಡೆಯುತ್ತಿರುವ ಯುದ್ಧ ವಿರೋಧಿಸಿ, ಶಾಂತಿ ನೆಲೆಸುವಂತೆ ಮಾಡಬೇಕು ಎಂದರು.

ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ, ಪ್ರತಿಷ್ಠಾಪನಾ ಸಮಿತಿಯ ಗೌರವಾಧ್ಯಕ್ಷ ಎಂ.ಚಂದ್ರಶೇಖರ್ ಮಾತನಾಡಿ, ಮೈಸೂರಲ್ಲಿ ಡಿ.ದೇವರಾಜ ಅರಸು ಅವರ ಪ್ರತಿಮೆ ಪ್ರತಿಷ್ಠಾಪಿಸುವ ಕಾರ್ಯ ಅಂತಿಮ ಹಂತಕ್ಕೆ ಬಂದಿದೆ. 92 ಲಕ್ಷ ರೂ. ವೆಚ್ಚದಲ್ಲಿ ಅರಸು ಅವರ ಪ್ರತಿಮೆ ಸಿದ್ಧವಾಗುತ್ತಿದೆ. ಅರಸು ಜನ್ಮದಿನದಂದು ಅನಾವರಣ ಮಾಡಲಾಗುತ್ತದೆ. ಇದಕ್ಕೆ ಹಿಂದಿನ ಸಿಎಂಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಈಗಿನ ಸಿಎಂ ಸಿದ್ದರಾಮಯ್ಯ, ಸಚಿವರಾದ ಡಾ.ಹೆಚ್.ಸಿ. ಮಹದೇವಪ್ಪ, ಶಾಸಕರಾದ ತನ್ವೀರ್ ಸೇಠ್, ಹೆಚ್. ವಿಶ್ವನಾಥ್ ಎಲ್ಲ ರೀತಿಯ ಸಹಕಾರ ನೀಡಿದ್ದಾರೆ ಎಂದರು.

ಬಹುಮಾನ ವಿತರಣೆ: ಡಿ.ದೇವರಾಜ ಅರಸ್ ಜನ್ಮದಿನದ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಅರಸು ಅವರ ಸಾಮಾಜಿಕ ಸುಧಾರಣೆಗಳು ಕುರಿತ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಕುವೆಂಪುನಗರ ಬಿಸಿಎಂ ಹಾಸ್ಟೆಲ್‌ನ ಕೆ.ವಿ. ಪ್ರಣತಿ, ರಾಜರಾಜೇಶ್ವರಿ ನಗರ ಬಿಸಿಎಂ ಹಾಸ್ಟೆಲ್‌ನ ಎಸ್. ರಮ್ಯಾ ಹಾಗೂ ದಟ್ಟಗಳ್ಳಿ ಬಿಸಿಎಂ ಹಾಸ್ಟೆಲ್‌ನ ಕೆ.ಎಸ್.ಪಾರ್ವತಮ್ಮ ಅವರಿಗೆ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಕ್ರಮವಾಗಿ ಮೊದಲ ಮೂರು ಬಹುಮಾನಗಳನ್ನು ವಿತರಿಸಿದರು. ಭಾಗವಹಿಸಿದ್ದ ಎಲ್ಲಾ 210 ವಿದ್ಯಾರ್ಥಿನಿಯರಿಗೂ ಪ್ರಶಸ್ತಿ ಪತ್ರ ನೀಡಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ, ಪ್ರತಿಷ್ಠಾಪನಾ ಸಮಿತಿಯ ಗೌರವ ಸಲಹೆಗಾರ ಡಾ.ವೈ.ಡಿ. ರಾಜಣ್ಣ ಮಾತನಾಡಿದರು. ಪ್ರತಿಮೆ ಪ್ರತಿಷ್ಠಾಪನಾ ಸಮಿತಿಯ ಅಧ್ಯಕ್ಷ ಜಾಕೀರ್ ಹುಸೇನ್ ಸ್ವಾಗತಿಸಿದರು. ಪ್ರಧಾನ ಸಂಚಾಲಕ ಡೇರಿ ವೆಂಕಟೇಶ್ ನಿರೂಪಿಸಿದರು. ಸಂಚಾಲಕರದಿವುಲ್ಲಾಖಾನ್, ಮೈಸೂರು ಬಸವಣ್ಣ, ಜಿಲ್ಲಾ ಕಸಾಪ ಕೋಶಾಧ್ಯಕ್ಷ ಜಿ. ಪ್ರಕಾಶ್, ವಸಂತಕುಮಾರಯ್ಯ, ನಾರಾಯಣ ರಾವ್, ಸತೀಶ್, ಭಾನುಮೋಹನ್ ಇದ್ದರು.

ನಾಳೆಯಿಂದ ಶ್ರೀ ಸುವಿದ್ಯೇಂದ್ರತೀರ್ಥ ಶ್ರೀಪಾದಂಗಳವರಿಂದ ವಿಶೇಷ ಉಪನ್ಯಾಸ


ಮೈಸೂರು, ಜೂ.10– ನಗರದ ಅಗ್ರಹಾರ ಖಿಲ್ಲೆ ಮೊಹಲ್ಲಾದಲ್ಲಿರುವ ಶ್ರೀ ಉತ್ತರಾದಿ ಮಠ ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನದಲ್ಲಿ ಪರಮಪೂಜ್ಯ ಶ್ರೀ ಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಆಜ್ಞೆ ಹಾಗೂ ಅನುಗ್ರಹದಿಂದ ಶ್ರೀ ಧನ್ವಂತರಿ ಪ್ರತಿಷ್ಠಾಪನಾ ತೃತೀಯ ವಾರ್ಷಿಕೋತ್ಸವದ ನಿಮಿತ್ತ ಜೂನ್ 12ರಿಂದ 14ರವರೆಗೆ ಸಂಜೆ 6ರಿಂದ 6.30ರವರೆಗೆ ವಿದ್ವಾಂಸರಿಂದ ಪ್ರವಚನ ಹಾಗೂ ಸಂಜೆ 6.30ರಿಂದ 7.30ರವರೆಗೆ ಮಂತ್ರಾಲಯ ಮಠ (ಭುವನಗಿರಿ ಆಶ್ರಮ) ಶ್ರೀ ಶ್ರೀ ಸುವಿದ್ಯೇಂದ್ರತೀರ್ಥ ಶ್ರೀಪಾದಂಗಳವರಿಂದ ಧನ್ವಂತರಿ ಪ್ರಾದುರ್ಭಾವದ ವಿಷಯದ ಕುರಿತು ವಿಶೇಷ ಪ್ರವಚನವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9448147459 ಅನ್ನು ಸಂಪರ್ಕಿಸಬಹುದು.

ಕೇಂದ್ರದ ನೂತನ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ ಅವರಿಗೆ ಅಭಿನಂದನೆ




ಮೂರನೇ ಅವಧಿಗೆ ಭಾರತದ ಪ್ರಧಾನಮಂತ್ರಿಯಾಗಿ ಭಾನುವಾರ ಪ್ರಮಾಣ ವಚನ ಸ್ವೀಕರಿಸಿದ ನರೇಂದ್ರ ಮೋದಿ ಅವರ ಸಚಿವ ಸಂಪುಟದಲ್ಲಿ ಕೇಂದ್ರದ ನೂತನ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಹೆಚ್.ಡಿ.ಕುಮಾರಸ್ವಾಮಿ, ಸಂಸದರಾದ ವಿ.ಸೋಮಣ್ಣ, ಶೋಭಾ ಕರಂದ್ಲಾಜೆ ಅವರನ್ನು ಮೈಸೂರು ನಗರ ಬಿಜೆಪಿ ಘಟಕದ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು. ಚಿತ್ರದಲ್ಲಿ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಶಾಸಕರೂ ಆದ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ, ಎಂಎಲ್‌ಸಿ ವಿವೇಕಾನಂದ, ಮಾಜಿ ಎಂಎಲ್‌ಸಿ ಸಿದ್ದರಾಜು, ಮುಖಂಡರಾದ ಹರೀಶ್ ಪೂಂಜಾ, ಮೈ.ವಿ.ರವಿಶಂಕರ್, ಮೋಹನ್ ಇನ್ನಿತರರನ್ನು ಕಾಣಬಹುದು.


ಶ್ರೀವಿದ್ಯಾಶ್ರೀಶತೀರ್ಥ ಶ್ರೀಪಾದರಿಗೆ ಫಲಪುಷ್ಪ ಸಮರ್ಪಣೆ


ಮೈಸೂರಿನ ಶ್ರೀವಿಟ್ಟಲಧಾಮದಲ್ಲಿ ನಡೆದ ಸೋಸಲೆ ಶ್ರೀ ವ್ಯಾಸರಾಜಮಠದ ಪೀಠಾಧಿಪತಿಗಳಾದ ಪೂಜ್ಯ ಶ್ರೀ 1008 ಶ್ರೀವಿದ್ಯಾಶ್ರೀಶತೀರ್ಥ ಶ್ರೀಪಾದರವರ ಸಹಸ್ರ ಚಂದ್ರದರ್ಶನ ಶಾಂತಿ ಹಾಗೂ ಶ್ರೀಸುಧಾಮಂಗಳ ಮಹೋತ್ಸವದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯ ಉಪಾಧ್ಯಕ್ಷ ನಂ.ಶ್ರೀಕಂಠ ಕುಮಾರ್ ಫಲಪುಷ್ಪ ಸಮರ್ಪಣೆ ಮಾಡಿ, ಆಶೀರ್ವಾದ ಪಡೆದರು.

ನೀಟ್ ಯುಜಿ ಪರೀಕ್ಷೆಯಲ್ಲಿ ಮೈಸೂರಿನ ವಿದ್ಯಾರ್ಥಿಗಳ ಸಾಧನೆ


ಆಕಾಶ್ ಎಜುಕೇಷನಲ್ ಸರ್ವಿಸಸ್ ಸಂಸ್ಥೆಯ ಮೈಸೂರಿನ 4 ವಿದ್ಯಾರ್ಥಿಗಳು NEET UG 2024 ಪರೀಕ್ಷೆಯಲ್ಲಿ 700 ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿ ಸಾಧನೆ ಮಾಡಿದ್ದಾರೆ. ಭಾರ್ಗವ ಭಟ್–715, ಪ್ರಥಮ್ ಎನ್ ಗೌಡ–705, ಪಿಯೂಷ್ ಯಾದವ್–700 ಮತ್ತು ರೋಶನಿ ಎಸ್–700 ಅಂಕಗಳನ್ನು ಪಡೆದುಕೊಂಡಿದ್ದಾರೆ. ಈ ವೇಳೆ ಸಂಸ್ಥೆಯ ಮುಖ್ಯ ಶೈಕ್ಷಣಿಕ ಮತ್ತು ವ್ಯವಹಾರ ಮುಖ್ಯಸ್ಥ ಧೀರಜ್ ಕುಮಾರ್ ಮಿಶ್ರಾ, ಹಿರಿಯ ಸಹಾಯಕ ನಿರ್ದೇಶಕ ಜೆ.ಅನಿಲ್ ಕುಮಾರ್, ಸಹಾಯಕ ನಿರ್ದೇಶಕ ವಿಕ್ರಂ ಚಕ್ರವರ್ತಿ, ಶೈಕ್ಷಣಿಕ ಮುಖ್ಯಸ್ಥ ಸಂಜೀವ ರಝಾ, ಶಾಖಾ ವ್ಯವಸ್ಥಾಪಕ ಹೆಚ್.ಆರ್.ಅನಿಲ್‌ಕುಮಾರ್, ಮೈಸೂರು ಸಬ್ ಅರ್ಬನ್ ಶಾಖೆ ಶಾಖಾ ವ್ಯವಸ್ಥಾಪಕ ದೀಪಕ್ ಉಪಸ್ಥಿತರಿದ್ದರು.

ವಿಶ್ವ ಪರಿಸರ ದಿನಾಚರಣೆ


ಮೈಸೂರಿನ ಶ್ರೀರಾಂಪುರದಲ್ಲಿರುವ ಜೈನ್ ಸಂಸ್ಥೆಯ ಮಹಾವೀರ ವಿದ್ಯಾಮಂದಿರದಲ್ಲಿ ವಿಶ್ವ ಪರಿಸರ ದಿನ ಆಚರಿಸಲಾಯಿತು. ಮುಖ್ಯ ಅತಿಥಿಗಳಾಗಿ ನಗರಪಾಲಿಕೆ ಪರಿಸರ ಇಂಜಿನಿಯರ್ ಎಂ.ಎನ್.ನವೀನ್ ಭಾಗವಹಿಸಿ, ಗಿಡ ನೆಡುವ ಮೂಲಕ ಮಕ್ಕಳನ್ನು ಕುರಿತು ಪರಿಸರ ಸಂರಕ್ಷಣೆ ಬಗ್ಗೆ ಕೆಲವು ಮಾಹಿತಿ ನೀಡಿದರು. ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಎನ್.ಪ್ರಸನ್ನಕುಮಾರ್, ಕಾರ್ಯದರ್ಶಿ ಶ್ರೀಮತಿ ಇಚ್ಛಾ ಹಾಗೂ ಸಹಾಯಕ ಮುಖ್ಯಶಿಕ್ಷಕಿ ರಶ್ಮಿ ಮತ್ತಿತರರು ಉಪಸ್ಥಿತರಿದ್ದರು.

ಬಿಜೆಪಿಗೆ ಪ್ರಬುದ್ಧ ಮತದಾರರ ಬೆಂಬಲ

ಮಾಜಿ ಮೇಯರ್ ಸಂದೇಶ್‌ಸ್ವಾಮಿ ಅಭಿಮತ; ಸಾರ್ವಜನಿಕರಿಗೆ ಚಹಾ ವಿತರಣೆ



ಮೈಸೂರು,ಜೂ.10(ಪಿಎಂ)– ನರೇಂದ್ರ ಮೋದಿ ಮೂರನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕಾರದ ಹಿನ್ನೆಲೆಯಲ್ಲಿ ಯದುವೀರ್ ಒಡೆಯರ್ ಸೇನೆ ಹಾಗೂ ನರೇಂದ್ರ ಮೋದಿ ಅಭಿಮಾನಿ ಬಳಗದ ವತಿಯಿಂದ ಅಗ್ರಹಾರದ 101 ಗಣಪತಿ ದೇವಸ್ಥಾನದ ಆವರಣದಲ್ಲಿ ನರೇಂದ್ರ ಮೋದಿ ಹೆಸರಿನಲ್ಲಿ ವಿಶೇಷ ಪೂಜೆ ಸಲ್ಲಿಸಿ, ಬಳಿಕ ಸಾರ್ವಜನಿಕರಿಗೆ ಚಹಾ ವಿತರಿಸಿ, ಸಂಭ್ರಮಿಸಲಾಯಿತು.

ಇದೇ ವೇಳೆ ಮಾಜಿ ಮೇಯರ್ ಸಂದೇಶಸ್ವಾಮಿ ಮಾತನಾಡಿ, ಏನೇ ಷಡ್ಯಂತ್ರ ನಡೆಸಿದರೂ ಮೋದಿ ಅವರನ್ನು ಸೋಲಿಸಲು ಯಾರಿಂದಲೂ ಸಾಧ್ಯವಿಲ್ಲ. ಪ್ರಬುದ್ಧ ಮತದಾರರ ಬೆಂಬಲ ಬಿಜೆಪಿಗೆ ಇದೆ ಎಂಬುದು ಮತ್ತೊಮ್ಮೆ ಸಾಬೀತಾಗಿದೆ. ಮೋದಿಯವರು ಮೂರನೇ ಬಾರಿಗೆ ನಮ್ಮ ದೇಶದ ಪ್ರಧಾನ ಮಂತ್ರಿ ಆಗುತ್ತಿರುವುದು ಅತ್ಯಂತ ಹೆಮ್ಮೆ ವಿಷಯ ಎಂದು ಹರ್ಷ ವ್ಯಕ್ತಪಡಿಸಿದರು.

ದೇಶವನ್ನು ಮುನ್ನಡೆಸುವುದು ಮತ್ತು ನಮ್ಮ ದೇಶವನ್ನು ವಿಶ್ವದಾದ್ಯಂತ ಪರಿಚಯಿಸಿ ವಿವಿಧ ದೇಶಗಳಿಂದ ಬಂಡವಾಳಗಳನ್ನು ತಂದು ಮೇಕ್ ಇನ್ ಇಂಡಿಯಾದಂತಹ ಯೋಜನೆಗಳನ್ನು ಮಾಡಿದರು. ಇಂದು ಇಡೀ ಭಾರತದಾದ್ಯಂತ ಎನ್‌ಡಿಎ ಜನ ಬೆಂಬಲ ಪಡೆದು ಪ್ರಜಾಪ್ರಭುತ್ವದಲ್ಲಿ ಇತಿಹಾಸ ಬರೆದಿದೆ. ಬಡವರ ಪರ ಕಾಳಜಿ ಇರುವ ಏಕೈಕ ವ್ಯಕ್ತಿ ಇದ್ದರೆ ಅದು ನಮ್ಮ ನೆಚ್ಚಿನ ಪ್ರಧಾನಿ ನರೇಂದ್ರಮೋದಿ ಎಂದರು.

ಮೋದಿ ತಮ್ಮ ಅಧಿಕಾರಾವಧಿಯಲ್ಲಿ ಅನೇಕ ದಿಟ್ಟ ನಿರ್ಧಾರಗಳ ಜೊತೆಗೆ ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ದೇಶವನ್ನು ಅಭಿವೃದ್ಧಿ ಪಥದಲ್ಲಿ ನಡೆಸುತ್ತಿದ್ದು, ಮುಂದಿನ ದಿನಗಳಲ್ಲಿ ಭಾರತ ವಿಶ್ವಗುರುವಾಗಲಿದೆ ಎಂದು ಹೇಳಿದರು.

ಮಾಜಿ ಮೇಯರ್ ಶಿವಕುಮಾರ್, ಮುಡಾ ಮಾಜಿ ಅಧ್ಯಕ್ಷ ಯಶಸ್ವಿ ಸೋಮಶೇಖರ್, ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಮ.ವಿ.ರಾಮ್‌ಪ್ರಸಾದ್, ಸೌಮ್ಯ ಉಮೇಶ್, ಜಗದೀಶ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಯದುವೀರ್ ಒಡೆಯರ್ ಸೇನೆ ಅಧ್ಯಕ್ಷ ಭೈರತಿ ಲಿಂಗರಾಜು, ಜೆಡಿಎಸ್ ಕಾರ್ಯಾಧ್ಯಕ್ಷ ಪ್ರಕಾಶ್ ಪ್ರಿಯದರ್ಶನ್, ಸುಚೇಂದ್ರ, ಜನಸೇವಕ ಯುವ ಬ್ರಿಗೇಡ್ ಅಧ್ಯಕ್ಷ ರಾಘವೇಂದ್ರ, ಮುಖಂಡರಾದ ಉಮೇಶ್, ಬಿಲ್ಲಯ್ಯ ಅಶೋಕಪುರಂ, ಸದಾಶಿವ, ಚಕ್ರಪಾಣಿ ಮತ್ತಿತರರು ಹಾಜರಿದ್ದರು.

ಬೃಹತ್ ಕೈಗಾರಿಕೆ, ಉಕ್ಕು ಇಲಾಖೆಯ ಅಧಿಕಾರಿಗಳ ಜತೆ ಹೆಚ್‌ಡಿಕೆ ಸಭೆ



ನವದೆಹಲಿ: ಬೃಹತ್ ಕೈಗಾರಿಕೆ, ಉಕ್ಕು ಇಲಾಖೆಯ ಅಧಿಕಾರಿಗಳೊಂದಿಗೆ ಇಂದು ಸಂಜೆ ಕರ್ನಾಟಕ ಭವನದಲ್ಲಿ ನೂತನ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸಭೆ ನಡೆಸಿದರು.

ಈ ಸಭೆಯಲ್ಲಿ ಉಕ್ಕು ಸಚಿವಾಲಯದ ಕಾರ್ಯದರ್ಶಿ ನಾಗೇಂದ್ರನಾಥ ಸಿನ್ಹಾ, ಬೃಹತ್ ಕೈಗಾರಿಕೆ ಸಚಿವಾಲಯದ ಕಾರ್ಯದರ್ಶಿ ಕಮರನ್ ರಿಜ್ವಿ, ಬೃಹತ್ ಕೈಗಾರಿಕೆ ಸಚಿವಾಲಯ ಕಾರ್ಯದರ್ಶಿ (ಸಾರ್ವಜನಿಕ ಉದ್ಯಮ) ಸಂದೀಪ್ ಕುಮಾರ್ ಭಾಗವಹಿಸಿದ್ದರು. ಈ ವೇಳೆ ತಾವು ಕರ್ನಾಟಕದ ಸಿಎಂ ಆಗಿದ್ದಾಗ ಕೈಗಾರಿಕೆ ಇಲಾಖೆಯಲ್ಲಿ ತಂದ ಸುಧಾರಣೆಗಳ ಬಗ್ಗೆ ತಿಳಿಸಿದ ಸಚಿವರು, ನರೇಂದ್ರ ಮೋದಿ ಅವರ ಕನಸುಗಳನ್ನು ಈಡೇರಿಸುವ ಬದ್ಧತೆ ಬಗ್ಗೆ ಅಧಿಕಾರಿ ಗಳಿಗೆ ತಿಳಿಸಿದರು. ಸಾರ್ವಜನಿಕ ಸ್ವಾಮ್ಯದ ಕೈಗಾರಿಕೆಗಳ ಬಗ್ಗೆ ಮಾಹಿತಿ ಪಡೆದರು. ಈ ವೇಳೆ ಕೆಜಿಎಫ್ ಗಣಿ ಪ್ರದೇಶದಲ್ಲಿ 12,000 ಎಕರೆ ಭೂಮಿಯನ್ನು ಕೈಗಾರಿಕೆ ಅಭಿವೃದ್ಧಿಗೆ ಬಳಸುವ ಬಗ್ಗೆ ಸಂಸದ ಮಲ್ಲೇಶ್ ಬಾಬು ಪ್ರಸ್ತಾಪಿಸಿದರು.

ಯಾವುದೇ ಉದ್ದೇಶಕ್ಕೆ ಬಳಕೆಯಾಗದೆ ವ್ಯರ್ಥವಾಗಿ ಉಳಿದಿರುವ ಗಣಿ ಭೂಮಿಯಲ್ಲಿ ಉತ್ಪಾದನೆ ಹೆಚ್ಚಿಸಿ ಹೆಚ್ಚೆಚ್ಚು ಉದ್ಯೋಗ ಕಲ್ಪಿಸುವುದು ತಮ್ಮ ಗುರಿ ಎಂದು ಅಧಿಕಾರಿಗಳಿಗೆ ಸಚಿವರು ತಿಳಿಸಿದರು. ಈ ಬಗ್ಗೆ ಹದಿನೈದು ದಿನಗಳ ಒಳಗಾಗಿ ನೀಲನಕ್ಷೆ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪ್ರಮಾಣವಚನ ವೇಳೆ ರಾಷ್ಟ್ರಪತಿ ಭವನದಲ್ಲಿ ಹಾದುಹೋದ ಪ್ರಾಣಿ!

ಮೈಸೂರು, ಜೂ.10– ರಾಷ್ಟ್ರಪತಿ ಭವನದಲ್ಲಿ ಭಾನುವಾರ ನಡೆದ ಪ್ರಮಾಣ ವಚನ ಸ್ವೀಕಾರ ಸಮಾರಂಭದ ವೇಳೆ ಪ್ರಾಣಿಯೊಂದು ನಡೆದು ಹೋಗುವ ಚಿತ್ರಣ ವಿಡಿಯೋದಲ್ಲಿ ಸೆರೆಯಾಗಿದೆ. ಪ್ರಧಾನಿ ಮೋದಿ ಸೇರಿದಂತೆ ಸಚಿವ ಸಂಪುಟ ಸದಸ್ಯರ ಪ್ರಮಾಣ ವಚನ ಸ್ವೀಕಾರ ಸಮಾರಂಭ ನೆರವೇರಿತು. ರಾಷ್ಟ್ರಪತಿಯವರ ಕರೆ ಮೇರೆಗೆ ದುರ್ಗಾ ದಾಸ್ ಉಯಿಕೇ ಪ್ರಮಾಣ ವಚನ ಸ್ವೀಕಾರದ ನಂತರ ಕಡತಕ್ಕೆ ಸಹಿ ಹಾಕುವ ಸಂದರ್ಭದಲ್ಲಿ ವೇದಿಕೆ ಹಿಂಭಾಗದ ಪ್ರಾಂಗಣದಲ್ಲಿ ಪ್ರಾಣಿಯೊಂದು ಬಲದಿಂದ ಎಡಕ್ಕೆ ಸಾಗಿದೆ. ಅದು ಚಿರತೆಯೋ, ಇಲ್ಲಾ ಬೆಕ್ಕೋ ಎಂಬ ಜಿಜ್ಞಾಸೆ ಮೂಡಿದೆ. ಅಷ್ಟೊಂದು ಭದ್ರತೆ ನಡುವೆ ಯಾವ ಪ್ರಾಣಿ ಒಳಗೆ ಬರಲು ಸಾಧ್ಯ? ಎಂಬ ಪ್ರಶ್ನೆಯೂ ಕಾಡತೊಡಗಿದೆ. ವೈರಲ್ ಆಗಿರುವ ಈ ವಿಡಿಯೋದ ಸತ್ಯಾಸತ್ಯತೆ ಬಯಲಾಗಬೇಕಿದೆ.

ವಿದ್ಯಾರ್ಥಿಗಳ ಸಮಗ್ರ ಬೆಳವಣಿಗೆಗೆ ಶಿಕ್ಷಣ ಪ್ರಮುಖ


● ಮೈಸೂರು ವಿವಿ ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕ ಪ್ರೊ.ಆನಂದ್ ಅಭಿಮತ ● 'ಸುಸ್ಥಿರ ಅಭಿವೃದ್ಧಿಯನ್ನು ಮುನ್ನಡೆಸುವಲ್ಲಿ ಉನ್ನತ ಶಿಕ್ಷಣದ ಪಾತ್ರ' ಎಂಬ ವಿಷಯ ಕುರಿತು ವಿಚಾರ ಸಂಕಿರಣ

ಮೈಸೂರು, ಜೂ. 10– ವಿದ್ಯಾರ್ಥಿಗಳ ಸಮಗ್ರ ಬೆಳವಣಿಗೆಗೆ ಶಿಕ್ಷಣ ಪ್ರಮುಖವಾಗಿದ್ದು, ಭವಿಷ್ಯದ ಪೀಳಿಗೆಗೆ ಪೂರಕ ಪಸರಿಸಬೇಕಾಗಿದೆ ಎಂದು ಮೈಸೂರು ವಿಶ್ವವಿದ್ಯಾನಿಲಯ ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕ ಪ್ರೊ.ಆನಂದ್ ಅಭಿಪ್ರಾಯಪಟ್ಟರು.

ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು ಸ್ನಾತಕೋತ್ತರ ಅಧ್ಯಯನ ವಿಭಾಗ, ಸಂಶೋಧನಾ ಪ್ರತಿಷ್ಠಾನ ಹಾಗೂ ಐ.ಕ್ಯೂ.ಎ.ಸಿ ಘಟಕಗಳು ಸಂಯುಕ್ತವಾಗಿ ಬೆಂಗಳೂರಿನ ಶೈಕ್ಷಣಿಕ ಮತ್ತು ಸಾಮಾಜಿಕ ಅಧ್ಯಯನ ಕೇಂದ್ರದ ಸಹಯೋಗದೊಂದಿಗೆ 'ಸುಸ್ಥಿರ ಅಭಿವೃದ್ಧಿಯನ್ನು ಮುನ್ನಡೆಸುವಲ್ಲಿ ಉನ್ನತ ಶಿಕ್ಷಣದ ಪಾತ್ರ' ವಿಷಯದ ಕುರಿತು ಆಯೋಜಿಸಿದ್ದ ಒಂದು ದಿನದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ವಾತಾವರಣದ ಬದಲಾವಣೆಯಿಂದಾಗಿ ರಾಜ್ಯ ಮತ್ತು ದೇಶದ ಜನರು ಇಂದು ಅಧಿಕ ತಾಪಮಾನವನ್ನು ಅನುಭವಿಸುತ್ತಿದ್ದಾರೆ. ಹಸಿವು, ಬಡತನ, ನಿರುದ್ಯೋಗ, ಅವಿದ್ಯೆ, ಅಸಮಾನತೆ ಇಂದು ಎಲ್ಲೆಲ್ಲೂ ತಾಂಡವವಾಡುತ್ತಿದ್ದು ಇವೆಲ್ಲವುಗಳನ್ನು ಹೋಗಲಾಡಿಸಲು ಶಿಕ್ಷಣದಿಂದ ಮಾತ್ರ ಸಾಧ್ಯವೆಂದು ತಿಳಿಸಿದ ಅವರು, ವಿದ್ಯಾರ್ಥಿಗಳು ಆರ್ಥಿಕತೆಯಲ್ಲಿ ಸುಸ್ಥಿರತೆಯನ್ನು ತಂದುಕೊಂಡು ದೇಶದ ಸರ್ವಾಂಗೀಣ ಬೆಳವಣಿಗೆಗೆ ತಮ್ಮ ಕೊಡುಗೆ ಏನು ಎನ್ನುವುದನ್ನು ಕಂಡುಕೊಳ್ಳಬೇಕಾಗಿದೆ ಎಂದರು.

ವಿಶ್ವಸಂಸ್ಥೆಯು 2015ರಲ್ಲಿ 17 ಸುಸ್ಥಿರ ಗುರಿಗಳನ್ನು ಮತ್ತು 169 ಸೂಚಕಗಳನ್ನು ಹೊಂದಿತ್ತು. 2024ರವರೆಗೆ ಕೇವಲ 15 ಗುರಿಗಳನ್ನು ಮಾತ್ರ ಸಾಧಿಸಿದ್ದೇವೆ. ಯಾವುದೇ ವಿಷಯವನ್ನು ಕಾನೂನು ರೀತ್ಯಾ ಸಾಧಿಸಲು ಸಾಧ್ಯವಿಲ್ಲ. ಬದಲಿಗೆ ವ್ಯಕ್ತಿಗಳ ಮನಪರಿವರ್ತನೆಯ ಮೂಲಕ ಮಾತ್ರ ಸಾಧಿಸಲು ಸಾಧ್ಯ ಎಂದ ಅವರು, ಹಸಿದವನಿಗೆ ಅನ್ನವನ್ನು ನೀಡಬೇಡಿ ಬದಲಿಗೆ ಭತ್ತವನ್ನು ಬೆಳೆಯುವ ಮೂಲಕ ಅವನು ಸ್ವಾವಲಂಬಿಯಾಗುವಂತೆ ಮಾಡಿದರೆ ಬದುಕು ಉತ್ತಮವಾಗುತ್ತದೆ. ಓದಿನ ಮೂಲಕ ಜ್ಞಾನವನ್ನು ಗಳಿಸಿದಾಗ ಮಾತ್ರ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಎಂಬ ಅಂಬೇಡ್ಕರ್ ಅವರ ಚಿಂತನೆಯನ್ನು ಜಗತ್ತಿನ 193 ರಾಷ್ಟ್ರಗಳು ಇಂದು ಅನುಸರಿಸುತ್ತಿವೆ.


ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ 'ಸುಸ್ಥಿರ ಅಭಿವೃದ್ಧಿಯನ್ನು ಮುನ್ನಡೆಸುವಲ್ಲಿ ಉನ್ನತ ಶಿಕ್ಷಣದ ಪಾತ್ರ' ವಿಷಯದ ಕುರಿತು ಆಯೋಜಿಸಿದ್ದ ಒಂದು ದಿನದ ವಿಚಾರ ಸಂಕಿರಣವನ್ನು ಮೈಸೂರು ವಿಶ್ವವಿದ್ಯಾನಿಲಯ ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕ ಪ್ರೊ.ಆನಂದ್ ಉದ್ಘಾಟಿಸಿದರು.

ಬೆಂಗಳೂರಿನ ಟ್ರಾನ್ಸ್ ಡಿಸಿಪ್ಲಿನರಿ ಹೆಲ್ತ್ ಸೈನ್ಸಸ್ ಅಂಡ್ ಟೆಕ್ನಾಲಜಿ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರು ಹಾಗೂ ಡೀನ್ (ಶಿಕ್ಷಣ ಹಾಗೂ ಔಟ್‌ರೀಚ್) ಡಾ.ಲೀನಾ ಚಂದ್ರನ್ ವಾಡಿಯಾ ತಮ್ಮ ದಿಕ್ಸೂಚಿ ಭಾಷಣದಲ್ಲಿ ಆರೋಗ್ಯವೆನ್ನುವುದು ಪ್ರತಿಯೊಬ್ಬರ ಹಕ್ಕಾಗಿದ್ದು ಅದು ಕೇವಲ ಶ್ರೀಮಂತರ ಸ್ವತ್ತಲ್ಲ. ಸರ್ಕಾರಗಳು ಶ್ರೀಸಾಮಾನ್ಯರ ಉತ್ತಮ ಆರೋಗ್ಯಕ್ಕಾಗಿ ಆಯುಷ್ಮಾನ್ ಭಾರತ್ ಎನ್ನುವ ವಿಮೆ ಆಧಾರಿತ ಆರೋಗ್ಯದ ಯೋಜನೆಯನ್ನು ಜಾರಿ ಮಾಡಿದೆ. ಸಂಪನ್ಮೂಲಗಳನ್ನು ನಾವಿಂದು ಅತಿಯಾಗಿ ಬಳಸುತ್ತಿದ್ದು ಶ್ರೀಮಂತರು ಶ್ರೀಮಂತರಾಗುತ್ತಿದ್ದು ಬಡವರು ಬಡವರಾಗಿಯೇ ಉಳಿದುಹೋಗುತ್ತಿದ್ದಾರೆ. ಮಹಾಯುದ್ಧಗಳ ನಂತರ ಮರಗಳನ್ನು ಕಡಿದು ಪರಿಸರವನ್ನು ನಾಶಗೊಳಿಸುತ್ತಿರುವುದರಿಂದ ಸಮುದಾಯದ ಜನರು ಗಂಭೀರ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಆದ ಕಾರಣ ಇಂದಿನ ಯುವಜನರು ಸಮುದಾಯ ಮತ್ತು ಸಮಾಜದ ಬಗ್ಗೆ ವಿಭಿನ್ನವಾಗಿ ಆಲೋಚಿಸಿ ಸುಸ್ಥಿರ ಅಭಿವೃದ್ಧಿಗಾಗಿ ಶ್ರಮಿಸಬೇಕೆಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪಿ.ವಿಶ್ವನಾಥ್ ಮಾತನಾಡುತ್ತಾ ಇರುವುದೊಂದೇ ಭೂಮಿ, ಲಭ್ಯವಿರುವ ಸಂಪನ್ಮೂಲಗಳನ್ನು ಸದ್ಬಳಕೆ ಮಾಡಿಕೊಂಡು ಅನಾರೋಗ್ಯವನ್ನು ಹೋಗಲಾಡಿಸಿಕೊಳ್ಳುವುದು ಇಂದಿನ ತುರ್ತು ಅಗತ್ಯವಾಗಿದೆ. ವಿದ್ಯಾರ್ಥಿಗಳಿಗೆ ಕೆಲವು ವಿಷಯಗಳನ್ನು ತರಗತಿಗಳಲ್ಲಿ ಬೋಧಿಸಿ ಅರ್ಥೈಸುವುದು ಕಷ್ಟವಾದಾಗ, ಪ್ರತಿ ವಿಷಯಕ್ಕೂ ಕಿರುನಾಟಕಗಳನ್ನು ಮಾಡಿಸುವ ಮೂಲಕ ವಿದ್ಯಾರ್ಥಿಗಳಿಗೆ ಸುಲಭವಾಗಿ ಅರ್ಥೈಸಬಹುದೆಂದು ತಿಳಿಸಿದರು. ಕು.ಸಂಹಿತ ಪ್ರಾರ್ಥಿಸಿ, ಡಾ.ಪೂರ್ಣಿಮ ಸ್ವಾಗತಿಸಿ, ಪ್ರಾಂಶುಪಾಲ ಡಾ.ಎಸ್.ಮರೀಗೌಡ ಪ್ರಾಸ್ತಾವಿಕ ನುಡಿಗಳನ್ನಾಡಿದರೆ, ಕಾಲೇಜು ನಿರ್ವಹಣಾ ಮಂಡಳಿ ಅಧ್ಯಕ್ಷ ನಾಗರಾಜು, ಅಧ್ಯಾಪಕರು, ವಿದ್ಯಾರ್ಥಿಗಳು, ಹಾಜರಿದ್ದ ಕಾರ್ಯಕ್ರಮವನ್ನು ಧರಣಿ ವಂದಿಸಿ, ಎಂ.ಜಿ.ಸುನಿಲ್ ನಿರೂಪಿಸಿದರು.

ಸೆಂಥಿಲ್ ಕುಮಾರ್ ಟೆಕ್ಸ್‌ಟೈಲ್ಸ್ ಸಂಸ್ಥಾಪಕ ಮಾಲೀಕ ಕುಮಾರ್ ನಿಧನ



ಮೈಸೂರು, ಜೂ. 10–ಸೆಂಥಿಲ್‌ಕುಮಾರ್ ಟೆಕ್ಸ್‌ಟೈಲ್ಸ್ ಸಂಸ್ಥಾಪಕ ಮಾಲೀಕ ಕುಮಾರ್ (65) ತಮಿಳುನಾಡಿನ ಧರ್ಮಪುರಿಯಲ್ಲಿ ಸೋಮವಾರ ಬೆಳಗ್ಗೆ ನಿಧನರಾದರು. ಶ್ರೀಯುತರು ಪತ್ನಿ, ಪುತ್ರ, ಪುತ್ರಿ, ನಾಲ್ವರು ಸಹೋದರರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಧರ್ಮಪುರಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಕುಮಾರ್ ಅವರು ಸೆಂಥಿಲ್ ಕುಮಾರ್ ಟೆಕ್ಸ್‌ಟೈಲ್ಸ್ ಅನ್ನು ಧರ್ಮಪುರಿಯಲ್ಲಿ ಆರಂಭಿಸಿ, ನಂತರ ಮೈಸೂರು ಮತ್ತು ತುಮಕೂರಿನಲ್ಲಿ ಶಾಖೆಗಳನ್ನು ಆರಂಭಿಸುವ ಮೂಲಕ ನೂರಾರು ಜನರಿಗೆ ಉದ್ಯೋಗ ಕಲ್ಪಿಸಿದ್ದಾರೆ.

ಟ್ಯಾಕ್ಸಿ ಚಾಲಕರು, ಬಾಡಿಗೆ ಬೈಕ್‌ದಾರರ ಗುದ್ದಾಟ

● ಕೈ ಕೈ ಮಿಲಾಯಿಸುವ ಹಂತಕ್ಕೆ ತಲುಪಿದ ಬಾಡಿಗೆ ವಿಚಾರ ● ಸಮಾಧಾನಪಡಿಸಿದ ಪೊಲೀಸರು



ಮಡಿಕೇರಿಯಲ್ಲಿ ಟ್ಯಾಕ್ಸಿ ಮಾಲೀಕರು, ಚಾಲಕರು ಮತ್ತು ಬೈಕ್ ಬಾಡಿಗೆ ನೀಡುವ ವ್ಯಕ್ತಿಗಳು ಕೈ ಕೈ ಮಿಲಾಯಿಸಿದರು.

ಮಡಿಕೇರಿ, ಜೂ.10– ಪ್ರವಾಸಿ ಟ್ಯಾಕ್ಸಿ ಮತ್ತು ಹಳದಿ ಬೋರ್ಡ್ ಬೈಕ್‌ಗಳ ಬಾಡಿಗೆ ವಿಚಾರ ಇದೀಗ ವಿವಾದದ ಸ್ವರೂಪ ಪಡೆದುಕೊಂಡಿದ್ದು, ನಗರದಲ್ಲಿ ಸೋಮವಾರ ಟ್ಯಾಕ್ಸಿ ಮಾಲೀಕರು, ಚಾಲಕರು ಮತ್ತು ಬೈಕ್ ಬಾಡಿಗೆ ನೀಡುವ ವ್ಯಕ್ತಿಗಳ ನಡುವೆ ನಡೆದ ಮಾತಿನ ಚಕಮಕಿ ಪರಸ್ಪರ ಕೈ ಕೈ ಮಿಲಾಯಿಸುವ ಹಂತಕ್ಕೆ ತಲುಪಿತು. ಸ್ಥಳದಲ್ಲಿದ್ದ ಪೊಲೀಸರು ಮಧ್ಯಪ್ರವೇಶಿಸಿ ಎರಡೂ ಕಡೆಯವರನ್ನು ಸಮಾಧಾನಪಡಿಸಿದರು.

ಪ್ರಕರಣ ವಿವಾದ ಸ್ವರೂಪ: ಕೊಡಗು ಪ್ರವಾಸೋದ್ಯಮದಲ್ಲಿ ದೊಡ್ಡ ಹೆಸರನ್ನೇ ಮಾಡಿದೆ. ವಾರಾಂತ್ಯ ಹಾಗೂ ಮಾನ್ಸೂನ್ ಟೂರಿಸಂ ಜಿಲ್ಲೆಯಲ್ಲಿ ಚಿಗುರೊಡೆಯುತ್ತಿದ್ದು, ಕೊಡಗು ಜಿಲ್ಲೆಗೆ ಹೆಚ್ಚಿನ ಪ್ರವಾಸಿಗರು ಆಗಮಿಸುತ್ತಾರೆ. ಇದನ್ನೇ ನಂಬಿಕೊಂಡು ಆಟೋ ಹಾಗೂ ಟ್ಯಾಕ್ಸಿ ಚಾಲಕರು ಜೀವನ ಕಟ್ಟಿಕೊಂಡಿದ್ದಾರೆ. ಆದರೆ, ಇದೀಗ 'ರೆಂಟೆಡ್' ಬೈಕ್‌ಗಳ ಹಾವಳಿಯಿಂದ ಟ್ಯಾಕ್ಸಿ ಚಾಲಕರು ಹಾಗೂ ಮಾಲೀಕರ ಬದುಕು ಬೀದಿಗೆ ಬಿದ್ದಂತಾಗಿದೆ ಎಂಬ ಆರೋಪಗಳು ಕೇಳಿ ಬರುತ್ತಿದೆ. ನಾವುಗಳು ಎಲ್ಲಾ ನಿಯಮಗಳನ್ನು ಪಾಲಿಸುತ್ತಾ ಅನುಮತಿ ಪಡೆದು 'ರೆಂಟೆಂಡ್' ಬೈಕ್ ಉದ್ಯಮ ನಡೆಸುತ್ತಿದ್ದೇವೆ ಎಂದು ಬೈಕ್ ಬಾಡಿಗೆ ನೀಡುವ ವ್ಯಕ್ತಿಗಳು ಸಮರ್ಥಿಸಿಕೊಳ್ಳುತ್ತಿದ್ದಾರೆ. ಆದರೆ, ಇದೀಗ ಬಾಡಿಗೆ ಬೈಕ್‌ಗಳು ಮತ್ತು ಪ್ರವಾಸಿ ಟ್ಯಾಕ್ಸಿಗಳ ನಡುವೆ ವಿವಾದ ಹುಟ್ಟಿಕೊಂಡಿದೆ.

ಮುತ್ತಿಗೆ: ಮಡಿಕೇರಿಯ ಹಳೇ ಖಾಸಗಿ ಬಸ್ ನಿಲ್ದಾಣದ ಮಳಿಗೆಯೊಂದರಲ್ಲಿ ಟ್ಯಾಕ್ಸಿ ನಿಲ್ದಾಣದ ಸಮೀಪವೇ ಮತ್ತೊಂದು 'ರೆಂಟೆಡ್' ಬೈಕ್ ಶಾಪ್ ತಲೆ ಎತ್ತಿರೋದು ಕಾರು ಚಾಲಕರು ಹಾಗೂ ಮಾಲೀಕರ ಅಸಮಾಧಾನಕ್ಕೆ ಕಾರಣವಾಗಿದೆ. ಮೂರು ತಿಂಗಳ ಹಿಂದೆ ಟ್ಯಾಕ್ಸಿ ಚಾಲಕರು ಹಾಗೂ ಮಾಲೀಕರು ಈ ಮಳಿಗೆ ಕಾರ್ಯಾರಂಭಕ್ಕೆ ವಿರೋಧ ವ್ಯಕ್ತಪಡಿಸಿದ್ದರು. ಆ ಸಂದರ್ಭ ಕೆಲಸ ಸ್ಥಗಿತವಾಗಿತ್ತು. ವಿರೋಧದ ನಡುವೆಯೂ ಇದೀಗ ಮತ್ತೆ ಬಾಡಿಗೆ ಬೈಕ್ ಮಳಿಗೆ ಆರಂಭವಾಗಿದ್ದು, ಕಾರು ಚಾಲಕರು ಹಾಗೂ ಮಾಲೀಕರು ಮಳಿಗೆಗೆ ಮುತ್ತಿಗೆ ಹಾಕಿ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭ ರೆಟೆಂಡ್ ಬೈಕ್ ಉದ್ಯಮದ ಪಾಲುದಾರರು ಹಾಗೂ ಟ್ಯಾಕ್ಸಿ ಚಾಲಕರ ನಡುವೆ ಮಾತಿಗೆ ಮಾತು ಬೆಳೆದು ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿದೆ. ತಕ್ಷಣ ಸ್ಥಳಕಾಗಮಿಸಿದ ಪೊಲೀಸರು ಪರಿಸ್ಥಿತಿ ತಿಳಿಗೊಳಿಸಿದರು.

ಬದುಕು ಬೀದಿಗೆ ಬಂದಿದೆ ನಾವು ಪ್ರವಾಸಿಗರನ್ನೇ ನಂಬಿಕೊಂಡು ಜೀವನ ಸಾಗಿಸುತ್ತಿದ್ದೇವೆ. ಆದರೆ, ಇದೀಗ ಬಾಡಿಗೆ ಇಲ್ಲದೆ ನಮ್ಮ ಕುಟುಂಬ ಬೀದಿಗೆ ಬೀಳುವ ಸ್ಥಿತಿ ನಿರ್ಮಾಣವಾಗುತ್ತಿದೆ. ಟ್ಯಾಕ್ಸಿ ನಿಲ್ದಾಣದ ಬಳಿಯೇ ಬಾಡಿಗೆ ಬೈಕ್ ಮಳಿಗೆ ತೆರೆದಲ್ಲಿ ನಮ್ಮ ಬದುಕಿನ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ ಎಂದು ಪೊಲೀಸರು ಮತ್ತು ನಗರಸಭೆ ಅಧಿಕಾರಿಗಳ ಮುಂದೆ ಅಳಲು ತೋಡಿಕೊಂಡರು. ಈ ರೆಂಡೆಟ್ ಬೈಕ್‌ಗಳಿಂದ ಸಾಕಷ್ಟು ಸಮಸ್ಯೆ ಆಗುತ್ತಿದ್ದು, ಎಲ್ಲೆಂದರಲ್ಲಿ ಪಾರ್ಕಿಂಗ್, ಹೆಲ್ಮೆಟ್ ಇಲ್ಲದೆ ಬೈಕ್ ಚಾಲನೆ, ತ್ರಿಬಲ್ ರೈಡಿಂಗ್ ಮಾಡುತ್ತಿದ್ದಾರೆ ಎಂದು ಟ್ಯಾಕ್ಸಿ ಚಾಲಕರು ಆರೋಪಿಸಿದರು. ಮಡಿಕೇರಿಯ ಕಾರು ನಿಲ್ದಾಣದ ಬಳಿಯ ರೆಂಟೆಡ್ ಬೈಕ್ ಮಳಿಗೆಯಲ್ಲಿ ಅಗತ್ಯ ಮಾರ್ಗಸೂಚಿ ಪಾಲನೆಯಾಗುತ್ತಿಲ್ಲ ಎಂದು ಆರೋಪಿಸಿದ ಟ್ಯಾಕ್ಸಿ ಮಾಲೀಕರು ಹಾಗೂ ಚಾಲಕರು, ಈ ಸ್ಥಳದಿಂದ ಬೈಕ್ ಮಳಿಗೆ ಸ್ಥಳಾಂತರಿಸುವಂತೆ ಆಗ್ರಹಿಸಿದರು.

> “ನಾವು ಎಲ್ಲಾ ದಾಖಲೆ ಪಡೆದುಕೊಂಡು ಉದ್ಯಮ ಆರಂಭಿಸಿದ್ದೇವೆ. ನಗರಸಭೆ, ಬೆಂಗಳೂರು ಮತ್ತು ಕೊಡಗು ಆರ್‌ಟಿಓ ಅವರಿಂದಲೂ ಎಲ್ಲಾ ದಾಖಲೆ ಪಡೆದಿದ್ದೇವೆ. ಇದೀಗ ಬಾಡಿಗೆ ಬೈಕ್ ಮಳಿಗೆಯನ್ನು ಬೇರೆಡೆಗೆ ಸ್ಥಳಾಂತರ ಮಾಡುವಂತೆ ಟ್ಯಾಕ್ಸಿ ನಿಲ್ದಾಣದವರು ಆಗ್ರಹಿಸಿದ್ದಾರೆ. ಈ ಕುರಿತು ನಮ್ಮ ಪಾಲುದಾರರೊಂದಿಗೆ ಚರ್ಚಿಸಿ ಮುಂದಿನ ನಿರ್ಧಾರ ತೆಗೆದುಕೊಳ್ಳಲಾಗುವುದು.
>
> –ಆಸೀಫ್ ಅಲಿ, ರೆಂಟೆಂಡ್ ಬೈಕ್ ಉದ್ಯಮದ ಪಾಲುದಾರ

ಮಧ್ಯ ಪ್ರವೇಶ ಅಗತ್ಯ

ಒಟ್ಟಾರೆ ಕೊಡಗಿನಲ್ಲಿ ಪ್ರವಾಸೋದ್ಯಮ ನಂಬಿಕೊಂಡಿದ್ದ ಟ್ಯಾಕ್ಸಿ ಚಾಲಕರು ಹಾಗೂ ರೆಂಟೆಂಡ್ ಬೈಕ್ ಉದ್ಯಮ ನಡೆಸುವವರ ನಡುವೆ ಮುಸುಕಿನ ಗುದ್ದಾಟ ನಡೆಯುತ್ತಿದೆ. ಜಿಲ್ಲೆಯ ಶಾಸಕರು, ನೂತನ ಸಂಸದರು, ಜಿಲ್ಲಾಡಳಿತ, ಆರ್‌ಟಿಓ ಇಲಾಖೆ, ಪ್ರವಾಸೋದ್ಯಮ ಇಲಾಖೆ ಮಧ್ಯ ಪ್ರವೇಶಿಸದ ಹೊರತು ಈ ವಿವಾದ ಅಂತ್ಯ ಕಾಣುವ ಯಾವುದೇ ಲಕ್ಷಣ ಮಾತ್ರ ಸದ್ಯಕ್ಕೆ ಕಂಡು ಬರುತ್ತಿಲ್ಲ.

ವಿರಾಜಪೇಟೆಯಲ್ಲಿ ಬಿಜೆಪಿ ಕಾರ್ಯಕರ್ತರ ವಿಜಯೋತ್ಸವ



ವಿರಾಜಪೇಟೆ, ಜೂ.10– ನರೇಂದ್ರ ಮೋದಿ ಮೂರನೇ ಬಾರಿ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಬಿಜೆಪಿ ಮತ್ತು ಸಂಘ ಪರಿವಾರದ ಕಾರ್ಯಕರ್ತರು ಪಟ್ಟಣದ ಗಡಿಯಾರ ಕಂಬದ ಬಳಿ ಪಟಾಕಿ ಸಿಡಿಸಿ, ಸಿಹಿ ವಿತರಿಸಿ ವಿಜಯೋತ್ಸವ ಆಚರಿಸಿದರು.

ಇದೇ ವೇಳೆ ಬಿಜೆಪಿ ಓಬಿಸಿ ನಗರಾಧ್ಯಕ್ಷ ಟಿ.ಸಿ.ಸುರೇಶ್ ಮಾತನಾಡಿ, ಕೇಂದ್ರದಲ್ಲಿ ಸತತ 3ನೇ ಬಾರಿ ನರೇಂದ್ರ ಮೋದಿ ನೇತೃತ್ವದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದಿದ್ದು, ದೇಶದಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯಗಳು ನಡೆಯಲಿವೆ ಎಂದು ಸಂತಸ ವ್ಯಕ್ತಪಡಿಸಿದರು.

ವಿಜಯೋತ್ಸವದಲ್ಲಿ ಪುರಸಭೆ ಸದಸ್ಯರು, ಬಿಜೆಪಿ ನಗರ ಘಟಕದ ಪದಾಧಿಕಾರಿಗಳು, ಹಿಂದುಪರ ಸಂಘಟನೆಗಳ ಪ್ರಮುಖರು ಹಾಗೂ ಕಾರ್ಯಕರ್ತರು ಹಾಜರಿದ್ದರು.

ಹಳೇ ವಿದ್ಯಾರ್ಥಿಗಳ ಪುನರ್ಮಿಲನ



ಮಡಿಕೇರಿ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜಿನ ಹಳೇ ವಿದ್ಯಾರ್ಥಿಗಳು ಉಪನ್ಯಾಸಕರಿಗೆ ಸ್ಮರಣಿಕೆ ನೀಡಿದರು.

ಮಡಿಕೇರಿ, ಜೂ.10–ನಗರದ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜಿನ 1999–2002ನೇ ಸಾಲಿನ ವಾಣಿಜ್ಯ ವಿಭಾಗದ ಹಳೇ ವಿದ್ಯಾರ್ಥಿಗಳ ಭಾವನಾತ್ಮಕ ಪುನರ್ಮಿಲನ ಕಾರ್ಯಕ್ರಮ ನಡೆಯಿತು. ತಮಗೆ ವಿದ್ಯೆ ಕಲಿಸಿದ ಉಪನ್ಯಾಸಕರಿಗೆ ವಂದಿಸಿದ ವಿದ್ಯಾರ್ಥಿಗಳು, ವಿದ್ಯಾರ್ಥಿ ಜೀವನದ ನೆನಪುಗಳನ್ನು ಮೆಲುಕು ಹಾಕಿದರು.

ಕಾಲೇಜಿನ ಸಭಾಂಗಣದಲ್ಲಿ ನಡೆದ ಸರಳ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಂಶುಪಾಲ ಮೇಜರ್ ಪ್ರೊ.ಡಾ.ಬಿ.ರಾಘವ, ಕಳಚಿ ಹೋದ ಸಂಬಂಧವನ್ನು ಬೆಸೆಯುವತ್ತ ಐತಿಹಾಸಿಕ ಹೆಜ್ಜೆ ಇರಿಸಿದ 1999–2002ನೇ ಸಾಲಿನ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳ ಕಾರ್ಯ ಶ್ಲಾಘನೀಯ. ಇದು ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳಿಗೆ ಆದರ್ಶವಾಗಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ಗಾಯತ್ರಿ ದೇವಿ ಮಾತನಾಡಿ, ವಿದ್ಯೆ ಕಲಿಸಿದ ಗುರುಗಳನ್ನು ನೆನಪಿಸಿಕೊಳ್ಳದ ಇಂದಿನ ದಿನಗಳಲ್ಲಿ ಈ ಹಳೇ ವಿದ್ಯಾರ್ಥಿಗಳು ಕಾಲೇಜಿನ ಉಪನ್ಯಾಸಕರನ್ನು ಕೃತಜ್ಞತಾ ಪೂರ್ವಕವಾಗಿ ವಂದಿಸಿರುವ ಕಾರ್ಯ ಕಾಲೇಜಿನ ಇತಿಹಾಸದ ಪುಟಗಳ ಸೇರಲಿದೆ ಎಂದು ತಿಳಿಸಿದರು.

ಅಮೆರಿಕಾದ ಯುಎಇ, ಬೆಂಗಳೂರು ಸೇರಿದಂತೆ ವಿವಿಧ ದೇಶ, ರಾಜ್ಯಗಳಲ್ಲಿ ನೆಲೆಸಿರುವ ಹಳೇ ವಿದ್ಯಾರ್ಥಿಗಳು, ಎರಡು ದಶಕಗಳ ಹಳೆಯ ನೆನಪುಗಳನ್ನು ವಿವರಿಸಿ, ಉಪನ್ಯಾಸಕರಿಗೆ ಸ್ಮರಣಿಕೆ ನೀಡಿ ಗೌರವಿಸಿದರು.

ಇದೇ ವೇಳೆ ಕನ್ನಡ ವಿಭಾಗದ ಮುಖ್ಯಸ್ಥ ಡಾ.ಕರುಣಾಕರ್, ಇಂಗ್ಲಿಷ್ ವಿಭಾಗದ ಪೂಣಚ್ಚ, ಹಿಂದಿ ವಿಭಾಗದ ಡಾ.ಶ್ರೀಧರ್ ಹೆಗಡೆ, ಅರ್ಥಶಾಸ್ತ್ರ ವಿಭಾಗದ ತಿಪ್ಪೇಸ್ವಾಮಿ, ಕಂಪ್ಯೂಟರ್ ವಿಭಾಗದ ಮುಖ್ಯಸ್ಥ ರವಿಶಂಕರ್ ಮತ್ತಿತರರು ಉಪಸ್ಥಿತರಿದ್ದರು.

ತಾಲೂಕು ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ



ಸೋಮವಾರಪೇಟೆಯಲ್ಲಿ ಬಿಜೆಪಿ ಕಾರ್ಯಕರ್ತರು ತಾಲೂಕು ಆಸ್ಪತ್ರೆಗೆ ವೈದ್ಯರನ್ನು ನೇಮಿಸುವಂತೆ ಒತ್ತಾಯಿಸಿ ಪ್ರತಿಭಟಿಸಿದರು.

ಮಡಿಕೇರಿ: ಸೋಮವಾರಪೇಟೆ ತಾಲೂಕು ಸರ್ಕಾರಿ ಆಸ್ಪತ್ರೆಗೆ ವೈದ್ಯರನ್ನು ನೇಮಿಸುವಂತೆ ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ಸೋಮವಾರ ತಾಲೂಕು ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಮೊದಲು ಪಟ್ಟಣದ ಪುಟ್ಟಪ್ಪ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಕಾರ್ಯಕರ್ತರು, ತಹಸೀಲ್ದಾರ್ ನವೀನ್ ಕುಮಾರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಘೋಷಣೆ ಕೂಗಿದರು. ಬಳಿಕ ಅಲ್ಲಿಂದ ಮೆರವಣಿಗೆಯಲ್ಲಿ ತೆರಳಿದರು. ನಾವು ಮನವಿ ಸಲ್ಲಿಸಲು ಬರುವುದಾಗಿ ತಹಸೀಲ್ದಾರ್‌ಗೆ ಮೊದಲೇ ಮಾಹಿತಿ ನೀಡಿದ್ದರು. ತಹಸೀಲ್ದಾರ್ ಬೇರೊಂದು ಸಭೆಯಲ್ಲಿ ಪಾಲ್ಗೊಂಡು ಅರ್ಧ ಗಂಟೆ ಕಳೆದರೂ ಬಂದಿಲ್ಲ ಎಂದು ಆಕ್ರೋಶಗೊಂಡ ಪ್ರತಿಭಟನಾಕಾರರು, ಅವರ ಕೊಠಡಿಗೆ ನುಗ್ಗಲು ಯತ್ನಿಸಿದರು. ಈ ಸಂದರ್ಭ ಪೊಲೀಸರು ಮಧ್ಯಪ್ರವೇಶಿಸಿ ಪ್ರತಿಭಟನಾಕಾರರನ್ನು ತಡೆದರು. ಬಳಿಕ ಪ್ರತಿಭಟನಾಕಾರರು ಅಲ್ಲೇ ಧರಣಿ ನಡೆಸಿದರು. ಸ್ವಲ್ಪ ಸಮಯದ ನಂತರ ಹೊರ ಬಂದ ತಹಸೀಲ್ದಾರ್ ವಿರುದ್ಧ ಅಸಮಾಧಾನ ಹೊರ ಹಾಕಿದ ಪ್ರತಿಭಟನಾಕಾರರು, ವೈದ್ಯರ ನೇಮಕಕ್ಕೆ 1 ವಾರದ ಗಡುವು ನೀಡಿ ತಪ್ಪಿದಲ್ಲಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿ, ಮನವಿ ಸಲ್ಲಿಸಿರು.

ಈ ಸಂದರ್ಭ ವಿಧಾನಪರಿಷತ್ ಮಾಜಿ ಸದಸ್ಯ ಎಸ್.ಜಿ.ಮೇದಪ್ಪ ಮಾತನಾಡಿ, ತಾಲೂಕು ಕೇಂದ್ರವಾದ ಸೋಮವಾರಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಸರಿಯಾದ ವೈದ್ಯರುಗಳಿಲ್ಲದೆ ಜನಸಾಮಾನ್ಯರು ಹಾಗೂ ಬಡ ರೋಗಿಗಳು ತೊಂದರೆ ಅನುಭವಿಸುತ್ತಿದ್ದಾರೆ. ಇದರ ಅರಿವಿದ್ದರೂ ಶಾಸಕರು ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಗೌತಮ್, ಜಿಪಂ ಮಾಜಿ ಉಪಾಧ್ಯಕ್ಷೆ ಲೋಕೇಶ್ವರಿ ಗೋಪಾಲ್, ಬಿಜೆಪಿ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಮಹೇಶ್ ತಿಮ್ಮಯ್ಯ, ಉಪಾಧ್ಯಕ್ಷ ಮನುಕುಮಾರ್, ಕಾರ್ಯದರ್ಶಿಗಳಾದ ದರ್ಶನ್ ಜಯಪ್ಪ, ಶರತ್, ಮಹಿಳಾ ಮೋರ್ಚಾ ಅಧ್ಯಕ್ಷೆ ಕವಿತಾ ವಿರುಪಾಕ್ಷ, ಪಪಂ ಸದಸ್ಯರಾದ ಚಂದ್ರು, ಮಹೇಶ್, ಜೀವನ್, ಮೋಹಿನಿ, ಹಾನಗಲ್ಲು ಗ್ರಾಪಂ ಉಪಾಧ್ಯಕ್ಷೆ ರೇಣುಕಾ ವೆಂಕಟೇಶ್ ಪಾಲ್ಗೊಂಡಿದ್ದರು.

ವಾಯುಪಡೆ ಶಿಬಿರದಲ್ಲಿ ತರುಣ್ ತಿಮ್ಮಯ್ಯ ಭಾಗಿ



ಗೋಣಿಕೊಪ್ಪ: ಬೀದರ್‌ನಲ್ಲಿ ಎನ್‌ಸಿಸಿ ಆಯೋಜಿಸಿದ್ದ ರಾಷ್ಟ್ರೀಯ ವಾಯುಪಡೆ ಶಿಬಿರದಲ್ಲಿ ಕೊಡಗಿನ ಎನ್‌ಸಿಸಿ ಕೆಡೆಟ್ (ಏರ್ ವಿಂಗ್) ಪಾಲಚಂಡ ತರುಣ್ ತಿಮ್ಮಯ್ಯ ಪಾಲ್ಗೊಂಡಿದ್ದರು.

ವಾಯುಪಡೆಯ ಪೈಲಟ್‌ಗಳಿಗೆ ಅತ್ಯಾಧುನಿಕ ಯುದ್ಧ ವಿಮಾನಗಳ 3ನೇ ಹಂತದ ಚಾಲನಾ ತರಬೇತಿ ನೀಡಲಾಯಿತು. ಮಂಗಳೂರಿನ ಸೆಂಟ್ ಅಲೋಶಿಯಸ್ ಕಾಲೇಜಿನ ಬಯೋಟೆಕ್‌ನ 2ನೇ ವರ್ಷದ ವಿದ್ಯಾರ್ಥಿ ತರುಣ್ ತಿಮ್ಮಯ್ಯ ಸೇರಿದಂತೆ ಕರ್ನಾಟಕ, ಗೋವ ವಿಭಾಗದ 14 ಕೆಡೆಟ್ ಪಾಲ್ಗೊಂಡಿದ್ದರು.

ಶೀಘ್ರವಾಗಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಿ



ಚಾ.ನಗರದ ಜಿಪಂ ಸಭಾಂಗಣದಲ್ಲಿ ನಡೆದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಸಚಿವ ಕೆ.ವೆಂಕಟೇಶ್ ಮಾತನಾಡಿದರು.

ಚಾಮರಾಜನಗರ, ಜೂ.10–ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ನಡೆದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಇತ್ತೀಚೆಗೆ ಸತತವಾಗಿ ಮಳೆಯಾಗುತ್ತಿದೆ. ಕುಡಿಯುವ ನೀರಿನ ಪರಿಸ್ಥಿತಿ ಸುಧಾರಿಸಲಿದ್ದು, ನೀರಿಗೆ ಯಾವುದೇ ತಾಂತ್ರಿಕ ಸಮಸ್ಯೆಗಳು ಎದುರಾದರೂ ಅದನ್ನು ಸಮರ್ಪಕವಾಗಿ ನಿಭಾಯಿಸಿ ತ್ವರಿತವಾಗಿ ಪೂರೈಸಲು ಆದ್ಯತೆ ನೀಡಬೇಕು ಎಂದರು.

ಜಿಲ್ಲೆಯ ಯಾವುದೇ ಭಾಗದಲ್ಲಿ ಜನರಿಗೆ ಕುಡಿಯುವ ನೀರು ಪೂರೈಸುವಲ್ಲಿ ನಿರ್ಲಕ್ಷ್ಯ ವಹಿಸಿದರೆ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಜನತೆಗೆ ಶುದ್ಧ ಕುಡಿಯುವ ನೀರು ಒದಗಿಸುವ ನಿಟ್ಟಿನಲ್ಲಿ ಬೋರ್‌ವೆಲ್‌ಗಳ ಬಳಿ ಸ್ವಚ್ಛತೆ ಕಾಪಾಡಬೇಕು. ನೀರಿನ ಟ್ಯಾಂಕ್‌ಗಳನ್ನು ಆಗಾಗ್ಗೆ ಸ್ವಚ್ಛಗೊಳಿಸಬೇಕು. ಪೈಪ್‌ಲೈನ್ ಸೋರಿಕೆಯನ್ನು ಕೂಡಲೇ ಸರಿಪಡಿಸಬೇಕು. ಕುಡಿಯುವ ನೀರಿಗೆ ಕಲುಷಿತ ಸೇರದಂತೆ ನಿಗಾ ವಹಿಸಬೇಕು ಎಂದು ಸೂಚಿಸಿದರು.

ಕೊಳ್ಳೇಗಾಲ ತಾಲೂಕಿನ ಮಧುವನಹಳ್ಳಿಯಲ್ಲಿ ಕಲುಷಿತ ನೀರು ಸೇವಿಸಿ ಕೆಲ ಜನರು ಅಸ್ವಸ್ಥಗೊಂಡಿದ್ದರು. ಅಂತಹ ಪ್ರಕರಣ ಜಿಲ್ಲೆಯಲ್ಲಿ ಮತ್ತೆ ಮರುಕಳಿಸದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕು. ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿರುವ ಶುದ್ಧ ಕುಡಿಯುವ ನೀರಿನ (ಆರ್‌ಒ ಪ್ಲಾಂಟ್) ಘಟಕಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಬೇಕು. ನೀರಿನ ಘಟಕ ಕೆಟ್ಟಿದ್ದರೆ ಸಂಬಂಧಪಟ್ಟ ಏಜೆನ್ಸಿಗಳಿಗೆ ಟೈಮ್‌ಲೈನ್ ನಿಗದಿಪಡಿಸಿ ದುರಸ್ತಿಪಡಿಸಲು ಮುಂದಾಗಬೇಕು ಎಂದು ತಿಳಿಸಿದರು.

ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾತನಾಡಿ, ಜಿಲ್ಲಾದ್ಯಂತ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಎಲ್ಲಾ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಸಮಸ್ಯೆ ಎದುರಾಗುವ ಮೊದಲೇ ಅಧಿಕಾರಿಗಳು ಕಾರ್ಯಸನ್ನದ್ಧರಾಗಬೇಕು. ಜಿಲ್ಲೆಯಲ್ಲಿ ಬಡವರು, ಅಸಹಾಯಕರು, ಹಿಂದುಳಿದವರು, ಪರಿಶಿಷ್ಟ ವರ್ಗದವರು ಅಧಿಕ ಸಂಖ್ಯೆಯಲ್ಲಿದ್ದು, ನಿರೀಕ್ಷಿತ ಮಟ್ಟದಲ್ಲಿ ಎಲ್ಲರ ಅಭಿವೃದ್ಧಿಯಾಗಬೇಕು ಎಂದರು.

ಜಿಲ್ಲಾಧಿಕಾರಿ ಶಿಲ್ಪಾನಾಗ್ ಮಾತನಾಡಿ, ಕುಡಿಯುವ ನೀರು ಪೂರೈಕೆ ಸಂಬಂಧ ನೀರು ಕಲುಷಿತಗೊಳ್ಳದಂತೆ ಎಚ್ಚರ ವಹಿಸಲು ಎಲ್ಲಾ ಅಧಿಕಾರಿಗಳಿಗೂ ಸೂಚನೆ ನೀಡಲಾಗಿದೆ. ಚಾಮರಾಜನಗರ ಹಾಗೂ ಕೊಳ್ಳೇಗಾಲದಲ್ಲಿ ಶುದ್ಧೀಕರಣ ಪರೀಕ್ಷಾ ಕೇಂದ್ರಗಳಲ್ಲಿ ನೀರಿನ ಪರೀಕ್ಷೆ ನಡೆಸಲಾಗುತ್ತಿದೆ. ಜಿಲ್ಲೆಯ ಎಲ್ಲಾ ಭಾಗಗಳಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆಗೆ ಸಮರ್ಪಕ ಕ್ರಮವಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್.ಕೃಷ್ಣಮೂರ್ತಿ, ಕಾಡಾ ಅಧ್ಯಕ್ಷ ಮರಿಸ್ವಾಮಿ, ಮೈಸೂರು ಜಿಲ್ಲಾಧಿಕಾರಿ ಕೆ.ವಿ.ರಾಜೇಂದ್ರ, ಚಾಮರಾಜನಗರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಉಪ ಅರಣ್ಯ ಸಂರಕ್ಷಣಾಧಿಕಾರಿ ದೀಪಾ ಜೆ.ಕಂಟ್ರಾಕ್ಟರ್, ಇತರರು ಉಪಸ್ಥಿತರಿದ್ದರು.

ಕಾಡಂಚಿನ ಗ್ರಾಮಗಳ ಮೂಲ ಸೌಲಭ್ಯಕ್ಕೆ ಕ್ರಮ

● ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಭರವಸೆ ● ಇಂಡಿಗನತ್ತ ಗ್ರಾಮಕ್ಕೆ ಭೇಟಿ, ಕುಂದುಕೊರತೆ ಆಲಿಕೆ

ಚಾಮರಾಜನಗರ, ಜೂ.10– ಮಲೆಮಹದೇಶ್ವರಬೆಟ್ಟ ವ್ಯಾಪ್ತಿಯ ಕಾಡಂಚಿನ ಗ್ರಾಮಗಳಿಗೆ ಅಗತ್ಯ ಮೂಲ ಸೌಕರ್ಯ ಒದಗಿಸಲು ಈಗಾಗಲೇ ಪ್ರಸ್ತಾವನೆ ಸಿದ್ಧಪಡಿಸಿದ್ದು, ಸೌಲಭ್ಯಗಳಿಗೆ ಎಲ್ಲಾ ಅಗತ್ಯ ಕ್ರಮ ವಹಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಭರವಸೆ ನೀಡಿದರು.

ಮಹದೇಶ್ವರಬೆಟ್ಟ ವ್ಯಾಪ್ತಿಯ ಕಾಡಂಚಿನ ಇಂಡಿಗನತ್ತ ಗ್ರಾಮಕ್ಕೆ ಸೋಮವಾರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಕುಂದು ಕೊರತೆ ಆಲಿಸಿ ಮಾತನಾಡಿದ ಅವರು, ಕಾಡಂಚಿನ ಗ್ರಾಮಗಳಿಗೆ ರಸ್ತೆ, ವಿದ್ಯುತ್ ಸೇರಿದಂತೆ ಅಗತ್ಯ ಮೂಲ ಸೌಲಭ್ಯಗಳನ್ನು ಒದಗಿಸಲು ಪ್ರಸ್ತಾವನೆ ಸಿದ್ಧವಾಗಿದೆ. ಡಾಂಬರ್ ಹಾಗೂ ಸಿಸಿ ರಸ್ತೆಗೆ ಪ್ರತ್ಯೇಕವಾಗಿ ಅಂದಾಜು ಪಟ್ಟಿ ಸಿದ್ಧಪಡಿಸಲಾಗಿದ್ದು, ಅರಣ್ಯ ಪ್ರದೇಶದಿಂದ ಕೇಬಲ್ ಮೂಲಕ ವಿದ್ಯುತ್ ಸೌಲಭ್ಯ ಒದಗಿಸಲು 38 ಕೋಟಿ ರೂ. ವೆಚ್ಚದ ಪ್ರಸ್ತಾವನೆಯನ್ನು ಸಹ ತಯಾರಿಸಲಾಗಿದೆ ಎಂದರು.

ಕಾಡಂಚಿನ ಮಕ್ಕಳ ಶೈಕ್ಷಣಿಕ ಸೌಲಭ್ಯಗಳಿಗೂ ಅಗತ್ಯ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಸ್ಥಳೀಯ ಗ್ರಾಮಗಳು ಮತ್ತು ಶಾಲಾ ಮಕ್ಕಳಿಗೆ ಅನುಕೂಲವಾಗಲು ಇನ್ನೂ 4 ವಾಹನಗಳನ್ನು ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಒದಗಿಸಲು ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದರು.



ಮಹದೇಶ್ವರಬೆಟ್ಟ ವ್ಯಾಪ್ತಿಯ ಇಂಡಿಗನತ್ತ ಗ್ರಾಮಕ್ಕೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಸ್ಥಳೀಯರ ಕುಂದುಕೊರತೆ ಆಲಿಸಿದರು.

ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ ಮಾತನಾಡಿ, ಸ್ಥಳೀಯರಿಗೆ ರಸ್ತೆ, ವಿದ್ಯುತ್ ಸೇರಿದಂತೆ ಮೂಲ ಸೌಕರ್ಯ ಒದಗಿಸಿಕೊಡಲು ನಿಯಮಬದ್ಧವಾಗಿ ಕಾನೂನು ಚೌಕಟ್ಟಿನೊಳಗೆ ಕ್ರಮಕ್ಕೆ ಮುಂದಾಗಲಿದ್ದೇವೆ. ಉತ್ತಮ ರಸ್ತೆ ವಾಹನಗಳ ಸಂಚಾರಕ್ಕೂ ಅನುಕೂಲವಾಗಲಿದೆ. ಸ್ಥಳೀಯವಾಗಿ ಜನರ ಆರೋಗ್ಯ ಸೌಲಭ್ಯಕ್ಕಾಗಿ ಸಂಚಾರಿ ಆರೋಗ್ಯ ಘಟಕ ಸ್ಥಾಪನೆ ಮಾಡಲಾಗುವುದು ಎಂದು ತಿಳಿಸಿದರು.

ಜಿಲ್ಲಾಡಳಿತ, ಮಲೆಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ, ಅರಣ್ಯ ಇಲಾಖೆ ಸೇರಿದಂತೆ ಎಲ್ಲರೊಂದಿಗೆ ಚರ್ಚಿಸಿ, ಜನರ ಸಮಸ್ಯೆಗಳಿಗೆ ಸ್ಪಂದಿಸಲು ಹಂತ ಹಂತವಾಗಿ ನಾಗರಿಕ ಮೂಲಸೌಲಭ್ಯ ಒದಗಿಸಲಾಗುವುದು ಎಂದರು.

> “ಸ್ಥಳೀಯರ ಸಮಸ್ಯೆಗಳನ್ನು ಆಲಿಸಲಾಗಿದ್ದು, ಜನರ ಕುಂದುಕೊರತೆಗಳ ಪರಿಹಾರಕ್ಕೆ ಅಧಿಕಾರಿಗಳೊಂದಿಗೆ ಚರ್ಚಿಸಿ ಪ್ರಸ್ತಾವನೆ ಸಿದ್ಧಪಡಿಸಲಾಗಿದೆ. ಶಾಲಾ ವಿದ್ಯಾರ್ಥಿಗಳ ಮುಂದಿನ ವಿದ್ಯಾಭ್ಯಾಸ ಹಾಗೂ ಹಾಸ್ಟೆಲ್ ಇನ್ನಿತರ ಸೌಲಭ್ಯಗಳಿಗೆ ಕ್ರಮ ವಹಿಸಲಾಗುತ್ತಿದೆ.
>
> –ಶಿಲ್ಪನಾಗ್, ಜಿಲ್ಲಾಧಿಕಾರಿ

ಇದೇ ವೇಳೆ ಮಾಜಿ ಶಾಸಕ ಆರ್.ನರೇಂದ್ರ ಮಾತನಾಡಿ, ಸ್ಥಳೀಯ ಸಮಸ್ಯೆಗಳ ಬಗ್ಗೆ ಗಮನ ಸೆಳೆದರು. ಶಾಸಕ ಎ.ಆರ್.ಕೃಷ್ಣಮೂರ್ತಿ, ಕಾಡಾ ಅಧ್ಯಕ್ಷ ಮರಿಸ್ವಾಮಿ, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ವೃತ್ತ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಿರಾಲಾಲ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಾ.ಸಂತೋಷ್ ಕುಮಾರ್, ತಹಸೀಲ್ದಾರ್ ಗುರುಪ್ರಸಾದ್, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಜೆಡಿಎಸ್ ಕಾರ್ಯಕರ್ತರ ವಿಜಯೋತ್ಸವ



ಚಾಮರಾಜನಗರದಲ್ಲಿ ಜೆಡಿಎಸ್ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಚಾಮರಾಜನಗರ, ಜೂ.10–ನರೇಂದ್ರ ಮೋದಿ 3ನೇ ಬಾರಿಗೆ ಪ್ರಧಾನಿಯಾಗಿ ಹಾಗೂ ಹೆಚ್.ಡಿ.ಕುಮಾರಸ್ವಾಮಿ ಕೇಂದ್ರ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ನಗರದಲ್ಲಿ ವಿಜಯೋತ್ಸವ ಆಚರಿಸಿದರು.

ನಗರದ ಭುವನೇಶ್ವರಿ ವೃತ್ತದಲ್ಲಿ ಜೆಡಿಎಸ್ ಮುಖಂಡರಾದ ಆಲೂರು ಮಲ್ಲು, ಬಿ.ಪುಟ್ಟಸ್ವಾಮಿ ನೇತೃತ್ವದಲ್ಲಿ ಜಮಾಯಿಸಿದ ಕಾರ್ಯಕರ್ತರು, ನರೇಂದ್ರ ಮೋದಿ ಹಾಗೂ ಕುಮಾರಸ್ವಾಮಿ ಪರ ಘೋಷಣೆ ಕೂಗಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಆಲೂರು ಮಲ್ಲು, ಬಿ.ಪುಟ್ಟಸ್ವಾಮಿ ಮಾತನಾಡಿ, ಇಂಡಿಯಾ ಮೈತ್ರಿಕೂಟ ಎಲ್ಲಾ ಕುತಂತ್ರ ನಡೆಸಿದರು ಕೂಡ ಎನ್‌ಡಿಎ ಮೈತ್ರಿಕೂಟ ಯಶಸ್ವಿಯಾಗಿ ಕೇಂದ್ರದ ಗದ್ದುಗೆ ಹಿಡಿದಿದೆ. ಸತತ 3ನೇ ಬಾರಿಗೆ ನರೇಂದ್ರ ಮೋದಿ, ಮೊದಲ ಬಾರಿಗೆ ಕೇಂದ್ರ ಸಚಿವರಾಗಿ ಕುಮಾರಸ್ವಾಮಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಮುಂದಿನ ದಿನಗಳಲ್ಲಿ ದೇಶದ ಜನತೆಗೆ ಅನುಕೂಲವಾಗಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಸಂತೇಮರಹಳ್ಳಿ ಗ್ರಾಪಂ ಮಾಜಿ ಅಧ್ಯಕ್ಷ ಶಂಕರಪ್ಪ, ಯಳಂದೂರು ತಾಲೂಕು ಜೆಡಿಎಸ್ ಅಧ್ಯಕ್ಷ ಕೆಸ್ತೂರು ಆನಂದ್ ಉಪ್ಪಾರ್, ಹೊಮ್ಮ ಮಹದೇವಸ್ವಾಮಿ, ರೇಚಂಬಳ್ಳಿ ಕುಮಾರ್, ಪಣ್ಯದಹುಂಡಿ ರಾಜು, ನಾಗರಾಜು, ಕೂಡ್ಲೂರು ಮುತ್ತುರಾಜು, ಪುಷ್ಪಲತಾ, ತೇಜಸ್ವಿನಿ ಇತರರು ಭಾಗವಹಿಸಿದ್ದರು.

ಚಾಮರಾಜನಗರ ಕ್ಷೇತ್ರದಲ್ಲಿ ಅಭ್ಯರ್ಥಿ ಸುನೀಲ್ ಬೋಸ್ ಭರ್ಜರಿ ಗೆಲುವು ಹಿನ್ನೆಲೆ

ಕಾಂಗ್ರೆಸ್ ಶಾಸಕರ ವರ್ಚಸ್ಸು ಮತ್ತಷ್ಟು ಹೆಚ್ಚಳ



ಎ.ಆರ್.ಕೃಷ್ಣಮೂರ್ತಿ



ಪುಟ್ಟರಂಗಶೆಟ್ಟಿ



ಗಣೇಶ್ ಪ್ರಸಾದ್

ಚಾಮರಾಜನಗರ, ಜೂ.10– ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಚಾಮರಾಜನಗರ ಮೀಸಲು ಕ್ಷೇತ್ರದ ಎಲ್ಲಾ 8 ವಿಧಾನಸಭಾ ಕ್ಷೇತ್ರಗಳಲ್ಲೂ ಭರ್ಜರಿ ಮುನ್ನಡೆಯೊಂದಿಗೆ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಗೆಲುವು ಸಾಧಿಸಿದ್ದು, ಈ ಗೆಲುವಿನಿಂದ ಜಿಲ್ಲೆಯ ಪಕ್ಷದ ಹಾಲಿ ಹಾಗೂ ಮಾಜಿ ಶಾಸಕರ ವರ್ಚಸ್ಸು ಮತ್ತಷ್ಟು ಹೆಚ್ಚಾಗಿದೆ.

ಕಳೆದ ಚುನಾವಣೆಗೆ ಹೋಲಿಕೆ ಮಾಡಿದರೆ ಈ ಬಾರಿ ಕಾಂಗ್ರೆಸ್ ತನ್ನ ಮತ ಗಳಿಕೆಯನ್ನು ಶೇ. 9.75ರಷ್ಟು ಏರಿಸಿಕೊಂಡಿದೆ. ಬಿಜೆಪಿ ಶೇ.4.06ರಷ್ಟು ಇಳಿಕೆ ಕಂಡಿದ್ದು, ಕಾಂಗ್ರೆಸ್‌ನ ಮತ ಗಳಿಕೆ ಹೆಚ್ಚಳದಿಂದ ಜಿಲ್ಲೆಯ ಶಾಸಕರು, ಮುಖಂಡರು, ಕಾರ್ಯಕರ್ತರಿಗೆ ಪಕ್ಷದ ವರಿಷ್ಠರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಹಳೇ ಮೈಸೂರು ಭಾಗದಲ್ಲಿ ಕಾಂಗ್ರೆಸ್ ಹಿಂದಿನಿಂದಲೂ ಬಲಿಷ್ಠವಾಗಿದ್ದು, ಅದರಲ್ಲೂ ಜಿಲ್ಲಾ ಮಟ್ಟದಲ್ಲಿ ಹೇಳುವುದಾದರೆ ಚಾಮರಾಜನಗರ ಕಾಂಗ್ರೆಸ್‌ನ ಭದ್ರಕೋಟೆಯಾಗಿದೆ. ಆದರೂ, 2019ರ ಚುನಾವಣೆಯಲ್ಲಿ ಕ್ಷೇತ್ರ ಕಳೆದುಕೊಂಡಿದ್ದ ಕೈ ಪಕ್ಷ ಈ ಬಾರಿ ಐತಿಹಾಸಿಕ ಗೆಲುವು ದಾಖಲಿಸುವ ಮೂಲಕ ಮತ್ತೆ ಕ್ಷೇತ್ರವನ್ನು ತನ್ನ ಹಿಡಿತಕ್ಕೆ ತೆಗೆದುಕೊಂಡಿದೆ.

ಶಾಸಕರ ಶ್ರಮ: ಈ ಬಾರಿ ಜಿಲ್ಲೆಯಲ್ಲಿ ಗರಿಷ್ಠ ಪ್ರಮಾಣದ ಮುನ್ನಡೆ ತಂದುಕೊಡಬೇಕೆಂದು ಶಾಸಕರು ಹಾಗೂ ಮಾಜಿ ಶಾಸಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಾಕೀತು ಮಾಡಿದ್ದರು. ಹೀಗಾಗಿ, ಜಿಲ್ಲೆಯ ಮೂವರೂ ಶಾಸಕರು, ಹನೂರಿನ ಮಾಜಿ ಶಾಸಕರು ಕಾಲಿಗೆ ಚಕ್ರ ಕಟ್ಟಿಕೊಂಡು ಸುಡು ಬಿಸಿಲಿನಲ್ಲೂ ಕ್ಷೇತ್ರಾದ್ಯಂತ ಓಡಾಡಿ ಅವರ ಅವರ ಕ್ಷೇತ್ರಗಳಲ್ಲಿ ಭಾರಿ ಅಂತರದ ಮತಗಳನ್ನು ತಂದು ಕೊಟ್ಟಿದ್ದಾರೆ.

ಚಾಮರಾಜನಗರ ಕ್ಷೇತ್ರದಲ್ಲಿ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಪುಟ್ಟರಂಗಶೆಟ್ಟಿ ಗೆದ್ದಿರುವ ಮತಗಳ ಅಂತರಕ್ಕಿಂತಲೂ ಹೆಚ್ಚಿನ ಮತಗಳ ಅಂತರದಿಂದ ಬೋಸ್ ಮುನ್ನಡೆ ಸಾಧಿಸಿದ್ದಾರೆ.

> “ನಾನು ಮುಖ್ಯಮಂತ್ರಿಗಳಿಗೆ ನೀಡಿದ ಭರವಸೆಯಂತೆ 33 ಸಾವಿರಕ್ಕೂ ಹೆಚ್ಚು ಮತಗಳನ್ನು ಕೊಳ್ಳೇಗಾಲದಲ್ಲಿ ನೀಡಿದ್ದೇವೆ. ಪ್ರತಿ ಪಂಚಾಯಿತಿ, ಹೋಬಳಿಗಳಿಗೂ ಭೇಟಿ ನೀಡಿ ಮತಯಾಚನೆ ಮಾಡಿದ್ದೇವೆ. ಕಾರ್ಯಕರ್ತರು ಹಾಗೂ ಮುಖಂಡರು ಪಕ್ಷವನ್ನು ಗೆಲ್ಲಿಸಬೇಕು ಎಂದು ಪಣತೊಟ್ಟಿದ್ದರು. ಜೊತೆಗೆ ಸರ್ಕಾರದ ಗ್ಯಾರಂಟಿ ಯೋಜನೆಗಳೂ ಕೆಲಸ ಮಾಡಿವೆ.
>
> –ಎ.ಆರ್.ಕೃಷ್ಣಮೂರ್ತಿ, ಕೊಳ್ಳೇಗಾಲ ಶಾಸಕ

ಜಿಲ್ಲೆಯಲ್ಲಿ 1,08,281 ಮತ ಮುನ್ನಡೆ: ಜಿಲ್ಲೆಯ ನಾಲ್ಕು ಕ್ಷೇತ್ರಗಳಲ್ಲಿ ಬೋಸ್‌ಗೆ 1,08,281 ಮತಗಳ ಮುನ್ನಡೆ ಸಿಕ್ಕಿದ್ದರೆ, ಮೈಸೂರು ಭಾಗದ ಕ್ಷೇತ್ರಗಳಲ್ಲಿ ಅವರಿಗೆ 80,589 ಮತಗಳ ಮುನ್ನಡೆ ದೊರಕಿದೆ. ಕಳೆದ ಬಾರಿ ಬಿಜೆಪಿಗೆ ಒಟ್ಟಾರೆ ಚಲಾವಣೆಗೊಂಡ ಮತಗಳ ಪೈಕಿ ಶೇ.45.2ರಷ್ಟು ಮತಗಳು ಲಭ್ಯವಾಗಿದ್ದವು. ಕಾಂಗ್ರೆಸ್‌ಗೆ ಶೇ.45.1ರಷ್ಟು ಮತಗಳು ಬಂದಿದ್ದವು. ಆದರೆ, ಈ ಬಾರಿ ಕಾಂಗ್ರೆಸ್ ಅಂಚೆ ಮತವೂ ಸೇರಿದಂತೆ ಒಟ್ಟು ಚಲಾವಣೆಗೊಂಡ ಮತಗಳಲ್ಲಿ ಶೇ.54.85ರಷ್ಟು ಮತಗಳನ್ನು ತನ್ನತ್ತ ಬಾಚಿಕೊಂಡಿದೆ. ಆ ಮೂಲಕ ಕಳೆದ ಬಾರಿಗಿಂತ ಶೇ.9.75ರಷ್ಟು ಹೆಚ್ಚಿನ ಸಾಧನೆ ಮಾಡಿದೆ. ಆದರೆ, ಬಿಜೆಪಿ ತನ್ನ ಮತ ಗಳಿಕೆಯನ್ನು ಶೇ.4.06ರಷ್ಟು ಕಳೆದುಕೊಂಡಿದೆ.

ಒಂದನೇ ಪುಟದಿಂದ

ಸೋಮಣ್ಣ–ಜಲಶಕ್ತಿ, ರೈಲ್ವೆ

ಕಳೆದ ಬಾರಿ ಕೃಷಿ, ಆಹಾರ ಸಂಸ್ಕರಣೆ ರಾಜ್ಯ ಸಚಿವೆಯಾಗಿದ್ದ ಶೋಭಾ ಕರಂದ್ಲಾಜೆಯವರಿಗೆ ಈ ಬಾರಿ ಅತೀ ಸಣ್ಣ, ಸಣ್ಣ ಕೈಗಾರಿಕೆ ಮತ್ತು ಕಾರ್ಮಿಕ ಇಲಾಖೆ, ತುಮಕೂರಿನಿಂದ ಲೋಕಸಭೆಗೆ ಪ್ರಥಮ ಬಾರಿಗೆ ಆಯ್ಕೆಯಾಗಿರುವ ವಿ. ಸೋಮಣ್ಣ ಅವರಿಗೆ ಜಲಶಕ್ತಿ ಮತ್ತು ರೈಲ್ವೆ ರಾಜ್ಯ ಖಾತೆ ನೀಡಲಾಗಿದ್ದರೆ, ಕರ್ನಾಟಕದಿಂದ ರಾಜ್ಯಸಭೆಗೆ ಆಯ್ಕೆಯಾಗಿರುವ ನಿರ್ಮಲಾ ಸೀತಾರಾಮನ್ ಅವರನ್ನು ಕಳೆದ ಬಾರಿ ನಿರ್ವಹಿಸಿದ್ದ ಹಣಕಾಸು ಖಾತೆಯಲ್ಲೇ ಮುಂದುವರೆಸಲಾಗಿದೆ.

ಪ್ರಧಾನಿ ಮೋದಿಯವರು ಸಿಬ್ಬಂದಿ, ಸಾರ್ವಜನಿಕ ಕುಂದು–ಕೊರತೆ, ಪಿಂಚಣಿ, ಅಣುಶಕ್ತಿ, ಬಾಹ್ಯಾಕಾಶ, ಪ್ರಮುಖ ನೀತಿ ನಿರ್ಧಾರ ಖಾತೆಗಳ ಜೊತೆಗೆ ಯಾವುದೇ ಸಚಿವರಿಗೆ ಹಂಚಿಕೆಯಾಗದ ಖಾತೆಗಳನ್ನೂ ತಮ್ಮ ಬಳಿಯೇ ಇಟ್ಟುಕೊಂಡಿದ್ದಾರೆ.

ಮೋದಿಯವರ ಸಂಪುಟದ ಸಚಿವರ ಖಾತೆ ವಿವರ:

ಕ್ಯಾಬಿನೆಟ್: ರಾಜನಾಥ್– ರಕ್ಷಣೆ, ಅಮಿತ್ ಶಾ– ಗೃಹ, ನಿತಿನ್ ಗಡ್ಕರಿ– ರಸ್ತೆ ಸಾರಿಗೆ ಮತ್ತು ಹೆದ್ದಾರಿ, ಜೆ.ಪಿ. ನಡ್ಡಾ– ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ರಸಾಯನಿಕ ಮತ್ತು ರಸಗೊಬ್ಬರ, ಶಿವರಾಜ್ ಸಿಂಗ್ ಚವ್ಹಾಣ್– ಕೃಷಿ ಮತ್ತು ರೈತ ಕಲ್ಯಾಣ ಹಾಗೂ ಗ್ರಾಮೀಣಾಭಿವೃದ್ಧಿ, ನಿರ್ಮಲಾ ಸೀತಾರಾಮನ್– ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳು, ಜೈಶಂಕರ್– ವಿದೇಶಾಂಗ, ಮನೋಹರ್ ಲಾಲ್– ವಸತಿ ಮತ್ತು ಗ್ರಾಮೀಣ ವ್ಯವಹಾರ ಹಾಗೂ ಇಂಧನ, ಹೆಚ್.ಡಿ. ಕುಮಾರಸ್ವಾಮಿ– ಬೃಹತ್ ಕೈಗಾರಿಕೆ ಮತ್ತು ಉಕ್ಕು, ಪಿಯೂಷ್ ಗೋಯಲ್– ವಾಣಿಜ್ಯ ಮತ್ತು ಕೈಗಾರಿಕೆ, ಧರ್ಮೇಂದ್ರ ಪ್ರಧಾನ್– ಶಿಕ್ಷಣ, ಜಿತನ್ ರಾಮ್ ಮಾಂಝಿ– ಸಣ್ಣ ಮತ್ತು ಮಧ್ಯಮ ಕೈಗಾರಿಕೆ, ರಾಜೀವ್ ರಂಜನ್ ಸಿಂಗ್– ಪಂಚಾಯತ್ ರಾಜ್ ಮತ್ತು ಮೀನುಗಾರಿಕೆ, ಪಶು ಸಂಗೋಪನಾ, ಸರ್ಬಾನಂದ ಸೋನಾವಾಲ್– ಬಂದರು, ಡಾ. ವೀರೇಂದ್ರಕುಮಾರ್– ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ, ರಾಮ್ ಮೋಹನ್ ನಾಯ್ಡು– ನಾಗರಿಕ ವಿಮಾನಯಾನ, ಪ್ರಹ್ಲಾದ್ ಜೋಶಿ– ಆಹಾರ ಮತ್ತು ನಾಗರಿಕ ಪೂರೈಕೆ ಹಾಗೂ ಹೊಸ ನವೀಕರಿಸಬಹುದಾದ ಇಂಧನ, ಜುವೆಲ್ ಓರಮ್– ಆದಿವಾಸಿ ಇಲಾಖೆ, ಗಿರಿರಾಜ್ ಸಿಂಗ್– ಜವಳಿ, ಅಶ್ವಿನಿ ವೈಷ್ಣವ್– ರೈಲ್ವೆ, ಮಾಹಿತಿ ಪ್ರಸಾರ, ಮಾಹಿತಿ ತಂತ್ರಜ್ಞಾನ, ಜ್ಯೋತಿರಾಧಿತ್ಯ ಸಿಂಧಿಯಾ– ಸಂಪರ್ಕ ಮತ್ತು ಈಶಾನ್ಯ ರಾಜ್ಯಗಳ ಅಭಿವೃದ್ಧಿ, ಭೂಪೇಂದ್ರ ಸಿಂಗ್– ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ, ಗಜೇಂದ್ರ ಸಿಂಗ್ ಶೇಖಾವತ್– ಸಂಸ್ಕೃತಿ ಮತ್ತು ಪ್ರವಾಸೋದ್ಯಮ, ಅನ್ನಪೂರ್ಣಾದೇವಿ– ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಕಿರಣ್ ರಿಜಿಜು– ಸಂಸದೀಯ ವ್ಯವಹಾರ ಮತ್ತು ಅಲ್ಪಸಂಖ್ಯಾತರ ಕಲ್ಯಾಣ, ಹರ್ದೀಪ್ ಸಿಂಗ್ ಪುರಿ– ಪೆಟ್ರೋಲಿಯಂ ಮತ್ತು ನೈಸರ್ಗಿಕ ಗ್ಯಾಸ್, ಮನ್ಸುಖ್ ಮಾಂಡವೀಯಾ– ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡೆ, ಕೃಷ್ಣಾ ರೆಡ್ಡಿ– ಕಲ್ಲಿದ್ದಲು ಗಣಿಗಾರಿಕೆ, ಚಿರಾಗ್ ಪಾಸ್ವಾನ್– ಆಹಾರ ಸಂಸ್ಕರಣೆ, ಸಿ.ಆರ್.ಪಾಟೀಲ್– ಜಲಶಕ್ತಿ.

ಸ್ವತಂತ್ರ ನಿರ್ವಹಣೆ: ರಾವ್ ಇಂದ್ರಜಿತ್ ಸಿಂಗ್– ಸಾಂಖ್ಯಿಕ ಮತ್ತು ಯೋಜನೆ ಹಾಗೂ ಸಂಸ್ಕೃತಿ, ಡಾ. ಜಿತೇಂದ್ರಸಿಂಗ್– ವಿಜ್ಞಾನ ಮತ್ತು ತಂತ್ರಜ್ಞಾನ, ಭೂವಿಜ್ಞಾನ, ಪ್ರಧಾನಿ ಕಚೇರಿ, ಅರ್ಜುನ್ ರಾಂ ಮೇಘಲಾಲ್– ಕಾನೂನು, ಸಂಸದೀಯ ವ್ಯವಹಾರ, ಜಾಧವ್ ಪ್ರತಾಪ್ ರಾವ್ ಗಣಪತ್ ರಾವ್– ಆಯುಷ್ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಜಯಂತ್ ಚೌಧರಿ– ಕೌಶಲಾಭಿವೃದ್ಧಿ ಮತ್ತು ಉದ್ಯಮಶೀಲತೆ, ಶಿಕ್ಷಣ.

ರಾಜ್ಯ ಖಾತೆ: ಜಿತಿನ್ ಪ್ರಸಾದ– ವಾಣಿಜ್ಯ ಮತ್ತು ಕೈಗಾರಿಕೆ, ಮಾಹಿತಿ ತಂತ್ರಜ್ಞಾನ, ಶ್ರೀಪಾದ್ ಯೆಸ್ಸೋ ನಾಯಕ್– ಇಂಧನ ಮತ್ತು ಹೊಸ ನವೀಕರಿಸಬಹುದಾದ ಇಂಧನ, ಪಂಕಜ್ ಚೌಧರಿ– ಹಣಕಾಸು, ಕಿಶನ್ ಪಾಲ್– ಸಹಕಾರ, ರಾಮ್‌ದಾಸ್ ಅಠಾವಳೆ– ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ, ರಾಮ್‌ನಾಥ್ ಠಾಕೂರ್– ಕೃಷಿ ಮತ್ತು ರೈತ ಕಲ್ಯಾಣ, ನಿತ್ಯಾನಂದ ರೈ– ಗೃಹ, ಅನುಪ್ರಿಯಾ ಪಟೇಲ್– ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ರಾಸಾಯನಿಕ ಮತ್ತು ಗೊಬ್ಬರ, ವಿ. ಸೋಮಣ್ಣ– ಜಲಶಕ್ತಿ ಮತ್ತು ರೈಲ್ವೇ, ಚಂದ್ರಶೇಖರ ಪೆಮ್ಮಸಾನಿ– ಗ್ರಾಮೀಣಾಭಿವೃದ್ಧಿ ಮತ್ತು ಸಂವಹನ, ಪ್ರೊ.ಎಸ್.ಪಿ.ಸಿಂಗ್ ಬಗೇಲ್– ಮೀನುಗಾರಿಕೆ, ಪಶುಸಂಗೋಪನೆ, ಹೈನುಗಾರಿಕೆ ಮತ್ತು ಪಂಚಾಯತ್ ರಾಜ್, ಶೋಭಾ ಕರಂದ್ಲಾಜೆ– ಅತೀ ಸಣ್ಣ, ಸಣ್ಣ ಕೈಗಾರಿಕೆ, ಕಾರ್ಮಿಕ ಮತ್ತು ಉದ್ಯೋಗ, ಕೀರ್ತಿವರ್ಧನ್ ಸಿಂಗ್– ಪರಿಸರ, ಅರಣ್ಯ, ಹವಾಮಾನ ಮತ್ತು ವಿದೇಶಾಂಗ ಇಲಾಖೆ, ಬಿ.ಎಲ್. ವರ್ಮಾ– ಆಹಾರ ಮತ್ತು ನಾಗರಿಕ ಪೂರೈಕೆ, ಸಾಮಾಜಿಕ ನ್ಯಾಯಾ, ಸಂತಾನು ಠಾಕೂರ್– ಬಂಧರು, ಹಡಗು ಮತ್ತು ಜಲಮಾರ್ಗ, ಸುರೇಶ್ ಗೋಪಿ– ಪೆಟ್ರೋಲಿಯಂ. ನೈಸರ್ಗಿಕ ಅನಿಲ ಮತ್ತು ಪ್ರವಾಸೋದ್ಯಮ. ಎಲ್. ಮುರುಗನ್– ಮಾಹಿತಿ ಮತ್ತು ಪ್ರಸಾರ, ಸಂಸದೀಯ ವ್ಯವಹಾರ, ಅಜಯ್ ತಮ್ಟಾ– ರಸ್ತೆ ಸಾರಿಗೆ ಮತ್ತು ಹೆದ್ದಾರಿ, ಬಂಡೀ ಸಂಜಯ್‌ಕುಮಾರ್– ಗೃಹ, ಕಮಲೇಶ್ ಪಾಸ್ವಾನ್– ಗ್ರಾಮೀಣಾಭಿವೃದ್ಧಿ, ಭಗೀರಥ್ ಚೌಧರಿ– ಕೃಷಿ ಮತ್ತು ರೈತ ಕಲ್ಯಾಣ, ಸತೀಶ್‌ಚಂದ್ರ ದುಬೆ– ಕಲ್ಲಿದ್ದಲು ಮತ್ತು ಗಣಿಗಾರಿಕೆ. ಸಂಜಯ್ ಶೇಟ್– ರಕ್ಷಣೆ, ನವನೀತ್‌ಸಿಂಗ್– ಆಹಾರ ಮತ್ತು ಸಂಸ್ಕರಣೆ, ರೈಲ್ವೆ, ದುರ್ಗಾದಾಸ್ ಯುಕಿ– ಆದಿವಾಸಿ ಕಲ್ಯಾಣ, ರಕ್ಷಾ ನಿಖಿಲ್ ಖಡ್ಸೆ– ಯುವಜನ ಮತ್ತು ಕ್ರೀಡಾ, ಸುಖಾಂತ್ ಮುಜುಂದಾರ್– ಶಿಕ್ಷಣ ಮತ್ತು ಈಶಾನ್ಯ ವಲಯ ಅಭಿವೃದ್ಧಿ, ಸಾವಿತ್ರಿ ಠಾಕೂರ್– ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ರಾಜ್‌ಭೂಷನ್ ಚೌಧರಿ– ಜಲಶಕ್ತಿ, ಭೂಪತಿರಾಜು ಶ್ರೀನಿವಾಸ ವರ್ಮಾ– ಬೃಹತ್ ಕೈಗಾರಿಕೆ ಮತ್ತು ಉಕ್ಕು, ಹರ್ಷ್ ಮಲ್ಹೋತ್ರಾ– ಕಾರ್ಪೊರೇಟ್, ರಸ್ತೆ ಮತ್ತು ಹೆದ್ದಾರಿ, ನಿಮುಬೆನ್ ಜಯಂತಿ ಬಾಯಿ– ಗ್ರಾಹಕ ವ್ಯವಹಾರ, ಆಹಾರ ಮತ್ತು ನಾಗರಿಕ ಸರಬರಾಜು, ಮುರಳೀಧರ್ ಮೊಹೊಲ್– ಸಹಕಾರ, ವಿಮಾನಯಾನ, ಜಾರ್ಜ್ ಕುರಿಯನ್– ಅಲ್ಪಸಂಖ್ಯಾತ, ಮೀನುಗಾರಿಕೆ, ಪಶುಸಂಗೋಪನೆ, ಹೈನುಗಾರಿಕೆ, ಪಬಿತ್ರ ಮಾರ್ಗರಿಟಾ– ವಿದೇಶಾಂಗ, ಜವಳಿ.

ಶೇ.5 ರಿಯಾಯ್ತಿ ಜು.31ರವರೆಗೆ ವಿಸ್ತರಣೆ

ಆರ್ಥಿಕ ವರ್ಷದ ಮೊದಲ ತಿಂಗಳು ಏಪ್ರಿಲ್‌ನಲ್ಲಿ ಆಸ್ತಿ ತೆರಿಗೆ ಪಾವತಿಗೆ ಶೇ.5ರಷ್ಟು ರಿಯಾಯಿತಿ ನೀಡಲಾಗಿತ್ತು. ಮೇ 1ರಿಂದ ಈವರೆಗೆ ಯಾವುದೇ ರಿಯಾಯಿತಿ ಇರಲಿಲ್ಲ. ಇದೀಗ ಸರ್ಕಾರದ ಸುತ್ತೋಲೆ ಅನ್ವಯ ಮಂಗಳವಾರದಿಂದ ಜು.31ರವರೆಗೆ ಮತ್ತೆ ರಿಯಾಯಿತಿ ಕಲ್ಪಿತವಾಗಿದೆ.

ಶೇ.48ರಷ್ಟು ತೆರಿಗೆ ಸಂಗ್ರಹ: ನಗರ ಪಾಲಿಕೆ ಪ್ರಸಕ್ತ 2024–25ನೇ ಸಾಲಿನಲ್ಲಿ 250 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹದ ಗುರಿ ಹೊಂದಿದೆ. ರಿಯಾಯಿತಿ ಸೌಲಭ್ಯವಿದ್ದ ಕಾರಣ ಏಪ್ರಿಲ್ ತಿಂಗಳಲ್ಲೇ 92 ಕೋಟಿ ರೂ. ಸಂಗ್ರಹವಾಗಿದ್ದು, ಈ ದಿನದವರೆಗೆ ಒಟ್ಟು 120 ಕೋಟಿ ರೂ. ಆಸ್ತಿ ತೆರಿಗೆ ಸಂದಾಯವಾಗಿದೆ. ಅಂದರೆ ವಾರ್ಷಿಕ ಗುರಿಯ ಶೇ.48ರಷ್ಟು ಸಾಧಿಸಲಾಗಿದೆ. ಆಸ್ತಿ ಮಾಲೀಕರು ಸ್ವಯಂ ಪ್ರೇರಿತವಾಗಿ ತೆರಿಗೆ ಪಾವತಿ ಮಾಡುತ್ತಿದ್ದಾರೆ ಎಂದು ಪಾಲಿಕೆ ಅಧಿಕಾರಿಗಳು ತಿಳಿಸಿದರು.

ಕತ್ತಿಯಿಂದ ಕತ್ತರಿಸಿ ಸ್ವಾಮೀಜಿ ಹತ್ಯೆ

ಬೆಳಗ್ಗೆ 11.30ರ ಸುಮಾರಿನಲ್ಲಿ ಸ್ವಾಮೀಜಿ ಸಂಬಂಧಿಕರು ನೀಡಿದ ಮಾಹಿತಿ ಮೇರೆಗೆ ನಜರ್‌ಬಾದ್ ಠಾಣೆಯ ಇನ್ಸ್‌ಪೆಕ್ಟರ್ ಮಹದೇವಸ್ವಾಮಿ ಹಾಗೂ ಸಿಬ್ಬಂದಿ ಘಟನಾ ಸ್ಥಳಕ್ಕೆ ತೆರಳಿ ರವಿಯನ್ನು ಕೆಆರ್ ಆಸ್ಪತ್ರೆಗೆ ಸಾಗಿಸಿದ್ದಾರೆ. ಸ್ವಾಮೀಜಿ ಸಂಬಂಧಿಕರು ನೀಡಿದ ದೂರಿನನ್ವಯ ರವಿ ವಿರುದ್ಧ ಕೊಲೆ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತ ಬಿ.ರಮೇಶ್. ಡಿಸಿಪಿ ಮುತ್ತುರಾಜ್, ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮೈಸೂರು ಮಹಾರಾಜರಿಂದ ಈ ಮಠಕ್ಕೆ ಕೊಡುಗೆಯಾಗಿ ನೀಡಿದ್ದ ಜಮೀನಿನ ಬಗ್ಗೆ ಕೆಲ ವಿವಾದಗಳು ಇದ್ದವು. ಮಠಕ್ಕೆ ಹೊಂದಿಕೊಂಡಂತೆ ಇರುವ ಮಠಕ್ಕೆ ಸೇರಿದ ಕೆರೆಯನ್ನು ಕೆಲವು ರಿಯಲ್ ಎಸ್ಟೇಟ್ ದಂಧೆಕೋರರು ಕಬಳಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಹೇಳುತ್ತಿದ್ದ ಸ್ವಾಮೀಜಿಯವರು ಈ ಸಂಬಂಧ ಹೋರಾಟ ನಡೆಸಿದ್ದರು ಎಂದು ಹೇಳಲಾಗಿದೆ. ಈ ಮಧ್ಯೆ ಬೆಳಗಾವಿಯಿಂದ ಮೈಸೂರಿಗೆ ಬಂದು ನೆಲೆಸಿದ್ದ ಹನುಮಂತ ಪಾಟೀಲ ಮತ್ತು ಆತನ ಪತ್ನಿ 2011ರಲ್ಲಿ ಸ್ವಾಮೀಜಿ ವಿರುದ್ಧ ನಜರ್‌ಬಾದ್ ಠಾಣೆಯಲ್ಲಿ ದೂರು ದಾಖಲಿಸಿದ್ದರು ಎಂದು ಹೇಳಲಾಗಿದೆ. ಸ್ವಾಮೀಜಿಯವರು ಜಮೀನಿನಲ್ಲಿ ಸ್ವಲ್ಪ ಭಾಗವನ್ನು ತಮಗೆ ನೀಡುವುದಾಗಿಯೂ, ತಾವು ಕಾಂಪ್ಲೆಕ್ಸ್ ಕಟ್ಟಿಸುತ್ತಿದ್ದು ಅದರ ನಿರ್ವಹಣೆಯನ್ನು ವಹಿಸಿಕೊಡುವುದಾಗಿ ತಿಳಿಸಿ ತಮ್ಮಿಂದ ಒಂದೂವರೆ ಲಕ್ಷ ರೂ ಪಡೆದಿದ್ದರು. ಆದರೆ ಅವರು ಕೊಟ್ಟ ಮಾತಿನಂತೆ ನಡೆದುಕೊಂಡಿಲ್ಲ ಎಂದು ಹನುಮಂತ ಪಾಟೀಲ ಆಗ ದೂರು ಸಲ್ಲಿಸಿದ್ದರು ಎನ್ನಲಾಗಿದೆ.

ಇಂದು ಸ್ವಾಮೀಜಿಯವರನ್ನು ಅವರ ಸಹಾಯಕ ರವಿ ಕೊಲೆ ಮಾಡಿದ್ದಾನೆ ಎಂದು ಸಂಬಂಧಿಕರು ಪೊಲೀಸರಿಗೆ ದೂರು ಸಲ್ಲಿಸಿದ್ದಾರೆ. ಈತ ಸಣ್ಣ ಪುಟ್ಟ ಕಳ್ಳತನ ನಡೆಸುತ್ತಿದ್ದ ಅದಕ್ಕೆ ಸ್ವಾಮೀಜಿಯವರು ಬೈದಿರಬಹುದು. ನಿನ್ನೆ ಪತ್ನಿ ಮಠದ ಬಳಿಗೆ ಬಂದಾಗ ಆಕೆಯನ್ನು ಪಾನಮತ್ತನಾಗಿದ್ದ ಆತ ಹೊಡೆದಿದ್ದ. ಹೀಗಾಗಿ ಸ್ವಾಮೀಜಿಯವರು ಆತನಿಗೆ ಬುದ್ಧಿವಾದ ಹೇಳಿರಬಹುದು. ಈ ಕಾರಣಕ್ಕಾಗಿಯೇ ಹುಲ್ಲು ಕತ್ತರಿಸುವ ಕತ್ತಿಯಿಂದ ಸ್ವಾಮೀಜಿಯವರನ್ನು ಮನಸ್ಸೋ ಇಚ್ಛೆ ಕತ್ತರಿಸಿ ಕೊಲೆ ಮಾಡಿದ್ದಾನೆ ಎಂದು ಸಂಬಂಧಿಕರು ಹೇಳುತ್ತಿದ್ದಾರೆ. ಆದರೆ ವಿಷಸೇವಿಸಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಆರೋಪಿ ರವಿ ಚೇತರಿಸಿಕೊಂಡ ನಂತರ ಪೊಲೀಸರ ವಿಚಾರಣೆ ವೇಳೆ ಕೊಲೆಗೆ ನಿಖರ ಕಾರಣ ತಿಳಿಯುತ್ತದೆ ಎಂದು ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಇಂದು ಬೆಳಗ್ಗೆ 9.30ರ ನಂತರ ಸಂಬಂಧಿಕರು ಮಠಕ್ಕೆ ತೆರಳಿದಾಗ ಸ್ವಾಮೀಜಿಯವರ ಹತ್ಯೆಯಾಗಿರುವುದು ಬೆಳಕಿಗೆ ಬಂದಿದೆ. ಆದರೆ ಅವರನ್ನು ಯಾವ ಸಮಯದಲ್ಲಿ ಹತ್ಯೆ ಮಾಡಲಾಗಿದೆ ಎಂಬುದು ಮರಣೋತ್ತರ ಪರೀಕ್ಷೆ ವೇಳೆ ತಿಳಿಯಬೇಕಾಗಿದೆ.

ಸೋಸಲೆ ಶ್ರೀ ವ್ಯಾಸರಾಜ ಮಠಾಧೀಶರಾದ ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ

ಸಹಸ್ರ ಚಂದ್ರ ದರ್ಶನ ಶಾಂತಿ, ಶ್ರೀ ಶ್ರೀನಿವಾಸ ಕಲ್ಯಾಣೋತ್ಸವದೊಂದಿಗೆ 'ಶ್ರೀಮನ್ ನ್ಯಾಯ ಸುಧಾಮಂಗಳ ಮಹೋತ್ಸವ' ಸಂಪನ್ನ



ಮೈಸೂರಿನ ಜೆ.ಪಿ.ನಗರದ ವಿಠಲಧಾಮದ ಶ್ರೀ ವ್ಯಾಸಮಂಟಪದಲ್ಲಿ ನಡೆದ ಶ್ರೀಮನ್ ನ್ಯಾಯ ಸುಧಾಮಂಗಳ ಮಹೋತ್ಸವದಲ್ಲಿ 'ಶ್ರೀ ಶ್ರೀನಿವಾಸ ಕಲ್ಯಾಣೋತ್ಸವ' ವೈಭವಯುತವಾಗಿ ನೆರವೇರಿತು. ಸೋಸಲೆ ಶ್ರೀ ವ್ಯಾಸರಾಜ ಮಠಾಧೀಶರಾದ ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿ, ಮೇಲುಕೋಟೆ ಯದುಗಿರಿ ಮಠದ ಯತಿರಾಜ ರಾಮಾನುಜ ಜೀಯರ್ ಸ್ವಾಮೀಜಿ, ಪಂ.ಅರಳುಮಲ್ಲಿಗೆ ಪಾರ್ಥಸಾರಥಿ, ಶ್ರೀವಾರಿ ಫೌಂಡೇಶನ್‌ನ ವೆಂಕಟೇಶಮೂರ್ತಿ ಮತ್ತಿತರರಿದ್ದರು.



ಸೋಸಲೆ ಶ್ರೀ ವಿದ್ಯಾಶ್ರೀಶತೀರ್ಥರಿಗೆ ತುಲಾಭಾರ ಸಮರ್ಪಣೆ ನೆರವೇರಿತು.

ಮೈಸೂರು, ಜೂ.10(ಎಂಕೆ)– ಮೈಸೂರಿನ ಜೆ.ಪಿ.ನಗರದ ವಿಠಲಧಾಮದ ಶ್ರೀ ವ್ಯಾಸಮಂಟಪದಲ್ಲಿ ಸೋಸಲೆ ಶ್ರೀ ವ್ಯಾಸರಾಜ ಮಠಾಧೀಶರಾದ ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ 'ಸಹಸ್ರ ಚಂದ್ರ ದರ್ಶನ ಶಾಂತಿ ಮಹೋತ್ಸವ' ಹಾಗೂ 'ಶ್ರೀ ಶ್ರೀನಿವಾಸ ಕಲ್ಯಾಣೋತ್ಸವ'ದೊಂದಿಗೆ 'ಶ್ರೀಮನ್ ನ್ಯಾಯ ಸುಧಾಮಂಗಳ ಮಹೋತ್ಸವ' ಸಂಪನ್ನಗೊಂಡಿತು.

ಸಾಂಸ್ಕೃತಿಕ ನಗರಿಯಲ್ಲಿ ಕಳೆದ 9 ದಿನಗಳಿಂದ ಭಕ್ತಿಸುಧೆ ಹರಿಸಿದ 'ಶ್ರೀಮನ್ ನ್ಯಾಯ ಸುಧಾಮಂಗಳ ಮಹೋತ್ಸವ'ದ ಕಡೇ ದಿನ ಬೆಂಗಳೂರಿನ ಶ್ರೀವಾರಿ ಫೌಂಡೇಶನ್‌ನ ವೆಂಕಟೇಶಮೂರ್ತಿ ಅವರ ಸಾರಥ್ಯದಲ್ಲಿ 3 ಗಂಟೆಗಳ ಕಾಲ ನಡೆದ 'ಶ್ರೀ ಶ್ರೀನಿವಾಸ ಕಲ್ಯಾಣ ಮಹೋತ್ಸವ' ಭಕ್ತರ ಹೃನ್ಮನ ಸೆಳೆಯಿತು. ತಿರುಪತಿಯ ತಿರುಮಲ ದೇವಸ್ಥಾನದಲ್ಲಿ ನಡೆಯುವಂತೆಯೇ ಧ್ವಜಾರೋಹಣ, ಅಲಂಕಾರ, ಮಂಗಳ ವಾದ್ಯಗೋಷ್ಠಿ, ಭಕ್ತಿಗೀತೆಗಳು ಹಾಗೂ ಭಜನೆಗಳನ್ನು ಹಾಡುತ್ತಾ, ಕುಣಿಯುತ್ತಾ ಸಡಗರ ಸಂಭ್ರಮದೊಂದಿಗೆ 'ಶ್ರೀ ಶ್ರೀನಿವಾಸ ಕಲ್ಯಾಣೋತ್ಸವ'ವನ್ನು ವೈಭವಯುತವಾಗಿ ನೆರವೇರಿಸಲಾಯಿತು.

ವೆಂಕಟರಮಣ, ಗೋವಿಂದ ಎಂದು ಘೋಷಣೆ ಕೂಗುತ್ತಿದ್ದ ಭಕ್ತರ ಸಮಕ್ಷಮದಲ್ಲಿ ಜರುಗಿದ ಕಲ್ಯಾಣೋತ್ಸವದಲ್ಲಿ ಶ್ರೀನಿವಾಸನು ಪದ್ಮಾವತಿ ದೇವಿಗೆ ಮಾಂಗಲ್ಯ ಧಾರಣೆ ಮಾಡಿದಾಗ ಮಂಗಳ ವಾದ್ಯಗಳನ್ನು ಮೊಳಗಿಸಲಾಯಿತು. ನಂತರ ಎಲ್ಲ ಭಕ್ತರಿಗೂ ಶ್ರೀನಿವಾಸನ ಮಂತ್ರಾಕ್ಷತೆ ಸಹಿತ ಪ್ರಸಾದವನ್ನು ವಿತರಣೆ ಮಾಡಲಾಯಿತು. ನಾಡಿನ ವಿವಿಧ ಭಾಗಗಳಿಂದ ಹಾಗೂ ಹೊರರಾಜ್ಯಗಳಿಂದ ಬಂದಂತಹ ಭಕ್ತರು ಹಾಗೂ ಮಹಿಳೆಯರು 'ಶ್ರೀಮನ್ ನ್ಯಾಯ ಸುಧಾಮಂಗಳ ಮಹೋತ್ಸವ'ದಲ್ಲಿ ಸಂಭ್ರಮದಿಂದ ಪಾಲ್ಗೊಂಡಿದ್ದರು.

ಆಶೀರ್ವಚನವನ್ನು ನೀಡಿದ ಸೋಸಲೆ ಶ್ರೀ ವ್ಯಾಸರಾಜರ ಮಠದ ಪೀಠಾಧಿಪತಿ ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿ, ವಿದ್ವತ್ ಪ್ರಪಂಚಕ್ಕೆ ನಾಲ್ವರು ಯುವ ಮತ್ತು ನವ ಪಂಡಿತರನ್ನು ಕೊಡುಗೆಯಾಗಿ ನೀಡಿದ ಈ 'ಸುಧಾಮಂಗಳ' ಮಹೋತ್ಸವ ಸಂಪೂರ್ಣವಾಗಿ ಯಶಸ್ವಿಯಾಗಿದೆ. ಇಂದಿನ ಯುವಕರು ಧರ್ಮ ಮತ್ತು ಸಂಸ್ಕೃತಿಯನ್ನು ಪಾಲಿಸಿಕೊಂಡು ಅಖಂಡ ಭಾರತದ ಉಜ್ವಲ ಭವಿಷ್ಯಕ್ಕೆ ಭದ್ರ ಬುನಾದಿ ಆಗಬೇಕು ಎಂದು ಆಶಿಸುತ್ತೇವೆ ಎಂದರು.

> ವ್ಯಾಸರಾಜರ ಮಠವು ಸದಾ ಕಾಲ ಸನಾತನ ಧರ್ಮದ ಪಾಲನೆ ಮತ್ತು ಪರಂಪರೆಯ ರಕ್ಷಣೆಗೆ ಬದ್ಧವಾಗಿದೆ. ಮುಂಬರುವ ವರ್ಷಗಳಲ್ಲಿ ಇಂತಹ ಸುಧಾಮಂಗಳ ಸಮ್ಮೇಳನಗಳನ್ನು ಪ್ರತಿವರ್ಷವೂ ಆಯೋಜನೆ ಮಾಡಲು ಸಂಕಲ್ಪ ಮಾಡಲಾಗಿದೆ. ಶ್ರೀ ಹರಿವಾಯು ಗುರುಗಳು ಮತ್ತು ಶ್ರೀ ವ್ಯಾಸರಾಜರು ಈ ಕಾರ್ಯವನ್ನು ಸುಗಮವಾಗಿ ನಡೆಸಲಿ ಎಂದು ಪ್ರಾರ್ಥಿಸುತ್ತಿದ್ದೇನೆ. ನಾಡಿಗೆ ಸೂಕ್ತ ಕಾಲದಲ್ಲಿ ಮಳೆ ಮತ್ತು ಬೆಳೆಗಳು ಲಭಿಸಲಿ. ಸಮಸ್ತ ಮಾನವ ಕೋಟಿ ಸುಖ ಮತ್ತು ಶಾಂತಿಯಿಂದ ಜೀವಿಸಲಿ. ಎಲ್ಲರಲ್ಲಿಯೂ ಸದಾಚಾರ, ಸದ್ವಿಚಾರ ಮತ್ತು ಸನ್ನಡತೆಗಳು ವಿಜೃಂಭಿಸಲಿ. ಆ ಮೂಲಕ ಭಾರತ ವಿಶ್ವಗುರುವಾಗಿ ಮೆರೆಯಲಿ. ಇದಕ್ಕೆ ನಮ್ಮ ನಾಡಿನ ಮಠ ಮತ್ತು ಪೀಠಗಳು ಸದಾ ಸ್ಪಂದಿಸುತ್ತವೆ
> – ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿ,
> ಸೊಸಲೆ ಶ್ರೀ ವ್ಯಾಸರಾಜರ ಮಠದ ಪೀಠಾಧಿಪತಿ

ವಿಶೇಷ ಮೈಲಿಗಲ್ಲು: ಮಠದ ಮುಖ್ಯಸ್ಥ ಡಿ.ಪಿ. ಅನಂತಾಚಾರ್ಯ ಮಾತನಾಡಿ, ಸಮಸ್ತ ಭಕ್ತರು ಒಂಬತ್ತು ದಿನಗಳ ಕಾಲ ನಡೆದ ಐತಿಹಾಸಿಕ ಶ್ರೀಮನ್ ನ್ಯಾಯ ಸುಧಾ ಮಂಗಳ ಮಹೋತ್ಸವದಲ್ಲಿ ಸಂಭ್ರಮದಿಂದ ಪಾಲ್ಗೊಂಡಿದ್ದಾರೆ. ನಾಡಿನ ಮತ್ತು ಹೊರನಾಡಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಭಕ್ತ ಜನ, ಹಲವು ಯತಿಗಳ ಸಮ್ಮುಖದಲ್ಲಿ ಧನ್ಯತೆಯನ್ನು ಮೆರೆದಿದ್ದಾರೆ. ಸೋಸಲೆ ಗುರುಗಳ ಸಹಸ್ರ ಚಂದ್ರ ದರ್ಶನ ಶಾಂತಿ ಮಹೋತ್ಸವಕ್ಕೆ ನಾಡಿನ ಹಲವು ಯತಿಗಳು ಸಾಕ್ಷಿಯಾಗಿದ್ದು ಒಂದು ವಿಶೇಷ ಮಧ್ವಪೀಠದ ಮಠದ ಇತಿಹಾಸದಲ್ಲಿಯೇ ಇದೊಂದು ವಿಶೇಷ ಮೈಲಿಗಲ್ಲು ಎಂದರು.

ಭವ್ಯ ಸಮಾರಂಭ: ಶ್ರೀ ವ್ಯಾಸತೀರ್ಥ ವಿದ್ಯಾಪೀಠದ ಗೌರವ ಕಾರ್ಯದರ್ಶಿ ಡಾ.ಡಿ.ಪಿ.ಮಧುಸೂದನಾಚಾರ್ಯ ಮಾತನಾಡಿ, ಶ್ರೀ ವ್ಯಾಸತೀರ್ಥ ವಿದ್ಯಾಪೀಠದ ನಾಲ್ವರು ಯುವಕರು ಸುಧಾ ಪಂಡಿತರಾಗಿ ಮನ್ನಣೆ ಗಳಿಸಿದ ವಿಶೇಷ ಸಂದರ್ಭದಲ್ಲಿ ಸಾವಿರಾರು ಭಕ್ತರು, 20ಕ್ಕೂ ಹೆಚ್ಚು ಮಠಾಧಿಪತಿಗಳು ಹಾಜರಿದ್ದು ಶುಭ ಹಾರೈಸಿದ್ದಾರೆ. ಸುಧಾ ಮಂಗಳ ಎಂದರೆ ಹತ್ತು ಘಟಿಕೋತ್ಸವಗಳಿಗೆ ಸಮನಾದ ವಿದ್ವತ್ ಸಭೆ ಮತ್ತು ಪದವಿ ಪ್ರದಾನ ಸಮಾರಂಭ. ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಇಂತಹ ಒಂದು ಭವ್ಯ ಸಮಾರಂಭ ನಿರೀಕ್ಷೆ ಮೀರಿ ಸಂಪನ್ನಗೊಂಡಿದೆ. ಮಠದ ಕಾರ್ಯಕರ್ತರು, ಸ್ವಯಂ ಸೇವಕರು ಹಾಗೂ ಸಮಸ್ತ ಭಕ್ತ ಗಣ ನೀಡಿದ ಸಹಕಾರ ಮಹೋನ್ನತವಾದದ್ದು ಎಂದರು.


ತುಲಾಭಾರ: ಸುಧಾ ಮಂಗಳ ಮಹೋತ್ಸವ ಸಮಾರೋಪದಲ್ಲಿ ವಿಜಯನಗರ ಸಾಮ್ರಾಜ್ಯದ ಪರಂಪರೆಯ ದರ್ಬಾರ್‌ನಲ್ಲಿ ವಿರಾಜಮಾನರಾದ ಸೋಸಲೆ ಶ್ರೀ ವಿದ್ಯಾಶ್ರೀಶತೀರ್ಥರಿಗೆ ತುಲಾಭಾರ ಸಮರ್ಪಣೆ ನೆರವೇರಿತು. ಮೇಲುಕೋಟೆ ಯದುಗಿರಿ ಮಠದ ಯತಿರಾಜ ರಾಮಾನುಜ ಜೀಯರ್ ಸ್ವಾಮೀಜಿ, ಪಂ.ಅರಳುಮಲ್ಲಿಗೆ ಪಾರ್ಥಸಾರಥಿ, ವಿದುಷಿ ಡಾ.ದೀಪಿಕಾ ಪಾಂಡುರಂಗಿ ಮತ್ತಿತರರು ಉಪಸ್ಥಿತರಿದ್ದರು.

ಮೋದಿ 3.0 ಆಡಳಿತ ಪ್ರಾರಂಭ

ಮೊದಲ ದಿನವೇ ಪಿಎಂ ಕಿಸಾನ್ ನಿಧಿ ಹಣ ಬಿಡುಗಡೆಗೆ ಪ್ರಧಾನಿ ಮೋದಿ ಸಹಿ

ನವದೆಹಲಿ: ಮೂರನೇ ಅವಧಿಗೆ ದೇಶದ ಪ್ರಧಾನಿಯಾಗಿ ನರೇಂದ್ರ ಮೋದಿ ಅವರು ಅಧಿಕಾರ ವಹಿಸಿಕೊಂಡ ಮರುದಿನವಾದ ಸೋಮವಾರವೇ ಆಡಳಿತ ಕೆಲಸವನ್ನು ಆರಂಭಿಸಿದರು.

ದೇಶದ ಬೆನ್ನೆಲುಬಾದ ರೈತರ ಬಗ್ಗೆ ಕೆಲಸ ಆರಂಭಿಸಿರುವ ಪ್ರಧಾನಿ ಮೋದಿ ಇಂದು ಕಚೇರಿಗೆ ಬಂದ ಕೂಡಲೇ ದೇಶದ ಸುಮಾರು 9.3 ಕೋಟಿ ರೈತರಿಗೆ ಪಿಎಂ ಕಿಸಾನ್ ನಿಧಿಯ 17ನೇ ಕಂತಿನ ಸುಮಾರು 20,000 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲು ಸಮ್ಮತಿ ನೀಡುವ ತಮ್ಮ ಮೊದಲ ಕಡತಕ್ಕೆ ಸಹಿ ಹಾಕಿದರು.



ನಿಧಿ ಬಿಡುಗಡೆಗೆ ಸಹಿ ಹಾಕಿದ ನಂತರ ಮೋದಿ, ನಮ್ಮದು ಕಿಸಾನ್ ಕಲ್ಯಾಣಕ್ಕೆ ಸಂಪೂರ್ಣವಾಗಿ ಬದ್ಧವಾಗಿರುವ ಸರ್ಕಾರವಾಗಿದೆ. ಮುಂದಿನ ದಿನಗಳಲ್ಲಿ ನಾವು ರೈತರು ಮತ್ತು ಕೃಷಿ ಕ್ಷೇತ್ರಕ್ಕಾಗಿ ಇನ್ನಷ್ಟು ಕೆಲಸ ಮಾಡಬೇಕೆಂದು ಬಯಸುತ್ತೇವೆ ಎಂದಿದ್ದಾರೆ.

ಇಂದು ಬೆಳಗ್ಗೆ ಕಚೇರಿಗೆ ಆಗಮಿಸಿದ ಪ್ರಧಾನಿ ಮೋದಿಯವರನ್ನು ಪಿಎಂಒ ಸಿಬ್ಬಂದಿ ಹಾಗೂ ಅಧಿಕಾರಿಗಳು ಚಪ್ಪಾಳೆ ತಟ್ಟಿ ಸ್ವಾಗತಿಸಿದರು. ಪ್ರಧಾನಮಂತ್ರಿಯವರೊಂದಿಗೆ ಪಿಎಂಒ, ಎನ್‌ಎಸ್‌ಎ ಅಜಿತ್ ದೋವಲ್ ಮತ್ತು ಅವರ ಪ್ರಧಾನ ಕಾರ್ಯದರ್ಶಿ ಇದ್ದರು. ನಮ್ಮದು ರೈತರ ಕಲ್ಯಾಣಕ್ಕೆ ಸಂಪೂರ್ಣವಾಗಿ ಬದ್ಧವಾಗಿರುವ ಸರ್ಕಾರವಾಗಿದೆ. ಆದ್ದರಿಂದ ಅಧಿಕಾರ ವಹಿಸಿಕೊಂಡ ಮೇಲೆ ಸಹಿ ಮಾಡಿದ ಮೊದಲ ಕಡತವು ರೈತ ಕಲ್ಯಾಣಕ್ಕೆ ಸಂಬಂಧಿಸಿದೆ ಎಂದು ಹೇಳಿದ್ದಾರೆ.

ಈ ಬಾರಿ ಚುನಾವಣೆಯಲ್ಲಿ ಕೆಲವು ಗ್ರಾಮೀಣ ಭಾಗಗಳಲ್ಲಿ ಬಿಜೆಪಿ ಹಿನ್ನಡೆ ಕಂಡಿದ್ದು, ಈ ನಿರ್ಧಾರವು ಆಡಳಿತಾರೂಢ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟದ ಚುನಾವಣೆಯ ಗೆಲುವಿನ ನಂತರ ರೈತರ ಕಲ್ಯಾಣಕ್ಕೆ ಸರ್ಕಾರದ ಬದ್ಧತೆಯನ್ನು ಸೂಚಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಮೋದಿ 2.0 ಸರ್ಕಾರವು ದೇಶಾದ್ಯಂತ ರೈತರಿಂದ ಸರ್ಕಾರದ ನೀತಿ ನಿಯಮಗಳಿಂದಾಗಿ ತೀವ್ರ ವಿರೋಧ ಮತ್ತು ಪ್ರತಿಭಟನೆಯನ್ನು ಎದುರಿಸಿತ್ತು.

ಸೋಮಣ್ಣರಿಗೆ ಜಲಶಕ್ತಿ; ಕಾವೇರಿ ಕಣಿವೆ ಜನರಲ್ಲಿ ಅಪಾರ ನಿರೀಕ್ಷೆ

ಮೈಸೂರು, ಜೂ.10– ಇದೇ ಮೊದಲ ಬಾರಿಗೆ ಲೋಕಸಭೆ ಪ್ರವೇಶಿಸಿದ ವಿ.ಸೋಮಣ್ಣ ಅವರು ರೈಲ್ವೆ ಜೊತೆಗೆ ಪ್ರಮುಖವಾದ ಜಲಶಕ್ತಿ ರಾಜ್ಯ ಖಾತೆ ಸಚಿವರಾಗಿರುವುದು ರಾಜ್ಯದ ಜನತೆಯಲ್ಲಿ ಅದೂ ಕಾವೇರಿ ಕಣಿವೆಯ ಜನರಲ್ಲಿ ಆಶಾಭಾವನೆ ಮೂಡಿಸಿದೆ.



ಕಾವೇರಿ ಜಲವಿವಾದಕ್ಕೆ ಸಂಬಂಧಿಸಿದ ಹಲವಾರು ನಿರ್ಧಾರಗಳನ್ನು ಜಲಶಕ್ತಿ ಇಲಾಖೆ ಕೈಗೊಳ್ಳುತ್ತದೆ. ಹೀಗಾಗಿ ಹಲವು ವರ್ಷಗಳಿಂದ ತಮಿಳುನಾಡು ಮತ್ತು ಕರ್ನಾಟಕದ ನಡುವೆ ನಡೆಯುತ್ತಿರುವ ಜಲವಿವಾದದಲ್ಲಿ ಕರ್ನಾಟಕಕ್ಕೆ ನ್ಯಾಯ ಸಿಗಬಹುದು ಎಂದು ಈ ಭಾಗದ ಜನರು ಭಾರೀ ನಿರೀಕ್ಷೆ ಹೊಂದಿದ್ದಾರೆ. ಕಾವೇರಿ ನದಿ ನೀರು ಹಂಚಿಕೆ ಮಾತ್ರವಲ್ಲದೇ ಮೇಕೆದಾಟು ಯೋಜನೆಗೂ ಸೋಮಣ್ಣ ಅವರಿಂದ ಪರಿಹಾರ ದೊರೆಯಬಹುದು ಎಂದು ನಿರೀಕ್ಷಿಸಲಾಗಿದೆ. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಗರಡಿಯಲ್ಲಿ ಪಳಗಿರುವ ಸೋಮಣ್ಣವರು ತಮಗೆ ದೊರೆತಿರುವ ಜಲಶಕ್ತಿ ಖಾತೆ ಸಮರ್ಥವಾಗಿ ನಿರ್ವಹಿಸಿ ತಮ್ಮ ರಾಜಕೀಯ ಗುರು ಹೆಚ್.ಡಿ.ದೇವೇಗೌಡರ ಸಲಹೆಯಂತೆ ಕರ್ನಾಟಕಕ್ಕೆ ನ್ಯಾಯ ಒದಗಿಸುತ್ತಾರೆ ಎಂದು ನಿರೀಕ್ಷಿಸಲಾಗಿದೆ.

ಕಲ್ಚರಲ್ ಫೆಸ್ಟ್ ಚಾಂಪಿಯನ್‌ಶಿಪ್



ಮೈಸೂರು, ಜೂ.10(ಎಂಕೆ)– ನಗರದ ಶಾರದಾ ವಿಲಾಸ ಕಾಲೇಜಿನ ಶತಮಾನೋತ್ಸವ ಸಭಾಂಗಣದಲ್ಲಿ ಎನ್‌ಸಿಸಿ ಅಲುಮ್ನಿ ಅಸೋಸಿಯೇಶನ್ ಮೈಸೂರು ಗ್ರೂಪ್ ವತಿಯಿಂದ ವೀರಗತಿ ಲೆಫ್ಟಿನೆಂಟ್ ಅಶೋಕ್ ಮುತ್‌ಗೀಕರ್ ಸ್ಮರಣಾರ್ಥ ಕಲ್ಚರಲ್ ಫೆಸ್ಟ್ ಚಾಂಪಿಯನ್‌ಶಿಪ್–2024 ನಡೆಯಿತು.

ಎನ್‌ಸಿಸಿ ಕೆಡೆಟ್‌ಗಳಿಗಾಗಿ ನಡೆದ ಅಂತರ ಬೆಟಾಲಿಯನ್ ಸಾಂಸ್ಕೃತಿಕ ಸ್ಪರ್ಧೆಯನ್ನು ಮೈಸೂರು ನಗರ ಪೊಲೀಸ್ ಆಯುಕ್ತ ರಮೇಶ್ ಬಾನೋತ್ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಸ್ಪರ್ಧಾತ್ಮಕ ಯುಗದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳು ಮಹತ್ವ ಪಡೆದಿದ್ದು, ಯಾವುದೇ ಉನ್ನತ ಹುದ್ದೆ ಅಥವಾ ಸ್ಥಾನ ಪಡೆಯಲು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲೇಬೇಕು. ಅಲ್ಲದೆ ಯುವ ಸಮುದಾಯ ದೇಶ ಸೇವೆಗಾಗಿ ಮುಂದೆ ಬರಬೇಕು ಎಂದು ಕರೆ ನೀಡಿದರು.

ಕರ್ನಲ್ ಭಾನುಪ್ರಕಾಶ್ ಮಾತನಾಡಿ, ಯುವಕರ ಮುಂದಿನ ಆಯ್ಕೆ ಹೇಗೆ ದೇಶದ ಅಭಿವೃದ್ಧಿ ಹಾಗೂ ಭದ್ರತೆಗೆ ಪೂರಕವಾಗಿರಬೇಕು ಎಂದರಲ್ಲದೆ ಸೈನ್ಯಕ್ಕೆ ಸೇರುವ ವಿವಿಧ ಮಾರ್ಗಗಳನ್ನು ತಿಳಿಸಿದರು. ನಿವೃತ್ತ ಕರ್ನಲ್ ಡಾ.ಎಸ್.ಎನ್.ಪ್ರಸಾದ್, ನಿವೃತ್ತ ಪ್ರಾಂಶುಪಾಲ ಪ್ರೊ.ಎಂ.ನಟರಾಜ್, ಸಂಯೋಜಕರಾದ ಸುವರ್ಷ, ಡಿ.ಎಂ.ಮಿಥುನ್ ಮತ್ತಿತರರಿದ್ದರು.

ಬಾವನಿಂದ ಬಾಮೈದನ ಹತ್ಯೆ ಪ್ರಕರಣ

ತಲೆಮರೆಸಿಕೊಂಡಿದ್ದ ನಾಲ್ವರು ಆರೋಪಿಗಳ ಬಂಧನ

ಮೈಸೂರು, ಜೂ.10(ಎಸ್‌ಬಿಡಿ)– ಮೈಸೂರು ಕೂರ್ಗಳ್ಳಿಯ ಅಭಿಷೇಕ್ ಹತ್ಯೆ ಪ್ರಕರಣದ ಎಲ್ಲಾ ಆರೋಪಿಗಳನ್ನೂ ಕುವೆಂಪುನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ರಾಮಕೃಷ್ಣನಗರ ಐ ಬ್ಲಾಕ್‌ನಲ್ಲಿ ಶನಿವಾರ ನಡೆದ ಅಭಿಷೇಕ್ ಹತ್ಯೆ ಪ್ರಕರಣದ ಆರೋಪಿಗಳಾದ ಕುಮಾರ್, ಶಾರದಾ, ಪದ್ಮಾ ಹಾಗೂ ಕಾರ್ತಿಕ್‌ನನ್ನು ಸೋಮವಾರ ಬೆಳಗ್ಗೆ ಬೆಂಗಳೂರಿನಲ್ಲಿ ಬಂಧಿಸಿದ್ದು, ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ನಂತರ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಆಸ್ಪತ್ರೆಯಲ್ಲಿರುವ ಪ್ರಮುಖ ಆರೋಪಿ ರವಿಚಂದ್ರನನ್ನು ಮಂಗಳವಾರ ಡಿಸ್ಚಾರ್ಜ್ ಮಾಡಲಿದ್ದು, ನಂತರ ಆತನನ್ನೂ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ಕುವೆಂಪುನಗರ ಠಾಣೆ ಇನ್ಸ್‌ಪೆಕ್ಟರ್ ಯೋಗೀಶ್ ತಿಳಿಸಿದ್ದಾರೆ.

ತೋಟಗಾರಿಕೆ ಇಲಾಖೆ ಉದ್ಯೋಗಿ ರವಿಚಂದ್ರ ತನ್ನ ಪತ್ನಿ ವಿದ್ಯಾಗೆ ಕಿರುಕುಳ ನೀಡುತ್ತಿದ್ದ. ನಿಮ್ಮ ತಂದೆಯಿಂದ ನಿವೇಶನ ಹಾಗೂ ಮನೆ ಪಡೆಯುವಂತೆ ಹಿಂಸಿಸುತ್ತಿದ್ದ. ಈ ವಿಚಾರವಾಗಿ ಆಗಾಗ್ಗೆ ಜಗಳವಾಗುತ್ತಿತ್ತು. ಪೊಲೀಸರು ತಿಳಿ ಹೇಳಿದ್ದರೂ ಕೌಟುಂಬಿಕ ಕಲಹ ಮುಂದುವರೆದಿತ್ತು. ಕಳೆದ ಶನಿವಾರ ಬೆಳಗ್ಗೆ ವಿದ್ಯಾ ಮನೆಗೆ ಬಂದಿದ್ದ ಆಕೆಯ ತಾಯಿ ಹಾಗೂ ಅಣ್ಣ ಅಭಿಷೇಕ್‌ಗೆ ರವಿಚಂದ್ರ ಮನೆಯವರು ಥಳಿಸಿದ್ದರು. ನಂತರ ಊರಿಗೆ ವಾಪಸ್ಸಾಗಿದ್ದ ಅಭಿಷೇಕ್, ತಂಗಿಗೆ ಮತ್ತೆ ಹಿಂಸೆ ನೀಡುತ್ತಿದ್ದಾರೆಂದು ತಿಳಿದು ಸ್ನೇಹಿತರೊಂದಿಗೆ ಅಂದು ಮಧ್ಯಾಹ್ನ ಆಗಮಿಸಿದ ವೇಳೆ ಬಾವ ರವಿಚಂದ್ರ ಆತನ ತಮ್ಮ ಕುಮಾರ್, ತಾಯಿ ಶಾರದಾ, ಚಿಕ್ಕಮ್ಮ ಪದ್ಮಾ ಹಾಗೂ ಆಕೆಯ ಮಗ ಕಾರ್ತಿಕ್ ಚಾಕು ಇನ್ನಿತರ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ, ಹತ್ಯೆ ಮಾಡಿದ್ದರು. ಅಭಿಷೇಕ್ ಸ್ನೇಹಿತ ಗೌತಮ್ ಮೇಲೂ ಮಾರಣಾಂತಿಕ ಹಲ್ಲೆ ನಡೆಸಿದ್ದರು. ನಂತರ ಗಲಾಟೆಯಲ್ಲಿ ತನಗೂ ಗಾಯವಾಗಿದೆ ಎಂದು ಪ್ರಮುಖ ಆರೋಪಿ ರವಿಚಂದ್ರ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದು, ಅಭಿಷೇಕ್ ಸಾವನ್ನಪ್ಪಿದ ವಿಷಯ ತಿಳಿದಾಕ್ಷಣ ಉಳಿದ ಆರೋಪಿಗಳು ಪರಾರಿಯಾಗಿ, ಬೆಂಗಳೂರಿನಲ್ಲಿ ತಲೆಮರೆಸಿಕೊಂಡಿದ್ದರು.

ಮಂಟೇಸ್ವಾಮಿ ತಳ ಸಮುದಾಯದ ಸಾಂಸ್ಕೃತಿಕ ನಾಯಕ

ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಸಹ ಸಂಶೋಧಕ ಜಿ.ಎಸ್.ಸಣ್ಣಯ್ಯ ಅಭಿಮತ

ಮೈಸೂರು, ಜೂ 10(ಎಸ್‌ಪಿಎನ್)– ಹದಿನೈದನೇ ಶತಮಾನದಲ್ಲಿ ಬರುವ ಮಂಟೇಸ್ವಾಮಿ ತಳ ಸಮುದಾಯದ ಸಾಂಸ್ಕೃತಿಕ ನಾಯಕ ಎಂದರೆ ತಪ್ಪಾಗಲಾರದು ಎಂದು ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಸಹ ಸಂಶೋಧಕ ಜಿ.ಎಸ್.ಸಣ್ಣಯ್ಯ ಅಭಿಪ್ರಾಯಪಟ್ಟರು.

ಮೈಸೂರು ಭಾರತೀಯ ಭಾಷಾ ಸಂಸ್ಥಾನದ ಅತ್ಯುನ್ನತ ಶಾಸ್ತ್ರೀಯ ಕನ್ನಡ ಅಧ್ಯಯನ ಕೇಂದ್ರದಲ್ಲಿ ನಡೆದ ಭಾರತೀಯ ಶಾಸ್ತ್ರೀಯ ಭಾಷೆಗಳ ರಾಷ್ಟ್ರೀಯ ಸಮ್ಮೇಳನದಲ್ಲಿ ಮೊದಲನೇ ಗೋಷ್ಠಿಯಲ್ಲಿ 'ಮಂಟೇಸ್ವಾಮಿ ಕಾವ್ಯ ಮಟ್ಟು ಪರಂಪರೆಯ ವೈಶಿಷ್ಟ್ಯತೆಗಳ' ಕುರಿತು ಮಾತನಾಡಿದರು.



'ಮಂಟೇಸ್ವಾಮಿ ಕಾವ್ಯ ಮಟ್ಟು ಪರಂಪರೆಯ ವೈಶಿಷ್ಟ್ಯತೆಗಳ' ಕುರಿತು ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಸಹ ಸಂಶೋಧಕ ಜಿ.ಎಸ್.ಸಣ್ಣಯ್ಯ ಮಾತನಾಡಿದರು.

ಮಹಾಕಾವ್ಯಗಳಾದ ರಾಮಾಯಣ ಮತ್ತು ಮಹಾಭಾರತ ಶಿಷ್ಟಕಾವ್ಯಗಳಾದರೆ, ಮಂಟೇಸ್ವಾಮಿ ಕಾವ್ಯ ನೀಲಗಾರರ ಕಾವ್ಯವಾಗಿದೆ. ಈ ಕಾವ್ಯ ತಳ ಸಮುದಾಯದ ಸಾಂಸ್ಕೃತಿಕ ಬದುಕಿನ ಚಿತ್ರಣವನ್ನು ಬಿಂಬಿಸುತ್ತದೆ. ಅಲ್ಲದೆ, ತಳ ಸಮುದಾಯದ ಮೌಖಿಕ ಮಹಾಕಾವ್ಯವೆಂದು ಬಿಂಬಿತವಾಗಿದೆ. ದಕ್ಷಿಣ ಕರ್ನಾಟಕದ ವೃತ್ತಿಪರ ಗಾಯಕರಾದ ನೀಲಗಾರರು ಮಂಡ್ಯ, ಮೈಸೂರು, ರಾಮನಗರ, ಚಾಮರಾಜನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜನರು ಜಾನಪದ ಗಾಯನ ರೂಪದಲ್ಲಿ ಇನ್ನೂ ಜೀವಂತವಾಗಿಟ್ಟಿದ್ದಾರೆ ಎಂದರು.

ಮಂಟೇಸ್ವಾಮಿ ಕಾವ್ಯ ಸುತ್ತಲೂ ಅನೇಕ ದಂತಕಥೆಗಳು ಹುಟ್ಟಿಕೊಂಡಿವೆ. ಚಿಕ್ಕಲ್ಲೂರು, ಬೊಪ್ಪೇಗೌಡನಪುರ, ಕಪ್ಪಡಿಯಲ್ಲಿರುವ ದೇವಾಲಯಗಳು ಮಂಟೇಸ್ವಾಮಿ ಕಾವ್ಯದಲ್ಲಿ ಉಲ್ಲೇಖವಾಗಿವೆ. ಹಾಗಾಗಿ ಮಂಟೇಸ್ವಾಮಿ ಕಾವ್ಯ ಹಲವು ವೈಶಿಷ್ಟ್ಯತೆಗಳಿಂದ ಕೂಡಿದೆ. ಭೌಗೋಳಿಕ ಹಾಗೂ ಸಾಮಾಜಿಕವಾಗಿ ಆಯಾಯ ಜಿಲ್ಲೆಯ ಉಪಭಾಷೆಗಳಲ್ಲಿ ಈ ಕಾವ್ಯದ ಮಟ್ಟುಗಳನ್ನು ಹಾಡುತ್ತಾರೆ. ಮಂಟೇಸ್ವಾಮಿ ಕಾವ್ಯದಲ್ಲಿ ಸಮ ಸಮಾಜ, ವ್ಯಕ್ತಿ ಸ್ವಾತಂತ್ರ್ಯ ಹಾಗೂ ಶೋಷಿತರ ಸಾಂಸ್ಕೃತಿಕ ತಲ್ಲಣಗಳು ಬಿಂಬಿತವಾಗಿದೆ. ಈ ಕಾವ್ಯದ ಶೈಲಿ ಕಾವ್ಯಾತ್ಮಕ, ನಾಟಕೀಯ ಮತ್ತು ಗದ್ಯದಲ್ಲಿ ಸರಳ ನಿರೂಪಣಾ ಶೈಲಿಯಿಂದ ಕೂಡಿದೆ ಎಂದರು.

ಈ ವೇಳೆ 'ಛಂಧೋಬುಧಿಯ ನಾಗವರ್ಮ' ಕುರಿತು ಡಿ.ಪವಿತ್ರ, ಮಧ್ಯಕಾಲೀನ ಸಾಹಿತ್ಯದಲ್ಲಿ ಹಾಸನ ಎವಿಕೆ ಕಾಲೇಜಿನ ಪ್ರಾಂಶುಪಾಲ ಡಾ.ಎಸ್.ಸಿ.ಯತೀಶ್ವರ 'ಸ್ತ್ರೀ ಸಂವೇದನೆ ನೆಲೆಗಳು' ಕುರಿತು, ಸಿಐಐಎಲ್‌ನ ನಿವೃತ್ತ ಉಪ ನಿರ್ದೇಶಕ 'ಕಾಮಯಾನಿ ದ ಕ್ಲಾಸಿಕಲ್ ಆಫ್ ಲಿಟರೇಚರ್ ಕುರಿತು, ಸಂಶೋಧಕ ಎ.ಪಿ.ರಕ್ಷಿತ್ ಅವರು, 'ಕಬ್ಬಿಗರ ಕಾವದ ನಾಮಪದ ರಚನೆಯ' ಕುರಿತು ಪ್ರಬಂಧ ಮಂಡನೆ ಮಾಡಿದರು.

ಗೋಷ್ಠಿಯಲ್ಲಿ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕ ಎನ್.ಎಂ.ತಳವಾರ್, ಪ್ರೊ.ಶಿವರಾಮ್ ಶೆಟ್ಟಿ, ಡಾ.ರಾಧಾಮಣಿ ಉಪಸ್ಥಿತರಿದ್ದರು.

ಮೈಸೂರು ಮಿತ್ರ ಮಂಗಳವಾರ 11 ಜೂನ್ 2024

ನೀರಿನ ಕೊರತೆ ನಡುವೆಯೂ ಬೇಸಿಗೆಯಲ್ಲಿ ನಿರಂತರ ವಿದ್ಯುತ್

● ತಮ್ಮ ಇಂಧನ ಇಲಾಖೆ ಸಮರ್ಥತೆ ಬಗ್ಗೆ ಸಚಿವ ಕೆ.ಜೆ.ಜಾರ್ಜ್ ಹೆಮ್ಮೆ ● ರೈತರು, ವಿದ್ಯಾರ್ಥಿಗಳಿಗೆ ತೊಂದರೆ ಆಗದಂತೆ ಕ್ರಮ

ಬೆಂಗಳೂರು, ಜೂ. 10(ಕೆಎಂಶಿ)– ಮಳೆ ಹಾಗೂ ಜಲಾಶಯಗಳಲ್ಲಿ ನೀರಿನ ಲಭ್ಯತೆ ಕೊರತೆ ಮಧ್ಯೆಯೂ ಬೇಸಿಗೆಯಲ್ಲಿ ಯಾವುದೇ ಲೋಡ್ ಶೆಡ್ಡಿಂಗ್ ಇಲ್ಲದೆ, ರೈತರು, ವಿದ್ಯಾರ್ಥಿ ಸಮುದಾಯಕ್ಕೆ ಹೆಚ್ಚು ಸಮಸ್ಯೆಯಾಗದಂತೆ ವಿದ್ಯುತ್ ಪೂರೈಸಲಾಗಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿದ್ಯುತ್ ಖರೀದಿ ಹೆಚ್ಚು ಹೊರೆಯಾಗದಂತೆ ಅನ್ಯ ರಾಜ್ಯಗಳೊಂದಿಗೆ ವಿದ್ಯುತ್ ವಿನಿಮಯ ಮಾಡಿಕೊಳ್ಳಲಾಗಿತ್ತು. ಪಂಜಾಬ್ ಮತ್ತು ಉತ್ತರ ಪ್ರದೇಶದೊಂದಿಗೆ 2023 ನವೆಂಬರ್‌ನಿಂದ 2024 ಮೇವರೆಗೂ ವಿದ್ಯುತ್ ವಿನಿಮಯದ ಒಪ್ಪಂದ ಮಾಡಿಕೊಂಡು ಗ್ರಾಹಕರಿಗೆ ವಿದ್ಯುತ್ ಪೂರೈಸಲಾಗಿದೆ. ಇದೇ ಜೂನ್ 16ರಿಂದ ಈ ಎರಡೂ ರಾಜ್ಯಗಳಿಗೆ ವಿದ್ಯುತ್



ಹಿಂತಿರುಗಿಸಲಾಗುತ್ತದೆ. ಇದರಿಂದಾಗಿ ವಿದ್ಯುತ್ ಖರೀದಿ ಅಗತ್ಯ ಕಡಿಮೆಯಾಯಿತು ಎಂದರು.

ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ದಾಖಲೆಯ ವಿದ್ಯುತ್ ಉತ್ಪಾದನೆ ಹಾಗೂ ವಿದ್ಯುತ್ ಕಾಯ್ದೆ ಸೆಕ್ಷನ್ 11 ಜಾರಿಗೊಳಿಸಿ ರಾಜ್ಯದಲ್ಲಿನ ಖಾಸಗಿ ವಿದ್ಯುತ್ ಉತ್ಪಾದಕರು ರಾಜ್ಯ ಗ್ರಿಡ್‌ಗೆ ವಿದ್ಯುತ್ ನೀಡುವಂತೆ ಮಾಡಿ ಬೇಸಿಗೆಯ ವಿದ್ಯುತ್ ಬೇಡಿಕೆ ಪೂರೈಸಲಾಗಿದೆ.

ಈ ಬಾರಿ ವಿದ್ಯುತ್ ಬೇಡಿಕೆ ಹೆಚ್ಚಿದ್ದು, ಬೇಡಿಕೆಗೆ ಅನುಗುಣವಾಗಿ ವಿದ್ಯುತ್ ಒದಗಿಸುವುದು ನಮ್ಮ ಜವಾಬ್ದಾರಿ. ಅದ



ರಂತೆ ಹೊರ ರಾಜ್ಯಗಳೊಂದಿಗೆ ವಿನಿಮಯ ಒಪ್ಪಂದ ಮಾಡಿಕೊಂಡೆವು. ಮಾರುಕಟ್ಟೆಯಿಂದ ಖರೀದಿಸಿದೆವು. ಒಟ್ಟಾರೆಯಾಗಿ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ಬಿಕ್ಕಟ್ಟಿಲ್ಲದಂತೆ, ಜನರಿಗೆ ಯಾವುದೇ ತೊಂದರೆ ಆಗದಂತೆ ನೋಡಿಕೊಂಡಿದ್ದೇವೆ.

ರಾಜ್ಯದ 3 ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಲ್ಲಿ ಕಳೆದ ವರ್ಷ ಗರಿಷ್ಠ 22,000 ಮಿಲಿಯನ್ ಯೂನಿಟ್ ವಿದ್ಯುತ್ ಉತ್ಪಾದನೆ ಮಾಡಲಾಗಿದೆ ಎಂದರು.

ಕಳೆದ ಮುಂಗಾರು ಮತ್ತು ಹಿಂಗಾರಿನಲ್ಲಿ ಮಳೆ ಕೊರತೆಯಿಂದ ಆಗಸ್ಟ್‌ನಿಂದಲೇ ಬೇಸಿಗೆ ಪರಿಸ್ಥಿತಿ ನಿರ್ಮಾಣವಾಗಿತ್ತು, ಮೊದಲೇ ಮುನ್ನೆಚ್ಚರಿಕೆ ವಹಿಸಿದ ಪರಿಣಾಮ ಹೆಚ್ಚು ಸಮಸ್ಯೆಯಾಗದಂತೆ ನೋಡಿಕೊಳ್ಳಲು ಸಾಧ್ಯವಾಯಿತು.

ಯಾವುದೇ ಕಾರಣಕ್ಕೂ ಬೇಸಿಗೆಯಲ್ಲಿ ಲೋಡ್ ಶೆಡ್ಡಿಂಗ್ ಮಾಡದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ದೇಶನ ನೀಡಿದ್ದರು, ಅದಕ್ಕೆ ತಕ್ಕಂತೆ ವಿದ್ಯುತ್ ಪೂರೈಕೆಗೆ ಸಿದ್ಧತೆ ಮಾಡಿಕೊಳ್ಳಲಾಗಿತ್ತು.

ದಿನವೊಂದಕ್ಕೆ ದಾಖಲೆಯ ವಿದ್ಯುತ್ ಬೇಡಿಕೆ ಮತ್ತು ಪೂರೈಕೆ ಸಮಸ್ಯೆ ಎದುರಾಯಿತು, 2024 ಮಾರ್ಚ್ 12ರಂದು ಅತೀ ಹೆಚ್ಚಿನ ಬೇಡಿಕೆ ಅಂದರೆ 17220 ಮೆ.ವ್ಯಾ. ಇತ್ತು, 2024ರ ಏಪ್ರಿಲ್ 5ರಂದು ಅತೀ ಹೆಚ್ಚು ಅಂದರೆ 332 ಮೆ.ಯೂ. ವಿದ್ಯುತ್ ಬಳಕೆ ದಿನವಾಗಿತ್ತು, ಇಂಧನ ಇಲಾಖೆಯಲ್ಲಿ ಇದು ದಾಖಲೆಯ ವಿದ್ಯುತ್ ಪೂರೈಕೆಯಾಗಿದೆ.

ಉಷ್ಣ ವಿದ್ಯುತ್ ಸ್ಥಾವರಗಳು ನಿರೀಕ್ಷೆ ಮೀರಿ ವಿದ್ಯುತ್ ಉತ್ಪಾದಿಸಲು ಮುಖ್ಯ ಕಾರಣ ಕಲ್ಲಿದ್ದಲು ಸಮಸ್ಯೆ ಎದುರಾಗದಂತೆ ನೋಡಿಕೊಂಡಿದ್ದು, ಕೇಂದ್ರ ಸರಕಾರದ ಜತೆ ಸಮನ್ವಯ ಸಾಧಿಸಿ ಅಗತ್ಯ ಕಲ್ಲಿದ್ದಲು ಸಂಗ್ರಹವಾಗುವಂತೆ ನೋಡಿಕೊಳ್ಳುವುದರೊಂದಿಗೆ, ವಿದೇಶಿ ಕಲ್ಲಿದ್ದಲು ಮಿಶ್ರಣ ಮಾಡಿ ಹೆಚ್ಚಿನ ಉತ್ಪಾದನೆಗೆ ಗಮನಹರಿಸಲಾಗಿತ್ತು. ಜೂನ್ ಅಂತ್ಯದವರೆಗೆ ವಿದ್ಯುತ್ ಉತ್ಪಾದನೆಗೆ ಸಮಸ್ಯೆಯಾಗದಂತೆ ಅಗತ್ಯ ನೀರು ಸಂಗ್ರಹಿಸಿಟ್ಟುಕೊಳ್ಳಲಾಗಿದೆ ಎಂದರು.

ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದ ವತಿಯಿಂದ ಸ್ವಾಮೀಜಿಗಳಿಗೆ ಅಭಿನಂದನೆ



ಮೈಸೂರು, ಜೂ.10–ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದ ವತಿಯಿಂದ ಸೋಸಲೆ ಶ್ರೀ ವ್ಯಾಸರಾಜ ಮಹಾಸಂಸ್ಥಾನ ಮತ್ತು ಶ್ರೀ ವ್ಯಾಸತೀರ್ಥ ವಿದ್ಯಾಪೀಠದ ಸಂಯುಕ್ತಾಶ್ರಯದಲ್ಲಿ ಶ್ರೀಮನ್ ನ್ಯಾಯ ಸುಧಾ ಮಂಗಳ ಮಹೋತ್ಸವದ ಪರೀಕ್ಷೆಗಳ ನಿಮಿತ್ತ ಜೆ.ಪಿ.ನಗರದ ವಿಠಲಧಾಮದಲ್ಲಿ ಆಯೋಜನೆ ಮಾಡಿರುವ ಸಂದರ್ಭದಲ್ಲಿ ಸೋಸಲೆ ಶ್ರೀ ವಿದ್ಯಾಶ್ರೀಶ ತೀರ್ಥ ಸ್ವಾಮೀಜಿ ಹಾಗೂ ಮಂತ್ರಾಲಯದ ಪೀಠಾಧಿಪತಿಗಳಾದ ಶ್ರೀ ಸುಬುದೇಂಧ್ರ ತೀರ್ಥ ಶ್ರೀಪಾದಂಗಳವರನ್ನು ದೇವಸ್ಥಾನದ ಮುಖ್ಯಸ್ಥ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ಹಾಗೂ ಪಿ.ಆರ್.ಓ. ರಾಮಪ್ರಸಾದ್‌ರವರು ಫಲ ತಾಂಬೂಲ ನೀಡಿ ಸನ್ಮಾನಿಸಿ, ಅಭಿನಂದಿಸಿದರು.

ಈ ವೇಳೆ ಕೆ.ಆರ್.ಯೋಗಾನರಸಿಂಹನ್ ಮಾತನಾಡಿ, ಸೋಸಲೆ ಶ್ರೀ ವಿದ್ಯಾಶ್ರೀಶ ತೀರ್ಥ ಸ್ವಾಮೀಜಿ ಅವರು ಈ ಇಳಿ ವಯಸ್ಸಿನಲ್ಲೂ ನಿರಂತರ ಪಾಠ, ಪ್ರವಚನ ಮಾಡುತ್ತಿರುವುದು ಎಲ್ಲರಿಗೂ ಆದರ್ಶವಾಗಿದೆ. ವಿದ್ಯಾರ್ಥಿ ದಿಸೆಯಲ್ಲಿ ಯಾವ ರೀತಿ ಇರಬೇಕೆಂಬುದಕ್ಕೆ ಶ್ರೀ ಸೋಸಲೆ ಶ್ರೀಪಾದರು ಆದರ್ಶರಾಗಿದ್ದಾರೆ ಎಂದು ತಿಳಿಸಿದರು. ಅದೇ ರೀತಿ ಮಂತ್ರಾಲಯದ ಶ್ರೀ ಸುಬುದೇಂದ್ರ ತೀರ್ಥ ಶ್ರೀಪಾದಂಗಳವರು ಜ್ಞಾನ ಪ್ರಸರಣ ಮತ್ತು ಶಾಸ್ತ್ರ ವಿದ್ಯೆ ಕಲಿಕೆಯ ನಿಟ್ಟಿನಲ್ಲಿ ಮಹತ್ತರವಾದ ಸಾಧನೆ ಮಾಡಿ, ಸಮಾಜಕ್ಕೆ ಬಹುದೊಡ್ಡ ಕೊಡುಗೆಯನ್ನು ನೀಡುವಲ್ಲಿ ಅಹರ್ನಿಶಿ ಶ್ರಮಿಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ಜೂ.10– ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯಲ್ಲಿ ನಿರ್ವಹಣಾ ಕೆಲಸದ ನಿಮಿತ್ತ ಜೂ.12 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ತೊಣಚಿಕೊಪ್ಪಲು, ಹರಿಹರ ಹೋಟೆಲ್, ಅಮ್ಮ ಕಾಂಪ್ಲೆಕ್ಸ್, ನ್ಯೂ ಕಾಂತರಾಜ ಅರಸ್ ರಸ್ತೆ, ಆರ್.ಟಿ.ಟಿ.ಸಿ ಕಾಂಪ್ಲೆಕ್ಸ್, ಅರವಿಂದ ನಗರ, ಕುವೆಂಪುನಗರ ಎಂ ಬ್ಲಾಕ್, ಎನ್ ಬ್ಲಾಕ್, ಕೆ ಬ್ಲಾಕ್, ಕುವೆಂಪುನಗರ ಕೆ.ಹೆಚ್.ಬಿ ಕಾಲೋನಿ, ಅನಿಕೇತನ ರಸ್ತೆ, ಪಡುವಣ ರಸ್ತೆ, ಸರಸ್ವತಿಪುರಂ 1 ರಿಂದ 4ನೇ ಮುಖ್ಯರಸ್ತೆ, ವಿಶ್ವಮಾನವ ಜೋಡಿ ರಸ್ತೆ, ಪಂಚಮಂತ್ರ ರಸ್ತೆ, ಎಂ ಬ್ಲಾಕ್ ಲೈಬ್ರರಿ, ಪಾಂಡುರಂಗ ದೇವಸ್ಥಾನ, ವಿವೇಕಾನಂದ ವೃತ್ತ, ವಿವೇಕಾನಂದ ನಗರ, ಇ.ಡಬ್ಲ್ಯು.ಎಸ್ ಗಣಪತಿ ದೇವಸ್ಥಾನ, ಎಂ.ಎಲ್.ಎ ವಿಶ್ವನಾಥ್ ಮನೆ ಸುತ್ತಮುತ್ತ, ಕೆನರಾ ಬ್ಯಾಂಕ್, ಬಿ.ಜಿ.ಎಸ್ ಬಾಲ ಜಗನ್ನಾಥ ಶಾಲೆ, ಎಸ್.ಬಿ.ಎಂ ಕಾಲೋನಿ, ಶಿವ ಟೆಂಪಲ್, ಸೂರ್ಯ ಲೇಔಟ್, ನಿಮಿಷಾಂಬ ಲೇಔಟ್, ಕಂದಾಯನಗರ 3ನೇ ಹಂತ, ಗಿರಿಯಪ್ಪ ನಿಂಗೇಗೌಡ ಲೇಔಟ್, ಟೆಂಪಲ್ ಬೆಲ್ ಲೇಔಟ್, ಮಹಾ ಲಿಂಗೇಶ್ವರ ದೇವಸ್ಥಾನ, ಕಬಿನಿ ಲೇಔಟ್, ಎಸ್.ಎಂ.ಎಸ್ ಸ್ಕೂಲ್ ಲೇಔಟ್, ಕಂದಾಯ ಲೇಔಟ್, ಹಂಸ ಲೇಔಟ್ 1ನೇ ಹಂತ, ಗಗನ ಶೇಖರ ಲೇಔಟ್, ಹುಲಿ ನಾರಾಯಣಪ್ಪ ಲೇಔಟ್, ಭವ್ಯ ಭಾರತಿ ಲೇಔಟ್, ಎಂ.ಡಿ.ಸಿ.ಸಿ ಬ್ಯಾಂಕ್ ಎಂಪ್ಲಾಯಿಸ್ ಲೇಔಟ್, ಟಿ.ಕೆ ಸ್ಟುಡಿಯೋ ಲೇಔಟ್, ಕಂದಾಯ ಲೇಔಟ್ 2ನೇ ಹಂತ, ತಪೋವನ, ಅನ್ನಪೂರ್ಣ ಲೇಔಟ್, ಎಂ.ಡಿ.ಸಿ.ಸಿ ಲೇಔಟ್, ಶ್ರೀರಾಂಪುರ, ಪ್ರೀತಿ ಲೇಔಟ್, ಡಿ.ವಿ.ಜಿ ಲೇಔಟ್, ಟಿ.ಕೆ. ರಾವ್ ಲೇಔಟ್, ಚಿದಾನಂದ ಮತ್ತು ರಕ್ಷಾ ಲೇಔಟ್, ಆರ್.ಕೆ ನಗರ ಕೆ ಬ್ಲಾಕ್, ವಾಸು ಲೇಔಟ್, ಮುಡಾ ಎಂಪ್ಲಾಯಿಸ್ ಲೇಔಟ್, ಮಾಧವ ಪಾರ್ಕ್, ಇ ಮತ್ತು ಎಫ್ ಬ್ಲಾಕ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಮೇಗಳಾಪುರ ವಿದ್ಯುತ್ ವಿತರಣಾ ಕೇಂದ್ರ ವ್ಯಾಪ್ತಿ ನಿರ್ವಹಣಾ ಕಾಮಗಾರಿ ನಿಮಿತ್ತ ಬೆಳಗ್ಗೆ 10 ರಿಂದ ಸಂಜೆ 5:30 ಗಂಟೆಯವರೆಗೆ ಇನಾಂ ಉತ್ತನಹಳ್ಳಿ, ಎಂ.ಸಿ.ಹುಂಡಿ, ಕೀಳನಪುರ, ಸಿದ್ದರಾಮನಹುಂಡಿ, ಮೇಗಳಾಪುರ, ಮಾಧವಗೆರೆ, ಗುರುಕಾರಪುರ, ದುದ್ದಗೆರೆ, ಮಹದೇವಿ ಕಾಲೋನಿ, ಲಕ್ಷ್ಮೀಪುರ, ಪಿ.ಜಿ ಹುಂಡಿ, ಚಟ್ಟನಹಳ್ಳಿ, ಚಟ್ಟನಹಳ್ಳಿ ಪಾಳ್ಯ, ಹೊಸಹಳ್ಳಿ, ರಂಗನಾಥಪುರ, ಶ್ರೀನಿವಾಸಪುರ, ಯಡಕೊಳ, ಕಡವೆ ಕಟ್ಟೆಹುಂಡಿ, ಅಂಚೆಹುಂಡಿ, ದೇವೇಗೌಡನಹುಂಡಿ, ಮುದ್ದೇಗೌಡನಹುಂಡಿ, ಕುಪ್ಪೆಗಾಲ, ವರಕೋಡು ಪೇಪರ್ ಮಿಲ್, ಎಸ್.ಆರ್ ಇಂಡಸ್ಟ್ರೀಸ್, ಜಾಗ್ವರಿ ಸಿಮೆಂಟ್ ಇಂಡಸ್ಟ್ರೀಸ್, ರಾಜಶ್ರೀ ಇಂಡಸ್ಟ್ರೀಸ್ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ



ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರು ಮೈಸೂರಿನ ಎಫ್‌ಟಿಎಸ್ ಸರ್ಕಲ್‌ನಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಈ ವೇಳೆ ಸಚಿವ ಸತೀಶ್ ಜಾರಕಿಹೊಳಿ ಪುತ್ರ ರಾಹುಲ್ ಜಾರಕಿಹೊಳಿ, ಕರ್ನಾಟಕ ಪ್ರದೇಶ ಕಾಂಗ್ರೆಸ್‌ನ ಮಹಿಳಾ ರಾಜ್ಯಾಧ್ಯಕ್ಷೆ ಪುಷ್ಪಾ ಅಮರನಾಥ್, ಜೈ ಭೀಮ್ ಜನಸ್ಪಂದನ ವೇದಿಕೆ ಅಧ್ಯಕ್ಷ ಚೇತನ್ ಕಾಂತರಾಜ್, ಕರ್ನಾಟಕ ಭೀಮಸೇನೆಯ ಮಂಜುನಾಥ್, ಮುಖಂಡರಾದ ಕಿರಣ್‌ಕುಮಾರ್, ಕುಮಾರ್ ಉಪಸ್ಥಿತರಿದ್ದರು.

ನಗರಪಾಲಿಕೆ ವಲಯ–2ರಲ್ಲಿ ವಿಶ್ವ ಪರಿಸರ ದಿನಾಚರಣೆ



ಮೈಸೂರು ಮಹಾನಗರಪಾಲಿಕೆ ಜಯನಗರ ವಲಯ–2ರಲ್ಲಿ ವಿಶ್ವ ಪರಿಸರ ದಿನವನ್ನು ಅರ್ಥಪೂರ್ಣವಾಗಿ ಗಿಡ ನೆಡುವುದರ ಮೂಲಕ ಆಚರಿಸಲಾಯಿತು. ವಲಯ–2ರ ಆಯುಕ್ತ ನಾಗರಾಜು, ಪಾಲಿಕೆಯ ಅಭಿವೃದ್ಧಿ ಅಧಿಕಾರಿ ಚೇತನ್ ಬಾಬು, ಪರಿಸರ ಅಭಿಯಂತರರಾದ ಮಹದೇವಮ್ಮ, ವರ್ಕ್ ಇನ್ಸ್‌ಪೆಕ್ಟರ್ ಶಿವಸ್ವಾಮಿ, ಆರೋಗ್ಯ ಪರೀಕ್ಷಕ ಅಶ್ವತ್, ಕೃಷಿ ಇಲಾಖೆಯ ಕುಮಾರ್, ಪುನೀತ್ ಮತ್ತಿತರರು ಉಪಸ್ಥಿತರಿದ್ದರು.

2 ಸಾವಿರ ಗಿಡ ನೆಟ್ಟು ಪರಿಸರ ದಿನಾಚರಣೆ



ಮೈಸೂರು,ಜೂ.10(ಪಿಎಂ)–ಅರ್ಕ ಫೌಂಡೇಶನ್ ಇಂಡಿಯಾ ವತಿಯಿಂದ ಪರಿಸರ ದಿನಾಚರಣೆ ಅಂಗವಾಗಿ 'ವನ ಮಹೋತ್ಸವ' ಶೀರ್ಷಿಕೆಯಡಿ ವಿವಿಧ ಜಾತಿಯ 2 ಸಾವಿರ ಗಿಡಗಳನ್ನು ನೆಡಲಾಯಿತು. ಬೋಗಾದಿ ಗದ್ದಿಗೆ ಮುಖ್ಯ ರಸ್ತೆಯ ಕಣಿಯನಹುಂಡಿ ಗೇಟ್–ಮಾದಳ್ಳಿ ಸಮೀಪದಲ್ಲಿರುವ ಅರ್ಕಧಾಮ ಆವರಣ ಹಾಗೂ ಸುತ್ತಮುತ್ತಲ ರಸ್ತೆ ಬದಿಯಲ್ಲಿ ಗಿಡಗಳನ್ನು ನೆಟ್ಟು ನೀರೆರೆಯಲಾಯಿತು.

ಕರ್ನಾಟಕ ಪ್ರಜಾ ಪಾರ್ಟಿ ಸಂಸ್ಥಾಪಕ ಹಾಗೂ ರಾಜ್ಯಾಧ್ಯಕ್ಷ ಡಾ.ಬಿ.ಶಿವಣ್ಣ, ಮಾದಳ್ಳಿ ಮೀಸಲು ಅರಣ್ಯ ಪ್ರದೇಶದ ವಲಯ ಅರಣ್ಯ ಅಧಿಕಾರಿ ಗೀತಾಪ್ರಿಯ, ಜಯಪುರ ಪೊಲೀಸ್ ಠಾಣೆ ಸಬ್ ಇನ್ಸ್‌ಪೆಕ್ಟರ್ ಸುರೇಶ್ ಗೋಪಣ್ಣ, ಡಿಎಂಜಿಹಳ್ಳಿ ಗ್ರಾಪಂ ಅಧ್ಯಕ್ಷೆ ಸುಮಿತ್ರ ಮಾದಪ್ಪ, ಅರ್ಕಧಾಮದ ಮ್ಯಾನೇಜರ್ ನಾರಾಯಣಸ್ವಾಮಿ, ಗ್ರಾಪಂ ಅಧಿಕಾರಿ ರುಕ್ಮಾಂಗದ, ಶಿಕ್ಷಕ ನಾಗರಾಜು, ಮಹದೇವಸ್ವಾಮಿ ಇದ್ದರು.

ಪರಿಸರ ದಿನಾಚರಣೆ ಪ್ರತಿ ವರ್ಷ ಹಬ್ಬವಾಗಲಿ

ನಿವೃತ್ತ ಅರಣ್ಯ ಅಧಿಕಾರಿ ಚಂದ್ರಶೇಖರ್

ಮೈಸೂರು, ಜೂ. 10–ಪರಿಸರ ದಿನವನ್ನು ಭಾವನಾತ್ಮಕ ಹಬ್ಬವಾಗಿ ಆಚರಿಸಲು ಸರ್ವರು ನಿತ್ಯ ಸಿದ್ಧರಾಗಬೇಕಾಗಿರುವುದು ಅವಶ್ಯವಾಗಿದೆ ಎಂದು ನಿವೃತ್ತ ಅರಣ್ಯ ಅಧಿಕಾರಿ ಚಂದ್ರಶೇಖರ್ ತಿಳಿಸಿದರು.

ನಗರದ ಬೋಗಾದಿಯ ರೂಪಾನಗರದಲ್ಲಿ ರೂಪನಗರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ವಿಶ್ವ ಪರಿಸರ ದಿನದ ಅಂಗವಾಗಿ ಗಿಡ ನೆಟ್ಟು 500ಕ್ಕೂ ಹೆಚ್ಚು ಹಣ್ಣು ಮತ್ತು ಹೂವಿನ ಗಿಡಗಳನ್ನು ಸಾರ್ವಜನಿಕರಿಗೆ ವಿತರಿಸಿ ಮಾತನಾಡಿದ ಅವರು, ಸಂಘಟನೆಯ ಪ್ರತಿ ಸದಸ್ಯರು ವರ್ಷಕ್ಕೆ ಒಂದರಂತೆ ಸಸಿ ನೆಡಲು ಮುಂದಾಗಬೇಕು. ರೈತರು ಹೊಲದಲ್ಲಿ ಸಸಿ ನೆಡಲು ಪ್ರೇರಣೆ ನೀಡಿ ಸಹಕಾರ, ಸಹಯೋಗ ನೀಡಿದಲ್ಲಿ ಮಾತ್ರ ಮುಂದಿನ ದಿನಮಾನದಲ್ಲಿ ಉತ್ತಮ ಪರಿಸರ ಹೊಂದಲು ಸಾಧ್ಯವಾಗಲಿದೆ ಎಂದರು. ಪರಿಸರ ಕಾಳಜಿ ಕೇವಲ ಸಮಾರಂಭದಲ್ಲಿ ವ್ಯಕ್ತಪಡಿಸಿದರೆ ಸಾಲದು, ಕುಟುಂಬ ನಿರ್ವಹಿಸುವ ಪ್ರತಿ



ಯೊಬ್ಬರೂ ಮಕ್ಕಳಿಗೆ ಸಸಿ ನೆಡಲು ಪ್ರೇರಣೆ ನೀಡಿ ತ್ಯಾಜ್ಯ ಕಡಿತಗೊಳಿಸಬೇಕು ಎಂದರು. ಸಂಘದ ಅಧ್ಯಕ್ಷ ಉದಯಶಂಕರ್, ಉಪಾಧ್ಯಕ್ಷ ಉಮಾ ಪೇಶಾವರ್, ಖಜಾಂಚಿ ಶ್ರೀಧರ್ ತಂತ್ರಿ, ಜನಸೇವಕ ಯುವ ಬ್ರಿಗೇಡ್ ಅಧ್ಯಕ್ಷ ಡಿ.ರಾಘವೇಂದ್ರ, ಮಲ್ಲಮ್ಮಗಾಣಿಗೆ ಪ್ರಿಯ, ಜಿ.ಸೋಮಯ್ಯಾ, ಎಂ.ಸಿ. ಮಂಜುನಾಥ್, ಸುಬ್ರಹ್ಮಣ್ಯ, ಪ್ರಿಯಾ, ಶಶಿಧರ್, ಬಾಲಕೃಷ್ಣ, ಮಾಲತಿ, ಸೂರ್ಯನಾರಾಯಣ, ಮಾಯಾ, ಮಲ್ಲೇಶ್, ರವಿಕುಮಾರ್, ಅಚ್ಚುತರಾವ್ ಇನ್ನಿತರರು ಹಾಜರಿದ್ದರು.

ಅರಿವು ಜಾಥಾಕ್ಕೆ ಚಾಲನೆ




ಮೈಸೂರು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ–ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಏಕಲವ್ಯನಗರದಲ್ಲಿ ನಡೆದ ಬಾಲಕಾರ್ಮಿಕ ವಿರೋಧಿ ದಿನದ ಅಂಗವಾಗಿ ಅರಿವು ಮೂಡಿಸುವ ಜಾಥಾಕ್ಕೆ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಚಾಲನೆ ನೀಡಿದರು.

ವ್ಯಾಸರ ತತ್ವಾದರ್ಶಗಳ ಪಾಲನೆಯೇ ನಾವು ಅವರಿಗೆ ನೀಡುವ ಗೌರವ: ನಿವೃತ್ತ ಆರೋಗ್ಯಾಧಿಕಾರಿ ಜಿ.ಕೆ.ಕುಲಕರ್ಣಿ

ವ್ಯಾಸಜಯಂತಿ, ಕನ್ನಡದ ಕಲ್ಪವೃಕ್ಷ ತೀನಂ ಶ್ರೀಕಂಠಯ್ಯ: ಪುಸ್ತಕ ಬಿಡುಗಡೆ; ಬೇಂದ್ರೆ ಬದುಕು ಬರಹ ಕುರಿತು ಉಪನ್ಯಾಸ ಕಾರ್ಯಕ್ರಮ

ಮೈಸೂರು, ಜೂ. 10– ಭವ್ಯವಾದ ಹಿಂದೂ ಸಮಾಜದ ತಳಹದಿಗೆ ನಾಂದಿ ಹಾಡಿದ ವೇದವ್ಯಾಸರಿಗೆ ನಾವು ನೀಡುವ ಗೌರವವೆಂದರೆ ಅವರ ತತ್ವಾದರ್ಶಗಳನ್ನು ಸದಾ ಪಾಲಿಸುವುದೇ ಆಗಿದೆ ಎಂದು ನಿವೃತ್ತ ಆರೋಗ್ಯಾಧಿಕಾರಿ ಜಿ.ಕೆ.ಕುಲಕರ್ಣಿ ಅಭಿಪ್ರಾಯಿಸಿದ್ದಾರೆ.

ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಬಿಎಸ್‌ಎಸ್ ವಿದ್ಯೋದಯ ಶಾಲಾ ಸಭಾಂಗಣದಲ್ಲಿ ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಮೈಸೂರು ಜಿಲ್ಲಾ ಸಮಿತಿ ಆಯೋಜಿಸಿದ್ದ ವ್ಯಾಸಜಯಂತಿ ಕಾರ್ಯಕ್ರಮದಲ್ಲಿ ಯೋಗೇಶ್ ತೀರ್ಥಪುರ ಅವರ 'ಕನ್ನಡದ ಕಲ್ಪವೃಕ್ಷ ತೀನಂ ಶ್ರೀಕಂಠಯ್ಯ' ಪುಸ್ತಕ ಲೋಕಾರ್ಪಣೆ



ಗೊಳಿಸಿ ಮಾತನಾಡಿದರು.

ವ್ಯಾಸರು ವೇದ, ಉಪನಿಷತ್ತು ಮತ್ತು ಪುರಾಣಗಳನ್ನು ಆರಾಧಿಸಿದಂತಹವರು. ಅವರನ್ನು ಮಾನವ ಕುಲದ ಗುರು ಎಂದೇ ಭಾವಿಸಬಹುದು ಎಂದರು.

ದ.ರಾ.ಬೇಂದ್ರೆಯವರ ಬದುಕು–ಬರಹ ಕುರಿತು ಉಪನ್ಯಾಸವನ್ನೂ ನೀಡಿದ ಅವರು, ಬೇಂದ್ರೆಯವರ ಸಾಹಿತ್ಯವನ್ನು ಯಾವುದೇ ಒಂದು ಚೌಕಟ್ಟಿಗೆ ಸೀಮಿತಗೊಳಿಸಲು ಸಾಧ್ಯವಿಲ್ಲ ಅವರ ಒಂದೊಂದು ಕೃತಿಯೂ ಕಲ್ಪವೃಕ್ಷ ಎಂದರು. ದಾರ್ಶನಿಕತೆ ಬೇಂದ್ರೆಯವರ ಸಾಹಿತ್ಯದ ವಿಶೇಷತೆ ಎಂದರೆ ಅತಿಶಯೋಕ್ತಿಯಾಗಲಾರದು, ಅವರ ಸಾಹಿತ್ಯವು ಮೇಲ್ನೋಟಕ್ಕೆ ಸಾಹಿತ್ಯದ ಪ್ರಾಸಕ್ಕೆ ಹೊಂದಿಕೊಂಡರೂ ಅದರ ಒಳಾರ್ಥ ವಿಶೇಷವಾಗಿರುತ್ತದೆ. ಅವರ ಪಾತರಗಿತ್ತಿ ಪಕ್ಕ, ಕುರುಡು ಕಾಂಚಾಣ, ನೀ ಹಿಂಗ ನೋಡ ಬ್ಯಾಡ ನನ್ನ ಎಲ್ಲವೂ ಮನುಷ್ಯನ ಪ್ರಲೋಭನೆಯನ್ನು ವಿವರಿಸುತ್ತದೆ ಎಂದರು. ಕಾರ್ಯಕ್ರಮದಲ್ಲಿ ಕೃತಿಯ ಲೇಖಕ ಯೋಗೀಶ್ ತೀರ್ಥಪುರ, ಮಹರ್ಷಿ ಪದವಿಪೂರ್ವ ಕಾಲೇಜಿನ ಸಂಸ್ಕೃತ ಅಧ್ಯಾಪಕ ವಿದ್ವಾನ್ ನಾರಾಯಣ ದೇಸಾಯಿ, ಡಾ.ಪಿ.ರಾಘವೇಂದ್ರ ಶೆಟ್ಟಿ, ಪರಿಷತ್ತಿನ ಉಪಾಧ್ಯಕ್ಷ ಬಿ.ಕೆ.ಜಗದೀಶ್ ಹಾಗೂ ವಲಯ ಪ್ರಮುಖರಾದ ಡಾ.ವಿ.ರಂಗನಾಥ್ ಉಪಸ್ಥಿತರಿದ್ದರು.

ಅರ್ಜಿ ಆಹ್ವಾನ

ಮೈಸೂರು, ಜೂ.10– ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ) ಸಂಸ್ಥೆಯ 2024–25ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಬಿ.ವಿ.ಎ. (ದೃಶ್ಯಕಲೆ) ಸ್ನಾತಕ ಪದವಿ ಕೋರ್ಸಿನ ಪ್ರವೇಶಾತಿಗಾಗಿ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್, ಅನ್ವಯ ಕಲೆ, ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ, ಕಲಾ ಇತಿಹಾಸ ಕೋರ್ಸ್‌ಗಳಿಗೆ ದ್ವಿತೀಯ ಪಿಯುಸಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ಕಚೇರಿಯಿಂದ ಜೂನ್ 14 ರೊಳಗೆ ಪಡೆದು, ಜೂ.19 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಪ್ರವೇಶಾತಿ ದಾಖಲಾತಿಗಳ ಪರಿಶೀಲನೆ, ಪ್ರವೇಶ ಪರೀಕ್ಷೆ, ಮೌಖಿಕ ಸಂದರ್ಶನ ಜೂ.20 ರಂದು ನಡೆಯಲಿದೆ. ದೂ.ಸಂ: 0821 2438931 ಸಂಪರ್ಕಿಸಬಹುದು ಎಂದು ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ಸಂಸ್ಥೆಯ ಡೀನ್ ತಿಳಿಸಿದ್ದಾರೆ.

ಹಿರಿಯ ನಾಗರಿಕರಿಗೆ ಸಿಹಿ ವಿತರಣೆ



ಸತತವಾಗಿ ಮೂರನೇ ಬಾರಿಗೆ ನರೇಂದ್ರ ಮೋದಿ ಪ್ರಧಾನಮಂತ್ರಿಗಳಾಗಿ ಪ್ರಮಾಣ ವಚನ ಸ್ವೀಕರಿಸಿದ ಸಂದರ್ಭದಲ್ಲಿ ಮೈಸೂರು ಮಹಾನಗರ (ಜಿಲ್ಲಾ) ST ಮೋರ್ಚಾ ವತಿಯಿಂದ ಸೋಮವಾರ ಸರಸ್ವತಿಪುರಂನ TTL ಕಾಲೇಜು ಪಕ್ಕದ ಶರಣ್ಯ ಸಾನಿಧ್ಯಾ ವೃದ್ಧಾಶ್ರಮದ ಹಿರಿಯ ನಾಗರಿಕರಿಗೆ ಸಿಹಿ ವಿತರಿಸಲಾಯಿತು. ಈ ಸಂದರ್ಭ ಅಧ್ಯಕ್ಷ ಪಡುವಾರಹಳ್ಳಿ ಎಂ.ರಾಮಕೃಷ್ಣ, ಪ್ರಧಾನ ಕಾರ್ಯದರ್ಶಿ ನಾರಾಯಣ ಲೋಲಪ್ಪ, ಕೃಷ್ಣನಾಯಕ, ಟೆನ್ನಿಸ್ ಗೋಪಿ, ಪೈ ಲೋಕೇಶ್ ಜಯಸಿಂಹ, ಎಸ್.ತ್ಯಾಗರಾಜ್, ಸಿದ್ಧರಾಜು, ಕೆ.ಆರ್ ಕ್ಷೇತ್ರದ ಅಧ್ಯಕ್ಷ ನಂದೀಶ್ ನಾಯಕ, ಕುಮಾರ್, ತಿಲಕ್‌ನಗರ ರಾಜು, ಮದಕರಿ, ರವಿ ಮತ್ತಿತರರಿದ್ದರು.

ಸ್ವಯಂ ಚಾಲಿತ ಶೂ ಪಾಲಿಶ್ ಮಷಿನ್ ಕೊಡುಗೆ



ಮೈಸೂರು ನಗರ ವಕೀಲರ ವಿವಿಧೋದ್ದೇಶ ಸಹಕಾರ ಸಂಘದ ಅಧ್ಯಕ್ಷ ಬಿ.ಎಸ್. ಚಂದ್ರಶೇಖರ ಅವರು ಹೊಸ ತಂತ್ರಜ್ಞಾನವುಳ್ಳ ಸ್ವಯಂ ಚಾಲಿತ ಶೂ ಪಾಲಿಶ್ ಮಷಿನ್ ಅನ್ನು ಸಂಘಕ್ಕೆ ಕೊಡುಗೆಯಾಗಿ ನೀಡಿದ್ದು, ಸದರಿ ಸ್ವಯಂಚಾಲಿತ ಶೂ ಪಾಲಿಶ್ ಮಷಿನ್ ಅನ್ನು ಮೈಸೂರು ವಕೀಲರ ಸಂಘದ ಅಧ್ಯಕ್ಷ ಎಸ್.ಲೋಕೇಶ್, ಕಾರ್ಯದರ್ಶಿ ಎ.ಜಿ. ಸುಧೀರ್ ಉದ್ಘಾಟಿಸಿದರು. ಈ ವೇಳೆ ಉಪಾಧ್ಯಕ್ಷ ಚನ್ನನಾಯಕ, ಎಂ.ವಿ. ಚಂದ್ರಶೇಖರ್, ನಿರ್ದೇಶಕ ಬಸವರಾಜು, ಇತರ ವಕೀಲರು ಹಾಜರಿದ್ದರು. ಇದೇ ವೇಳೆ ಸಹಕಾರ ಸಂಘದ ಅಧ್ಯಕ್ಷ ಬಿ.ಎಸ್. ಚಂದ್ರಶೇಖರ್ ಮಾತನಾಡಿ, ಶೂ ಪಾಲಿಶ್ ಮಷಿನ್ ಉಪಯೋಗವನ್ನು ಎಲ್ಲಾ ವಕೀಲರು ಸದ್ಬಳಕೆ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

ಮತದಾರರ ಖಾತೆಗೆ 1 ಲಕ್ಷ ರೂ. ಖಟಾಖಟ್ ಜಮಾ!

ಆಮಿಷ ತೋರಿ ಆಯ್ಕೆಯಾದ ಕಾಂಗ್ರೆಸ್‌ನ ಎಲ್ಲಾ 99 ಸಂಸದರನ್ನು ಅನರ್ಹಗೊಳಿಸುವಂತೆ ಚುನಾವಣಾ ಆಯೋಗಕ್ಕೆ ದೂರು

ನವದೆಹಲಿ, ಜೂ.10– ಕಾಂಗ್ರೆಸ್ ಚಿಹ್ನೆಯಡಿಯಲ್ಲಿ ಗೆಲುವು ಸಾಧಿಸಿರುವ ಎಲ್ಲಾ 99 ಚುನಾಯಿತ ಅಭ್ಯರ್ಥಿಗಳನ್ನು ಅನರ್ಹಗೊಳಿಸಬೇಕೆಂದು ದೆಹಲಿ ಮೂಲದ ವಕೀಲರೊಬ್ಬರು ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿದ್ದಾರೆ.

ವಕೀಲ ವಿಭೋರ್ ಆನಂದ್ ಈ ಸಂಬಂಧ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿದ್ದು, ವಿಷಯವನ್ನು ಗಂಭೀರವಾಗಿ ಪರಿಗಣಿಸುವಂತೆ ಆಗ್ರಹಿಸಿದ್ದಾರೆ. 1951ರ ಸೆಕ್ಷನ್ 123(1) ಅಡಿಯಲ್ಲಿ ಕಾಂಗ್ರೆಸ್ ತನ್ನ ಚುನಾವಣಾ ಪ್ರಚಾರದಲ್ಲಿ ತಮಗೆ ಮತ ಹಾಕಿದರೆ ಒಂದು ಲಕ್ಷ ರೂಪಾಯಿ ನೀಡಲಾಗುವುದು ಎಂದು ಹೇಳಿತ್ತು. ಇದು ಮತದಾರರಿಗೆ ಲಂಚ ನೀಡುವುದಾಗಿದೆ. ಇದು ಸಂಪೂರ್ಣ ಭ್ರಷ್ಟ ಆಚರಣೆಗಳಿಗೆ ಸಮಾನವಾಗಿದ್ದು, ಕಾಂಗ್ರೆಸ್ ಅಪರಾಧ ಎಸಗಿದೆ ಎಂದು ವಕೀಲ ವಿಭೋರ್ ಅನಂದ್ ಹೇಳುತ್ತಾರೆ.

ಜನತಾ ಪ್ರಾತಿನಿಧ್ಯ ಕಾಯಿದೆ ಸೆಕ್ಷನ್ 123, ಚುನಾವಣೆಯ ಸಮಯದಲ್ಲಿ ಭ್ರಷ್ಟ ಆಚರಣೆಗಳ ಕುರಿತು ವಿವರಿಸುತ್ತದೆ. ಈ ಕಾಯಿದೆ ಪ್ರಕಾರ, ಚುನಾವಣೆ ಸಮಯದಲ್ಲಿ ಹಣ, ಭರವಸೆ ಅಥವಾ ಉಡುಗೊರೆ ನೀಡಿ ತಮ್ಮ ಪರವಾಗಿ ಪ್ರೇರೇಪಿಸುವುದು ಅಪರಾಧವಾಗುತ್ತದೆ. ಯಾವುದೇ ವ್ಯಕ್ತಿ ತನ್ನ ಅಭ್ಯರ್ಥಿಯ ಸೂಚನೆ ಅಥವಾ ಸಮ್ಮತಿ ಮೇರೆಗೆ ಚುನಾವಣೆಗೆ ನಿಲ್ಲದಂತೆ/ ಚುನಾವಣೆಯಿಂದ ಹಿಂದೆ ಸರಿಯುವಂತೆ/ ತಮ್ಮ ಪರವಾಗಿ ಮತದಾನ ಮಾಡಲು ಒತ್ತಾಯಿಸುವುದು/ ಮತದಾನ ಪ್ರಕ್ರಿಯೆಯಿಂದ ಹಿಂದೆ ಸರಿಯುವಂತೆ ಮಾಡುವುದು. ಈ ಎಲ್ಲಾ ಪ್ರಕ್ರಿಯೆಯ ಪ್ರತಿಫಲವಾಗಿ ಉಡುಗೊರೆ/ಭರವಸೆ/ಹಣ ನೀಡುವುದು ಅಪರಾಧವಾಗುತ್ತದೆ.

ಕಾಂಗ್ರೆಸ್ ಪರವಾಗಿ ಮತ ಹಾಕಿದರೆ ಗೆದ್ದ ನಂತರ ಮಹಿಳೆಯರ ಖಾತೆಗೆ ಪ್ರತಿ ತಿಂಗಳು 8,500 ರೂ.ನಂತೆ ವಾರ್ಷಿಕವಾಗಿ 1 ಲಕ್ಷ ರೂಪಾಯಿ ಹಣ ಖಟಾಖಟ್ ಎಂದು ಜಮೆ ಆಗುತ್ತದೆ ಎಂದು ಹಲವು ಭಾಷಣಗಳಲ್ಲಿ ಉಲ್ಲೇಖಿಸಿದ್ದಾರೆ. ಇನ್ನು ಕಾಂಗ್ರೆಸ್ ಹಲವು ಕಡೆ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಣೆ ಮಾಡಿತ್ತು. ಇದು ಪ್ರಜಾ ಪ್ರತಿನಿಧಿ ಕಾಯ್ದೆ, 1951 ರ ಸೆಕ್ಷನ್‌ಗಳ ಅಡಿಯಲ್ಲಿ ಲಂಚ ಆಗುತ್ತೆ ಎಂಬುದನ್ನು ವಿಭೋರ್ ಆನಂದ್ ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಜನತಾ ಪ್ರಾತಿನಿಧ್ಯ ಕಾಯಿದೆ ಸೆಕ್ಷನ್ 123 ಪ್ರಕಾರ ಚುನಾವಣೆ ಪ್ರಚಾರದಲ್ಲಿ ಭರವಸೆಗಳನ್ನು ಓದಿದರೆ ಸಾಕಿತ್ತು. ಕಾಂಗ್ರೆಸ್ ನಾಯಕರು ಮತ್ತು ಕಾರ್ಯಕರ್ತರು ಮಹಿಳಾ ಮತದಾರರನ್ನು ಸೆಳೆಯಲು ಪ್ರಯತ್ನಿಸಿದರು. ಇದು ಭ್ರಷ್ಟಾಚಾರದ ನೆರಳಿನಲ್ಲಿ ಬರುತ್ತದೆ. ಮಹಿಳಾ ಮತದಾರರಿಗೆ ಲಂಚದ ಆಮಿಷವನ್ನು ನೀಡಲಾಗಿತ್ತು. ಕಾಂಗ್ರೆಸ್ ಪಕ್ಷ ಮತ್ತು ಸದಸ್ಯರು ಸೆಕ್ಷನ್ 123ರ ಅಡಿಯಲ್ಲಿ ಅಪರಾಧ ಮಾಡಿದ್ದಾರೆ ಎಂಬುದು ಸ್ಪಷ್ಟ ಎಂದು ವಿಭೋರ್ ಆನಂದ್ ವಾದಿಸಿದ್ದಾರೆ. ಅದರಲ್ಲಿಯೂ ಕಾಂಗ್ರೆಸ್ ಬಡ ಮುಸ್ಲಿಂ ಮಹಿಳಾ ಮತದಾರರನ್ನು ಸೆಳೆಯಲು ಈ ಆಮಿಷ ನೀಡಿತ್ತು. ಅಂಚೆ ಕಚೇರಿ ಮತ್ತು ಕಾಂಗ್ರೆಸ್ ಆಫೀಸ್‌ಗಳ ಮುಂದೆ ಮಹಿಳಾ ಮತದಾರರು ಹಣಕ್ಕಾಗಿ ಕ್ಯೂನಲ್ಲಿ ನಿಂತಿರುವ ಬಗ್ಗೆ ಮಾಧ್ಯಮಗಳು ವರದಿ ಮಾಡಿವೆ ಎಂಬುದನ್ನು ವಿಭೋರ್ ಆನಂದ್ ಉಲ್ಲೇಖಿಸಿದ್ದಾರೆ

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಂಸದ ರಾಹುಲ್ ಗಾಂಧಿ, ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ವಿರುದ್ಧ ಚುನಾವಣಾ ಆಯೋಗ ತನಿಖೆ ಆರಂಭಿಸಬೇಕು. ಜನತೆಗೆ ಲಂಚದ ಆಮಿಷ ನೀಡಿ ಗೆಲುವು ಸಾಧಿಸಿರುವ ಕಾಂಗ್ರೆಸ್‌ನ 99 ಸದಸ್ಯರನ್ನು ಅನರ್ಹಗೊಳಿಸಬೇಕು ಎಂದು ವಕೀಲರಾದ ವಿಭೋರ್ ಆನಂದ್ ಆಗ್ರಹಿಸಿದ್ದಾರೆ.

ವಿಡಿಯೋ ಬ್ಲಾಕ್‌ಮೇಲ್‌ನಿಂದ ಹತಾಶೆಗೊಂಡು ಚಂದಗಾಲು ಗ್ರಾಮದ ನಾಲ್ವರು ಆತ್ಮಹತ್ಯೆ ಯತ್ನ ಪ್ರಕರಣ

ಇಡೀ ಪ್ರಕರಣ ಮುಚ್ಚಿ ಹಾಕುವ ವ್ಯವಸ್ಥಿತ ಹುನ್ನಾರ: ಸಾರಾ ಆರೋಪ



ಕೆ.ಆರ್.ನಗರ, ಜೂ.10– ತಾಲೂಕಿನ ಚಂದಗಾಲು ಗ್ರಾಮದ ಒಂದೇ ಕುಟುಂಬದ ನಾಲ್ವರು ಆತ್ಮಹತ್ಯೆಗೆ ಯತ್ನ ಪ್ರಕರಣದಲ್ಲಿ ನಾನು ಮಧ್ಯಪ್ರವೇಶಿಸದಿದ್ದರೆ ಇಡೀ ಘಟನೆ ಮುಚ್ಚಿ ಹಾಕುವ ವ್ಯವಸ್ಥಿತ ಹುನ್ನಾರ ನಡೆದಿತ್ತು ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ಆರೋಪಿಸಿದರು.

ಪ್ರಕರಣದಲ್ಲಿ ಸಾವನ್ನಪ್ಪಿದ ಮಹದೇವ ನಾಯಕರ ಅಂತಿಮ ದರ್ಶನ ಪಡೆದು ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡರ ಮೂಲಕ ಸರ್ಕಾರದಿಂದ ನೀಡುವ 8.5 ಲಕ್ಷ ರೂ.ಗಳ ಪರಿಹಾರದ ಚೆಕ್ ಅನ್ನು ಮೃತನ ಪುತ್ರನಿಗೆ ವಿತರಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2 ದಿನಗಳ ಹಿಂದೆ ಇಡೀ ಪ್ರಕರಣ ಮುಚ್ಚಿ ಹಾಕಲು ಕೆಲವರು ಯತ್ನಿಸಿದ್ದರು ಎಂದು ಗಂಭೀರ ಆರೋಪ ಮಾಡಿದರು.

ಈ ಪ್ರಕರಣದಲ್ಲಿ ಮೃತಪಟ್ಟ ಮಹದೇವನಾಯಕನ ಕುಟುಂಬಕ್ಕೆ ವೈಯಕ್ತಿಕವಾಗಿ 2 ಲಕ್ಷ ರೂ. ಸಹಾಯಧನ ವಿತರಿಸಿದ್ದೇನೆ ಎಂದು ಶಾಸಕ ಡಿ.ರವಿಶಂಕರ್ ಹೇಳಿಕೆ ನೀಡಿರುವುದು ಮಾಧ್ಯಮಗಳಲ್ಲಿ ಪ್ರಕಟವಾಗಿದೆ. ಆದರೆ ಆ ಹಣ ಇದುವರೆಗೂ ನೊಂದ ಕುಟುಂಬಕ್ಕೆ ತಲುಪಿಲ್ಲ. ಈ ಬಗ್ಗೆ ತಾಲೂಕು ಆಡಳಿತ ಮತ್ತು ಪೊಲೀಸರು ತನಿಖೆ ಮಾಡಬೇಕು ಎಂದು ಆಗ್ರಹಿಸಿದರು.

ಇಡೀ ಘಟನೆಗೆ ಪೊಲೀಸರ ವೈಫಲ್ಯವೇ ಕಾರಣ. ನೊಂದವರು ನೀಡಿದ ದೂರನ್ನು ಪಡೆದು ಪ್ರಕರಣ ದಾಖಲಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡಿದ್ದರೆ 2 ಅಮೂಲ್ಯ ಜೀವಗಳು ಸಾವನ್ನಪ್ಪುತ್ತಿರಲಿಲ್ಲ. ಹೀಗಾಗಿ ಪ್ರಕರಣ ದಾಖಲಿಸದೇ ಲೋಪವೆಸಗಿರುವ ಮೂವರು ಪೊಲೀಸ್ ಅಧಿಕಾರಿಗಳ ವಿರುದ್ಧ ಎಸ್‌ಸಿ/ಎಸ್‌ಟಿ ದೌರ್ಜನ್ಯ ಕಾಯ್ದೆಯಡಿ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ಕಾಮುಕನ ಬೆದರಿಕೆಯಿಂದ ಮರ್ಯಾದೆಗೆ ಅಂಜಿ ಆತ್ಮಹತ್ಯೆಗೆ ಯತ್ನಿಸಿದ ಮನೆ ಯಜಮಾನ ಮಹದೇವನಾಯಕ ಮೃತಪಟ್ಟಿದ್ದು, ಆತನ ಅಂತಿಮ ದರ್ಶನ ಪಡೆಯಲು ಕೂಡಲೇ ಹೋಗದ ತಹಸೀಲ್ದಾರ್ ಶನಿವಾರ ರಾತ್ರಿ ಹೋಗಿದ್ದಾರೆ. ಕಂದಾಯ ಇಲಾಖೆಯ ಯಾವುದೇ ಅಧಿಕಾರಿಗಳು ಘಟನೆ ಸಂಬಂಧ ಜಿಲ್ಲಾಡಳಿತ ಮತ್ತು ಸರ್ಕಾರಕ್ಕೆ ಮಾಹಿತಿ ನೀಡಿಲ್ಲ. ಇಂತಹ ಅಧಿಕಾರಿಗಳಿದ್ದರೆ ದಲಿತರು ಮತ್ತು ಅಮಾಯಕರ ಪ್ರಾಣಕ್ಕೆ ರಕ್ಷಣೆ ಸಿಗಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಈ ವೇಳೆ ಸ್ಥಳದಲ್ಲಿದ್ದ ತಹಸೀಲ್ದಾರ್ ಸಿ.ಎಸ್.ಪೂರ್ಣಿಮಾ ಅವರನ್ನು ಹಿಗ್ಗಾಮುಗ್ಗಾ ತರಾಟೆ ತೆಗೆದುಕೊಂಡ ಸಾ.ರಾ.ಮಹೇಶ್ ಈ ಪ್ರಕರಣದಲ್ಲಿ ತಾಲೂಕು ಆಡಳಿತದ ವೈಫಲ್ಯ ಎದ್ದು ಕಾಣುತ್ತಿದ್ದು, ಕರ್ತವ್ಯ ಲೋಪವೆಸಗಿರುವ ನಿಮ್ಮ ವಿರುದ್ಧ ಸರ್ಕಾರಕ್ಕೆ ದೂರು ನೀಡುವುದಾಗಿ ಎಚ್ಚರಿಕೆ ನೀಡಿದರು. ಈ ವೇಳೆ ತಹಸೀಲ್ದಾರರು ಮತ್ತು ಕೆ.ಆರ್. ನಗರ ಪೊಲೀಸರ ವಿರುದ್ಧ ದೂರುಗಳ ಸರಮಾಲೆಯನ್ನೇ ಹೇಳಿದ ಗ್ರಾಮಸ್ಥರು, ಪೊಲೀಸರು ಮತ್ತು ತಾಲೂಕು ಆಡಳಿತದ ವೈಫಲ್ಯದಿಂದ ಮಹದೇವನಾಯಕನ ಕುಟುಂಬ ಸೂಕ್ತ ರಕ್ಷಣೆ ಇಲ್ಲದೆ ಆತ್ಮಹತ್ಯೆ ದಾರಿ ಹಿಡಿದಿದ್ದು, ದಲಿತರ ಜೀವಗಳಿಗೆ ಬೆಲೆ ಇಲ್ಲದಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಜಿಪಂ ಮಾಜಿ ಅಧ್ಯಕ್ಷ ಸಿ.ಜೆ.ದ್ವಾರಕೀಶ್, ಮಾಜಿ ಸದಸ್ಯರಾದ ಅಮಿತ್.ವಿ.ದೇವರಹಟ್ಟಿ, ಎಂ.ಟಿ.ಕುಮಾರ್, ರಾಜ್ಯ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್, ಜೆಡಿಎಸ್ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ದಾಕ್ಷಾಯಿಣಿ, ತಾಲೂಕು ಅಧ್ಯಕ್ಷೆ ರಾಜಲಕ್ಷ್ಮಿ, ಪುರಸಭೆ ಸದಸ್ಯರಾದ ಉಮೇಶ್, ಸಂತೋಷ್ ಗೌಡ, ಕೆ.ಎಲ್.ಜಗದೀಶ್, ಜೆಡಿಎಸ್ ಮುಖಂಡರಾದ ಸಿ.ಬಿ.ಲೋಕೇಶ್, ಗ್ರಾಮದ ಯಜಮಾನರಾದ ಶಿವಪ್ಪ ನಾಯಕ, ರಾಜನಾಯಕ, ಪೊಲೀಸ್ ನಿರೀಕ್ಷಕ ಆರ್.ಕೃಷ್ಣರಾಜು ಮತ್ತಿತರರಿದ್ದರು.

ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ತಾಲೂಕು ಆಡಳಿತ ವಿಫಲ

ತಹಸೀಲ್ದಾರ್ ಅಮಾನತುಗೊಳಿಸಲು ಮಾಜಿ ಸಚಿವ ಸಾ.ರಾ.ಮಹೇಶ್ ಒತ್ತಾಯ

ಕೆ.ಆರ್.ನಗರ, ಜೂ.10– ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ತಾಲೂಕು ಆಡಳಿತ ಮತ್ತು ಪೊಲೀಸ್ ಇಲಾಖೆ ಸಂಪೂರ್ಣ ವಿಫಲವಾಗಿದೆ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ಆರೋಪಿಸಿದರು.

ಪಟ್ಟಣದ ತಾಲೂಕು ಆಡಳಿತ ಸೌಧದ ಎದುರು ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ತಹಸೀಲ್ದಾರ್ ಸಿ.ಎಸ್.ಪೂರ್ಣಿಮಾ ಕರ್ತವ್ಯ ನಿರ್ವಹಿಸುವಲ್ಲಿ ಎಡವಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಚಂದಗಾಲು ಪ್ರಕರಣದಲ್ಲಿ ತಹಸೀಲ್ದಾರರು ಮುನ್ನೆಚ್ಚರಿಕೆ ವಹಿಸಿದ್ದರೆ ಆ ಕುಟುಂಬದ 2 ಜೀವಗಳು ಬಲಿಯಾಗುತ್ತಿರಲಿಲ್ಲ. ನಾವು ಈ ರೀತಿ ಹೋರಾಡುವ ಪ್ರಸಂಗ ಎದುರಾಗುತ್ತಿರಲಿಲ್ಲ. ಮುಂದೆ ಅವರು ತಮ್ಮ ತಪ್ಪನ್ನು ತಿದ್ದಿಕೊಂಡು ಕೆಲಸ ಮಾಡದಿದ್ದರೆ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಬೆದರಿಕೆಯಿಂದ ಕುಟುಂಬವೊಂದು ವಿಷಸೇವಿಸಿ ಮನೆಯ ಯಜಮಾನ ಸಾವನ್ನಪ್ಪಿದ ನಂತರವೂ ತಹಸೀಲ್ದಾರ್ ಆಸ್ಪತ್ರೆ ಮತ್ತು ಅವರ ಮನೆಗೆ ಭೇಟಿ ನೀಡಿ, ನೆರವಿನ ಹಸ್ತ ಚಾಚಿ ಸಾಂತ್ವನ ಹೇಳುವ ಕೆಲಸ ಮಾಡದೆ ಬೇಜವಾಬ್ದಾರಿತನ ತೋರಿದ್ದು, ಇದನ್ನು ಕ್ಷಮಿಸಲು ಸಾಧ್ಯವಿಲ್ಲ ಎಂದರು.

ಕಳೆದ ಒಂದು ವರ್ಷದಿಂದ ಕ್ಷೇತ್ರದಲ್ಲಿ ನಿರಂತರವಾಗಿ ಇಂತಹ ಹತ್ತಾರು ಘಟನೆಗಳು ನಡೆಯುತ್ತಿದ್ದು, ಈವರೆಗೆ ನಾನು ಸುಮ್ಮನಿದ್ದೆ. ಆದರೆ ಮುಂದೆ ಇದು ಪುನರಾವರ್ತನೆಯಾದರೆ ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ. ಹಾಗಾಗಿ ಅಧಿಕಾರಿಗಳು ಅದಕ್ಕೆ ಅವಕಾಶ ಮಾಡಿಕೊಡದೆ ಜನರ ಕೆಲಸ ಮಾಡಬೇಕು ಎಂದು ತಾಕೀತು ಮಾಡಿದರು.

ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಇಲಾಖೆ ಸಂಪೂರ್ಣ ವಿಫಲರಾಗಿದ್ದು, ಕೂಡಲೇ ಈ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ನಾವು ಬೀದಿಗಿಳಿದು ಕಾನೂನು ಕೈಗೆ ತೆಗೆದುಕೊಂಡರೆ ಅದನ್ನು ತಡೆಯಲು ಸಾಧ್ಯವಿಲ್ಲ. ಹಾಗಾಗಿ ಇದನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಸ್ಥಳದಲ್ಲಿದ್ದ ಎಎಸ್ಪಿ ಡಾ.ನಂದಿನಿ ಅವರಿಗೆ ತಿಳಿಸಿದರು. ಈ ವೇಳೆ ಸ್ಥಳದಲ್ಲಿದ್ದ ಹುಣಸೂರು ಎಸಿ ಡಾ.ಮಹಮದ್ ಹ್ಯಾರೀಸ್ ಸುಮೇರ್ ಅವರಿಗೆ ತಹಸೀಲ್ದಾರರ ವಿರುದ್ಧ ಹಲವು ದೂರುಗಳನ್ನು ಹೇಳಿದ ಸಾ.ರಾ.ಮಹೇಶ್ ಈ ಬಗ್ಗೆ ನೀವು ಖುದ್ದಾಗಿ ತನಿಖೆ ನಡೆಸಿ ಅವರ ವೈಫಲ್ಯಗಳನ್ನು ಕಂಡು ಹಿಡಿದು ಎಲ್ಲವನ್ನು ಸರಿಪಡಿಸಬೇಕೆಂದರು. ಮೃತ ಮಹದೇವನಾಯಕನ ಕುಟುಂಬಕ್ಕೆ ಸರ್ಕಾರದಿಂದ 25 ಲಕ್ಷ ರೂ. ಪರಿಹಾರ ನೀಡುವ ಜೊತೆಗೆ ಕರ್ತವ್ಯ ಲೋಪವೆಸಗಿರುವ ತಹಸೀಲ್ದಾರ್ ಸಿ.ಎಸ್.ಪೂರ್ಣಿಮಾ ಅವರನ್ನು ಕೂಡಲೇ ಅಮಾನತು ಮಾಡಿ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಭಜೆ ವಾಯುವೇಗಂ (ತೆ)	2 ಪ್ರದರ್ಶನಗಳು
ಘಜಿನಿ (ತ)	2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ವೆಪನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕ್ರೂ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಡೆವಿಲ್ ಹಂಟರ್ (ತ)	4 ಪ್ರದರ್ಶನಗಳು
ಗಾಯಿತ್ರಿ	
ಜಡ್ಜ್‌ಮೆಂಟ್ (ಕ)	4 ಪ್ರದರ್ಶನಗಳು
ರಾಜಕಮಲ್	
ಇಂಡಿಯನ್ 1 (ತ)	4 ಪ್ರದರ್ಶನಗಳು
ಸಂಗಂ	
ಗರುಡನ್ (ತ)	4 ಪ್ರದರ್ಶನಗಳು
ಲಿಡೋ	
ರಾಬರ್ಟ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಘಜಿನಿ (ತ)	4 ಪ್ರದರ್ಶನಗಳು
ಪ್ರಭಾ	
ಎ (ಕ)	2 ಪ್ರದರ್ಶನಗಳು
ಡೆವಿಲ್ ಹಂಟರ್ (ತ)	2 ಪ್ರದರ್ಶನಗಳು

ವಿದ್ಯುತ್ ತಂತಿ ತುಳಿದು ರೈತ ಸಾವು

ನಂಜನಗೂಡು, ಜೂ.10– ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ವಿದ್ಯುತ್ ತಂತಿ ತುಳಿದು ರೈತ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ಗಟ್ಟವಾಡಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಬಸವಶೆಟ್ಟಿ(60) ಮೃತಪಟ್ಟವರು. ಈತ ಸೋಮವಾರ ತಮ್ಮ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿಯನ್ನು ತುಳಿದಿದ್ದಾರೆ. ಪರಿಣಾಮ ವಿದ್ಯುತ್ ಸ್ಪರ್ಶವಾಗಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ದೊಡ್ಡಕವಲಂದೆ ಪೊಲೀಸರು ತಿಳಿಸಿದ್ದಾರೆ. ಸ್ಥಳಕ್ಕೆ ದೊಡ್ಡಕವಲಂದೆ ಎಸ್‌ಐ ಕೃಷ್ಣಕಾಂತ ಕೋಳಿ ಹಾಗೂ ಚೆಸ್ಕಾಂ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿ ಶವವನ್ನು ಮರಣೋತ್ತರ ಪರೀಕ್ಷೆಗಾಗಿ ನಗರದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ, ಸೂಕ್ತ ಪರಿಹಾರ ನೀಡುವ ಭರವಸೆ ನೀಡಿದರು. ಈ ಸಂಬಂಧ ದೊಡ್ಡಕವಲಂದೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮನುಷ್ಯನ ಜೀವನ ನಿರ್ವಹಣೆಗೆ ದೃಷ್ಟಿ ಅವಶ್ಯಕ

ಕಣ್ಣಿನ ತಜ್ಞ ಡಾ.ಮೇರಿಸ್ ರೋಸ್ ಅಭಿಪ್ರಾಯ



ಸರಗೂರಲ್ಲಿ ಕಣ್ಣಿನ ತಪಾಸಣೆ ಶಿಬಿರವನ್ನು ಗಣ್ಯರು ಉದ್ಘಾಟಿಸಿದರು.

ಸರಗೂರು, ಜೂ.10– ಮನುಷ್ಯನ ಜೀವನ ನಿರ್ವಹಣೆಗೆ ದೃಷ್ಟಿ ಅವಶ್ಯಕ ಎಂದು ವಿವೇಕಾನಂದ ಸ್ಮಾರಕ ಆಸ್ಪತ್ರೆ ಕಣ್ಣಿನ ತಜ್ಞ ಡಾ.ಮೇರಿಸ್ ರೋಸ್ ಅಭಿಪ್ರಾಯಪಟ್ಟರು.

ಪಟ್ಟಣದ ಕಟ್ಟಡ ಕಾರ್ಮಿಕರ ಸಂಘದ ಕಚೇರಿಯಲ್ಲಿ ವಿವೇಕಾನಂದ ಸ್ಮಾರಕ ಆಸ್ಪತ್ರೆ, ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಅಂಗಸಂಸ್ಥೆ, ಕಟ್ಟಡ ಕಾರ್ಮಿಕರ ಸಂಘ, ಸೋಮೇಶ್ವರ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘ, ಜೈನ್ ಮಿಲನ್ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತಾಶಯದಲ್ಲಿ ನಡೆದ ಕಣ್ಣಿನ ಹಾಗೂ ಸಕ್ಕರೆ ಕಾಯಿಲೆ, ದಂತರೋಗ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು, ಮನುಷ್ಯನ ಜೀವನ ನಿರ್ವಹಣೆಗೆ ದೃಷ್ಟಿ ಅತ್ಯವಶ್ಯಕ. ಹೀಗಾಗಿ ಕಣ್ಣಿನ ಆರೋಗ್ಯದ ಬಗ್ಗೆ ಹೆಚ್ಚು ಗಮನ ಹರಿಸಬೇಕು. ಇಂದಿನ ಒತ್ತಡದ ಜೀವನ, ಆಹಾರ ಕ್ರಮ ದಿಂದ ನಿತ್ಯ ಆರೋಗ್ಯದಲ್ಲಿ ಒಂದಲ್ಲಾ ಒಂದು ವೈಪರೀತ್ಯ ಕಾಣುತ್ತಿದ್ದೇವೆ. ಪ್ರತಿಯೊಬ್ಬರೂ ಎರಡು ಅಥವಾ 3 ತಿಂಗಳಿಗೆ ಒಮ್ಮೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ದೇಹದ ಆರೋಗ್ಯ ರಕ್ಷಣೆಯ ಜೊತೆಗೆ ಕಣ್ಣಿನ ಆರೋಗ್ಯವನ್ನೂ ಕಾಪಾಡಿಕೊಳ್ಳಬೇಕು ಎಂದರು.

ಡಾ.ವಿಕಾಸ್ ಪಾಟೀಲ್ ಮಾತನಾಡಿ, ಕ್ರಮಬದ್ಧ ಆಹಾರ ಸೇವನೆಯಿಂದಲೂ ಕಾಯಿಲೆಗಳನ್ನು ಹತೋಟಿಯಲ್ಲಿ ಇಡಬಹುದು. ಮೊದಲು ನಾವು ನಮ್ಮ ಮನೆ ಸುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ತಲೆನೋವು, ಶೀತ, ರಕ್ತದೊತ್ತಡ, ಥೈರಾಯಿಡ್, ಮಧುಮೇಹ ಸೇರಿದಂತೆ ಇನ್ನಿತರ ಕಾಯಿಲೆಗಳು ಕಾಣಿಸಿಕೊಂಡಾಗ ವೈದ್ಯರ ಭೇಟಿಯಾಗಿ ಚಿಕಿತ್ಸೆ ಪಡೆಯಬೇಕು ಎಂದರು.

ದಂತ ತಜ್ಞೆ ಡಾ.ಶೃತಿ ಮಾತನಾಡಿ, ಪ್ರತಿಯೊಬ್ಬರು ತಮ್ಮ ಹಲ್ಲಿನ ಆರೋಗ್ಯ ಬಗ್ಗೆ ಕಾಳಜಿ ವಹಿಸಬೇಕು. ಹಲ್ಲುನೋವು ಬಂದಾಗ ಮಾತ್ರ ವೈದ್ಯರ ಭೇಟಿ ಮಾಡುವುದು ಸರಿಯಲ್ಲ. ಕನಿಷ್ಠ 6 ತಿಂಗಳಿಗೆ ಒಮ್ಮೆ ವೈದ್ಯರನ್ನು ಭೇಟಿಯಾಗಬೇಕು. ನೀವು ಸೇವಿಸುವ ಆಹಾರದ ಮೇಲೆ ನಿಗಾ ಇರಬೇಕು. ಗ್ರಾಮೀಣ ಭಾಗದಲ್ಲಿ ಹಲ್ಲುಗಳ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಶಿಬಿರದಲ್ಲಿ 79 ಮಂದಿ ತಪಾಸಣೆಗೊಳಪಟ್ಟರು. ಹೆಚ್ಚಿನ ಚಿಕಿತ್ಸೆಗಾಗಿ 31 ಮಂದಿಯನ್ನು ಶಿಫಾರಸು ಮಾಡಲಾಯಿತು. ಈ ವೇಳೆ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ರಾಚಯ್ಯ, ಪ್ರಧಾನ ಕಾರ್ಯದರ್ಶಿ ರಮೇಶ್, ಖಜಾಂಚಿ ಚಿಕ್ಕಣ್ಣ, ಗೌರವಾಧ್ಯಕ್ಷ ನಂಜುಂಡಶೆಟ್ಟಿ, ಸಿದ್ದಪ್ಪ, ಕಟ್ಟಡ ಮತ್ತು ಇತರೆ ಕಾರ್ಮಿಕರ ಸಂಘದ ಅಧ್ಯಕ್ಷ ಮಣಿ, ಪ್ರಧಾನ ಕಾರ್ಯದರ್ಶಿ ಹೆಚ್.ಎಸ್.ರಮೇಶ್, ವಿವೇಕಾನಂದ ಸ್ಮಾರಕ ಆಸ್ಪತ್ರೆ, ಸಿಬ್ಬಂದಿಗಳಾದ ಕೆಂಡಗಣ್ಣ, ಮಮತಾ, ಕವಿತಾ, ನಂದೀಶ್, ಬಂಗಾರಶೆಟ್ಟಿ ಇನ್ನಿತರರಿದ್ದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಬ್ಯಾಡ್ ಬಾಯ್ಸ್ ರೈಡ್ or ಡೈ (ಇ): ಬೆ.11.15ಕ್ಕೆ, ಮ.1.40ಕ್ಕೆ, ರಾ.7.25ಕ್ಕೆ, ರಾ.9.55ಕ್ಕೆ, ಘಜಿನಿ (ತ): ಸಂ.4ಕ್ಕೆ.
ಸ್ಕ್ರೀನ್ 2	ಯಂಗ್‌ಮ್ಯಾನ್ (ಕ): ಬೆ.10.40ಕ್ಕೆ, ವೆಪನ್ (ತ): ಮ.1.50ಕ್ಕೆ, ಗರುಡನ್ (ತ): ಸಂ.4.20ಕ್ಕೆ, ಮಿಸ್ಟರ್ ಅಂಡ್ ಮಿಸಸ್ ಮಹಿ (ಹಿಂ): ರಾ.7.05ಕ್ಕೆ, ರಾ.9.50ಕ್ಕೆ.
ಸ್ಕ್ರೀನ್ 3	ದಿ ಜಡ್ಜ್‌ಮೆಂಟ್ (ಕ): ಬೆ.10.40ಕ್ಕೆ, ಕಂಡೋರ್ ಮನೆ ಕಥೆ (ಕ): ಮ.1.45ಕ್ಕೆ, ಸಹರ (ಕ): ಸಂ.4.10ಕ್ಕೆ, ಸತ್ಯಭಾಮ (ತೆ): ರಾ.7.10ಕ್ಕೆ, ಗೋಲಂ (ಮ): ರಾ.9.55ಕ್ಕೆ.
ಸ್ಕ್ರೀನ್ 4	ಮುಂಜ್ಯಾ (ಹಿಂ): ಬೆ.10.30ಕ್ಕೆ, ರಾ.10.05ಕ್ಕೆ, ಇಂಡಿಯನ್ (ತ): ಸಂ.4.05ಕ್ಕೆ, ರಾ.7.05ಕ್ಕೆ, ಮನಮೆ (ತೆ): ಸಂ.4.05ಕ್ಕೆ, ರಾ.9.50ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಮುಂಜ್ಯಾ (ಇಂ): ಬೆ.11ಕ್ಕೆ, ಮ.1.45ಕ್ಕೆ, ಸಂ.4.30ಕ್ಕೆ, ರಾ.7.15ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಬ್ಯಾಡ್ ಬಾಯ್ಸ್ ರೈಡ್ or ಡೈ (ಇ): ಬೆ.11.50ಕ್ಕೆ, ಮ.2.30ಕ್ಕೆ, ಸಂ.5.10ಕ್ಕೆ, ರಾ.7.50ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 3	ಮನಮೆ (ತೆ): ಮ.12.45ಕ್ಕೆ, ರಾ.7ಕ್ಕೆ, ಮಿಸ್ಟರ್ ಅಂಡ್ ಮಿಸಸ್ ಮಹಿ (ಹಿಂ): ಸಂ.4ಕ್ಕೆ, ರಾ.10.15ಕ್ಕೆ.
ಸ್ಕ್ರೀನ್ 4	ರಾಬರ್ಟ್ (ಕ): ಮ.3.10ಕ್ಕೆ, ಸಹರಾ (ಕ): ಸಂ.6.35ಕ್ಕೆ, ಗರುಡನ್ (ತ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಅರನ್‌ಮನೈ 4 (ತ): ಮ.1.30ಕ್ಕೆ, ರಾ.7.30ಕ್ಕೆ, ಸಹರ (ಕ): ಸಂ.4.30ಕ್ಕೆ.
ಸ್ಕ್ರೀನ್ 2	ಅನರ್ಥ (ಕ): ಸಂ.4.15ಕ್ಕೆ.
ಸ್ಕ್ರೀನ್ 3	ಕಂಡೋರ್ ಮನೆ ಕಥೆ (ಕ): ಮ.1.30ಕ್ಕೆ.
ಸ್ಕ್ರೀನ್ 4	

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಗರುಡ ಮಾಲ್,

1ನೇ ಮಹಡಿ, ಮೊ.ನಂ: 9901373210

ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1.15ಕ್ಕೆ, ಮ.3.40ಕ್ಕೆ, ರಾ.7.15ಕ್ಕೆ, ರಾ.10ಕ್ಕೆ, ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10.05ಕ್ಕೆ, ಮ.12ಕ್ಕೆ, ಮ.3.10ಕ್ಕೆ, ಸಂ.6.20ಕ್ಕೆ, ರಾ.9.30ಕ್ಕೆ, ಸ್ಟಾರ್ (ತ): ಮ.1ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, 4N6 (ಕ): ಮ.1.05ಕ್ಕೆ, ಅಂಜನೀಪುತ್ರ (ಕ): ಸಂ.4.15ಕ್ಕೆ, ಕೃಷ್ಣಮ್ಮ (ತೆ): ಸಂ.4.20ಕ್ಕೆ, ರಾ.10.15ಕ್ಕೆ, ಪವರ್ (ಕ): ಸಂ.6.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಬನ್ನಿಕುಪ್ಪೆ ಪಿಎಸಿಎಸ್‌ಗೆ ಜಯರಾಮ ಅಧ್ಯಕ್ಷ



ಬನ್ನಿಕುಪ್ಪೆ ಪಿಎಸಿಎಸ್ ಅಧ್ಯಕ್ಷರಾಗಿ ಜಯರಾಮ ಆಯ್ಕೆಯಾದರು.

ಹುಣಸೂರು, ಜೂ.10– ತಾಲೂಕಿನ ಬನ್ನಿಕುಪ್ಪೆ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಜಯರಾಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಚುನಾವಣಾಧಿಕಾರಿಯಾಗಿ ಸಹಕಾರ ಇಲಾಖೆ ಅಧಿಕಾರಿ ಬಿ.ಎಸ್.ಶಿಲ್ಪಶ್ರೀ ಕಾರ್ಯ ನಿರ್ವಹಿಸಿದರು.

ನೂತನ ಅಧ್ಯಕ್ಷ ಜಯರಾಮ ಮಾತನಾಡಿ, ಎಲ್ಲಾ ನಿರ್ದೇಶಕರ ಸಹಕಾರದೊಂದಿಗೆ ಸಂಘವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲಾಗುವುದು. ಅಲ್ಲದೇ ಸಂಘಕ್ಕೆ ಆಗಮಿಸುವ ರೈತರಿಗೆ ಸರ್ಕಾರದಿಂದ ಸಿಗುವ ಎಲ್ಲಾ ಸೌಲಭ್ಯ ಕಲ್ಪಿಸಲಾಗುವುದು ಎಂದರು.

ಈ ವೇಳೆ ಮಾಜಿ ಅಧ್ಯಕ್ಷ ಜ್ಯೋತಿಕುಮಾರ್, ಉಪಾಧ್ಯಕ್ಷರಾದ ಅಶೋಕ್.ವಿ, ನಿರ್ದೇಶಕರಾದ ಗೋವಿಂದೇಗೌಡ, ಚೆಲುವರಾಜು ಪಿ.ಪಿ, ನಾಗಯ್ಯ, ಪುಟ್ಟನಾಯಕ, ಚೌಡನಾಯ್ಕ, ಅಣ್ಣಯ್ಯನಾಯ್ಕ, ಈಶ್ವರೇಗೌಡ, ಲಲಿತಮ್ಮ, ಚಿಕ್ಕತಾಯಮ್ಮ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಂಜುನಾಥ್.ಜಿ ಇದ್ದರು.

ವಕೀಲರ ಸಂಘಕ್ಕೆ ಮಹದೇವಸ್ವಾಮಿ ಖಜಾಂಚಿ



ತಿ.ನರಸೀಪುರ, ಜೂ.10– ವಕೀಲರ ಸಂಘದ ನೂತನ ಖಜಾಂಚಿಯಾಗಿ ಸೋಸಲೆ ಎಂ.ಮಹದೇವಸ್ವಾಮಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಪಟ್ಟಣದ ವಕೀಲರ ಸಂಘದ ಆವರಣದಲ್ಲಿ ಅಧ್ಯಕ್ಷ ತೊಟ್ಟವಾಡಿ ಮಹದೇವಸ್ವಾಮಿ ಮಾತನಾಡಿ, ನಮ್ಮ ಸಂಘದ ಖಜಾಂಚಿಯಾಗಿ ಸೋಸಲೆ ಮಹದೇವಸ್ವಾಮಿ ಅವರನ್ನು ಸಂಘದ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರ ಸರ್ವಾನುಮತದ ಮೇರೆಗೆ ಆಯ್ಕೆ ಮಾಡಲಾಗಿದೆ ಎಂದರು.

ನೂತನ ಖಜಾಂಚಿ ಸೋಸಲೆ ಮಹದೇವಸ್ವಾಮಿ ಅವರನ್ನು ಸೋಸಲೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಂ.ಪರಶಿವಮೂರ್ತಿ ಸನ್ಮಾನಿಸಿದರು. ಈ ವೇಳೆ ವಕೀಲರಾದ ತುಂಬಲ ಸಿದ್ದರಾಜು, ಜಗದೀಶ್, ಮಹೇಶ್ ಹಾಜರಿದ್ದರು.

ನಾಳೆ ನಂಜನಗೂಡಲ್ಲಿ ಅದ್ದೂರಿ ಬಸವ ಜಯಂತಿ

ನಂಜನಗೂಡು, ಜೂ.10– ನಗರದಲ್ಲಿ ಜೂ.12ರಂದು ಅದ್ದೂರಿಯಾಗಿ ಬಸವ ಜಯಂತಿ ಕಾರ್ಯಕ್ರಮ ನಡೆಯಲಿದೆ ಎಂದು ಅಖಿಲ ಭಾರತ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷ ದೇವನೂರು ಮಹದೇವಪ್ಪ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಗೌರಿಘಟ್ಟ ಬೀದಿಯ ಬಸವನ ಗದ್ದಿಗೆಯಲ್ಲಿ ಅಂದು ಬೆಳಗ್ಗೆ 8 ಗಂಟೆಗೆ ಮಲ್ಲನಮೂಲೆ ಮಠದ ಅಧ್ಯಕ್ಷ ಚೆನ್ನಬಸವ ಸ್ವಾಮೀಜಿ ಬಸವ ಜಯಂತಿ ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ವಿವಿಧ ಜನಪದ ಕಲಾ ತಂಡಗಳೊಡನೆ ಬಸವೇಶ್ವರರ ಪುತ್ಥಳಿಯನ್ನು ನಗರದ ರಥ ಬೀದಿ, ರಾಷ್ಟ್ರಪತಿ ರಸ್ತೆ, ಮಹಾತ್ಮಾ ಗಾಂಧಿ ರಸ್ತೆಗಳ ಮೂಲಕ ಮೆರವಣಿಗೆಯಲ್ಲಿ ಜೆಎಸ್‌ಎಸ್ ಮಂಗಳ ಮಂಟಪಕ್ಕೆ ತರಲಾಗುವುದು. ಮಧ್ಯಾಹ್ನ 1 ಗಂಟೆಗೆ ಮಂಗಳ ಮಂಟಪದಲ್ಲಿ ಧಾರ್ಮಿಕ ಸಭೆ ನಡೆಸಲಾಗುವುದು. ಸಭೆಯಲ್ಲಿ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಿದ್ದಗಂಗಾ ಮಠದ ಸಿದ್ದಲಿಂಗ ಸ್ವಾಮೀಜಿ, ದೇವನೂರು ಮಹಾಂತ ಸ್ವಾಮೀಜಿ ಹಾಗೂ ಲಾಳನಹಳ್ಳಿ ಶರಣೆ ಜಯದೇವಿ ತಾಯಿ ಭಾಗವಹಿಸಲಿದ್ದಾರೆ. ತಾಲೂಕಿನ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕು ಎಂದರು.

ಮೂರನೇ ಬಾರಿ ಪ್ರಧಾನಿಯಾಗಿ ಮೋದಿ ಪ್ರಮಾಣ ವಚನ ಸ್ವೀಕಾರ

ತಿ.ನರಸೀಪುರದಲ್ಲಿ ಬಿಜೆಪಿ, ಜೆಡಿಎಸ್ ಕಾರ್ಯಕರ್ತರ ಸಂಭ್ರಮಾಚರಣೆ



ಪ್ರಧಾನಿ ಮೋದಿ 3ನೇ ಬಾರಿಗೆ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ತಿ.ನರಸೀಪುರದಲ್ಲಿ ಬಿಜೆಪಿ–ಜೆಡಿಎಸ್ ಕಾರ್ಯಕರ್ತರು ಸಂಭ್ರಮಾಚರಿಸಿದರು

ತಿ.ನರಸೀಪುರ, ಜೂ.10– ಮೂರನೇ ಬಾರಿಗೆ ಪ್ರಧಾನಿಯಾಗಿ ನರೇಂದ್ರ ಮೋದಿ ಅವರು ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಬಿಜೆಪಿ–ಜೆಡಿಎಸ್ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಿದರು.

ಎನ್‌ಡಿಎ ಮೈತ್ರಿಕೂಟದ ನಾಯಕರಾಗಿ ಸತತ 3ನೇ ಬಾರಿಗೆ ಪ್ರಧಾನಮಂತ್ರಿಯಾಗಿ ನರೇಂದ್ರ ಮೋದಿ ಪ್ರಮಾಣ ವಚನ ಸ್ವೀಕರಿಸುತ್ತಿದ್ದಂತೆ ಪಟ್ಟಣದ ವಿದ್ಯೋದಯ ಕಾಲೇಜು ವೃತ್ತದ ಬಳಿ ಜಮಾಯಿಸಿದ ಬಿಜೆಪಿ–ಜೆಡಿಎಸ್ ಕಾರ್ಯಕರ್ತರು ಮೋದಿ ಪರ ಘೋಷಣೆ ಕೂಗಿ ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಕ್ಷೇತ್ರಾಧ್ಯಕ್ಷ ಶಿವಕುಮಾರ್ (ಸತ್ಯಪ್ಪ) ಮಾತನಾಡಿ, ದೇಶದ ಎಲ್ಲಾ ಜಾತಿ, ಧರ್ಮ, ರಾಜಕೀಯ ಶಕ್ತಿಗಳು ಒಗ್ಗೂಡಿ ಷಡ್ಯಂತ್ರ ನಡೆಸಿದರೂ ಮೋದಿ ಅವರನ್ನು ಸೋಲಿಸಲು ಯಾರಿಂದಲೂ ಸಾಧ್ಯವಿಲ್ಲ. ಪ್ರಬುದ್ಧ ಮತದಾರರ ಬೆಂಬಲ ಬಿಜೆಪಿಗೆ ಇದೆ ಎಂಬುದು ಮತ್ತೊಮ್ಮೆ ಸಾಬೀತಾಗಿದೆ. ಮೋದಿಯವರು 3ನೇ ಬಾರಿಗೆ ದೇಶದ ಪ್ರಧಾನಿ ಆಗುತ್ತಿರುವುದು ಅತ್ಯಂತ ಹೆಮ್ಮೆಯ ವಿಷಯ. ಮೋದಿ ತಮ್ಮ ಅಧಿಕಾರದ ಅವಧಿಯಲ್ಲಿ ಅನೇಕ ದಿಟ್ಟ ನಿರ್ಧಾರಗಳ ಜೊತೆಗೆ ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ದೇಶವನ್ನು ಅಭಿವೃದ್ಧಿ ಪಥದಲ್ಲಿ ನಡೆಸುತ್ತಿದ್ದು, ಮುಂದಿನ ದಿನಗಳಲ್ಲಿ ಭಾರತ ವಿಶ್ವಗುರುವಾಗಲಿದೆ ಎಂದು ಹೇಳಿದರು.

ಬಿಜೆಪಿ ಮುಖಂಡ ಡಾ.ರೇವಣ್ಣ ಮಾತನಾಡಿ, ದೇಶದ ಹೆಮ್ಮೆಯ ಮೋದಿ ಅವರು 3ನೇ ಬಾರಿ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸುತ್ತಿರುವುದನ್ನು ದೇಶದ ಜನತೆ ಹಬ್ಬದಂತೆ ಆಚರಿಸುತ್ತಿದ್ದಾರೆ. ಇದು ದೇಶದ ಪ್ರತಿಯೊಬ್ಬ ಪ್ರಜೆಗೂ ಸುದಿನ. ಮೋದಿಯವರ ಆಡಳಿತದಲ್ಲಿ ದೇಶವು ವಿಶ್ವದಲ್ಲೇ ಅತ್ಯಂತ ಅಭಿವೃದ್ಧಿ ಹೊಂದಿರುವ ದೇಶವಾಗಲಿದ್ದು, ಪ್ರಪಂಚದ ಭೂಪಟದಲ್ಲಿ ಭಾರತಕ್ಕೆ ವಿಶಿಷ್ಟ ಸ್ಥಾನಮಾನ ದೊರೆಯಲಿದೆ ಎಂದರು.

ಈ ವೇಳೆ ಪುರಸಭಾ ಸದಸ್ಯ ಎಸ್.ಕೆ.ಕಿರಣ್, ಪುರಸಭೆ ಮಾಜಿ ಸದಸ್ಯ ಎನ್.ಲೋಕೇಶ್, ಸೋಸಲೆ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಪುಟ್ಟಸ್ವಾಮಿ, ಮೆಡಿಕಲ್ ಕುಮಾರ್, ಬಿಳಿಗೆರೆಹುಂಡಿ ಮಹದೇವಪ್ಪ, ತಾಯೂರು ಪ್ರಕಾಶ್, ಪ್ರಭುಸ್ವಾಮಿ, ಎಸ್.ಎಂ.ಆರ್.ಪ್ರಕಾಶ್, ಡಾ.ಮಲ್ಲಿಕಾರ್ಜುನಸ್ವಾಮಿ, ಬೆನಕನಹಳ್ಳಿ ಪರಶಿವಮೂರ್ತಿ, ಅಕ್ಕಿ ನಾಗಪ್ಪ, ತೊಂಟೇಶ್, ಕಾರ್ ಮಲ್ಲಪ್ಪ, ಚೌಹಳ್ಳಿ ಸಿದ್ದರಾಜು, ಕೀರ್ತಿ, ರಾಮಣ್ಣ ಮತ್ತಿತರಿದ್ದರು.

ಬೆಟ್ಟದಪುರದಲ್ಲೂ ಸಂಭ್ರಮಾಚರಣೆ



ಬೆಟ್ಟದಪುರ, ಜೂ.10– ಮೂರನೇ ಬಾರಿಗೆ ಪ್ರಧಾನಿಯಾಗಿ ನರೇಂದ್ರ ಮೋದಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಬೆಟ್ಟದಪುರದಲ್ಲಿ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಿದರು.

ಬಿಜೆಪಿ ಮುಖಂಡ ಬೆಟ್ಟದತುಂಗ ಅರುಣ್ ರಾಜೇ ಅರಸ್ ಮಾತನಾಡಿ, ದೇಶ ಹಾಗೂ ರೈತರ ಅಭಿವೃದ್ಧಿಗೆ ಪ್ರಧಾನಿ ಮೋದಿ ಅವಶ್ಯಕ. ಮೂರನೇ ಬಾರಿ ಪ್ರಧಾನಿಯಾಗಿರುವ ನರೇಂದ್ರ ಮೋದಿ ಅವರು ವಿಶ್ವ ಗುರುವಾಗಿ ಹೊರ ಹೊಮ್ಮಿರುವುದು ಭಾರತೀಯರಿಗೆ ಹೆಮ್ಮೆಯ ವಿಷಯ ಎಂದರು.

ಬಿಜೆಪಿ ಮುಖಂಡ ಕೂರಗಲ್ ಮಹೇಶ್ ಮಾತನಾಡಿ, ಮಾಜಿ ಸಿಎಂ ಕುಮಾರಸ್ವಾಮಿ ಅವರು ಲೋಕಸಭಾ ಚುನಾವಣೆಯಲ್ಲಿ ಭಾರೀ ಅಂತರದಲ್ಲಿ ಗೆದ್ದು ಮೋದಿ ಸರ್ಕಾರದಲ್ಲಿ ಸಂಪುಟ ದರ್ಜೆ ಸಚಿವರಾಗುತ್ತಿರುವುದು ರೈತರಿಗೆ ಹಾಗೂ ರಾಜ್ಯಕ್ಕೆ ಅನುಕೂಲವಾಗಲಿದೆ ಎಂದರು. ಈ ವೇಳೆ ವಿಎಸ್‌ಎಸ್‌ಎನ್ ಅಧ್ಯಕ್ಷ ಪಟೇಲ್ ನಟೇಶ್, ತಾಲೂಕು ಹಿಂದುಳಿದ ವರ್ಗಗಳ ಅಧ್ಯಕ್ಷ ಪ್ರವೀಣ್ ಉಪ್ಪಾರ್, ಯೋಗೇಶ್, ಎಸ್.ಮಲ್ಲೇಶ್, ಮೈಲಾರಿ ಮಂಜುನಾಥ್, ರೈತ ಮುಖಂಡ ಬಸವರಾಜ್ ಇತರರಿದ್ದರು.

ಸಿದ್ದಬಸವೇಗೌಡ ನಿಧನ



ತಿ.ನರಸೀಪುರ, ಜೂ.10– ಪಟ್ಟಣದ ಹೌಸಿಂಗ್ ಬೋರ್ಡ್ ನಿವಾಸಿ, ನಿವೃತ್ತ ಎಸ್‌ಐ ಸಿದ್ದಬಸವೇಗೌಡ(71) ಸೋಮವಾರ ನಿಧನರಾದರು. ಮೃತರು ಬಸವೇಶ್ವರ ಗ್ಯಾಸ್ ಮಾಲೀಕ ಜಗದೀಶ್ ಸೇರಿದಂತೆ ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಂದಹಳ್ಳಿಯಲ್ಲಿರುವ ಮೃತರ ತೋಟದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪಶ್ಚಿಮ ಬಂಗಾಳ, ಅಸ್ಸಾಂ ರಾಜ್ಯಗಳಿಂದ ಶಾಸ್ತ್ರೀಯ ಭಾಷಾ ಸ್ಥಾನಮಾನಕ್ಕೆ ಆಗ್ರಹ

ಮೈಸೂರಿನ ಸಿಐಐಎಲ್‌ನಲ್ಲಿ 3 ದಿನಗಳ ಭಾರತದ ಶಾಸ್ತ್ರೀಯ ಭಾಷೆಗಳ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಗುರ್‌ಗಾಂವ್ ಅಮಿಟಿ ವಿವಿ ಭಾಷಾ ಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಉದಯನಾರಾಯಣ ಸಿಂಗ್ ಮಾಹಿತಿ



ಮೈಸೂರು, ಜೂ. 10(ಆರ್‌ಕೆ)– ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ರಾಜ್ಯಗಳು ತಮಗೂ ಶಾಸ್ತ್ರೀಯ ಭಾಷಾ ಸ್ಥಾನಮಾನ ನೀಡುವಂತೆ ಕೇಂದ್ರ ಸಂಸ್ಕೃತಿ ಸಚಿವಾಲಯದ ಭಾಷಾ ತಜ್ಞರ ಸಮಿತಿ ಯನ್ನು ಒತ್ತಾಯಿಸಿವೆ ಎಂದು ಗುರ್‌ಗಾಂವ್ ಅಮಿಟಿ ವಿಶ್ವವಿದ್ಯಾನಿಲಯದ ಭಾಷಾಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಉದಯ ನಾರಾಯಣ ಸಿಂಗ್ ತಿಳಿಸಿದ್ದಾರೆ.

ಮೈಸೂರಿನ ಸಿಐಐಎಲ್ ಸಭಾಂಗಣದಲ್ಲಿ ಇಂದಿನಿಂದ ಆರಂಭವಾದ ಮೂರು ದಿನಗಳ 'ಭಾರತ ಶಾಸ್ತ್ರೀಯ ಭಾಷೆಗಳ ರಾಷ್ಟ್ರೀಯ ಸಮ್ಮೇಳನ' ಉದ್ಘಾಟಿಸಿ ಮಾತನಾಡಿದ ಅವರು, ಶಾಸ್ತ್ರೀಯ ಭಾಷಾ ಸ್ಥಾನಮಾನ ಪಡೆಯಲು ಅಗತ್ಯವಿರುವ ದಾಖಲೆಗಳನ್ನು ಈ ಎರಡೂ ರಾಜ್ಯಗಳು ಕೇಂದ್ರ ಸಮಿತಿಗೆ ಸಲ್ಲಿಸಿದ್ದು, ಭಾರತೀಯ ಭಾಷಾ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿರುವ ಎರಡೂವರೆ ಸಾವಿರ ವರ್ಷ ಇತಿಹಾಸ ಉಳ್ಳ 'ಪಾಳಿ–ಪ್ರಾಕೃತ' ಭಾಷೆಗಳನ್ನು ಶಾಸ್ತ್ರೀಯ ಸ್ಥಾನಮಾನಕ್ಕೆ ಪರಿಗಣಿಸಬೇಕು ಎಂದರು.

ಭಾಷೆಯ ಉಗಮ, ಬೆಳವಣಿಗೆ, ಸಂಶೋಧನೆ, ಕಟ್ಟಡ, ಕಚೇರಿ, ಸಿಬ್ಬಂದಿ, ಸಂಪನ್ಮೂಲ ವ್ಯಕ್ತಿಗಳೂ ಸೇರಿದಂತೆ ಅಗತ್ಯ ಮೂಲ ಸೌಕರ್ಯಗಳು ಯಾವುದೇ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ಸಿಗಲು ಮಾನದಂಡಗಳಾಗಿರುತ್ತವೆ. ಅರುಣಾಚಲ ಪ್ರದೇಶದ ಗ್ರಾಮವೊಂದರಲ್ಲಿ ಪ್ರಾಚೀನ ಕಾಲದ ಹಸ್ತಪ್ರತಿಗಳನ್ನು ಪ್ರತೀ ಮನೆಗಳಲ್ಲಿ ಸಂರಕ್ಷಿಸಲಾಗಿದೆ. ಅವುಗಳನ್ನು ಪ್ರಕಟಿಸಬೇಕೆಂಬುದರ ಬಗ್ಗೆ ಅವರಿಗೆ ಜ್ಞಾನವಿಲ್ಲ ಎಂದರು.

ನವದೆಹಲಿಯ ಕೇಂದ್ರೀಯ ಸಂಸ್ಕೃತ ವಿಶ್ವವಿದ್ಯಾನಿಲಯದ ಉಪಕುಲಪತಿ ಪ್ರೊ. ಶ್ರೀನಿವಾಸ ವರಖೇಡಿ, ಸಿಐಐಎಲ್ ನಿರ್ದೇಶಕ ಪ್ರೊ. ಶೈಲೇಂದ್ರ ಮೋಹನ್, ಸಹಾಯಕ ನಿರ್ದೇಶಕ ಡಾ. ಪಂಕಜ್ ದ್ವಿವೇದಿ, ಸಮ್ಮೇಳನದ ಸಂಯೋಜಕ ಡಾ. ಎಲ್.ಆರ್. ಪ್ರೇಮ್‌ಕುಮಾರ್, ಹಿರಿಯ ಸಾಹಿತಿ ಡಾ. ಸಿ.ಪಿ. ಕೃಷ್ಣಕುಮಾರ್ ಹಾಗೂ ಇತರರು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದರು.

ವಾಲ್ಮೀಕಿ ನಿಗಮದ ಹಣ ವರ್ಗಾವಣೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಎ1 ಆರೋಪಿ!

ಕಸಕ್ಕೂ ತೆರಿಗೆ ಹಾಕಲು ಸಿದ್ಧತೆ ಮಾಡಿಕೊಂಡಿದ್ದಾರೆ; ಆಕ್ರೋಶ



ಬೆಂಗಳೂರು: ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಬಹುಕೋಟಿ ಹಗರಣದ ಹಿಂದೆ ಕೇವಲ ಬಿ.ನಾಗೇಂದ್ರ ಇಲ್ಲ. ಇದರ ಹಿಂದೆ ದೊಡ್ಡ ನಾಯಕರೇ ಇದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನವರಿಗೆ ಗೊತ್ತಿದ್ದೇ ಈ ಹಗರಣ ನಡೆದಿದೆ. ಇದರ ಜೊತೆ ಇನ್ನಷ್ಟು ಸಚಿವರೂ ಸೇರಿದ್ದಾರೆ. ಆದ್ದರಿಂದ ಮುಖ್ಯಮಂತ್ರಿ ಕೂಡ ರಾಜೀನಾಮೆ ನೀಡಬೇಕು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಒತ್ತಾಯಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯನವರಿಗೆ ಆರ್ಥಿಕತೆಯ ಬಗ್ಗೆ ಗೊತ್ತಿದೆಯೇ, ಇಲಾಖೆಯ ಮೇಲೆ ಇವರಿಗೆ ಹಿಡಿತವಿಲ್ಲವೇ ಈ ಹಣ ಹೈದಾರಾಬಾದ್‌ಗೆ ಹೋಗಿದ್ದು ತಿಳಿದರೂ ಬೇರೆಯವರ ವಿರುದ್ಧ ಕಠಿಣ ಕ್ರಮ ವಹಿಸಿಲ್ಲ. ದಲಿತರ ಹಣವನ್ನು ವಾಪಸ್ ಮಾಡದಿದ್ದರೆ ಜನರ ಶಾಪ ತಟ್ಟಲಿದೆ. ಈ ಅಕ್ರಮದಲ್ಲಿ ಮುಖ್ಯಮಂತ್ರಿಯೇ ಮೊದಲ ಆರೋಪಿಯಾಗಿದ್ದು, ಬಿಜೆಪಿಯ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದರು.

ಲೋಕಸಭೆ ಚುನಾವಣೆಯಲ್ಲಿ ಗ್ಯಾರಂಟಿಗಳಿಂದ ಕಾಂಗ್ರೆಸ್‌ಗೆ ಮತ ಬಂದಿಲ್ಲ. ಸರ್ಕಾರ ಪಾಪರ್ ಆಗಿ ಅಭಿವೃದ್ಧಿ ಶೂನ್ಯವಾಗಿರುವುದರಿಂದಲೇ ಕಾಂಗ್ರೆಸ್ ಸೋತಿದೆ. ಸರ್ಕಾರ ಮತಕ್ಕಾಗಿ ಗ್ಯಾರಂಟಿ ಜಾರಿ ಮಾಡಿದ್ದರಿಂದ ಈಗ ಸಾಲ ಮಾಡಿ ಸಂಬಳ ಕೊಡುವ ಪರಿಸ್ಥಿತಿ ಬಂದಿದೆ. ಗ್ಯಾರಂಟಿಗಳಿಂದ ಲೋಕಸಭೆ ಚುನಾವಣೆಯಲ್ಲಿ ಗೆಲ್ಲಲು ಸಾಧ್ಯವಾಗಿಲ್ಲ. ಶಾಸಕರು ಅನುದಾನ ಯಾವಾಗ ಕೊಡುತ್ತೀರಿ ಎಂದು ಪ್ರಶ್ನಿಸುತ್ತಿದ್ದಾರೆ. ಪಾಪರ್ ಆಗಿರುವ ಸರ್ಕಾರ ಎಲ್ಲಾ ಕಡೆ ಬಿಲ್ ಪಾವತಿ ಬಾಕಿ ಇರಿಸಿಕೊಂಡಿದೆ. ಬಿಜೆಪಿ ಸರ್ಕಾರವಿದ್ದಾಗ ಶಾಸಕರು ಶಾಲೆ, ಆಸ್ಪತ್ರೆ, ನೀರಾವರಿ ಯೋಜನೆ ತಂದರು. ಕಾಂಗ್ರೆಸ್‌ನ ಶಾಸಕರು ಏನೂ ತಂದಿಲ್ಲವೆಂದು ಜನರೇ ಹೀಯ್ಯಾಳಿಸುತ್ತಿದ್ದಾರೆ. ಅಭಿವೃದ್ಧಿ ಇಲ್ಲದೆ ಜನರು, ಶಾಸಕರು ಹಾಗೂ ಸಚಿವರ ಮಾತಿಗೆ ವಿರುದ್ಧವಾಗಿ ಲೋಕಸಭೆ ಚುನಾವಣೆಯಲ್ಲಿ ಮತ ಚಲಾಯಿಸಿದ್ದಾರೆ ಎಂದರು.

ಕಾಂಗ್ರೆಸ್ ಸರ್ಕಾರ ದಲಿತರ ಹಣ ಲೂಟಿ ಹೊಡೆದು, ಶೂನ್ಯ ಸಾಧನೆ ಮಾಡಿ, ಜನರ ಪಾಲಿಗೆ ಸತ್ತುಹೋಗಿದೆ. ಒಬ್ಬ ಸಚಿವರೂ ಮಳೆ ಹಾನಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿಲ್ಲ. ಲೋಕಸಭೆ ಚುನಾವಣೆಯಲ್ಲಿ ಸಚಿವರಿರುವ ಕಡೆ ಹಿನ್ನಡೆಯಾಗಿದ್ದು, ಸ್ಥಾನ ಕಳೆದುಕೊಳ್ಳುವ ಆತಂಕವಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಹೋದರ ಡಿ.ಕೆ. ಸುರೇಶ್ ಕನಕಪುರದಲ್ಲಿ ಹೀನಾಯವಾಗಿ ಸೋತಿದ್ದಾರೆ. ರಾಜ್ಯದಲ್ಲಿ ಸರ್ಕಾರವಿದ್ದು, ಏಕೆ ಸೋತಿದ್ದೀರಿ ಎಂದು ರಾಹುಲ್ ಗಾಂಧಿ ಪ್ರಶ್ನಿಸಿದ್ದಾರೆ. ದಲಿತರ 187 ಕೋಟಿ ರೂ. ಲೂಟಿ ಮಾಡಿದ್ದರಿಂದಲೇ ಇವರು ಸೋತಿದ್ದಾರೆ ಎಂದು ಕಾಂಗ್ರೆಸ್ ಹೈಕಮಾಂಡ್‌ಗೆ ತಿಳಿದುಬಂದಿದೆ. ಲೋಕಸಭೆ ಚುನಾವಣೆಯ ಫಲಿತಾಂಶದಿಂದ ಸರ್ಕಾರ ಮೂಲೆ ಸೇರಿದೆ ಎಂದು ಹೇಳಿದರು.

ಕಸಕ್ಕೂ ತೆರಿಗೆ: ಈಗಾಗಲೇ ತೆರಿಗೆ ಭಾರದಿಂದ ಜನರು ಸುಸ್ತಾಗಿದ್ದಾರೆ. ಕಸಕ್ಕೂ ತೆರಿಗೆ ಹಾಕುವುದನ್ನು ಬಿಜೆಪಿ ತೀವ್ರವಾಗಿ ವಿರೋಧಿಸುತ್ತದೆ. ಮುಂದೆ ಹಾಲು, ಆಲ್ಕೋ ಹಾಲ್, ಬಸ್ ಟಿಕೆಟ್ ದರವನ್ನೂ ಹೆಚ್ಚಿಸಲು ಕಾಂಗ್ರೆಸ್ ಸಿದ್ಧತೆ ಮಾಡಿಕೊಂಡಿದೆ. ಸಿಎಂ ಸಿದ್ದರಾಮಯ್ಯ ಇನ್ನಷ್ಟು ಹೊಸ ತೆರಿಗೆಗಳನ್ನು ವಿಧಿಸಲಿದ್ದಾರೆ. ಇದರ ವಿರುದ್ಧವೂ ಬಿಜೆಪಿ ಪ್ರತಿಭಟಿಸಲಿದೆ.

ಹಿಂದೂಗಳ ಮೇಲೆ ಹಲ್ಲೆ ಅಲ್ಪಸಂಖ್ಯಾತರು ಏನು ಮಾಡಿದರೂ ನಡೆಯುತ್ತದೆ ಎಂಬ ನಂಬಿಕೆ ಬಂದಿದೆ. ಹಿಂದೂಗಳ ಮೇಲೆ ಹಲ್ಲೆಗಳು ಹೆಚ್ಚಾಗುತ್ತಿದೆ ಹಾಗೂ ಮಾಫಿಯಾ ರೌಡಿಗಳಿಗೆ ಭಯ ಕಡಿಮೆಯಾಗಿದೆ. ಗೃಹ ಇಲಾಖೆ ದಿಕ್ಕು ದೆಸೆಯಿಲ್ಲದಂತೆ ನಡೆಯುತ್ತಿದೆ. ಜನರು ತಮ್ಮನ್ನು ತಾವೇ ರಕ್ಷಣೆ ಮಾಡಿಕೊಳ್ಳುವ ಸ್ಥಿತಿ ಬಂದಿದೆ ಎಂದರು.

ನರೇಂದ್ರ ಮೋದಿಯವರು ಹಿಂದುಳಿದ ವರ್ಗದ ನಾಯಕರಾಗಿದ್ದು, ಸಚಿವ ಸಂಪುಟದಲ್ಲಿ ಎಲ್ಲ ಜಾತಿ ವರ್ಗಕ್ಕೆ ಸ್ಥಾನಮಾನ ನೀಡಿದ್ದಾರೆ. ಕರ್ನಾಟಕದ ಸಂಸದರಿಗೂ ಅವಕಾಶ ನೀಡಿರುವುದು ಅಭಿನಂದನೀಯ. ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಕರ್ನಾಟಕ ಹೆಬ್ಬಾಗಿಲಾಗಿದ್ದು, ಇಲ್ಲಿಗೆ ಹೆಚ್ಚು ಅವಕಾಶ ನೀಡಿದ್ದಾರೆ ಎಂದು ಶ್ಲಾಘಿಸಿದರು.

ಸುತ್ತೂರು ಮಠಕ್ಕೆ ಶ್ರೇಯಸ್ ಪಟೇಲ್ ಭೇಟಿ



ಹಾಸನ ಲೋಕಸಭಾ ಕ್ಷೇತ್ರದ ನೂತನ ಕಾಂಗ್ರೆಸ್ ಸಂಸದ ಶ್ರೇಯಸ್ ಪಟೇಲ್, ತಮ್ಮ ಕುಟುಂಬ ಸಮೇತ ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಸುತ್ತೂರು ಮಠಕ್ಕೆ ಭೇಟಿ ನೀಡಿ, ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರ ಆಶೀರ್ವಾದ ಪಡೆದರು. ನಂತರ ಶ್ರೀಗಳು ಶ್ರೇಯಸ್ ಪಟೇಲ್ ಅವರಿಗೆ ಶಾಲು ಹೊದಿಸಿ, ಹಾರ ಹಾಕಿ ಫಲ ತಾಂಬೂಲ ನೀಡಿದರು.

ಮೈಸೂರು ಮಿತ್ರ 45
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

BEFORE THE HON'BLE ADDL. SENIOR CIVIL JUDGE (SR DVN) AT SRIRANGAAPATNA
MIS No.20/2019

Between: Chetan P. Tayal S/o Late Nand kishore Tayal, Aged about 67 years, Available at residing at No.50, 'GOLD TOWERS', Residency Road, Bangalore-560025 ...Petitioner

And:

1. Rathnamma W/o Shivanna, D/o Late Bundarigowda, Aged about 57 years, R/at Belagola Village, Belagola Hobli, Srirangapatna Tq, Mandya Dist. & Others ...Respondents

Notice to Respondent No.7

Shobha, W/o Chaluvaraju, D/o Late Ningamma, Aged about 30 years, R/at Hosahundi Village, Belagola Hobli, Srirangapatna Tq, Mandya Dist.

NOTICE TO RESPONDANT NO.7 THROUGH PAPER PUBLICATION

Whereas, the above named Petitioner instituted the above top noted suit against defendant for restoration of Mis-petition No.1/2017 on the file of the Additional Civil Judge, Senior Division, Srirangapatna, since the respondent No.7 is avoiding to take the notice of the above Mis-petition proceedings, the notice to respondent No.7 is published in this newspaper, accordingly, the respondent No.7 is hereby summoned to appear before this court in person or through pleader on the 30th day of July 2024, at 11 AM to answer the same failing which you will be placed ex-parte.

Give under my hand seal of the court, this 6th day of June 2024.

By order of the court
Sd/- Shirasthedar,
Civil Judge (Sr.Dv) & JMFC Court
Srirangapatna

Advocate for Plaintiff
M. Sampath Kumar, Advocate
Building No.11, House No.123, Kengeri Satellite Town, Bangalore - 560060 **Mob: 9845147741**

PUBLIC NOTICE

Notice is hereby given that **SRI NAGESH B.K,** son of Late Kariputtegowda, has agreed to sell the under mentioned property to my client and any person or persons claiming any interest on the under mentioned property or any part thereof, is hereby required to communicate the same to me with documentary evidence at my office, situated at **DOOR No. 2765/1A D13/A1, "KEYANS", 5TH MAIN ROAD, V.V. PURAM (V.V. MOHALLA), MYSORE - 570 002, within 7 (Seven) days** from the date of this publication, as otherwise the said sale will be completed without any reference or regard to any such purported claim or interest, which shall be deemed to have been waived for all intents and purposes.

SCHEDULE PROPERTY

House Property bearing No. 388 and 389, situated at Vijayanagara III Stage, A-1 Block, Devaraja Mohalla, Mysore City, measuring East to West 12.00 Meters and North to South 17.8 Meters + 14.6 Meters / 2, totally measuring 194.4 Square Meters, bounded on East by Site No.356 and 357, West by Road, North by Road, South by Site No. 387.

Sd/- Dhirendra Kumar R. Mehta
Advocate
KEY-ANS LAW SOLUTIONS
Date: 10.06.2024
Place: Mysore